24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 43 | ನವದೆಹಲಿ | ಬೆಲೆ ₹ 10 | ಆಗಸ್ಟ್ 8, 2026, ಶನಿವಾರ

## ಒಳಪುಟಗಳಲ್ಲಿ

ಪ್ರಧಾನಿ ವಿದ್ಯಾರ್ಥಿಗಳ ಕ್ಷಮೆ ಕೇಳಬೇಕು, ಪೊಲೀಸರ ಕ್ರಮದ ಬಗ್ಗೆ ಅಮಿತ್‌ಶಾ ವಿವರಣೆಗೆ ಮಲ್ಲಿಕಾರ್ಜುನ ಖರ್ಗೆ ಆಗ್ರಹ -ಪು.3

ಕ್ಷೇತ್ರ ವಿಂಗಡಣೆ ಮಸೂದೆಗೆ ಡಿಎಂಕೆ ಷರತ್ತುಗಳೇನು?-ಪು.4

ಹಾರ್ಮುಜ್ ಜಲಸಂಧಿ-ಬಾಬ್ ಎಲ್-ಮಂಡೇಬ್ ಮೂಲಕ ವಾಣಿಜ್ಯ ಹಡಗುಗಳ ಸಂಚಾರ ಸಾಮಾನ್ಯಕ್ಕಿಂತ ಗಣನೀಯ ಕುಸಿತ- ಪು.8

# ಸಿಎಸ್‌ಆರ್ ನಿಧಿ ವೆಚ್ಚಕ್ಕೆ ಹೊಸನೀತಿ, ನಿಗಾವಹಿಸಲು ಅಧಿಕಾರಿ ನಿಯೋಜನೆ

### ಮೊದಲ ಹಂತದಲ್ಲಿ ಶಿಕ್ಷಣಕ್ಕೆ ಒತ್ತು, ನಂತರ ಆರೋಗ್ಯ ಸೇವೆಗೆ ಆದ್ಯತೆ: ಸಿಎಂ ಡಿ.ಕೆ. ಶಿವಕುಮಾರ್

**ಬೆಂಗಳೂರು, ಜು.7:** ಕಾರ್ಪೋರೇಟ್ ಸಂಸ್ಥೆಗಳು, ಕೈಗಾರಿಕೆಗಳು ಒಳಗೊಂಡಂತೆ ಸಾಮಾಜಿಕ ಹೊಣೆಗಾರಿಕೆ ನಿಧಿ (ಸಿಎಸ್‌ಆರ್ ನಿಧಿ) ಅಡಿ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಪ್ರತ್ಯೇಕ ನೀತಿ ಜಾರಿಗೆ ತರಲು ಸರ್ಕಾರ ಕಾರ್ಯೋನ್ಮುಖವಾಗಿದ್ದು, ಸಿಎಸ್‌ಆರ್ ಚಟುವಟಿಕೆಗಳ ಮೇಲೆ ನಿಗಾವಹಿಸಲು ಐಎಎಸ್ ಅಧಿಕಾರಿಯೊಬ್ಬರನ್ನು ನಿಯೋಜಿಸಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

ನಗರದ ಖಾಸಗಿ ಹೋಟೆಲ್‌ನಲ್ಲಿ ಗ್ರೇಟರ್ ಬೆಂಗಳೂರು ಐಟಿ ಕಂಪನಿ ಮತ್ತು ಕೈಗಾರಿಕೆಗಳ ಸಂಘದಿಂದ ಆಯೋಜಿಸಲಾದ ಸಿಎಸ್‌ಆರ್ ವಿಷನ್ – 2030 ಸಮಾವೇಶದಲ್ಲಿ ಮಾತನಾಡಿ, ಸಿ.ಎಸ್.ಆರ್ ಚಟುವಟಿಕೆಯಲ್ಲಿ ಮೊದಲ ಹಂತದಲ್ಲಿ ಶಿಕ್ಷಣಕ್ಕೆ ಒತ್ತು ನೀಡುತ್ತಿದ್ದು, ನಂತರ ಆರೋಗ್ಯ ಸೇವೆಗೆ ಆದ್ಯತೆ ನೀಡಲಾಗುವುದು. ಕಂಪನಿಗಳು ಸಿಎಸ್‌ಆರ್ ಚಟುವಟಿಕೆಯಲ್ಲಿ ವೆಚ್ಚ ಮಾಡುವ ಹಣ, ಚಟುವಟಿಕೆಗಳ ಮೇಲೆ ನಿಗಾ ವಹಿಸಲು ಸೂಕ್ತ ಕಣ್ಗಾವಲು ವ್ಯವಸ್ಥೆಯನ್ನು ರೂಪಿಸಲಾಗುವುದು ಎಂದರು.

ಸರ್ಕಾರಿ ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳನ್ನಾಗಿ ಮೇಲ್ದರ್ಜೆಗೇರಿಸಲು ಕ್ರಮ ತೆಗೆದುಕೊಳ್ಳಬೇಕು. ಬೆಂಗಳೂರು ನಗರದಲ್ಲಿ ಶಾಲೆಗಳ ಅಭಿವೃದ್ಧಿಗೆ ಅನುಮತಿ ನೀಡುವುದಿಲ್ಲ. ಬೆಂಗಳೂರು ಹೊರತುಪಡಿಸಿ ಜಿಲ್ಲಾ ಕೇಂದ್ರಗಳಲ್ಲೂ ಶಾಲೆಗಳ ಅಭಿವೃದ್ಧಿಯನ್ನು ಕೈಗೆತ್ತಿಕೊಳ್ಳುವಂತಿಲ್ಲ. ಗ್ರಾಮ ಪಂಚಾಯತ್ ಹಂತದಲ್ಲಿ ಶಾಲಾಭಿವೃದ್ಧಿಗೆ ಗಮನಹರಿಸಬೇಕು. ಯಾವ ಗ್ರಾಮದ ಶಾಲೆಯನ್ನಾದರೂ ಅಭಿವೃದ್ಧಿಪಡಿಸಿದರೂ



ಸರ್ಕಾರ ನಿರ್ಬಂಧ ವಿಧಿಸುವುದಿಲ್ಲ. ಯಾರಿಗೆ ಬೇಕಾದರೂ ಗುತ್ತಿಗೆ ನೀಡಿ. ಆದರೆ ಗ್ರಾಮ ಪಂಚಾಯತ್ ಹಂತದಲ್ಲಿ ಉತ್ತಮ ಚಿಕಿತ್ಸೆ ದೊರೆಯುವಂತಹ ವ್ಯವಸ್ಥೆ ಕಲ್ಪಿಸಬೇಕು. ಇದಕ್ಕಾಗಿ ಎಲ್ಲಾ ಜಿಲ್ಲೆಗಳಲ್ಲಿ ಅಧಿಕಾರಿಗಳು, ಸಿಎಸ್‌ಆರ್ ವ್ಯಾಪ್ತಿಗೆ ಒಳಪಡುವ ಸಂಸ್ಥೆಗಳು ಬಿಲ್ಡರ್‌ಗಳನ್ನು ಒಳಗೊಂಡಂತೆ ಸಮಿತಿ ರಚಿಸಲಾಗುವುದು ಎಂದರು.

ಸಿ.ಎಸ್.ಆರ್ ಚಟುವಟಿಕೆಯಡಿ ಆರೋಗ್ಯ ಕ್ಷೇತ್ರಕ್ಕೂ ಸಹ ಒತ್ತು ನೀಡುತ್ತಿದ್ದು, ರಾಜ್ಯದಲ್ಲಿ ಉತ್ತಮ ವೈದ್ಯಕೀಯ ಶಿಕ್ಷಣವಿದೆ. ಜೊತೆಗೆ ನರ್ಸಿಂಗ್ ಶಿಕ್ಷಣದ ಮೂಲಕ ಪ್ರತಿ ವರ್ಷ ಒಂದು ಲಕ್ಷ ಅರೆವೈದ್ಯಕೀಯ ಸಿಬ್ಬಂದಿ ಶಿಕ್ಷಣ, ತರಬೇತಿ ಪಡೆದು ಹೊರ ಬರುತ್ತಿದ್ದಾರೆ. ರಾಜ್ಯದಲ್ಲಿ ಇಡೀ ವಿಶ್ವದಲ್ಲಿಯೇ ಅತ್ಯುತ್ತಮ ವೈದ್ಯರಿದ್ದು, ಗುಣಮಟ್ಟದ ಚಿಕಿತ್ಸೆ ದೊರೆಯುತ್ತಿದೆ. ಬೆಂಗಳೂರು ನಗರದ ಬೆಳವಣಿಗೆಗೆ ಪಂಡಿತ್ ಜವಾಹರ್‌ಲಾಲ್ ನೆಹರು ಸ್ವಾತಂತ್ರೋತ್ತರದಲ್ಲಿ ಉತ್ತಮ ಅಡಿಪಾಯ ಹಾಕಿದ್ದು, ಜಗತ್ತಿನ ಅತ್ಯುತ್ತಮ ಕಂಪನಿಗಳು ಇಲ್ಲಿವೆ. ಈ ನಗರದಲ್ಲಿ ನಾವು ಮಾತನಾಡುವ ಎಲ್ಲವೂ ಲಭ್ಯವಿದೆ. ಆದರೆ ಮುಂಬೈನಂತೆ ಬೆಂಗಳೂರು ನಗರ ದುಬಾರಿಯಲ್ಲ. ಒಂದು, ಒಂದೂವರೆ ಕೋಟಿಗೆ ನಗರದ ಆಸುಪಾಸಿನಲ್ಲಿ ಉತ್ತಮ ಮನೆಗಳನ್ನು ಖರೀದಿಸಬಹುದು. ಮುಂಬರುವ ಬೆಂಗಳೂರು ಟೆಕ್ ಶೃಂಗಸಭೆಯಲ್ಲಿ ಈ ನಗರಕ್ಕೆ ಮತ್ತಷ್ಟು ಅಚ್ಚರಿಗಳು ದೊರೆಯಲಿವೆ ಎಂದರು.

ಸಿಎಸ್‌ಆರ್ ಚಟುವಟಿಯಲ್ಲಿ ತೊಡಗಿರುವ ಸಂಸ್ಥೆಗಳಿಗೆ ಸೆಲ್ಯೂಟ್ ಮಾಡುತ್ತೇನೆ. ರಾಜ್ಯದ ಅಭಿವೃದ್ಧಿಗೆ ನಿಮ್ಮ ಕೊಡುಗೆ ಅನನ್ಯ. ನಿಮ್ಮ ಯಾವುದೇ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಸರ್ಕಾರ ಬಾಗಿಲು ಸದಾ ತೆರೆದಿರುತ್ತದೆ. ಶಿಕ್ಷಣಕ್ಕಾಗಿ ಗ್ರಾಮೀಣ ಭಾಗದ ಜನತೆ ನಗರ ಪ್ರದೇಶಗಳಿಗೆ ವಲಸೆ ಬರುವಂತಾಗಬಾರದು. ನಗರ ಪ್ರದೇಶದಲ್ಲಿ ದೊರೆಯುವಂತಹ ಶಿಕ್ಷಣ ಗ್ರಾಮೀಣರಿಗೂ ಲಭ್ಯವಾಗುವಂತೆ ನೋಡಿಕೊಳ್ಳಿ ಎಂದರು.

ಸಮ್ಮೇಳನದಲ್ಲಿ 150ಕ್ಕೂ ಅಧಿಕ ಕಂಪೆನಿಗಳು ಪಾಲ್ಗೊಂಡಿದ್ದವು.ಗ್ರೇಟರ್ ಬೆಂಗಳೂರು ಐಟಿ ಕಂಪೆನಿಗಳು ಮತ್ತು ಕೈಗಾರಿಕೆಗಳ ಸಂಘದ ಸಲಹೆಗಾರ, ರಾಜ್ಯಸಭೆಯ ಮಾಜಿ ಸದಸ್ಯ ಪ್ರೊ.ರಾಜೀವ್‌ಗೌಡ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಾರ್ಯದರ್ಶಿ ಜೆ. ಮಂಜುನಾಥ್, ಬೆಂಗಳೂರು ದಕ್ಷಿಣ ಜಿಲ್ಲಾಧಿಕಾರಿ ಯಶವಂತ್ ಗುರುಕರ್ ಮತ್ತಿತರರು ಉಪಸ್ಥಿತರಿದ್ದರು.

### 10000 ಕೋಟಿ ವೆಚ್ಚ ಮಾಡಬೇಕಿದೆ

ರಾಜ್ಯದಲ್ಲಿ ಸಿ.ಎಸ್.ಆರ್ ವ್ಯಾಪ್ತಿಯಡಿ ಪ್ರಸ್ತುತ 3394 ಕೋಟಿ ರೂ ವೆಚ್ಚ ಮಾಡುತ್ತಿದ್ದು, ಇದು ಅತ್ಯಂತ ಕಡಿಮೆಯಾಗಿದೆ. ವಾರ್ಷಿಕ 10 ಸಾವಿರ ಕೋಟಿ ರೂ ವೆಚ್ಚ ಮಾಡಬೇಕಾಗಿದೆ. ಈ ಬಗ್ಗೆ ಮುಂದಿನ ದಿನಗಳಲ್ಲಿ ಐಎಎಸ್ ಅಧಿಕಾರಿಯೊಬ್ಬರು ಈ ಬಗ್ಗೆ ಗಮನಹರಿಸಲಿದ್ದಾರೆ. ಸರ್ಕಾರ ನಿರ್ಮಾಣ ಚಟುವಟಿಕೆ ಮಾಡಿದರೆ ಶೇ 18 ರಷ್ಟು ಜಿ.ಎಸ್.ಟಿ ಪಾವತಿಸಬೇಕಾಗುತ್ತದೆ. ಹಾಗಾಗಿ ಗುಣಮಟ್ಟದ ನಿರ್ಮಾಣ ಕಾರ್ಯಗಳನ್ನು ನೀವೇ ನಿರ್ವಹಿಸಬೇಕು. ಜೊತೆಗೆ ದೊಡ್ಡ ದೊಡ್ಡ ಶಿಕ್ಷಣ ಸಂಸ್ಥೆಗಳು ಸಹ ರಾಜ್ಯದಲ್ಲಿ ತಲಾ ಒಂದೊಂದು ಸರ್ಕಾರಿ ಶಾಲೆಯನ್ನು ದತ್ತು ತೆಗೆದುಕೊಂಡು ನಿರ್ವಹಣೆ ಮಾಡಬೇಕು. ನನ್ನ ಮಗಳು ಸಹ ಮೂರು ಶಾಲೆಗಳನ್ನು ದತ್ತು ಪಡೆದಿದ್ದಾಳೆ. ಬೆಂಗಳೂರು ದಕ್ಷಿಣ ಜಿಲ್ಲೆಯ ಗ್ರಾಮೀಣ ಭಾಗದಲ್ಲಿ ಹಲವು ಶಾಲೆಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

## ಆ.17ರವರೆಗೆ ಎಸ್‌ಐಆರ್ ಪ್ರಕ್ರಿಯೆ ವಿಸ್ತರಣೆ: ಅ.27ರಂದು ಅಂತಿಮ ಪಟ್ಟಿ ಪ್ರಕಟ

**ನವದೆಹಲಿ ಆ.7:** ಕೇಂದ್ರ ಚುನಾವಣಾ ಆಯೋಗವು ಶುಕ್ರವಾರ ಕರ್ನಾಟಕದಲ್ಲಿ ಮತದಾರರ ಪಟ್ಟಿಗಳ ವಿಶೇಷ ತೀವ್ರ ಪರಿಷ್ಕರಣೆಯ ವೇಳಾಪಟ್ಟಿಯನ್ನು ಪರಿಷ್ಕರಿಸಿದೆ, ಪ್ರಕ್ರಿಯೆಗೆ ಪ್ರಮುಖ ಸಮಯ ಮಿತಿಗಳನ್ನು ವಿಸ್ತರಿಸಿದೆ ಮತ್ತು ನವೀಕರಿಸಿದ ಮತದಾರರ ಪಟ್ಟಿಯ ಅಂತಿಮ ಪ್ರಕಟಣೆಯನ್ನು ಅ.27ಕ್ಕೆ ಮುಂದೂಡಿದೆ. ಕರ್ನಾಟಕದ ಮುಖ್ಯ ಚುನಾವಣಾ ಅಧಿಕಾರಿ (ಸಿಇಒ) ಅವರ ಕೋರಿಕೆಯ ಮೇರೆಗೆ ಪರಿಷ್ಕೃತ ವೇಳಾಪಟ್ಟಿಯನ್ನು ಅನುಮೋದಿಸಲಾಗಿದೆ ಎಂದು ಆಯೋಗದ ಅಧೀನ ಕಾರ್ಯದರ್ಶಿ ಸಂದೀಪ್ ಕುಮಾರ್ ಹೊರಡಿಸಿದ ಆದೇಶದಲ್ಲಿ ತಿಳಿಸಿದ್ದಾರೆ. ಪರಿಷ್ಕೃತ ಕಾರ್ಯಕ್ರಮದ ಪ್ರಕಾರ, ಪರಿಷ್ಕರಣಾ ಪ್ರಕ್ರಿಯೆಯ ನಿರ್ಣಾಯಕ ಭಾಗವಾಗಿರುವ ಬೂತ್‌ಮಟ್ಟದ ಅಧಿಕಾರಿಗಳ (ಬಿಎಲ್‌ಒ) ಮನೆ–ಮನೆ ಪರಿಶೀಲನೆಯು ಈಗ ಆ.17 ರವರೆಗೆ ಮುಂದುವರಿಯುತ್ತದೆ. ಮತದಾನ ಕೇಂದ್ರಗಳ ತರ್ಕಬದ್ಧಗೊಳಿಸುವಿಕೆ ಮತ್ತು ಮರುಜೋಡಣೆ ಕೂಡ ಆ.17ರಂದು ಪೂರ್ಣಗೊಳ್ಳುತ್ತದೆ. ಆ.24ರಂದು ಕರಡು ಮತದಾರರ ಪಟ್ಟಿ ಪ್ರಕಟಗೊಳ್ಳಲಿದೆ. ಆ.24ರಿಂದ ಸೆ.23ರವರೆಗೆ ಆಕ್ಷೇಪಣೆ ಸಲ್ಲಿಸಲು ಅವಕಾಶವಿರಲಿದೆ. ಅಂತಿಮ ಮತದಾರರ ಪಟ್ಟಿಯನ್ನು ಅ.27 ರಂದು ಪ್ರಕಟಗೊಳ್ಳಲಿದೆ ಎಂದು ಸಲಾಗುವುದು ಎಂದು ಆಯೋಗ ತಿಳಿಸಿದೆ,

# ಅಕ್ರಮ ಅಡಿಕೆ ಆಮದು ನಿಯಂತ್ರಣ: ಬೆಳೆಗಾರರ ಹಿತರಕ್ಷಣೆಗೆ ಮನವಿ

**ನವದೆಹಲಿ, ಆ.7:** ಹಿರಿಯ ನಾಯಕ, ಶಾಸಕ ಆರಗ ಜ್ಞಾನೇಂದ್ರ ನೇತೃತ್ವದ ಬಿಜೆಪಿ ಸಂಸದರು ಮತ್ತು ಕೇಂದ್ರ ಅಡಿಕೆ ಮತ್ತು ಕೋಕೋ ಮಾರ್ಕೆಟಿಂಗ್ ಮತ್ತು ಪ್ರೊಸೆಸಿಂಗ್ ಕೋ–ಆಪರೇಟಿವ್ ಸಂಸ್ಥೆಯ ಪ್ರತಿನಿಧಿಗಳ ನಿಯೋಗ ಕೇಂದ್ರ ಗೃಹ ವ್ಯವಹಾರ ಮತ್ತು ಸಹಕಾರ ಸಚಿವ ಅಮಿತ್ ಶಾ ಅವರನ್ನು ನವದೆಹಲಿಯಲ್ಲಿ ಶುಕ್ರವಾರ ಭೇಟಿಮಾಡಿ, ದೇಶೀಯ ಅಡಿಕೆ ಬೆಳೆಗಾರರಿಗೆ ಸಂಕಷ್ಟ ತಂದೊಡ್ಡುತ್ತಿರುವ ಅಕ್ರಮ ಅಡಿಕೆ ಆಮದು ಮತ್ತು ಕಳ್ಳಸಾಗಣೆ ತಡೆಯಲು ಬಲವಾದ, ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದೆ.

ಕರ್ನಾಟಕ ಸೇರಿದಂತೆ ಅಡಿಕೆ ಬೆಳೆಯುವ ರಾಜ್ಯಗಳ ಲಕ್ಷಾಂತರ ರೈತ ಕುಟುಂಬಗಳು, ಅಕ್ರಮ ಅಡಿಕೆ ಆಮದಿನಿಂದಾಗಿ ಎದುರಿಸುತ್ತಿರುವ ಸವಾಲಿನ ಸಂಕಷ್ಟಮಯ ಪರಿಸ್ಥಿತಿಗಳ ಬಗ್ಗೆ ಕೇಂದ್ರ ಗೃಹ ಸಚಿವರಿಗೆ ಮಾಹಿತಿ ನೀಡಿ, ಕೇಂದ್ರ ಸರ್ಕಾರ ಕೂಡಲೇ ಸೂಕ್ತ ಕ್ರಮ ತೆಗೆದುಕೊಂಡು ಅಡಿಕೆ ಬೆಳೆಗಾರರ ಹಿತರಕ್ಷಿಸಬೇಕು ಎಂದು ಸಂಸದರು ಮನವಿ ಸಲ್ಲಿಸಿದರು.

ಬೆಳೆ ರೋಗಗಳು, ಹೆಚ್ಚುತ್ತಿರುವ ವೆಚ್ಚ, ಕುಸಿಯುತ್ತಿರುವ ಉತ್ಪಾದಕತೆ ಸೇರಿದಂತೆ ಹಲವು ಸವಾಲುಗಳನ್ನು ಎದುರಿಸುತ್ತಿರುವ ರೈತರು, ಅಕ್ರಮ ವ್ಯಾಪಾರದಿಂದ ಇನ್ನಷ್ಟು ಸಂಕಷ್ಟಕ್ಕೆ ಒಳಗಾಗದಂತೆ ನೋಡಿಕೊಳ್ಳುವ ಅಗತ್ಯವನ್ನು ನಿಯೋಗ ಒತ್ತಿ ಹೇಳಿತು.



ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ ಕರ್ನಾಟಕದ ಸಂಸದರ ನಿಯೋಗ

ವಿದೇಶಿ ಮೂಲದ ಅಡಕೆಯನ್ನು ಗಡಿ, ಬಂದರುಗಳು ಮತ್ತು ಇತರ ಮಾರ್ಗಗಳ ಮೂಲಕ ಅಕ್ರಮವಾಗಿ ಸಾಗಿಸುವ ಬಗ್ಗೆ ಹಾಗೂ ಆಮದು ವರ್ಗೀಕರಣಗಳು ಮತ್ತು ವ್ಯಾಪಾರ ದಾಖಲಾತಿಗಳ ಸಂಭಾವ್ಯ ದುರುಪಯೋಗದ ಬಗ್ಗೆ ಇದೇ ಸಂದರ್ಭದಲ್ಲಿ ನಿಯೋಗ ಗೃಹ ಸಚಿವರ ಗಮನ ಸೆಳೆಯಿತು. ಐಟಿಸಿ (ಎಚ್‌ಎಸ್) 20081991 ರ ಅಡಿಯಲ್ಲಿ 'ಹುರಿದ ಒಣಹಣ್ಣುಗಳು ಮತ್ತು ಬೀಜಗಳು' ಎಂದು ಘೋಷಿಸಲಾದ ಸರಕುಗಳ ಸೂಕ್ಷ್ಮ ಪರಿಶೀಲನೆ ನಡೆಸಬೇಕು ಎಂದು ನಿಯೋಗ ನಿರ್ದಿಷ್ಟ ಕೋರಿಕೆ ಸಲ್ಲಿಸಿತು.

ಸುರಕ್ಷತಾ ಕ್ರಮಗಳನ್ನು ತಪ್ಪಿಸಲು ಕೇವಲ ಹೆಸರಿಗೆ ಮಾತ್ರ ಸಂಸ್ಕರಿತ ಎಂದು ಹೇಳಲಾಗುತ್ತಿದೆ ಎನ್ನುವ ರೈತರ ಕಳವಳವನ್ನು ನಿಯೋಗ ವ್ಯಕ್ತಪಡಿಸಿತು. ಪ್ರತಿ ಕೆಜಿಗೆ ರೂ. 351 ಕನಿಷ್ಠ ಆಮದು ಬೆಲೆ (ಎಂಐಪಿ) ಕಟ್ಟುನಿಟ್ಟಾದ ಜಾರಿ ಮತ್ತು ಅಡಿಕೆ ಯಾವ ದೇಶದಿಂದ ಬರುತ್ತಿದೆ, ಅದರ ಘೋಷಿತ ಮೌಲ್ಯ ಮತ್ತು ರವಾನೆಗಳ ಮಾರ್ಗನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪರಿಶೀಲನೆ ಮಾಡಬೇಕು ಎಂದು ಕರ್ನಾಟಕದ ನಿಯೋಗದ ಸದಸ್ಯರು ಕೇಂದ್ರ ಸಚಿವರಿಗೆ ಒತ್ತಾಯಿಸಿದರು.

ನಿಯೋಗದಲ್ಲಿ ಬಿಜೆಪಿ ಸಂಸದರಾದ ಬಿ.ವೈ.ರಾಘವೇಂದ್ರ, ಕೋಟ ಶ್ರೀನಿವಾಸ ಪೂಜಾರಿ, ವಿಶ್ವೇಶ್ವರ ಹೆಗಡೆ ಕಾಗೇರಿ, ಕ್ಯಾಂಪ್ಕೋ ಅಧ್ಯಕ್ಷ ಸತೀಶ್‌ಚಂದ್ರ, ವ್ಯವಸ್ಥಾಪಕ ನಿರ್ದೇಶಕ ಸತ್ಯನಾರಾಯಣ ಮತ್ತು ಕ್ಯಾಂಪ್ಕೋ ಪ್ರತಿನಿಧಿಗಳು ಇದ್ದರು.

### ರೈತರ ಹಿತಾಸಕ್ತಿ ಕಾಪಾಡುವ ಕೇಂದ್ರದ ಕ್ರಮಕ್ಕೆ ಶ್ಲಾಘನೆ


ಕನಿಷ್ಠ ಆಮದು ಬೆಲೆ ಸುರಕ್ಷತೆ ಸೇರಿದಂತೆ ರೈತರ ಹಿತಾಸಕ್ತಿಗಳನ್ನು ರಕ್ಷಿಸಲು ನಿರಂತರವಾಗಿ ಶ್ರಮಿಸುತ್ತಿರುವ ಗೌರವಾನ್ವಿತ ಪ್ರಧಾನಿ ನರೇಂದ್ರ ಮೋದಿ ಜಿ ಮತ್ತು ಅವರ ಸರ್ಕಾರ ತೆಗೆದುಕೊಂಡ ರೈತ ಪರ ಕ್ರಮಗಳನ್ನು ಇದೇ ಸಂದರ್ಭದಲ್ಲಿ ಸಂಸದ ಬಿ.ವೈ. ರಾಘವೇಂದ್ರ ಶ್ಲಾಘಿಸಿದರು. ಇಂತಹ ರೈತ ಹಿತರಕ್ಷಣೆಯ ಪೂರಕ ಕ್ರಮಗಳು ರೈತರ ಕಲ್ಯಾಣಕ್ಕೆ ಕೇಂದ್ರ ಸರ್ಕಾರದ ನಿರಂತರ ಬದ್ಧತೆಯನ್ನು ಪ್ರತಿಬಿಂಬಿಸುತ್ತವೆ ಎಂದು ಹೇಳಿದರು.

## ಆ.14ರಂದು ನೂತನ ಸಭಾಪತಿ ಆಯ್ಕೆ

**ಬೆಂಗಳೂರು, ಜು.7:** ವಿಧಾನ ಪರಿಷತ್ ಸಭಾಪತಿ ಸ್ಥಾನಕ್ಕೆ ಬಸವರಾಜ ಹೊರಟ್ಟಿ ಅವರು ರಾಜಿನಾಮೆ ನೀಡಿದ್ದು, ಅದನ್ನು ಅಂಗೀಕರಿಸಲಾಗಿದೆ. ಬದಲಿ ವ್ಯವಸ್ಥೆ ಆಗುವವರೆಗೂ ಅವರನ್ನೇ ಈ ಸ್ಥಾನದಲ್ಲಿ ಮುಂದುವರಿಸಬೇಕು ಎಂದು ರಾಜ್ಯಪಾಲರಿಗೆ ಪತ್ರ ಬರೆದಿದ್ದೇನೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.

ವಿಧಾನಸೌಧದಲ್ಲಿ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಮುಖ್ಯಮಂತ್ರಿಗಳು, ಪ್ರಸಕ್ತ ರಾಜಕೀಯ ಬೆಳವಣಿಗೆ ಗಮನದಲ್ಲಿಟ್ಟುಕೊಂಡು ಬಸವರಾಜ ಹೊರಟ್ಟಿ ಅವರು ತಮ್ಮ ರಾಜೀನಾಮೆ ನೀಡಿದ್ದಾರೆ. ಅವರಿಗೆ ಧನ್ಯವಾದ ಅರ್ಪಿಸುತ್ತೇನೆ. ಹೊರಟ್ಟಿ ಅವರು ದೇಶದ ವಿಧಾನ ಪರಿಷತ್ ಇತಿಹಾಸದಲ್ಲೇ ಅತ್ಯಂತ ಹಿರಿಯ ನಾಯಕರು. ಹೃದಯ ವೈಶಾಲ್ಯ ತೋರಿದ್ದಾರೆ. ಅದು ಮೆಚ್ಚುವಂತದ್ದು. ಆ. 13ರಂದು ವಿಧಾನಮಂಡಲ ಅಧಿವೇಶನ ಆರಂಭವಾಗಲಿದ್ದು, 14 ರಂದು ನೂತನ ಉಪಸಭಾಪತಿಗಳ ಆಯ್ಕೆ ಪ್ರಕ್ರಿಯೆ ನಡೆಯಲಿದೆ. ನಂತರ ಉಪಸಭಾಪತಿಗಳ ಮೂಲಕ ಸಭಾಪತಿಗಳ ಚುನಾವಣೆ ನಡೆಯಲಿದೆ ಎಂದು ತಿಳಿಸಿದರು.

ಇದಕ್ಕೂ ಮುನ್ನ ಬಸವರಾಜ ಹೊರಟ್ಟಿ ಅವರೊಂದಿಗೆ ವಿಧಾನಸೌಧದಲ್ಲಿ ಚರ್ಚೆ ನಡೆಸಿದ್ದ ಮುಖ್ಯಮಂತ್ರಿಗಳು, ವಿಧಾನ ಪರಿಷತ್ತಿನ ಅಧ್ಯಕ್ಷ, ಉಪಾಧ್ಯಕ್ಷರನ್ನು ಆಯ್ಕೆಮಾಡಿ ನಂತರ ನಮ್ಮ



ಸದಸ್ಯರೆಲ್ಲರಿಗೂ ಕೃತಜ್ಞತೆ ಸಲ್ಲಿಸುವ ಆಸೆಯನ್ನು ಬಸವರಾಜ ಹೊರಟ್ಟಿಯವರು ಇಟ್ಟುಕೊಂಡಿದ್ದಾರೆ. ಅವರ ಭಾವನೆಗಳನ್ನು ನಾವು ಒಪ್ಪಿಕೊಂಡಿದ್ದೇವೆ, ಗೌರವಿಸುತ್ತೇವೆ. ಈಗ ಅವರೇ ರಾಜೀನಾಮೆ ನೀಡಿದ್ದಾರೆ. ಹಾಗಾಗಿ ಅವಿಶ್ವಾಸ ನಿರ್ಣಯ ಮಂಡನೆ ಅಪ್ರಸ್ತುತ ಎಂದರು.

ಬಸವರಾಜ ಹೊರಟ್ಟಿ ಅವರು ಶಿಸ್ತಿನ ಮನುಷ್ಯ. ಅವರು ಸಭಾಪತಿ ಸ್ಥಾನಕ್ಕೆ ನೀಡಿದಷ್ಟು ಗೌರವವನ್ನು ಯಾರೂ ನೀಡಿಲ್ಲ. ಎಲ್ಲಾ ಸಂದರ್ಭದಲ್ಲೂ ಸರ್ಕಾರದ ಗೌರವ ಕಾಪಾಡಿಕೊಂಡು ಬಂದಿದ್ದಾರೆ. ನಮಗೆಲ್ಲರಿಗೂ ಅವರ ಬಗ್ಗೆ ಹೆಮ್ಮೆಯಿದೆ ಎಂದರು.

## ವಿಧಾನ ಪರಿಷತ್ ಸಭಾಪತಿ ಸ್ಥಾನಕ್ಕೆ ಬಸವರಾಜ ಹೊರಟ್ಟಿ ರಾಜೀನಾಮೆ

**ಬೆಂಗಳೂರು, ಆ.7:** ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿ ಸ್ಥಾನಕ್ಕೆ ಬಸವರಾಜ ಎಸ್. ಹೊರಟ್ಟಿ ಶುಕ್ರವಾರ ರಾಜೀನಾಮೆ ಸಲ್ಲಿಸಿದ್ದಾರೆ. ಉಪ ಸಭಾಪತಿಯವರಿಗೆ ಅಧಿಕೃತ ರಾಜೀನಾಮೆ ಪತ್ರ ನೀಡಿದ್ದು, ಸ್ವಇಚ್ಛೆಯಿಂದ ರಾಜೀನಾಮೆ ನೀಡುತ್ತಿರುವುದಾಗಿ ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಬಸವರಾಜ ಹೊರಟ್ಟಿ ಅವರು ರಾಜ್ಯ ರಾಜಕಾರಣದ ಹಿರಿಯ ನಾಯಕರಲ್ಲಿ ಒಬ್ಬರಾಗಿದ್ದು, ವಿಧಾನ ಪರಿಷತ್ತಿನಲ್ಲಿ ನಿರಂತರವಾಗಿ ಸುದೀರ್ಘ ಸೇವೆ ಸಲ್ಲಿಸಿದ ಅಪರೂಪದ ದಾಖಲೆ ಹೊಂದಿದ್ದಾರೆ. ಹುಬ್ಬಳ್ಳಿಯಲ್ಲಿ ಕ್ರೀಡಾ ಶಿಕ್ಷಕರಾಗಿ ತಮ್ಮ ವೃತ್ತಿಜೀವನವನ್ನು ಪ್ರಾರಂಭಿಸಿದ ಹೊರಟ್ಟಿ ಅವರು ಶಿಕ್ಷಕರ ಹಕ್ಕುಗಳು ಮತ್ತು ಕುಂದು–ಕೊರತೆಗಳಿಗಾಗಿ ಸಕ್ರಿಯವಾಗಿ ಹೋರಾಡುವ ಮೂಲಕ ಶಿಕ್ಷಕ ಸಮುದಾಯದ ಪ್ರಮುಖ ನಾಯಕರಾಗಿ ಹೊರಹೊಮ್ಮಿದರು.

1980ರಲ್ಲಿ ಪ್ರಥಮ ಬಾರಿಗೆ ಪಶ್ಚಿಮ ಶಿಕ್ಷಕರ ಕ್ಷೇತ್ರದಿಂದ ಕರ್ನಾಟಕ ವಿಧಾನ ಪರಿಷತ್ತಿಗೆ ಶಾಸಕರಾಗಿ ಆಯ್ಕೆಯಾಗಿ, ನಂತರ ಪಶ್ಚಿಮ ಶಿಕ್ಷಕರ ಕ್ಷೇತ್ರದಿಂದ ನಿರಂತರವಾಗಿ 8 ಬಾರಿ ವಿಧಾನ ಪರಿಷತ್ತಿಗೆ ಆಯ್ಕೆಯಾಗಿದ್ದರು.

ದೇಶದಲ್ಲೇ ಶಿಕ್ಷಕರ ಕ್ಷೇತ್ರವನ್ನು ಪ್ರತಿನಿಧಿಸಿ ಸತತವಾಗಿ ದೀರ್ಘಾವಧಿಗೆ (40 ವರ್ಷಗಳು ಹೆಚ್ಚು ಅವಧಿ ಸೇವೆ) ಆಯ್ಕೆಯಾದ ಅಪರೂಪದ ಶಾಸಕ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

### ಸ್ವಇಚ್ಛೆಯಿಂದ ರಾಜೀನಾಮೆ

ಸಿಎಂ ಡಿ.ಕೆ. ಶಿವಕುಮಾರ್, ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಮನವೊಲಿಕೆ ನಂತರ ಬಸವರಾಜು ಹೊರಟ್ಟಿ ಸಭಾಪತಿ ಸ್ಥಾನಕ್ಕೆ ರಾಜೀನಾಮೆ ನೀಡುವ ನಿರ್ಧಾರ ಕೈಗೊಂಡಿದ್ದಾರೆ. ಸಭಾಪತಿ ಸ್ಥಾನಕ್ಕೆ ರಾಜೀನಾಮೆ ನೀಡುವ ಪತ್ರವನ್ನು ಅವರು ರವಾನಿಸಿದ್ದು, ಸ್ವಇಚ್ಛೆಯಿಂದ ಸಭಾಪತಿ ಸ್ಥಾನಕ್ಕೆ ರಾಜೀನಾಮೆ ನೀಡುತ್ತಿದ್ದೇನೆ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಆದರೆ ಅವಧಿಗೆ ಮುನ್ನ ತಮ್ಮ ರಾಜೀನಾಮೆ ಪಡೆದ ಬಗ್ಗೆ ಹೊರಟ್ಟಿ ಬೇಸರ ವ್ಯಕ್ತಪಡಿಸಿದ್ದಾರೆ.

## ಎಂಎಲ್‌ಸಿ ಗಾಯತ್ರಿ ಶಾಂತೇಗೌಡ ಪ್ರಮಾಣವಚನ



**ಬೆಂಗಳೂರು, ಆ.7:** ವಿಧಾನ ಪರಿಷತ್ ನೂತನ ಸದಸ್ಯೆ ಎ.ವಿ. ಗಾಯತ್ರಿ ಶಾಂತೇಗೌಡ ಅವರು ಸಭಾಪತಿ ಬಸವರಾಜ ಹೊರಟ್ಟಿ ಅವರ ಕಚೇರಿಯಲ್ಲಿ, ಸಿಎಂ ಡಿ.ಕೆ. ಶಿವಕುಮಾರ್ ಅವರ ಸಮ್ಮುಖದಲ್ಲಿ ಶುಕ್ರವಾರ ಪ್ರಮಾಣವಚನ ಸ್ವೀಕರಿಸಿದರು. ಕೆಪಿಸಿಸಿ ಅಧ್ಯಕ್ಷ ಬಿ ಕೆ ಹರಿಪ್ರಸಾದ್, ಸಚಿವ ನರೇಂದ್ರಸ್ವಾಮಿ, ವಿಧಾನ ಪರಿಷತ್ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹಮದ್, ಶಾಸಕ ಪ್ರಕಾಶ್ ಕೋಳಿವಾಡ್, ಪರಿಷತ್ ಸದಸ್ಯ ಎಸ್ ರವಿ , ಐವನ್ ಡಿ'ಸೋಜಾ, ಎಚ್.ಪಿ. ಸುಧಾಮದಾಸ್ ಮತ್ತಿತರರು ಉಪಸ್ಥಿತರಿದ್ದರು.

# ಗೃಹಲಕ್ಷ್ಮಿ ಯೋಜನೆ 32ನೇ ಕಂತಿನ 2443 ಕೋಟಿ ರೂ. ಬಿಡುಗಡೆ: ದಿನೇಶ್ ಗೂಳಿಗೌಡ

**ಬೆಂಗಳೂರು, ಆ.7:** ಗೃಹಲಕ್ಷ್ಮಿ ಯೋಜನೆಗೆ 2443 ಕೋಟಿ ರೂ.ಗಳನ್ನು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬಿಡುಗಡೆ ಮಾಡಿದ್ದು ಇನ್ನು 3–4 ದಿನದಲ್ಲಿ ಕುಟುಂಬದ ಯಜಮಾನಿಯರ ಬ್ಯಾಂಕ್ ಖಾತೆಗೆ ಜಮೆ ಆಗಲಿದೆ. ಇದುವರೆಗೂ 62,000 ರೂ. ಗೃಹಲಕ್ಷ್ಮಿಯರ ಖಾತೆಗೆ ಸೇರಿದ್ದು, ಇದೀಗ 32ನೇ ಕಂತಿನ ಹಣ ಬಿಡುಗಡೆಯಾಗಿದೆ. ಇದರೊಂದಿಗೆ ಪ್ರತಿ ಫಲಾನುಭವಿಗೆ ತಲಾ 64,000 ರೂ. ಸೇರಿದಂತಾಗಿದೆ ಎಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ದಿನೇಶ್ ಗೂಳಿಗೌಡ ಹೇಳಿದರು.

ಜಿಬಿಎ ವ್ಯಾಪ್ತಿಯ ಯಲಹಂಕ, ಬ್ಯಾಟರಾಯನಪುರ, ಹೆಬ್ಬಾಳ, ಸರ್ವಜ್ಞನಗರ ವಿಧಾನಸಭಾ ಕ್ಷೇತ್ರಗಳ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗಳ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಗೃಹಲಕ್ಷ್ಮಿ ಯೋಜನೆಯಲ್ಲದೆ ಗೃಹಜ್ಯೋತಿ ಯೋಜನೆಯಡಿ 200 ಯುನಿಟ್‌ವರೆಗೆ ಉಚಿತ ವಿದ್ಯುತ್ ನೀಡಲಾಗುತ್ತಿದೆ. ಅನ್ನಭಾಗ್ಯ, ಶಕ್ತಿ, ಯುವನಿಧಿ ಯೋಜನೆ ಸೇರಿದಂತೆ ಪಂಚ ಗ್ಯಾರಂಟಿ ಯೋಜನೆಗಳಿಗೆ ರಾಜ್ಯ ಸರ್ಕಾರ 1 ಲಕ್ಷ 46 ಸಾವಿರದ 443 ಕೋಟಿ ಹಣವನ್ನು ಖರ್ಚು ಮಾಡಿದೆ. ಇದರಿಂದ ಪ್ರತಿ ಕುಟುಂಬಕ್ಕೆ ಸರಾಸರಿ 5 ರಿಂದ 6 ಸಾವಿರ ಹಣ ಉಳಿತಾಯವಾಗುತ್ತಿದೆ ಎಂದರು.

ಗ್ಯಾರಂಟಿ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ತಲುಪಬೇಕು, ದುರುಪಯೋಗ ಆಗುವುದನ್ನು ತಡೆಯುವ ಉದ್ದೇಶದಿಂದ ಗೃಹಲಕ್ಷ್ಮಿ ಮತ್ತು ಗೃಹಜ್ಯೋತಿ ಯೋಜನೆ ಪರಿಷ್ಕರಣೆ ಮಾಡಲಾಗುತ್ತಿದೆ. ಅದೇರೀತಿ ಗೃಹಜ್ಯೋತಿ ಯೋಜನೆಯಡಿ



ನೀಡಲಾಗುವ ವಿದ್ಯುತ್ ಅನ್ನು ವಾಣಿಜ್ಯ ಬಳಕೆಗೆ ಬಳಸಿಕೊಳ್ಳುತ್ತಿರುವುದನ್ನು ತಡೆಯುವ ಉದ್ದೇಶದಿಂದ ಯೋಜನೆ ಪರಿಷ್ಕರಣೆ ನಡೆಸಲಾಗುತ್ತಿದೆ ಎಂದರು. ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಬಿಎ ಅಧ್ಯಕ್ಷ ಕೃಷ್ಣಪ್ಪ, ಬೆಂಗಳೂರು ಉತ್ತರ ವಿಭಾಗದ ಅಧ್ಯಕ್ಷೆ ಲಾವಣ್ಯ ನರಸಿಂಹಮೂರ್ತಿ ವಿವಿಧ ವಿಧಾನಸಭಾ ಕ್ಷೇತ್ರಗಳ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಉಪಸ್ಥಿತರಿದ್ದರು.

### ಗ್ಯಾರಂಟಿ ಉತ್ಸವ ಆಯೋಜಿಸಲು ಕರೆ

1.24 ಕೋಟಿ ಪಡಿತರ ಚೀಟಿದಾರರಿಗೆ ರಾಜ್ಯ ಸರ್ಕಾರ ಉಚಿತವಾಗಿ ಅಕ್ಕಿ ವಿತರಣೆ ಮಾಡಲಾಗುತ್ತಿದೆ. ಈ ಕುರಿತು ಸಾರ್ವಜನಿಕರಿಗೆ ಮನವರಿಕೆ ಮಾಡಿಕೊಡಬೇಕು. ವಾರ್ಡ್ ಮಟ್ಟದಲ್ಲಿ ಫಲಾನುಭವಿಗಳ ಸಮಾವೇಶ, ಗ್ಯಾರಂಟಿ ಉತ್ಸವಗಳನ್ನು ನಡೆಸಬೇಕು ಎಂದು ದಿನೇಶ್ ಗೂಳಿಗೌಡ ಕರೆಕೊಟ್ಟರು. ಮೃತರ ಖಾತೆಗೆ ಹಣ ಸಂದಾಯವಾಗುತ್ತಿರುವುದನ್ನು ತಡೆಯಲು ಮೃತ ಫಲಾನುಭವಿಗಳ ಹೆಸರನ್ನು 15 ದಿನದಲ್ಲಿ ಪಟ್ಟಿಯಿಂದ ಕೈಬಿಡುವಂತೆ ಸರ್ಕಾರ ಶೀಘ್ರದಲ್ಲೇ ಮಾರ್ಗಸೂಚಿ ರಚನೆ ಮಾಡಲಿದೆ. ಅನ್ನಭಾಗ್ಯ ಯೋಜನೆಯಡಿ ಅಕ್ಕಿ ಬದಲಿಗೆ ಇಂದಿರಾ ಕಿಟ್ ವಿತರಣೆ ಮಾಡುವ ಕಾರ್ಯ ಅಂತಿಮ ಹಂತದಲ್ಲಿ ಇದೆ. ನ್ಯಾಯಬೆಲೆ ಅಂಗಡಿಗಳ ಮಾಸಿಕ ಸಭೆ ನಡೆಸಬೇಕು. ವೇಳಾಪಟ್ಟಿ ಪ್ರಕಟಣೆ ಮಾಡಬೇಕು. ದಿನಪೂರ್ತಿ ತೆರೆಯುವಂತೆ ರಾಜ್ಯದ 22 ಸಾವಿರ ನ್ಯಾಯಬೆಲೆ ಅಂಗಡಿಗಳಿಗೂ ಸರ್ಕಾರ ಆದೇಶ ಹೊರಡಿಸಲಿದೆ ಎಂದು ಹೇಳಿದರು.

**ನಿತ್ಯ ಪಂಚಾಂಗ 8.08.2026 ಶನಿವಾರ**



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ ಋತು, ಚಾಂದ್ರಮಾನ, ಚೈತ್ರ-ವೈಶಾಖ ಮಾಸ

ಹಿರಿಯ ನಾಗರಿಕರ ದಿನ,
ತುಳಸೀದಾಸ ಆರಾಧನೆ,
ಹೆಮ್ಮರಗಾಲ ಕೃಷ್ಣೋತ್ಸವ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಬಸವರಾಜ ಹೊರಟ್ಟಿಯವರಿಂದ ರಾಜೀನಾಮೆ ಪಡೆದ ಸರ್ಕಾರದ ನಡೆ ಪರಿಷತ್ ಇತಿಹಾಸದಲ್ಲಿ ಕಪ್ಪುಚುಕ್ಕೆ: ಸಂಸದ ಬೊಮ್ಮಾಯಿ ವಾಗ್ದಾಳಿ

**ಬೆಂಗಳೂರು, ಆ.7:** ದೇಶದಲ್ಲೇ ಅತ್ಯಂತ ಹಿರಿಯ ವಿಧಾನ ಪರಿಷತ್ ಸದಸ್ಯ ಎಂಬ ಹೆಗ್ಗಳಿಕೆಗೆ ಪಾತ್ರರಾಗಿರುವ ಬಸವರಾಜ ಹೊರಟ್ಟಿ ಅವರನ್ನು ಸಭಾಪತಿ ಸ್ಥಾನದಿಂದ ಕೆಳಗಿಳಿಸಲು ಕಾಂಗ್ರೆಸ್ ಸರ್ಕಾರ ನಡೆದುಕೊಂಡಿರುವ ರೀತಿ ಯಾವುದೇ ಸತ್ಸಂಪ್ರದಾಯಕ್ಕೆ ಅನುಗುಣವಾಗಿಲ್ಲ. ಇದು ಸಭಾಪತಿ ಸ್ಥಾನದ ಗೌರವಕ್ಕೆ ಹಾಗೂ ಸಂವಿಧಾನಕ್ಕೆ ಎಸಗಿದ ಅಪಮಾನವಾಗಿದೆ. ಕರ್ನಾಟಕ ವಿಧಾನ ಪರಿಷತ್ತಿನ ಇತಿಹಾಸದಲ್ಲಿ ಇದೊಂದು ಕೆಟ್ಟ ನಡವಳಿಕೆ ಹಾಗೂ ಕಪ್ಪು ಚುಕ್ಕೆಯಾಗಿ ಉಳಿಯಲಿದೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಬಸವರಾಜ ಹೊರಟ್ಟಿಯವರು ಸುದೀರ್ಘ 46 ವರ್ಷಗಳ ಕಾಲ ಯಾವುದೇ ಬಿಡುವಿಲ್ಲದೆ ವಿಧಾನ ಪರಿಷತ್ ಸದಸ್ಯರಾಗಿ, ಸಚಿವರಾಗಿ ಹಾಗೂ ಸಭಾಪತಿಯಾಗಿ ಅತ್ಯುತ್ತಮ ಸೇವೆ ಸಲ್ಲಿಸಿದ್ದಾರೆ. ಅವರು ಪಕ್ಷಾತೀತವಾಗಿ ವಿಷಯಾಧಾರಿತ ರಾಜಕಾರಣಕ್ಕೆ ಹೆಸರುವಾಸಿಯಾದವರು. ಆದರೆ, ಅವರನ್ನು ಮುಖ್ಯಮಂತ್ರಿಗಳ ಮನೆಗೆ ಕರೆಯಿಸಿ ಮಾತನಾಡಿ, ವಿಧಾನಸೌಧದಲ್ಲಿಯೇ ಕುಳಿತು ಒತ್ತಾಯಪೂರ್ವಕವಾಗಿ ರಾಜೀನಾಮೆ ಪಡೆದಿರುವುದು ಮತ್ತು ರಾಜೀನಾಮೆ ನೀಡಿದ ಕೇವಲ 5 ನಿಮಿಷಗಳಲ್ಲಿ ಅದನ್ನು ಅಂಗೀಕರಿಸಿ ಪ್ರಕಟಣೆ ಹೊರಡಿಸಿರುವುದು ಸರ್ಕಾರದ ದುರಾಲೋಚನೆಯನ್ನು ಪ್ರದರ್ಶಿಸುತ್ತದೆ. ಈ ಪ್ರಕ್ರಿಯೆಯು ಯಾವುದೇ ಸತ್ಸಂಪ್ರದಾಯಕ್ಕೆ ಅನುಗುಣವಾಗಿಲ್ಲ. ಇದು ಸಭಾಪತಿ ಸ್ಥಾನದ ಗೌರವಕ್ಕೆ ಹಾಗೂ ಸಂವಿಧಾನಕ್ಕೆ ಎಸಗಿದ ಅಪಮಾನವಾಗಿದೆ. ಕರ್ನಾಟಕ ವಿಧಾನ ಪರಿಷತ್ತಿನ ಇತಿಹಾಸದಲ್ಲಿ ಇದೊಂದು ಕೆಟ್ಟ ನಡವಳಿಕೆ ಹಾಗೂ ಕಪ್ಪುಚುಕ್ಕೆಯಾಗಿ ಉಳಿಯಲಿದೆ ಎಂದು ತಿಳಿಸಿದ್ದಾರೆ.



ಸಭಾಪತಿಯಾಗಿ ಬಸವರಾಜ ಹೊರಟ್ಟಿ ಅವರು ನೀಡಿದ ಕೊಡುಗೆ ಮತ್ತು ಮಾಡಿದ ಕೆಲಸಗಳು ಇತಿಹಾಸದಲ್ಲಿ ಶಾಶ್ವತವಾಗಿರಲಿವೆ. ರಾಜೀನಾಮೆಯ ನಂತರವೂ ಅವರು ಸಾರ್ವಜನಿಕ ಜೀವನದಲ್ಲಿ ಸಕ್ರಿಯರಾಗಿ ಮುಂದುವರಿಯಬೇಕು. ಯುವಕರಿಗೆ ಹಾಗೂ ಹೊಸ ರಾಜಕಾರಣಿಗಳಿಗೆ ತಮ್ಮ ಸುದೀರ್ಘ ಅನುಭವದ ಮೂಲಕ ಮಾರ್ಗದರ್ಶನ ನೀಡಬೇಕು ಎಂಬುದು ಸಾರ್ವಜನಿಕರ ಅಪೇಕ್ಷೆಯಾಗಿದೆ. ಅವರ ಹಿರಿತನ ಮತ್ತು ಅಪಾರ ಅನುಭವಕ್ಕೆ ರಾಜ್ಯದ ಜನತೆ ಸದಾ ಗೌರವಪೂರ್ವಕವಾಗಿ ಋಣಿಯಾಗಿರುತ್ತದೆ ಎಂದು ತಿಳಿಸಿದ್ದಾರೆ.

# ಸಚಿವ ಯತೀಂದ್ರಗೆ ಕೇಂದ್ರ ಸಚಿವೆ ಕರಂದ್ಲಾಜೆ ಸಲಹೆ

**ಮೈಸೂರು, ಆ.7:** ಭಾರತ ಹಿಂದೂ ರಾಷ್ಟ್ರ ಆಗಬಾರದು ಎಂದು ಹೇಳಿರುವ ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಅವರು, ತಾವು ಯಾವ ಧರ್ಮೀಯರು ಎಂಬುದನ್ನು ತಾಯಿಯ ಬಳಿ ಕೇಳಿ ತಿಳಿದುಕೊಳ್ಳಲಿ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಹೇಳಿದರು. ಇಲ್ಲಿನ ಚಾಮುಂಡಿಬೆಟ್ಟದಲ್ಲಿ ಮಾತನಾಡಿ, 'ನಾವು ಯಾರು, ನಮ್ಮ ಸಂಸ್ಕೃತಿ ಯಾವುದು, ನಮ್ಮ ಧರ್ಮ ಯಾವುದು, ಯಾವುದನ್ನು ಆಚರಿಸುತ್ತೇವೆ ಎಂಬುದನ್ನು ಅವರು ತಮ್ಮ ತಾಯಿಯನ್ನೇ ಕೇಳಲಿ. ಅವರನ್ನು ಹೆತ್ತು, ಹೊತ್ತ ತಾಯಿಯೇ ಸರಿಯಾದ ಉತ್ತರ ಕೊಡುತ್ತಾರೆ' ಎಂದರು. ಹಿಂದೂ ಸಂಸ್ಕೃತಿ, ನಮ್ಮ ಧರ್ಮವನ್ನು ಉಳಿಸುವವರಿಗೆ ತಾಯಿ ಚಾಮುಂಡೇಶ್ವರಿ ಶಕ್ತಿ ಕೊಡಲಿ. ಮಹರಾಜರು ಈ ನೆಲದ ಸಂಸ್ಕೃತಿ, ಧರ್ಮವನ್ನು ಉಳಿಸಿದರು. ಈಗ ಸರ್ಕಾರ ನಡೆಸುವವರು ಕೂಡ ಅದೇ ಸ್ಥಾನದಲ್ಲಿರುತ್ತಾರೆ. ಸಂಸ್ಕೃತಿ ಉಳಿಸುವವರಿಗೆ ತಾಯಿ ಆಶೀರ್ವಾದವಿರಲೆಂದು ಪ್ರಾರ್ಥಿಸುತ್ತೇನೆ' ಎಂದು ಹೇಳಿದರು.

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್ಐಆರ್) ವೇಳೆ, ಇಡೀ ದೇಶದಲ್ಲೇ ಅತಿ ಹೆಚ್ಚು ಮತಗಳು ಡಿಲೀಟ್ ಆಗಿರುವುದು ಕರ್ನಾಟಕದಲ್ಲಿ. ಅದರಲ್ಲೂ ನನ್ನ ಕ್ಷೇತ್ರದಲ್ಲಿ ಬಹಳಷ್ಟು ಮತಗಳು ಡಿಲೀಟ್ ಆಗಿವೆ. ಜನರು ತಮ್ಮ ಸ್ವಂತ ಊರುಗಳ ಮತದಾರರ ಪಟ್ಟಿಯಲ್ಲಿ ಹೆಸರು ಉಳಿಸಿಕೊಳ್ಳುತ್ತಿದ್ದಾರೆ' ಎಂದರು.

# ಸಚಿವ ಯತೀಂದ್ರ ಸಿದ್ದರಾಮಯ್ಯ ಹೇಳಿಕೆಗೆ ಅಶೋಕ್ ತಿರುಗೇಟು

ಬೆಂಗಳೂರು, ಆ.7: ಭಾರತವು ಹಿಂದೂ ರಾಷ್ಟ್ರವಾದರೆ ಜಾತಿ ವ್ಯವಸ್ಥೆ ಮತ್ತೆ ಬರುತ್ತದೆ, ಅದು ಜನರನ್ನು ಹಿಂದುಳಿದ ವರ್ಗಗಳನ್ನು ಶೋಷಣೆ ಮಾಡುವ ವ್ಯವಸ್ಥೆ, ಆ ರೀತಿ ಶೋಷಣೆಯಾದರೆ ಹಿಂದುಳಿದ, ದಲಿತ ಸಮುದಾಯದವರು ಜಾತಿ ವ್ಯವಸ್ಥೆಯಡಿ ಶೋಷಣೆಗೊಳಗಾಗುತ್ತೇವೆ ಎಂದಿರುವ ಸಚಿವ ಯತೀಂದ್ರ ಸಿದ್ದರಾಮಯ್ಯ ಹೇಳಿಕೆಗೆ ಪ್ರತಿಪಕ್ಷ ನಾಯಕ ಆರ್.ಅಶೋಕ್ ತಿರುಗೇಟು ನೀಡಿದ್ದಾರೆ.



ಸಚಿವ ಯತೀಂದ್ರ ಸಿದ್ದರಾಮಯ್ಯಗೆ ಹಿಂದೂ ಧರ್ಮದ ಹೆಸರು ಕೇಳಿದರೆ ಆಗೋದಿಲ್ಲ. ಬದಲಾಗಿ ಪಾಕಿಸ್ತಾನ ಜಿಂದಾಬಾದ್ ಎನ್ನುವವರಿಗೆ ಬೆಂಬಲ ನೀಡುತ್ತಾರೆ. ಅವರು ಏನಿದ್ದರೂ ಪಾಕಿಸ್ತಾನ, ಬಾಂಗ್ಲಾದೇಶದ ಬಗ್ಗೆ ಮಾತನಾಡಲಿ. ಅವರಿಗೆ ಹಿಂದುತ್ವದ ಬಗ್ಗೆ ಮಾತನಾಡುವ ನೈತಿಕತೆಯಿಲ್ಲ. ಭಾರತದಲ್ಲಿ ಇರುವವರೆಲ್ಲರೂ ಹಿಂದೂಗಳು ಎಂದು ಸುಪ್ರೀಂ ಕೋರ್ಟ್ ಹೇಳಿದೆ ಎಂದಿದ್ದಾರೆ.

ಮೈಸೂರಿನ ಮೇಲೆ ಹಿಡಿತ ತಪ್ಪುತ್ತದೆ, ತವರು ಜಿಲ್ಲೆಯಲ್ಲಿ ಇನ್ನೊಂದು ಪವರ್ ಸೆಂಟರ್ ಸೃಷ್ಟಿಯಾಗುತ್ತದೆ ಎನ್ನುವ ದುರುದ್ದೇಶದಿಂದ, ಸ್ವಾರ್ಥದಿಂದ, 6 ಬಾರಿ ಆಯ್ಕೆಯಾಗಿರುವ ಹಿರಿಯ ಮುಸ್ಲಿಂ ಶಾಸಕ ತನ್ವೀರ್ ಅವರಿಗೆ ಸಚಿವ ಸ್ಥಾನ ತಪ್ಪಿಸಿರುವ ತಮ್ಮಂತಹ ಡೋಂಗಿ ಜಾತ್ಯತೀತರಿಂದ ಬಿಜೆಪಿ ಮತ್ತು ಆರ್‌ಎಸ್‌ಎಸ್ ಸೆಕ್ಯುಲರಿಸಂ ಪಾಠ ಕಲಿಯುವ ಅವಶ್ಯಕತೆ ಇಲ್ಲ ಎಂದಿದ್ದಾರೆ.

ಸಚಿವ ಯತೀಂದ್ರ ಸಿದ್ದರಾಮಯ್ಯ ಅವರೇ ಹಿಂದೂ ರಾಷ್ಟ್ರ ಎಂದರೆ ಸಮಾಜವಾದದ ಹೆಸರಿನಲ್ಲಿ, ಜಾತ್ಯತೀತತೆ ಹೆಸರಿನಲ್ಲಿ ವೋಟ್ ಬ್ಯಾಂಕ್ ರಾಜಕಾರಣ ಮಾಡಿ ಇನ್ನೊಬ್ಬರನ್ನು ತುಳಿದು ಅಧಿಕಾರ ಅನುಭವಿಸುವುದಲ್ಲ. ಹಿಂದೂ ರಾಷ್ಟ್ರ ಅಂದರೆ "ಸರ್ವೇ ಜನಾಃ ಸುಖಿನೋ ಭವಂತು" ಎಂದು ಎಲ್ಲರ ಒಳಿತು ಬಯಸುವುದು ಎಂದು ಹೇಳಿದ್ದಾರೆ.

# ಉಸ್ತುವಾರಿ ಆಗಿರಲಿ, ಇಲ್ಲದಿರಲಿ ನವೆಂಬರ್‌ನಲ್ಲಿ ಹಂಪಿ ಉತ್ಸವ ಆಯೋಜನೆಗೆ ಸರ್ಕಾರ ಬದ್ಧ: ಸಚಿವ ಜಮೀರ್

**ಹರಪನಹಳ್ಳಿ, ಆ.7:** ನಾನು ವಿಜಯನಗರ ಜಿಲ್ಲಾ ಉಸ್ತುವಾರಿ ಸಚಿವನಾಗಲಿ ಅಥವಾ ಬಿಡಲಿ, ನವೆಂಬರ್ ತಿಂಗಳಲ್ಲಿಯೇ ಹಂಪಿ ಉತ್ಸವ ಆಯೋಜಿಸಲು ಸರ್ಕಾರ ಬದ್ಧವಾಗಿದೆ ಎಂದು ಸಚಿವ ಜಮೀರ್ ಅಹಮದ್ ಖಾನ್ ಸ್ಪಷ್ಟಪಡಿಸಿದರು.



ತಾಲ್ಲೂಕಿನ ನಿಲುವಂಜಿ ಗ್ರಾಮಕ್ಕೆ ಶುಕ್ರವಾರ ಭೇಟಿ ನೀಡಿ ಮಳೆಯಿಲ್ಲದೆ ಹಾನಿಗೊಳಗಾದ ಬೆಳೆಗಳ ಸಮೀಕ್ಷೆ ಪರಿಶೀಲಿಸಿದ ಬಳಿಕ ಅವರು ಸುದ್ದಿಗಾರರೊಂದಿಗೆ ಮಾತನಾಡಿ, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಳೆದ ವರ್ಷ ಹಂಪಿ ಉತ್ಸವದಲ್ಲಿ ಘೋಷಣೆ ಮಾಡಿರುವಂತೆ, ಈ ವರ್ಷ ನವೆಂಬರ್‌ನಲ್ಲೇ ಉತ್ಸವ ನಡೆಯಲಿದೆ ಎಂದರು.

ಪ್ರಸಕ್ತ ಮುಂಗಾರು ಮಳೆ ಕೈಕೊಟ್ಟಿರುವ ಕಾರಣ ಜಿಲ್ಲೆಯಲ್ಲಿ ಸಾವಿರಾರು ರೈತರು ಬೆಳೆನಷ್ಟ ಅನುಭವಿಸಿದ್ದಾರೆ. ಈ ಕುರಿತು ಸಮೀಕ್ಷೆ ನಡೆಸಿ ಕೂಡಲೇ ವರದಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಬೆಳೆ ವಿಮೆಗೆ ಅರ್ಜಿ ಸಲ್ಲಿಸಿದ ಹಾಗೂ ಸಲ್ಲಿಸದ ಎಲ್ಲ ರೈತರಿಗೂ ಪರಿಹಾರ ದೊರಕಿಸಿಕೊಡುವ ನಿಟ್ಟಿನಲ್ಲಿ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸುವುದಾಗಿ ಭರವಸೆ ನೀಡಿದರು. ಹರಪನಹಳ್ಳಿ ಶಾಸಕಿ ಎಂ.ಪಿ. ಲತಾ ಮಲ್ಲಿಕಾರ್ಜುನ, ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಸೇರಿದಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು

**ಸಿದ್ದರಾಮಯ್ಯ ಜತೆ ಭಿನ್ನಾಭಿಪ್ರಾಯವಿಲ್ಲ:** ಮೈಸೂರು ಜಿಲ್ಲೆಯ ದೃಷ್ಟಿಯಿಂದ ಮಾತ್ರ ಸಚಿವ ಸ್ಥಾನಕ್ಕೆ ಸಿದ್ದರಾಮಯ್ಯ ಅವರು ಜಮೀರ್ ಹೆಸರು ಪ್ರಸ್ತಾಪಿಲ್ಲ ಎಂದು ಯತೀಂದ್ರ ಹೇಳಿಕೆ ನೀಡಿದ್ದಾರೆ ಅಷ್ಟೇ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಯಾವುದೇ ಭಿನ್ನಾಭಿಪ್ರಾಯವಿಲ್ಲ. ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ ತಕ್ಷಣವೇ ಸಿದ್ದರಾಮಯ್ಯ ಅವರ ಆಶೀರ್ವಾದ ಪಡೆದಿದ್ದೇನೆ. ಮಾಜಿ ಮುಖ್ಯಮಂತ್ರಿಗಳಿಗೂ ಮತ್ತು ನಮಗೂ ಉತ್ತಮ ಬಾಂಧವ್ಯವಿದೆ" ಎಂದು ಜಮೀರ್ ಅಹ್ಮದ್ ಖಾನ್ ತಿಳಿಸಿದರು.

**ವಸತಿ ಖಾತೆಗೆ ಕೋರಿಕೆ:** ಹಿಂದೆ ವಸತಿ ಸಚಿವನಾಗಿದ್ದಾಗ 79 ಸಾವಿರ ಮನೆಗಳನ್ನು ಮಂಜೂರು ಮಾಡಿದ್ದೆ, ಪ್ರಸ್ತುತ 39 ಸಾವಿರ ಮನೆಗಳ ನಿರ್ಮಾಣ ಬಾಕಿ ಉಳಿದಿದೆ. ಹಾಗಾಗಿ ನನಗೆ ವಸತಿ ಖಾತೆಯನ್ನೇ ಮರುಹಂಚಿಕೆ ಮಾಡುವಂತೆ ಮನವಿ ಮಾಡಿದ್ದೇನೆ. ಮುಖ್ಯಮಂತ್ರಿಗಳು ಯಾವ ಖಾತೆ ನೀಡಿದರೂ ಅದನ್ನು ಅತ್ಯಂತ ಸಮರ್ಥವಾಗಿ ನಿಭಾಯಿಸುತ್ತೇನೆ ಎಂದು ಸಚಿವ ಜಮೀರ್ ವಿಶ್ವಾಸ ವ್ಯಕ್ತಪಡಿಸಿದರು.

# ವಿಜಯಪುರ ನಗರ ಸೌಂದರ್ಯೀಕರಣಕ್ಕೆ ನಿರ್ಧಾರ

**ವಿಜಯಪುರ, ಆ. 7:** ನಗರದ ಶಿವಾಜಿ ಸರ್ಕಲ್‌ನಿಂದ ಲಿಂಗದಗುಡಿ ರಸ್ತೆ ಹಾಗೂ ಗಚ್ಚಿನಕಟ್ಟಿ ಕಾಲೋನಿಗೆ ಹೊಂದಿಕೊಂಡಿರುವ ಕೋಟೆಗೋಡೆ ಸುತ್ತಲೂ ಮಳೆ ನೀರು ಸರಾಗವಾಗಿ ಹರಿದು ಹೋಗಲು ಮತ್ತು ಪ್ರವಾಹ ಉಂಟಾಗದಂತೆ ತಡೆಯಲು ಬೃಹತ್ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ನಗರಾಭಿವೃದ್ಧಿ ಪ್ರಾಧಿಕಾರ ಹಾಗೂ ಮಹಾನಗರ ಪಾಲಿಕೆ ನಿರ್ಧರಿಸಲಾಗಿದೆ ಎಂದು ವಿಜಯಪುರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ. ಗಂಗಾಧರ ಸಂಬಣ್ಣಿ ತಿಳಿಸಿದರು.

ನಗರಾಭಿವೃದ್ಧಿ ಪ್ರಾಧಿಕಾರ ಹಾಗೂ ಪಾಲಿಕೆ ಆಯುಕ್ತರೊಂದಿಗೆ ನಡೆದ ಮಹತ್ವದ ಸಭೆಯಲ್ಲಿ ಈ ಕುರಿತು ವಿಸ್ತೃತವಾಗಿ ಚರ್ಚಿಸಲಾಯಿತು ಎಂದು ತಿಳಿಸಿದ ಅವರು, ಕೋಟೆಗಳ ಸುತ್ತಮುತ್ತಲೂ ಬೆಳೆದಿರುವ ಕಂಟಿಬೇಲಿ ಹಾಗೂ ಗಿಡಗಂಟಿಗಳನ್ನು ಸಂಪೂರ್ಣವಾಗಿ ತೆರವುಗೊಳಿಸಲು ಉಭಯ



ಅಧಿಕಾರಿಗಳು ತೀರ್ಮಾನಿಸಿದರು.ಜೊತೆಗೆ ಕೋಟೆ ಕಂದಕದ ಸುತ್ತಮುತ್ತ ಹೂಳೆತ್ತಿ, ನೀರಿನ ಹರಿವಿಗೆ ಅನುಕೂಲವಾಗುವಂತೆ ಅಗಲೀಕರಣಗೊಳಿಸಲು ನಿರ್ಧರಿಸಿದರು.ನೀರು ಸುಗಮವಾಗಿ ಹರಿಯಲು ತಡೆಗೋಡೆ ನಿರ್ಮಾಣ ಮತ್ತು ಮಾರ್ಗ ಮಧ್ಯೆದಲ್ಲಿರುವ ಅಡೆತಡೆಗಳನ್ನು ತೆರವುಗೊಳಿಸಲು ಸಭೆ ನಿರ್ಧರಿಸಿತು.

**ಶಾಶ್ವತ ಪರಿಹಾರ:**
ಈ ಕಾಮಗಾರಿಗಳು ಪೂರ್ಣಗೊಂಡ ನಂತರ ಮಳೆಗಾಲದಲ್ಲಿ ನಗರದಲ್ಲಿ ನೀರು ನಿಲ್ಲುವ ಸಮಸ್ಯೆಗೆ ಶಾಶ್ವತ ಪರಿಹಾರ ಸಿಕ್ಕು ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಗಂಗಾಧರ ಸಂಬಣ್ಣಿ ತಿಳಿಸಿದರು.ಇದೇ ಸಂದರ್ಭದಲ್ಲಿ ನಗರದ ಸೌಂದರ್ಯೀಕರಣಕ್ಕೆ ಸಂಬಂಧಿಸಿದಂತೆ ಹಲವು ಪ್ರಮುಖ ನಿರ್ಣಯಗಳನ್ನು ಕೈಗೊಳ್ಳಲಾಯಿತು.

ಗಾಂಧಿವೃತ್ತದ ಮರು ನಿರ್ಮಾಣ ಹಾಗೂ ಅಭಿವೃದ್ಧಿ ಕಾಮಗಾರಿಗೆ ಪಾಲಿಕೆಯಿಂದ ಬೇಗಂ ತಲಾಬ್ ಕೆರೆ ಅಭಿವೃದ್ಧಿ ಕಾಮಗಾರಿ ಹಾಗೂ ಕೆರೆಯ ಬಂಡ್ ಕನೆಕ್ಟಿಂಗ್ ಕಾಮಗಾರಿ ಕೈಗೊಳ್ಳಲು ಹಾಗೂ ಮಹಾಬಲೇಶ್ವರ ನಗರ ಉದ್ಯಾನವನದ ಅಭಿವೃದ್ಧಿ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ರಾಮನಗರ ರಸ್ತೆ ಹಸ್ತಾಂತರ ಹಾಗೂ ಗಚ್ಚಿನಕಟ್ಟಿ ಕಾಲೋನಿಯ ಮಳೆ ನೀರು ಚರಂಡಿಯ ಔಟ್‌ಲೆಟ್ ಪಾಯಿಂಟ್ ನಿರ್ವಹಣೆ ಕುರಿತು ಚರ್ಚಿಸಿ ಸೂಕ್ತ ನಿರ್ಧಾರ ಕೈಗೊಳ್ಳಲಾಯಿತು.

ಸಭೆಯಲ್ಲಿ ಮಹಾನಗರ ಪಾಲಿಕೆ ಆಯುಕ್ತರಾದ ವಿಜಯ ಮೆಕ್ಕಳಕಿ, ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರಾದ ರಾಜಶೇಖರ ಡಂಬಳ ಸೇರಿದಂತೆ ವಿವಿಧ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.


# ಸಂಪುಟದಿಂದ ಕೈಬಿಟ್ಟಿರುವ ಹಿಂದಿನ ಉದ್ದೇಶ ಗೊತ್ತಿಲ್ಲ: ಮಂಕಾಳ ವೈದ್ಯ

ಮೈಸೂರು, ಆ.7: ನನ್ನ ಅವಶ್ಯಕತೆ ಇರಲಿಲ್ಲವೇನೋ ಅದಕ್ಕಾಗಿ ನನ್ನ ಹೆಸರನ್ನು ಕೊನೆ ಕ್ಷಣದಲ್ಲಿ ಕೈ ಬಿಟ್ಟರು. ಸಚಿವ ಸಂಪುಟಕ್ಕೆ ಸೇರಿಸಿಕೊಳ್ಳದಿರುವುದರ ಹಿಂದಿನ ಉದ್ದೇಶವೇನು ಎಂಬುದು ಗೊತ್ತಿಲ್ಲ ಎಂದು ಶಾಸಕ ಮಂಕಾಳ ವೈದ್ಯ ಹೇಳಿದರು.



ಚಾವ್಍ಂಡಿಬೆಟ್ಟದಲ್ಲಿ ಪತ್ರಕರ್ತರೊಂದಿಗೆ ಮಾತನಾಡಿ, ಯಾರಿಗೆ, ಯಾವ ಪ್ರದೇಶಕ್ಕೆ ಅನ್ಯಾಯ ಆಯಿತು ಎಂಬುದನ್ನು ಹೇಳಿದರೆ ಅದು ಮಾತಿನಲ್ಲಷ್ಟೆ ಉಳಿಯುತ್ತದೆ. ಜನರೇ ಎಲ್ಲವನ್ನೂ ತೀರ್ಮಾನಿಸುತ್ತಾರೆ ಎಂದರು.

ಮಂತ್ರಿಯಾಗಿ ಮೂರು ವರ್ಷ ಒಳ್ಳೆಯ ಕೆಲಸ ಮಾಡಿದ್ದೇನೆ. ಕೆಟ್ಟ ಹೆಸರನ್ನೇನೂ ತೆಗೆದುಕೊಂಡಿಲ್ಲ. ಅಷ್ಟು ಸಾಕು. ಅಂದು ಬೆಳಗ್ಗೆ 10ಕ್ಕೆ ಮುಖ್ಯಮಂತ್ರಿಯೇ ಫೋನ್ ಮಾಡಿ ಪಟ್ಟಿಯಲ್ಲಿ ನಿಮ್ಮ ಹೆಸರಿದೆ ಬನ್ನಿ ಎಂದು ಕರೆದಿದ್ದರು. 11 ಗಂಟೆಗೆ ಮತ್ತೆ ಫೋನ್ ಮಾಡಿ, ನಿಮ್ಮ ಹೆಸರು ಕೈ ಬಿಟ್ಟಿದ್ದೇವೆ; ಮಲ್ಲಣ್ಣಗೆ (ಎಸ್.ಎಸ್. ಮಲ್ಲಿಕಾರ್ಜುನ) ಅವಕಾಶ ಕೊಟ್ಟಿದ್ದೇವೆ ಎಂದರು. ಈ ಅವಧಿಯಲ್ಲಿ ಏನೇನು ನಡೆಯಿತು ಎಂಬುದು ಗೊತ್ತಿಲ್ಲ ಎಂದು ಪ್ರತಿಕ್ರಿಯಿಸಿದರು.



ನವದೆಹಲಿಯಲ್ಲಿರುವ ತಮ್ಮ ನಿವಾಸದಲ್ಲಿ ಶುಕ್ರವಾರ ರಾಜ್ಯಸಭಾ ಸದಸ್ಯರೊಂದಿಗೆ ಉಪಹಾರ ಕೂಟದ ವೇಳೆ ಪ್ರಧಾನಿ ನರೇಂದ್ರ ಮೋದಿ.

# ರಸ್ತೆ ಗುಡಿಸಿದ ಕೈಗಳು ಇಂದು ರಾಜ್ಯದ ಆಡಳಿತದ ಚುಕ್ಕಾಣಿ ಹಿಡಿದಿವೆ: ಡಾ.ಆನಂದಕುಮಾರ್

**ಬೆಂಗಳೂರು,ಆ.7:** ಭಾರತದ ಸಂವಿಧಾನದ ಮಹತ್ವವನ್ನು ಅರಿಯಬೇಕಾದರೆ ಅದರ ಪುಟಗಳನ್ನು ಓದುವುದಕ್ಕಿಂತ, ಅದು ರೂಪಿಸಿದ ಮಾನವ ಬದುಕುಗಳನ್ನು ನೋಡಬೇಕು. ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಗೌರವಯುತ ಬದುಕು, ಸಮಾನ ಅವಕಾಶ ಮತ್ತು ನಾಯಕತ್ವದ ಸ್ಥಾನವನ್ನು ನೀಡುವ ಶಕ್ತಿ ಈ ಸಂವಿಧಾನಕ್ಕಿದೆ. ಈ ಸತ್ಯವನ್ನು ಕರ್ನಾಟಕದ ಸಚಿವ ಕೆ.ಎಸ್. ಬಸವಂತಪ್ಪ ಅವರ ಜೀವನಗಾಥೆ ಅತ್ಯಂತ ಸ್ಪಷ್ಟವಾಗಿ ಸಾಬೀತುಪಡಿಸುತ್ತದೆ. ಒಂದು ಕಾಲದಲ್ಲಿ ಜೀವನೋಪಾಯಕ್ಕಾಗಿ ರಸ್ತೆ ಸ್ವಚ್ಛಗೊಳಿಸುತ್ತಿದ್ದ ವ್ಯಕ್ತಿಯೊಬ್ಬರು, ಇಂದು ಕರ್ನಾಟಕ ಸರ್ಕಾರದ ಸಚಿವರಾಗಿ ಲಕ್ಷಾಂತರ ಜನರ ಆಶೋತ್ತರಗಳಿಗೆ ಪ್ರತಿನಿಧಿಯಾಗಿದ್ದಾರೆ. ಇದು ಕೇವಲ ವೈಯಕ್ತಿಕ ಸಾಧನೆಯಲ್ಲ; ಭಾರತದ ಸಂವಿಧಾನದ ಗೆಲುವು, ಪ್ರಜಾಪ್ರಭುತ್ವದ ಯಶಸ್ಸು ಮತ್ತು ಡಾ. ಬಾಬಾಸಾಹೇಬ್ ಅಂಬೇಡ್ಕರ್ ಚಿಂತನೆಯ ವಿಜಯೋತ್ಸವವಾಗಿದೆ.

ಸಮಾಜದ ತಳಮಟ್ಟದಿಂದ ಮೇಲಕ್ಕೆ ಬರುವುದು ಸುಲಭವಲ್ಲ. ಬಡತನ, ಸಾಮಾಜಿಕ ಅಸಮಾನತೆ, ಅವಕಾಶಗಳ ಕೊರತೆ ಮತ್ತು ಜೀವನದ ಅನೇಕ ಸಂಕಷ್ಟಗಳನ್ನು ಎದುರಿಸುತ್ತಾ, ಕೆ.ಎಸ್. ಬಸವಂತಪ್ಪ ಅವರು ಯಾವುದೇ ಕೆಲಸವನ್ನು ಕೀಳಾಗಿ ಕಾಣದೆ ದುಡಿದರು. ಶ್ರಮವನ್ನೇ ತಮ್ಮ ಆತ್ಮಗೌರವವನ್ನಾಗಿ ಮಾಡಿಕೊಂಡ ಅವರು, ಜನರ ನೋವನ್ನು ತಮ್ಮ ನೋವನ್ನಾಗಿ ಕಂಡರು. ಇದೇ ಬದುಕಿನ ಅನುಭವ ಅವರನ್ನು ಜನಸೇವೆಯತ್ತ ಕೊಂಡೊಯ್ದಿತು.

ರಾಜಕೀಯವೆಂದರೆ ಅಧಿಕಾರಕ್ಕಾಗಿ ನಡೆಯುವ ಪೈಪೋಟಿಯಲ್ಲ; ಜನರ ಬದುಕನ್ನು ಬದಲಾಯಿಸುವ ಹೊಣೆಗಾರಿಕೆ ಎಂಬುದನ್ನು ಅವರು ತಮ್ಮ ಕಾರ್ಯಶೈಲಿಯ ಮೂಲಕ ತೋರಿಸಿದ್ದಾರೆ.



ಜನರ ವಿಶ್ವಾಸ, ಸೇವಾ ಮನೋಭಾವ ಮತ್ತು ನಿರಂತರ ಪರಿಶ್ರಮದ ಫಲವಾಗಿ ಅವರು ಸಚಿವ ಸ್ಥಾನವನ್ನು ಅಲಂಕರಿಸಿದ್ದಾರೆ. ಈ ಸಾಧನೆ ವ್ಯಕ್ತಿಯ ಪರಿಶ್ರಮದ ಜೊತೆಗೆ ಸಂವಿಧಾನ ನೀಡಿರುವ ಸಮಾನ ಅವಕಾಶಗಳ ಮಹತ್ವವನ್ನೂ ಸಾರುತ್ತದೆ.

ಭಾರತರತ್ನ ಡಾ. ಅಂಬೇಡ್ಕರ್ ಅವರು ಸಂವಿಧಾನ ರಚಿಸಿದಾಗ, ಭಾರತದ ಪ್ರತಿಯೊಬ್ಬ ನಾಗರಿಕನಿಗೂ ಸಮಾನ ಅವಕಾಶಗಳು ದೊರೆಯಬೇಕು ಎಂಬ ಕನಸನ್ನು ಕಂಡಿದ್ದರು. ಜನ್ಮದಿಂದ ಯಾರೂ ಶ್ರೇಷ್ಠರಲ್ಲ, ಯಾರೂ ಕೀಳಲ್ಲ; ಪ್ರತಿಭೆ, ಶಿಕ್ಷಣ, ಪರಿಶ್ರಮ ಮತ್ತು ಸಂವಿಧಾನಾತ್ಮಕ ಹಕ್ಕುಗಳೇ ವ್ಯಕ್ತಿಯ ಭವಿಷ್ಯವನ್ನು ನಿರ್ಧರಿಸಬೇಕು ಎಂಬ ಅವರ ಆದರ್ಶ ಇಂದು ಬಸವಂತಪ್ಪ ಅವರಂತಹ ಅನೇಕ ಸಾಧಕರ ಬದುಕಿನಲ್ಲಿ ಸಾಕಾರಗೊಂಡಿದೆ. ಸಂವಿಧಾನವು ಕೇವಲ ಆಡಳಿತದ ಚೌಕಟ್ಟಲ್ಲ; ಅದು ಸಾಮಾಜಿಕ ನ್ಯಾಯದ ಘೋಷಣಾಪತ್ರ. ಅದು ಸಾಮಾನ್ಯ ವ್ಯಕ್ತಿಯ ಕನಸಿಗೆ ರೆಕ್ಕೆಗಳನ್ನು ನೀಡುತ್ತದೆ. ಸಮಾಜದ ಅಂಚಿನಲ್ಲಿದ್ದವರನ್ನು ಆಡಳಿತದ ಕೇಂದ್ರಕ್ಕೆ ಕರೆತರುತ್ತದೆ. ಇದೇ ಡಾ. ಅಂಬೇಡ್ಕರ್ ದೂರದೃಷ್ಟಿಯ ಪರಿಣಾಮ.

ಇಂದಿನ ಯುವಜನತೆ ಈ ಜೀವನಗಾಥೆಯನ್ನು ಕೇವಲ ಯಶಸ್ಸಿನ ಕಥೆಯಾಗಿ ಓದಬಾರದು. ಇದರ ಹಿಂದೆ ಅಡಗಿರುವ ಸಂದೇಶವನ್ನು ಅರಿತುಕೊಳ್ಳಬೇಕು. ಪರಿಸ್ಥಿತಿಗಳು ಮನುಷ್ಯನನ್ನು ನಿರ್ಧರಿಸುವುದಿಲ್ಲ; ದೃಢ ಸಂಕಲ್ಪ ಮತ್ತು ಪರಿಶ್ರಮವೇ ಅವನ ಭವಿಷ್ಯವನ್ನು ರೂಪಿಸುತ್ತವೆ. ಸಂವಿಧಾನವು ಅವಕಾಶವನ್ನು ಒದಗಿಸುತ್ತದೆ; ಆ ಅವಕಾಶವನ್ನು ಸಾಧನೆಯಾಗಿ ಪರಿವರ್ತಿಸುವ ಜವಾಬ್ದಾರಿ ನಮ್ಮದು. ಇಂದು ಪ್ರಜಾಪ್ರಭುತ್ವ, ಸಾಮಾಜಿಕ ನ್ಯಾಯ ಮತ್ತು ಸಮಾನತೆಯ ಮೌಲ್ಯಗಳನ್ನು ದುರ್ಬಲಗೊಳಿಸುವ ಪ್ರಯತ್ನಗಳು ನಡೆಯುತ್ತಿರುವ ಈ ಸಂದರ್ಭದಲ್ಲಿ, ಕೆ.ಎಸ್. ಬಸವಂತಪ್ಪ ಅವರಂತಹ ಬದುಕಿನ ಪಯಣಗಳು ಸಂವಿಧಾನದ ನಿಜವಾದ ಶಕ್ತಿಯನ್ನು ದೇಶಕ್ಕೆ ನೆನಪಿಸುತ್ತವೆ. ಇಂತಹ ಕಥೆಗಳು ಕೇವಲ ವ್ಯಕ್ತಿಯ ಸಾಧನೆಯನ್ನು ಮಾತ್ರವಲ್ಲ, ಭಾರತದ ಪ್ರಜಾಪ್ರಭುತ್ವದ ಜೀವಂತ ಶಕ್ತಿಯನ್ನೂ ಪ್ರತಿಬಿಂಬಿಸುತ್ತವೆ. ರಸ್ತೆ ಗುಡಿಸಿದ ಕೈಗಳು ಇಂದು ರಾಜ್ಯದ ಆಡಳಿತದ ನಿರ್ಧಾರಗಳನ್ನು ಕೈಗೊಳ್ಳುತ್ತಿವೆ. ಇದೇ ಭಾರತದ ಸಂವಿಧಾನದ ಮಹಿಮೆ. ಇದೇ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಶ್ರಮದ ಫಲ. ಇದೇ ಭಾರತದ ಪ್ರಜಾಪ್ರಭುತ್ವದ ಆತ್ಮ. ಈ ಸಾಧನೆ ನಮಗೆ ಒಂದು ಶಾಶ್ವತ ಸತ್ಯವನ್ನು ನೆನಪಿಸುತ್ತದೆ ಸಂವಿಧಾನವು ಎಲ್ಲರಿಗೂ ಸಮಾನ ಅವಕಾಶವನ್ನು ನೀಡುತ್ತದೆ; ಪರಿಶ್ರಮ, ಪ್ರಾಮಾಣಿಕತೆ ಮತ್ತು ಜನಸೇವೆಯ ಮನೋಭಾವವು ಆ ಅವಕಾಶವನ್ನು ಇತಿಹಾಸವನ್ನಾಗಿ ರೂಪಿಸುತ್ತದೆ. ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರು ನೀಡಿದ ಸಂವಿಧಾನವನ್ನು ಕಾಪಾಡುವುದು, ಅದರ ಮೌಲ್ಯಗಳನ್ನು ಉಳಿಸುವುದು ಮತ್ತು ಸಮಾನತೆಯ ಭಾರತದ ನಿರ್ಮಾಣಕ್ಕೆ ಕೈಜೋಡಿಸುವುದೇ ಅವರಿಗಿರುವ ನಿಜವಾದ ಗೌರವ. ಕೆ.ಎಸ್. ಬಸವಂತಪ್ಪ ಅವರ ಬದುಕು ಆ ಮಹಾನ್ ಆದರ್ಶದ ಜೀವಂತ ಪ್ರತೀಕವಾಗಿದೆ.

# ನಷ್ಟವಾದ ಬೆಳೆಯ ನಿಖರ ಸಮೀಕ್ಷೆಗೆ: ಯತೀಂದ್ರ ಸೂಚನೆ

**ಹುಣಸೂರು, ಆ.7:** ತಾಲೂಕಿನಲ್ಲಿ ಸಂಭವಿಸಿರುವ ಬೆಳೆ ಹಾನಿಯ ನಿಖರ ಸಮೀಕ್ಷೆ ಹಾಗೂ ತೀವ್ರ ಕುಡಿಯುವ ನೀರಿನ ಅಭಾವ ಎದುರಿಸುತ್ತಿರುವ ಗ್ರಾಮಗಳಿಗೆ ತಕ್ಷಣವೇ ಪರ್ಯಾಯ ನೀರು ಪೂರೈಕೆ ವ್ಯವಸ್ಥೆ ಕಲ್ಪಿಸುವಂತೆ ನಗರಾಭಿವೃದ್ಧಿ ಸಚಿವರಾದ ಡಾ. ಯತೀಂದ್ರ ಸಿದ್ದರಾಮಯ್ಯ ಅವರು ತಾಲೂಕು ಮಟ್ಟದ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಹುಣಸೂರು ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ತಾಲೂಕು ಮಟ್ಟದ ವಿವಿಧ ಇಲಾಖಾಧಿಕಾರಿಗಳ ಜೊತೆಗೆ ಮಾತನಾಡಿದ ಅವರು ತಾಲೂಕಿನಾದ್ಯಂತ ಇತ್ತೀಚೆಗೆ ಉಂಟಾಗಿರುವ ಹವಾಮಾನ ವೈಪರೀತ್ಯ ಹಾಗೂ ಮಳೆ ಅಭಾವದಿಂದ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಕೃಷಿ ಮತ್ತು ಕಂದಾಯ ಇಲಾಖೆಯ ಅಧಿಕಾರಿಗಳು ಜಂಟಿಯಾಗಿ ಬೆಳೆ ಹಾನಿಯಾಗಿರುವ ಪ್ರದೇಶಗಳಿಗೆ ಖುದ್ದಾಗಿ ಭೇಟಿ ನೀಡಿ ಜಂಟಿ ಸಮೀಕ್ಷೆ ನಡೆಸಬೇಕು. ಬೆಳೆ ಹಾನಿಯ ಪ್ರಮಾಣವನ್ನು ಯಾವುದೇ ವ್ಯತ್ಯಾಸವಿಲ್ಲದೆ ಸರಿಯಾಗಿ ಗುರುತಿಸಿ, ಅರ್ಹ ರೈತರಿಗೆ ಸರ್ಕಾರದ ನಿಯಮಾನುಸಾರ ಪರಿಹಾರ ತಲುಪಿಸಲು ಅಗತ್ಯ ವರದಿ ಸಿದ್ಧಪಡಿಸಬೇಕು ಎಂದರು. ಹುಣಸೂರು ತಾಲೂಕಿನ ಹಲವೆಡೆ ಬೇಸಿಗೆ ಮತ್ತು ಮುಂಗಾರು ಅವಧಿಯಲ್ಲಿ ಎದುರಾಗುತ್ತಿರುವ ಕುಡಿಯುವ ನೀರಿನ ಸಮಸ್ಯೆಯ ಕುರಿತು ತೀವ್ರ ಕಳವಳ ವ್ಯಕ್ತಪಡಿಸಿದ ಸಚಿವರು ಸಾರ್ವಜನಿಕರಿಗೆ ಕುಡಿಯುವ ನೀರಿನ ಅಭಾವ ಉಂಟಾಗದಂತೆ ತಡೆಗಟ್ಟುವುದು ತಾಲೂಕು ಆಡಳಿತದ ಪ್ರಮುಖ ಆದ್ಯತೆಯಾಗಬೇಕು ಎಂದರು. ಕುಡಿಯುವ ನೀರಿನ ತೀವ್ರ ಅಭಾವವಿರುವ ಪ್ರದೇಶಗಳನ್ನು ಗುರುತಿಸಿ, ತಕ್ಷಣವೇ ನೂತನವಾಗಿ ಬೋರ್‌ವೆಲ್ (ಕೊಳವೆ ಬಾವಿ) ಕೊರೆಸಲು ಆಡಳಿತಾತ್ಮಕ ಮತ್ತು ತಾಂತ್ರಿಕ ಕ್ರಮ ಕೈಗೊಳ್ಳಬೇಕು. ಹೊಸದಾಗಿ ಕೊಳವೆಬಾವಿ ಕೊರೆಸಲು ಕಾಲಾವಕಾಶ ಅಗತ್ಯವಿದ್ದಲ್ಲಿ ಅಥವಾ ಅಂತರ್ಜಲ ಮಟ್ಟ ಕುಸಿದಿರುವ ಕಡೆಗಳಲ್ಲಿ, ಸುತ್ತಮುತ್ತಲಿನ ಖಾಸಗಿ ವ್ಯಕ್ತಿಗಳ ಅಥವಾ ರೈತರ ಕೊಳವೆಬಾವಿಗಳನ್ನು ಬಾಡಿಗೆ ಆಧಾರದ ಮೇಲೆ ಪಡೆದುಕೊಂಡು ಗ್ರಾಮಸ್ಥರಿಗೆ ತಕ್ಷಣ ನೀರು ಸರಬರಾಜು ಮಾಡಬೇಕು. ಇಲ್ಲವಾದಲ್ಲಿ ಹೊಸ ಬೋರ್‌ವೆಲ್ ಮತ್ತು ಖಾಸಗಿ ಬೋರ್‌ವೆಲ್ ಗಳ ಲಭ್ಯತೆ ಸಾಧ್ಯವಾಗದ ಅತ್ಯಂತ ಸಮಸ್ಯಾತ್ಮಕ ಪ್ರದೇಶಗಳಿಗೆ ತಕ್ಷಣವೇ ಟ್ಯಾಂಕರ್‌ಗಳ ಮೂಲಕ ದಿನನಿತ್ಯ ಶುದ್ಧ ಕುಡಿಯುವ ನೀರನ್ನು ಪೂರೈಸಬೇಕು ಎಂದರು. ಕುಡಿಯುವ ನೀರಿನ ಸರಬರಾಜು ಮತ್ತು ಬೆಳೆ ಹಾನಿ ಪರಿಹಾರದಂತಹ ಸೂಕ್ಷ್ಮ ವಿಚಾರಗಳಲ್ಲಿ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದರೆ ಸಹಿಸುವುದಿಲ್ಲ. ತಾಲೂಕಿನ ಯಾವುದೇ ಭಾಗದಲ್ಲೂ ಕುಡಿಯುವ ನೀರಿಗೆ ಹಾಹಾಕಾರ ಉಂಟಾಗಿದೆ ಎಂಬ ದೂರುಗಳು ಬರದಂತೆ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು (ಪಿಡಿಒ) ಮತ್ತು ಎಂಜಿನಿಯರಿಂಗ್ ವಿಭಾಗದ ಅಧಿಕಾರಿಗಳು ಸ್ಥಳದಲ್ಲಿಯೇ ಇದ್ದು ಕಾರ್ಯನಿರ್ವಹಿಸಬೇಕು. ಸಂಬಂಧಪಟ್ಟ ಅಧಿಕಾರಿಗಳು ಪ್ರತಿದಿನ ನೀರಿನ ಅಭಾವವಿರುವ ಗ್ರಾಮಗಳ ಪಟ್ಟಿಯನ್ನು ಪರಿಶೀಲಿಸಿ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.


Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಪ್ರಧಾನಿ ವಿದ್ಯಾರ್ಥಿಗಳ ಕ್ಷಮೆ ಕೇಳಬೇಕು, ಪೊಲೀಸರ ಕ್ರಮದ ಬಗ್ಗೆ ಅಮಿತ್‌ಶಾ ವಿವರಣೆಗೆ ಮಲ್ಲಿಕಾರ್ಜುನ ಖರ್ಗೆ ಆಗ್ರಹ

**ನವದೆಹಲಿ, ಆ.6:** ವಿದ್ಯಾರ್ಥಿ ಪ್ರತಿಭಟನಾಕಾರರ ವಿರುದ್ಧದ ಪೊಲೀಸ್ ಕ್ರಮದ ಬಗ್ಗೆ ಕೇಂದ್ರ ಸರ್ಕಾರ ಹೊಣೆಗಾರಿಕೆಯಿಂದ ತಪ್ಪಿಸಿಕೊಳ್ಳುತ್ತಿದೆ ಎಂದು ರಾಜ್ಯಸಭೆ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಆರೋಪಿಸಿದರು.

ವಿದ್ಯಾರ್ಥಿಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಕ್ಷಮೆಯಾಚಿಸಬೇಕು ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಸಂಸತ್ತಿನಲ್ಲಿ ಈ ಬಗ್ಗೆ ಹೇಳಿಕೆ ನೀಡಬೇಕೆಂಬ ವಿರೋಧ ಪಕ್ಷದ ಬೇಡಿಕೆಯನ್ನು ಪುನರುಚ್ಚರಿಸಿದರು.

ನವದೆಹಲಿಯ ತಮ್ಮ ನಿವಾಸದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಖರ್ಗೆ, ಪ್ರಸ್ತುತ ಅಧಿವೇಶನಕ್ಕೆ ಅಡ್ಡಿಪಡಿಸುವುದಕ್ಕೆ ಗೃಹ ಸಚಿವರು ಮಾತನಾಡಲು ಅವಕಾಶ ನೀಡಲು ನಿರಾಕರಿಸಿದ್ದು ಪ್ರಮುಖ ಕಾರಣ. ಕಳೆದ 15 ದಿನಗಳಿಂದ ವಿರೋಧ ಪಕ್ಷಗಳು ಈ ವಿಷಯವನ್ನು ನಿರಂತರವಾಗಿ ಎತ್ತುತ್ತಿದ್ದರೂ, ಪ್ರಧಾನಿ ಅಥವಾ ಗೃಹ ಸಚಿವರ ಎರಡೂ ಸದನಗಳಲ್ಲಿ ಪ್ರತಿಕ್ರಿಯಿಸಿಲ್ಲ. ಏನಾಯಿತು ಎಂಬುದರ ಜವಾಬ್ದಾರಿಯನ್ನು ಸ್ವೀಕರಿಸುವ ಮೂಲಕ ಪ್ರಧಾನಿ ವಿದ್ಯಾರ್ಥಿಗಳು ಮತ್ತು ಅವರ ಪೋಷಕರಲ್ಲಿ ಕ್ಷಮೆಯಾಚಿಸಬೇಕು. ಪ್ರಧಾನಿ ಅವರು "ವಿದ್ಯಾರ್ಥಿಗಳನ್ನು ಕ್ಷಮಿಸಿದ್ದೇನೆ" ಎಂಬ ವರದಿಯ ಹೇಳಿಕೆಗಳಿಗೆ ಪ್ರತಿಕ್ರಿಯಿಸುತ್ತಾ, ಖರ್ಗೆ ಹೇಳಿದರು. "ಕ್ಷಮೆ ಕೇಳಬೇಕಾದವರು ಪ್ರಧಾನಿ, ವಿದ್ಯಾರ್ಥಿಗಳಲ್ಲ ಎಂದು ಹೇಳಿದರು.



ಸಂಸತ್ತು ಸುಗಮವಾಗಿ ಕಾರ್ಯ ನಿರ್ವಹಿಸಬೇಕೆಂದು ನಾವು ಬಯಸುತ್ತೇವೆ. ಗೃಹ ಸಚಿವರು ಸದನಕ್ಕೆ ಬಂದು ಹೇಳಿಕೆ ನೀಡಬೇಕೆಂಬುದು ನಮ್ಮ ಏಕೈಕ ಬೇಡಿಕೆಯಾಗಿದೆ.
-ಮಲ್ಲಿಕಾರ್ಜುನ ಖರ್ಗೆ ರಾಜ್ಯಸಭೆ ವಿರೋಧ ಪಕ್ಷ ನಾಯಕ

ರಾಷ್ಟ್ರ ರಾಜಧಾನಿಯಲ್ಲಿ ಪ್ರತಿಭಟನೆ ನಡೆಸುತ್ತಿದ್ದ ವಿದ್ಯಾರ್ಥಿಗಳ ಮೇಲೆ ಪೊಲೀಸರು ದೌರ್ಜನ್ಯ ನಡೆಸಿದ್ದಾರೆ ಎಂಬ ಆರೋಪದ ಬಗ್ಗೆ ವಿರೋಧ ಪಕ್ಷಗಳು ಪದೇ ಪದೇ ಉತ್ತರಗಳನ್ನು ಹುಡುಕುತ್ತಿದ್ದರೂ, ಪ್ರಧಾನಿ ಮೋದಿ ಮತ್ತು ಸಚಿವ ಶಾ ಇಬ್ಬರೂ ಸಂಸತ್ತಿಗೆ ಹಾಜರಾಗದೆ ಉಳಿದಿದ್ದಾರೆ ಎಂದು ಖರ್ಗೆ ಆರೋಪಿಸಿದರು.

ಇಬ್ಬರೂ ಸಂಸತ್ತನ್ನು ನಿರ್ಲಕ್ಷಿಸುತ್ತಿದ್ದಾರೆ ಅಥವಾ ಸದನದಲ್ಲಿ ವಿರೋಧ ಪಕ್ಷದ ಪ್ರಶ್ನೆಗಳಿಗೆ ಉತ್ತರಿಸಲು ಹೆದರುತ್ತಿದ್ದಾರೆ ಎಂದು ಟೀಕಿಸಿದರು. ಪತ್ರಿಕಾಗೋಷ್ಠಿಯಲ್ಲಿ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೆ ಸಿ ವೇಣುಗೋಪಾಲ್ ಮತ್ತು ಕಾಂಗ್ರೆಸ್ ಮಾಧ್ಯಮ ಮತ್ತು ಪ್ರಚಾರ ವಿಭಾಗದ ಅಧ್ಯಕ್ಷ ಪವನ್ ಖೇರಾ ಉಪಸ್ಥಿತರಿದ್ದರು.

ವಿದ್ಯಾರ್ಥಿಗಳಿಗೆ ಕಾಂಗ್ರೆಸ್ ಪಕ್ಷದ ಬೆಂಬಲವನ್ನು ಪುನರುಚ್ಚರಿಸಿದ ಖರ್ಗೆ, ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಜೊತೆಗೆ ಪಕ್ಷವು ಸಂಬಂಧಪಟ್ಟ ರಾಜ್ಯಗಳನ್ನು ಕಾಂಗ್ರೆಸ್, ಅದರ ಮಿತ್ರಪಕ್ಷಗಳು ಅಥವಾ ಯಾವುದೇ ಇತರ ರಾಜಕೀಯ ಪಕ್ಷವು ಆಳುತ್ತಿದೆಯೇ ಎಂಬುದನ್ನು ಲೆಕ್ಕಿಸದೆ ವಿದ್ಯಾರ್ಥಿಗಳ ಬೆಂಬಲಕ್ಕೆ ನಿಲ್ಲುತ್ತದೆ ಎಂದು ಹೇಳಿದರು.

# ಲೋಕಸಭೆಯಲ್ಲಿ ಎಂಎಸ್‌ಎಂಇ ತಿದ್ದುಪಡಿ ಮಸೂದೆ ಅಂಗೀಕಾರ

**ನವದೆಹಲಿ, ಆ.7:** ಲೋಕಸಭೆಯು ಶುಕ್ರವಾರ ವಿರೋಧ ಪಕ್ಷದ ನಿರಂತರ ಪ್ರತಿಭಟನೆಗಳ ನಡುವೆಯೂ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಅಭಿವೃದ್ಧಿ (ತಿದ್ದುಪಡಿ) ಮಸೂದೆ, 2026 ಅನ್ನು ಧ್ವನಿ ಮತದ ಮೂಲಕ ಅಂಗೀಕರಿಸಿತು. ದೇಶದ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳನ್ನು (ಎಂಎಸ್‌ಎಂಇ) ನಿಯಂತ್ರಿಸುವ ಕಾನೂನು ಚೌಕಟ್ಟನ್ನು ಬಲಪಡಿಸುವ ಗುರಿಯನ್ನು ಹೊಂದಿರುವ ವ್ಯಾಪಕ ಸುಧಾರಣೆಗಳಿಗೆ ದಾರಿ ಮಾಡಿಕೊಟ್ಟಿತು, ವಿಶೇಷವಾಗಿ ವಿಳಂಬಿತ ಪಾವತಿಗಳನ್ನು ಪರಿಹರಿಸುವುದು, ವಿವಾದ ಪರಿಹಾರವನ್ನು ಸುಧಾರಿಸುವುದು ಮತ್ತು ವ್ಯವಹಾರ ಮಾಡುವ ಸುಲಭತೆಯನ್ನು ಹೆಚ್ಚಿಸುವುದು. ಆಗಸ್ಟ್ 3 ರಂದು ರಾಜ್ಯಸಭೆಯು ಈ ಮಸೂದೆಯನ್ನು ಧ್ವನಿ ಮತದ ಮೂಲಕ ಅಂಗೀಕರಿಸಿತ್ತು. ಕೇಂದ್ರ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಸಚಿವ ಜಿತನ್‌ರಾಮ್ ಮಾಂಝಿ ಅವರು ಮಂಡಿಸಿದ ಈ ಶಾಸನವು ಎಂಎಸ್‌ಎಂಇಗಳ ಪ್ರಚಾರ, ಅಭಿವೃದ್ಧಿ ಮತ್ತು ಸ್ಪರ್ಧಾತ್ಮಕತೆಯನ್ನು ನಿಯಂತ್ರಿಸುವ ಪ್ರಮುಖ ಕಾನೂನಾದ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಅಭಿವೃದ್ಧಿ ಕಾಯ್ದೆ, 2006 ಅನ್ನು ತಿದ್ದುಪಡಿ ಮಾಡಲು ಪ್ರಯತ್ನಿಸುತ್ತದೆ. ಸಣ್ಣ ವ್ಯವಹಾರಗಳಿಗೆ ದ್ರವ್ಯತೆ ಸುಧಾರಿಸಲು, ವಿವಾದಗಳ ತ್ವರಿತ ಇತ್ಯರ್ಥವನ್ನು ಖಚಿತ ಪಡಿಸಿಕೊಳ್ಳಲು ಮತ್ತು ವಿವಾದ ಪರಿಹಾರ ಕಾರ್ಯವಿಧಾನಗಳನ್ನು ನಿರ್ವಹಿಸುವಲ್ಲಿ ರಾಜ್ಯಗಳಿಗೆ ಹೆಚ್ಚಿನ ನಮ್ಯತೆಯನ್ನು ಒದಗಿಸಲು ಉದ್ದೇಶಿಸಲಾದ ರಚನಾತ್ಮಕ ಸುಧಾರಣೆಗಳ ಸರಣಿಯನ್ನು ಮಸೂದೆ ಪರಿಚಯಿಸುತ್ತದೆ. ಲೋಕಸಭೆಯಲ್ಲಿ ನಿರಂತರ ಗದ್ದಲದ ನಡುವೆಯೇ ಮಸೂದೆಯನ್ನು ಪರಿಗಣನೆಗೆ ತೆಗೆದುಕೊಂಡು ಅಂಗೀಕರಿಸಲಾಯಿತು.



ಪ್ರಸ್ತಾವಿತ ತಿದ್ದುಪಡಿ ಎಂಎಸ್‌ಎಂಇಗಳನ್ನು ನಿಯಂತ್ರಿಸುವ ಅಸ್ತಿತ್ವದಲ್ಲಿರುವ ಕಾನೂನು ಚೌಕಟ್ಟನ್ನು ಆಧುನೀಕರಿಸಲು ಮತ್ತು ವ್ಯವಹಾರ ಮಾಡುವ ಸುಲಭತೆಯನ್ನು ಸುಧಾರಿಸಲು ಮತ್ತು ಸಣ್ಣ ಉದ್ಯಮಗಳಿಗೆ ಸಾಂಸ್ಥಿಕ ಬೆಂಬಲ ಬಲಪಡಿಸಲು ವಿನ್ಯಾಸ ಗೊಳಿಸಲಾಗಿದೆ.
-ಜಿತನ್‌ರಾಮ್ ಮಾಂಝಿ,
ಕೇಂದ್ರ ಸಚಿವ

ವಿರೋಧ ಪಕ್ಷದ ಸದಸ್ಯರ ಗದ್ದಲದ ಹೊರತಾಗಿಯೂ, ಸರ್ಕಾರ ಶಾಸಕಾಂಗ ವ್ಯವಹಾರವನ್ನು ಮುಂದುವರೆಸಿತು ಮತ್ತು ಮಸೂದೆಯನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು. ಪ್ರತಿಭಟನೆಗಳು ಮುಂದುವರಿದ ಕಾರಣ ಸದನವನ್ನು ದಿನದ ಮಟ್ಟಿಗೆ ಮುಂದೂಡಲಾಯಿತು.

# ಎಲ್ಲರಿಗೂ ಸಾಮಾಜಿಕ ನ್ಯಾಯ ಒದಗಿಸಲು ಕಾಂಗ್ರೆಸ್ ಬದ್ಧ

**ಬೆಂಗಳೂರು, ಆ.7:** ಸರ್ಕಾರ ಸಾಮಾಜಿಕ ಆರ್ಥಿಕ ಸಮೀಕ್ಷೆ ನಡೆಸಿದ್ದು, ಅದನ್ನು ಜಾರಿಗೆ ತಂದು ಸಾಮಾಜಿಕ ನ್ಯಾಯ ಒದಗಿಸಲು ಬದ್ಧವಾಗಿದೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು. ಬೆಂಗಳೂರಿನ ಜ್ಞಾನಜ್ಯೋತಿ ಸಭಾಂಗಣದಲ್ಲಿ ರಾಷ್ಟ್ರೀಯ ಓಬಿಸಿ ಮಹಾಸಂಘದ 11ನೇ ರಾಷ್ಟ್ರೀಯ ಮಹಾಸಮಾವೇಶವನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಶುಕ್ರವಾರ ಉದ್ಘಾಟಿಸಿ ಮಾತನಾಡಿದರು.

21 ರಾಜ್ಯಗಳಿಂದ ಬಂದಿರುವ ನಿಮ್ಮೆಲರನ್ನು ಭೇಟಿ ಮಾಡಿರುವುದು ಸಂತೋಷ ತಂದಿದೆ. ಕಾಂಗ್ರೆಸ್ ಪಕ್ಷ ಹಾಗೂ ಕರ್ನಾಟಕ ಸರ್ಕಾರದ ಪರವಾಗಿ ನಿಮ್ಮೆಲ್ಲರಿಗೂ ಸ್ವಾಗತ ಕೋರುತ್ತೇನೆ. ನಾವು ವೈವಿಧ್ಯತೆಯ ದೇಶದಲ್ಲಿದ್ದೇವೆ. ಮಾನವಿಯತೆ ಮೇಲೆ ನಂಬಿಕೆ ಇಟ್ಟಿದ್ದೇವೆ. ನಮ್ಮ ರಾಜ್ಯ ಅತ್ಯಂತ ಪ್ರಾಚೀನ ಪರಂಪರೆ ಹೊಂದಿದೆ. ಬಸವಣ್ಣನವರು 12ನೇ ಶತಮಾನದಲ್ಲಿ ವಿಶ್ವದ ಮೊದಲ ಸಂಸತ್ತನ್ನು ಆರಂಭಿಸಿದರು. ಎಲ್ಲಾ ವರ್ಗದ ಜನರು ಆ ಸಂಸತ್ತಿನ ಭಾಗವಾಗಿದ್ದರು. ನಿಮಗೆ ಸಾಧ್ಯವಾದರೆ ಬೀದರ್ ಜಿಲ್ಲೆಯ ಬಸವಕಲ್ಯಾಣಕ್ಕೆ ಹೋಗಿ ಬಸವಣ್ಣನವರ ಅನುಭವ ಮಂಟಪ ವೀಕ್ಷಣೆ ಮಾಡಿ. ಇದು ಕರ್ನಾಟಕ ಸರ್ಕಾರದ ಇತಿಹಾಸ ಎಂದು ತಿಳಿಸಿದರು.

ಕಾಂಗ್ರೆಸ್ ಇತಿಹಾಸ ದೇಶದ ಇತಿಹಾಸ, ಕಾಂಗ್ರೆಸ್ ಶಕ್ತಿ ದೇಶದ ಶಕ್ತಿ, ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಎಲ್ಲಾ ವರ್ಗದ ಜನರು ಅಧಿಕಾರಕ್ಕೆ ಬಂದಂತೆ. ಕಾಂಗ್ರೆಸ್ ಪಕ್ಷ ದೇಶಕ್ಕೆ ಸಂವಿಧಾನ ನೀಡಿದ್ದು, ನೆಹರೂ ಅವರ ಕಾಲದಿಂದ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗೆಲ್ಲಾ ಎಲ್ಲಾ ವರ್ಗದವರ ರಕ್ಷಣೆ ಮಾಡಲಾಗಿದೆ. ಇಂದಿರಾ ಗಾಂಧಿ ಹಾಗೂ ದೇವರಾಜ ಅರಸು ಅವರ ಕಾಲದಲ್ಲಿ ಉಳುವವನೇ ಭೂಮಿಯ ಒಡೆಯ ಎಂದು ಘೋಷಣೆ ಮಾಡಲಾಯಿತು ಎಂದರು.



■ ರಾಷ್ಟ್ರೀಯ ಓಬಿಸಿ ಮಹಾಸಂಘದ 11ನೇ ರಾಷ್ಟ್ರೀಯ ಮಹಾ ಸಮಾವೇಶದಲ್ಲಿ ಸಿಎಂ ಡಿ.ಕೆ. ಶಿವಕುಮಾರ್ ಹೇಳಿಕೆ

ನಾಲ್ವಡಿ ಕೃಷ್ಣರಾಜ ಒಡೆಯರ್ ಕಾಲದಲ್ಲೇ ಓಬಿಸಿ ಮೀಸಲಾತಿ ನೀಡಲಾಗಿತ್ತು. ಇದು ಕರ್ನಾಟಕ ರಾಜ್ಯದ ಇತಿಹಾಸ. ದೇಶದಲ್ಲಿ 52% ಹಿಂದುಳಿದ ವರ್ಗದವರಿದ್ದೀರಿ.

ನೀವುಗಳು ನಿಮ್ಮ ಸಾಮರ್ಥ್ಯ, ಕಲೆ ಹಾಗೂ ಜ್ಞಾನದಿಂದ ಈ ದೇಶವನ್ನು ಕಟ್ಟಿದ್ದೀರಿ. ನೀವು ಈ ದೇಶದ ನಿರ್ಮಾತೃಗಳು. ನಿಮ್ಮ ಬೇಡಿಕೆಗಳ ಬಗ್ಗೆ ನಮಗೆ ಅರಿವಿದೆ ಎಂದು ಹೇಳಿದರು.

ನಾವು ಅಧಿಕಾರಕ್ಕೆ ಬರುವ ಮುನ್ನ ನಾನು ಹಾಗೂ ಸಿದ್ದರಾಮಯ್ಯ ಅವರು ರಾಜ್ಯದ ಜನರಿಗೆ ಬೆಲೆ ಏರಿಕೆಯಿಂದ ರಕ್ಷಣೆ ನೀಡುವ ಭರವಸೆ ನೀಡಿದೆವು. ಅವರಿಗೆ ನೆರವಾಗಲು ಐದು ಗ್ಯಾರಂಟಿ ಯೋಜನೆ ಘೋಷಣೆ ಮಾಡಿದೆವು. ನಮ್ಮ ಯೋಜನೆ ನೋಡಿ ಎಲ್ಲರೂ ನಗುತ್ತಿದ್ದರು. ಪ್ರಧಾನಮಂತ್ರಿಗಳು ಈ ಯೋಜನೆಗಳ ಜಾರಿ ಅಸಾಧ್ಯ ಎಂದರು.

ಸ್ಥಳೀಯ ಸಂಸ್ಥೆಗಳಲ್ಲೂ ಮೀಸಲಾತಿ ನೀಡುತ್ತಿದ್ದೇವೆ. 73-74ನೇ ತಿದ್ದುಪಡಿ ವೇಳೆ ನಾನು ರಾಜೀವ್ ಗಾಂಧಿ ಅವರಿಗೆ ಈ ತಿದ್ದುಪಡಿ ಯಾಕೆ ಎಂದು ಕೇಳಿದ್ದೆ. ಅದಕ್ಕೆ ಅವರು ಪಂಚಾಯ್ತಿಯಿಂದ ಪಾರ್ಲಿಮೆಂಟ್‌ವರೆಗೂ ನಾಯಕರನ್ನು ತಯಾರು ಮಾಡಬೇಕು. ನಾಯಕರನ್ನು ತಯಾರು ಮಾಡುವವನೇ ನಿಜವಾದ ನಾಯಕ ಎಂದು ಹೇಳಿದರು. ಸಮಾಜದ ಎಲ್ಲಾ ವರ್ಗದ ಜನರು ನಾಯಕರಾಗಬೇಕು ಎಂಬುದು ಅವರ ಬಯಕೆಯಾಗಿತ್ತು. ಈ ದೇಶದಲ್ಲಿ ಜಾತಿ ಗಣತಿ ಅಗತ್ಯವಾಗಿದ್ದು, ಕೇಂದ್ರ ಸರ್ಕಾರ ಮನೆ ಮನೆ ಜನಗಣತಿಗೆ ಮುಂದಾಗಿದೆ. ಜಾತಿಗಣತಿ ಮೂಲಕ ಅಂತರವನ್ನು ಕಡಿಮೆ ಮಾಡಬೇಕು ಎಂದರು.

ರಾವ್ ನೇತೃತ್ವದಲ್ಲಿ ರಾಷ್ಟ್ರೀಯ ಓಬಿಸಿ ಮಹಾಸಂಘವು ರಾಜಕೀಯ ಇಚ್ಛಾಶಕ್ತಿ ಇಲ್ಲದೇ ನಿಮ್ಮ ಹಕ್ಕಿಗಾಗಿ ಶ್ರಮಿಸುತ್ತಿದೆ. ನಿಮ್ಮ ಆಶೋತ್ತರಗಳನ್ನು ಈಡೇರಿಸಲು ನಾವು ಬದ್ಧವಾಗಿದ್ದೇವೆ. ನಾವು ಕಾಂಗ್ರೆಸ್ ಪಕ್ಷದ ಸಿದ್ಧಾಂತ, ಬಸವಣ್ಣನವರ ತತ್ವ, ದೇಶದ ಹಿತಾಸಕ್ತಿಗೆ ಬದ್ಧರಾಗಿದ್ದೇವೆ. ಕರ್ನಾಟಕದಲ್ಲಿ ಹಿಂದುಳಿದ ವರ್ಗಗಳ ಧ್ವನಿಗೆ ಸ್ಪಂದಿಸುವ ಸರ್ಕಾರವಿದೆ ಎಂಬ ಸಂದೇಶವನ್ನು ನೀವು ರಾಷ್ಟ್ರದಾದ್ಯಂತ ರವಾನಿಸಬೇಕು ಎಂದು ಹೇಳಿದರು.

ಎಲ್ಲಾ ವರ್ಗದವರ ಹಿತಕಾಯಲು ತಿದ್ದುಪಡಿ ಜಾರಿಗೆ ತಂದಿದ್ದರೆ ಅದು ಕಾಂಗ್ರೆಸ್ ಸರ್ಕಾರ ಮಾತ್ರ. ಒಬಿಸಿ ಮಹಾಸಂಘಟನೆ ಬೇಡಿಕೆಗಳಿಗೆ ಮನ್ನಣೆ ಸಿಗಬೇಕಾದರೆ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲ ನೀಡಿ ಎಂದು ತಿಳಿಸಿದರು.

# ಸೆಂಟಮ್ ಎಲೆಕ್ಟ್ರಾನಿಕ್ಸ್‌ನಿಂದ 500 ಕೋಟಿ ಹೂಡಿಕೆ: 1500 ಉದ್ಯೋಗ ಸೃಷ್ಟಿ

**ಬೆಂಗಳೂರು, ಆ.7:** ರಕ್ಷಣಾ ಉದ್ಯಮದಲ್ಲಿ ಹೆಸರು ಮಾಡಿರುವ ಸೆಂಟಮ್ ಎಲೆಕ್ಟ್ರಾನಿಕ್ಸ್ ಸಂಸ್ಥೆಯು ಈ ವರ್ಷದಿಂದ ಅನ್ವಯವಾಗುವಂತೆ ಮುಂದಿನ ನಾಲ್ಕು ವರ್ಷಗಳಲ್ಲಿ ರಾಜ್ಯದಲ್ಲಿ 500 ಕೋಟಿ ರೂ. ಹೂಡಿಕೆ ಮಾಡಲಿದೆ. ಇದರಿಂದ 1,500 ಉದ್ಯೋಗಗಳು ಸೃಷ್ಟಿಯಾಗಲಿವೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ತಿಳಿಸಿದ್ದಾರೆ.



ಶುಕ್ರವಾರ ತಮ್ಮನ್ನು ಭೇಟಿಯಾಗಿದ್ದ ಕಂಪನಿಯ ಜಂಟಿ ವ್ಯವಸ್ಥಾಪಕ ನಿರ್ದೇಶಕ ನಿಖಿಲ್ ಮಲ್ಲವರಪು ಅವರೊಂದಿಗೆ ಸಚಿವರು ವಿಚಾರ ವಿನಿಮಯ ನಡೆಸಿದರು.ಈ ಬಗ್ಗೆ ಮಾತನಾಡಿರುವ ಅವರು, ಹೋದ ವರ್ಷ ನಡೆದ ಜಾಗತಿಕ ಹೂಡಿಕೆದಾರರ ಸಮಾವೇಶದಲ್ಲಿ ಈ ಹೂಡಿಕೆಯ ಸಂಬಂಧ ಒಡಂಬಡಿಕೆ ಆಗಿತ್ತು. ಸೆಂಟಮ್ ಕಂಪನಿಯು ಈಗಾಗಲೇ ದೇವನಹಳ್ಳಿ ಸಮೀಪದ ವೈಮಾಂತರಿಕ್ಷ ಮತ್ತು ರಕ್ಷಣಾ ಪಾರ್ಕ್‌ನಲ್ಲಿ ಅಗತ್ಯ ಭೂಮಿ ಹೊಂದಿದೆ. ಅಲ್ಲಿ ಮುಂದಿನ ತಿಂಗಳು ಕಾಮಗಾರಿ ಆರಂಭವಾಗಲಿದೆ. ಇಲ್ಲಿ ಕಂಪನಿಯು ಅತ್ಯಾಧುನಿಕ ಎಲೆಕ್ಟ್ರಾನಿಕ್ಸ್, ರಕ್ಷಣಾ ವಿದ್ಯುನ್ಮಾನ, ರೇಡಾರ್ ಸೌಕರ್ಯ ಮತ್ತು ವಿದ್ಯುನ್ಮಾನ ಸಮರ ತಂತ್ರಜ್ಞಾನಗಳ ವಿಸ್ತರಣೆ ಮಾಡಲಿದೆ ಎಂದು ತಿಳಿಸಿದ್ದಾರೆ.

ಕಂಪನಿಯು ಡಿ.ಆರ್.ಡಿ.ಓ, ರಕ್ಷಣಾ ವಲಯಕ್ಕೆ ಸಂಬಂಧಿಸಿದ ಸಾರ್ವಜನಿಕ ಉದ್ದಿಮೆಗಳು ಮತ್ತು ಇಸ್ರೋದಂತಹ ಸಂಸ್ಥೆಗಳೊಂದಿಗೆ ಸಹಭಾಗಿತ್ವ ಹೊಂದಿದ್ದು ಪ್ರಮುಖ ಕ್ಷಿಪಣಿ ಮತ್ತು ಉಪಗ್ರಹ ಯೋಜನೆಗಳಿಗೆ ಕೊಡುಗೆ ನೀಡಿದೆ. ಅಲ್ಲದೆ ವಿನ್ಯಾಸ, ಸಂಶೋಧನೆ ಮತ್ತು ಅಭಿವೃದ್ಧಿ, ಪರೀಕ್ಷಾ ಸೌಲಭ್ಯ ಮತ್ತು ಮೈಕ್ರೋ ಎಲೆಕ್ಟ್ರಾನಿಕ್ಸ್ ಅನುಕೂಲಗಳನ್ನು ಕಂಪನಿ ಹೊಂದಿದೆ. ವೈಮಾಂತರಿಕ್ಷ ಮತ್ತು ರಕ್ಷಣಾ ವಲಯದ ಉದ್ದಿಮೆಯಲ್ಲಿ ರಾಜ್ಯವು ಮುಂಚೂಣಿಯಲ್ಲಿ ಇರಬೇಕು ಎನ್ನುವುದು ಸರಕಾರದ ತೀರ್ಮಾನವಾಗಿದೆ ಎಂದು ಹೇಳಿದ್ದಾರೆ. ಯಲಹಂಕದಲ್ಲಿ ಕೇಂದ್ರ ಕಚೇರಿ ಹೊಂದಿರುವ ಸೆಂಟಮ್ ಎಲೆಕ್ಟ್ರಾನಿಕ್ಸ್, 1993ರಿಂದಲೂ ಕ್ರಿಯಾಶೀಲವಾಗಿದೆ. ಇದು ದೇಶದ ಅತ್ಯಂತ ವಿಶ್ವಾಸಾರ್ಹ ಎಲೆಕ್ಟ್ರಾನಿಕ್ಸ್ ಕಂಪನಿಗಳಲ್ಲಿ ಒಂದಾಗಿದೆ. ಹೂಡಿಕೆ ಮತ್ತು ಉದ್ಯೋಗಸೃಷ್ಟಿ ಎರಡರ ಕಡೆಗೂ ಗಮನ ಹರಿಸಿರುವ ಕಂಪನಿಗೆ ಸರಕಾರದ ಕಡೆಯಿಂದ ಅಗತ್ಯ ಸಹಕಾರ ನೀಡಲಾಗುವುದು ಎಂದು ಪಾಟೀಲ ಭರವಸೆ ಕೊಟ್ಟಿದ್ದಾರೆ.

# ಕೊಳವೆಬಾವಿಗಳ ಮರುಪೂರಣಕ್ಕೆ ವಿ ಬಿಜಿ ರಾಮ್‌ಜಿಯಿಂದ ನೆರವು

ಬೆಂಗಳೂರು, ಆ.7: ರಾಜ್ಯದ ವಿವಿಧ ಪ್ರದೇಶಗಳಲ್ಲಿ ಅಂತರ್ಜಲಮಟ್ಟ 1000 ಅಡಿಗೂ ಹೆಚ್ಚು ಆಳಕ್ಕೆ ಕುಸಿದಿದ್ದು, ಅನಿವಾರ್ಯ ಪರಿಸ್ಥಿತಿಯಲ್ಲಿ ಮಾತ್ರವೇ ಕೊಳವೆಬಾವಿ ಕೊರೆಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಸೂಚನೆ ನೀಡಿದ್ದಾರೆ.



ಜಲಜೀವನ್ ಅಭಿಯಾನ ಕುರಿತಂತೆ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ತುಮಕೂರು, ಕೋಲಾರ ಮತ್ತು ಚಿಕ್ಕಬಳ್ಳಾಪುರ ಸೇರಿದಂತೆ ಹಲವು ಕಡೆ 1000 ಅಡಿ ಕೊರೆದರೂ ನೀರು ಬರುವುದಿಲ್ಲ. ನೀರು ಸಿಕ್ಕರೂ ಕುಡಿಯಲು ಯೋಗ್ಯವಾಗಿರುವುದಿಲ್ಲ. ಹಲವು ಕೊಳವೆ ಬಾವಿಗಳು ನಿಷ್ಕ್ರಿಯವಾಗುತ್ತಿವೆ. ಹೀಗಾಗಿ ಸಾಧ್ಯವಾದಷ್ಟೂ ಮೇಲ್ಮೈ ನೀರು ಪೂರೈಕೆಗೆ ಆದ್ಯತೆ ನೀಡಿ, ಅನಿವಾರ್ಯವಾದಲ್ಲಿ ಮಾತ್ರ ಭೂಗರ್ಭ ಶಾಸ್ತ್ರಜ್ಞರ ಅಭಿಪ್ರಾಯ ಪಡೆದು ಕೊಳವೆಬಾವಿ ಕೊರೆಸಿ ಎಂದು ಆದೇಶ ನೀಡಿದರು. ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಈಗಾಗಲೇ ಕೊರೆಸಲಾಗಿರುವ, ಸಕ್ರಿಯವಾಗಿರುವ ಮತ್ತು ಬತ್ತಿಹೋಗಿರುವ ಕೊಳವೆ ಬಾವಿಗಳ ಮರುಪೂರಣಕ್ಕೆ ವಿಬಿಜಿ ರಾಮ್ ಜಿ ಯೋಜನೆಯಡಿ ಕಾಮಗಾರಿ ಕೈಗೆತ್ತಿಕೊಳ್ಳಲು ಸೂಚಿಸಿದರು. ರಾಜ್ಯದಲ್ಲಿ ಮಳೆ ಕೊರತೆಯಿಂದ ಜುಲೈ ತಿಂಗಲಲ್ಲಿ 766 ಗ್ರಾಮ ಪಂಚಾಯತಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಿತ್ತು. ಈ ತಿಂಗಳು ಮಳೆಯಾಗುತ್ತಿರುವುದರಿಂದ ಈ ಸಂಖ್ಯೆ 747ಕ್ಕೆ ಇಳಿಕೆಯಾಗಿದೆ. ಪ್ರಸ್ತುತ 138 ಗ್ರಾಮಗಳಿಗೆ ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡುತ್ತಿರುವುದಾಗಿ ಅಧಿಕಾರಿಗಳು ಸಭೆಗೆ ತಿಳಿಸಿದರು. ಯಾವುದೇ ಗ್ರಾಮದಿಂದ ಕುಡಿಯುವ ನೀರಿನ ಸಮಸ್ಯೆ ಕುರಿತು ದೂರು ಬಂದರೆ 24 ಗಂಟೆಯೊಳಗೆ ಪರಿಹರಿಸಲು ಇಲ್ಲವೆ ಟ್ಯಾಂಕರ್ ಮೂಲಕ ನೀರು ಪೂರೈಸಲು ಈಶ್ವರ ಖಂಡ್ರೆ ಸೂಚಿಸಿದರು.

ಸಭೆಯಲ್ಲಿ ಕಾರ್ಯದರ್ಶಿ ಡಿ. ರಂದೀಪ್, ಆಯುಕ್ತರಾದ ಫೌಜಿಯಾ ತರನ್ನುಂ ಮತ್ತಿತರರು ಪಾಲ್ಗೊಂಡಿದ್ದರು.

# ಸಚಿವ ಸ್ಥಾನ ಹೊರತುಪಡಿಸಿ ಪರ್ಯಾಯ ಹುದ್ದೆ, ಭರವಸೆ ಒಪ್ಪಲ್ಲ

**ಬೆಂಗಳೂರು, ಆ.7:** ರಾಜ್ಯ ಸಚಿವ ಸಂಪುಟ ವಿಸ್ತರಣೆ ಬಳಿಕ ಕಾಂಗ್ರೆಸ್‌ನಲ್ಲಿ ಉಂಟಾಗಿರುವ ಅಸಮಾಧಾನ ಮತ್ತಷ್ಟು ತೀವ್ರಗೊಂಡಿದ್ದು, ವಿಜಯನಗರ ಕ್ಷೇತ್ರದ ಶಾಸಕ ಎಂ. ಕೃಷ್ಣಪ್ಪ ಸಚಿವ ಸ್ಥಾನಕ್ಕಾಗಿ ಮತ್ತೊಮ್ಮೆ ಬೇಡಿಕೆಯನ್ನು ಸ್ಪಷ್ಟವಾಗಿ ಮುಂದಿಟ್ಟಿದ್ದಾರೆ. ಯಾವುದೇ ಪರ್ಯಾಯ ಹುದ್ದೆ ಅಥವಾ ಭರವಸೆಗಳಿಗೆ ಒಪ್ಪುವುದಿಲ್ಲ, ಸಚಿವ ಸ್ಥಾನ ನೀಡಲೇಬೇಕು ಎಂಬ ಕಠಿಣ ನಿಲುವನ್ನು ವ್ಯಕ್ತಪಡಿಸಿದ್ದಾರೆ.



■ ನಾಯಕರಿಗೆ ಸ್ಪಷ್ಟ ನಿಲುವು ತಿಳಿಸಿದ ಶಾಸಕ ಎಂ.ಕೃಷ್ಣಪ್ಪ

ಸಂಪುಟ ವಿಸ್ತರಣೆಯಲ್ಲಿ ತಮ್ಮ ಹೆಸರು ಕೈತಪ್ಪಿರುವುದರಿಂದ ಅಸಮಾಧಾನಗೊಂಡಿರುವ ಅವರನ್ನು ಸಮಾಧಾನಪಡಿಸುವ ನಿಟ್ಟಿನಲ್ಲಿ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಕೃಷ್ಣಪ್ಪ ನಿವಾಸಕ್ಕೆ ಭೇಟಿನೀಡಿ ಮಾತುಕತೆ ನಡೆಸಿದ್ದಾರೆ. ಪಕ್ಷದ ಹಿರಿಯ ನಾಯಕರು ಹಲವು ಆಯ್ಕೆಗಳನ್ನು ಮುಂದಿಟ್ಟರೂ, ಕೃಷ್ಣಪ್ಪ ಅವರು ತಮ್ಮ ಬೇಡಿಕೆಯಿಂದ ಹಿಂದೆ ಸರಿಯಲು ನಿರಾಕರಿಸಿದ್ದಾರೆ.

ಸಚಿವ ಸ್ಥಾನಕ್ಕೆ ಪರ್ಯಾಯವಾಗಿ ಅವರ ಪುತ್ರ ಪ್ರಿಯಾಕೃಷ್ಣ ಅವರಿಗೆ ಕೆಪಿಸಿಸಿ ಕಾರ್ಯಾಧ್ಯಕ್ಷ ಹುದ್ದೆ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ) ಅಧ್ಯಕ್ಷ ಸ್ಥಾನ ಅಥವಾ ವಿವಿಧ ನಿಗಮ-ಮಂಡಳಿ ಅಧ್ಯಕ್ಷ ಸ್ಥಾನಗಳಂತಹ ಅವಕಾಶಗಳ ಬಗ್ಗೆ ಚರ್ಚೆ ನಡೆದಿದೆ ಎಂಬ ಮಾಹಿತಿ ಹೊರಬಿದ್ದಿದೆ. ಆದರೆ ಈ ಯಾವುದೇ ಪ್ರಸ್ತಾಪ ಅಸಮಾಧಾನ ಪರಿಹರಿಸುವುದಿಲ್ಲ ಎಂದು ಕೃಷ್ಣಪ್ಪ ಸ್ಪಷ್ಟಪಡಿಸಿದ್ದಾರೆ.

## ಕೃಷ್ಣಪ್ಪ ಜತೆ ರಾಹುಲ್‌ಗಾಂಧಿ ಮಾತುಕತೆ: ಬಿ.ಕೆ. ಹರಿಪ್ರಸಾದ್



ಸಚಿವ ಸ್ಥಾನ ಸಿಗದ ಕಾರಣಕ್ಕೆ ಅಸಮಾಧಾನಗೊಂಡಿರುವ ವಿಜಯನಗರ ಶಾಸಕ ಎಂ.ಕೃಷ್ಣಪ್ಪ ಅವರ ಜೊತೆ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿಯವರೇ ಮಾತುಕತೆ ನಡೆಸಲಿದ್ದಾರೆ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ತಿಳಿಸಿದ್ದಾರೆ. ಶುಕ್ರವಾರ ಬೆಳಗ್ಗೆ ಅಸಮಾಧಾನಿತ ಕೃಷ್ಣಪ್ಪ ಅವರ ಮನೆಗೆ ಭೇಟಿನೀಡಿದ್ದ ಹರಿಪ್ರಸಾದ್ ಅವರು ಸುದೀರ್ಘ ಮಾತುಕತೆ ನಡೆಸಿದರೂ ಕೃಷ್ಣಪ್ಪ ಸಮಾಧಾನಗೊಂಡಿಲ್ಲ. ಹಾಗಾಗಿ ರಾಹುಲ್‌ಗಾಂಧಿ ಅವರ ಮೂಲಕವೇ ಸಮಾಧಾನಪಡಿಸುವ ಯತ್ನ ಮಾಡಲಾಗುವುದು. ರಾಜಕೀಯ ಎಂಬುದು ಅವಕಾಶಗಳ ಆಟ. ಸಾಧ್ಯತೆಗಳಿರುವಾಗ ಏನಾದರೂ ಆಗಬಹುದು, ಹಿರಿಯರಿಗೆ ಅನ್ಯಾಯವಾದಾಗ ಬೇಸರವಾಗುವುದು, ಬೆಂಬಲಿಗರು ಸಿಟ್ಟುಗೊಳ್ಳುವುದು ಸಹಜ ಎಂದಿದ್ದಾರೆ.

# ಎಂ.ಕೃಷ್ಣಪ್ಪಗಾಗಿ ಸಚಿವ ಸ್ಥಾನ ತ್ಯಜಿಸಲು ಸಿದ್ಧ: ಎಚ್.ಸಿ.ಬಾಲಕೃಷ್ಣ

ಬೆಂಗಳೂರು, ಆ.7: ಸಿಎಂ ಡಿ.ಕೆ. ಶಿವಕುಮಾರ್ ನೇತೃತ್ವದ ಸಚಿವ ಸಂಪುಟ ವಿಸ್ತರಣೆ ಬೆನ್ನಲ್ಲೇ ಕಾಂಗ್ರೆಸ್‌ನಲ್ಲಿ ಅಸಮಾಧಾನ ಭುಗಿಲೆದ್ದಿದ್ದು, ವಿಜಯನಗರ ಶಾಸಕ ಎಂ. ಕೃಷ್ಣಪ್ಪ ಅವರು ಸಚಿವ ಸ್ಥಾನ ಕೊಡಲೇಬೇಕು ಎಂದು ಪಟ್ಟುಹಿಡಿದಿದ್ದಾರೆ. ಕೃಷ್ಣಪ್ಪ ಅವರನ್ನು ಸಮಾಧಾನಪಡಿಸಲು ಖುದ್ದು ಮುಖ್ಯಮಂತ್ರಿ ಡಿಕೆ ಶಿವಕುಮಾರ್, ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಹಾಗೂ ಕೆಪಿಸಿಸಿ ಕಾರ್ಯಾಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರೇ ಮಾತುಕತೆ ನಡೆಸಿದರೂ ಪ್ರಯೋಜನವಾಗಿಲ್ಲ. ಪರ್ಯಾಯ ಹುದ್ದೆ, ಭರವಸೆಗಳಿಗೂ ಮಣಿಯದ ಕೃಷ್ಣಪ್ಪ ಸಚಿವ ಸ್ಥಾನವೇ ಬೇಕು ಎಂದು ಪಟ್ಟು ಹಿಡಿದಿದ್ದಾರೆ. ಈ ಬೆಳವಣಿಗೆಯಿಂದ ಪಕ್ಷಕ್ಕೆ ಧಕ್ಕೆಯಾಗುವ ಸಾಧ್ಯತೆ ಇದೆ.ಇದೀಗ ಕೃಷ್ಣಪ್ಪ ಅವರನ್ನು ಸಮಾಧಾನ ಪಡಿಸಲು ಒಬ್ಬರು ಸಚಿವ ಸ್ಥಾನ ತ್ಯಾಗ ಮಾಡಬೇಕಾದ ಅನಿವಾರ್ಯತೆ ಸೃಷ್ಟಿಯಾಗಿದೆ ಎನ್ನಲಾಗುತ್ತಿದೆ.



ಇದರ ಬೆನ್ನಲ್ಲೇ ಸಚಿವ ಎಚ್.ಸಿ. ಬಾಲಕೃಷ್ಣ ರಾಜೀನಾಮೆಗೆ ಸಿದ್ಧ ಎಂದು ಹೇಳಿರುವುದು ರಾಜಕೀಯವಾಗಿ ಚರ್ಚೆಗೆ ಗ್ರಾಸವಾಗಿದೆ. ಮಾಗಡಿ ಶಾಸಕ ಬಾಲಕೃಷ್ಣ ಅವರಿಗೆ ಮೊದಲ ಬಾರಿ ಸಚಿವ ಸ್ಥಾನ ಸಿಕ್ಕಿದ್ದರೂ ರಾಜೀನಾಮೆ ಬಗ್ಗೆ ಮಾತಾಡಿದ್ದಾರೆ. ಪಕ್ಷ ಹೇಳಿದರೆ ತ್ಯಾಗಕ್ಕೆ ಸಿದ್ಧವಿದ್ದೇನೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಅಲ್ಲದೇ ಅಸಮಾಧಾನಿತರು ಸಚಿವ ಸ್ಥಾನ ಕೇಳುತ್ತಿರುವುದರಲ್ಲಿ ತಪ್ಪಿಲ್ಲ ಎಂದೂ ಹೇಳಿದ್ದಾರೆ. ಅಸಮಾಧಾನಿತರ ಬಗ್ಗೆ ಮಾತನಾಡಿದ ಬಾಲಕೃಷ್ಣ ಅವರು, ಕೆಲವರನ್ನು ಸಮಾಧಾನಪಡಿಸಲಾಗಿದೆ. ಇನ್ನೂ ಕೆಲವರೊಂದಿಗೆ ಸಂಧಾನ ನಡೆಯುತ್ತಿದೆ. ಕೃಷ್ಣಪ್ಪ ಅವರು ಒಕ್ಕಲಿಗರು. ಅವರನ್ನು ಸಂಪುಟದೊಳಗೆ ಸೇರಿಸಲು ನಾನು ರಾಜೀನಾಮೆಗೂ ಸಿದ್ಧ ಎಂದು ಹೇಳಿದ್ದಾರೆ. ಪಕ್ಷ ಹೇಳಿದರೆ ತ್ಯಾಗಕ್ಕೆ ಸಿದ್ಧವಿದ್ದೇನೆ, ನನ್ನ ಸ್ಥಾನ ಅವರಿಗೆ ಕೊಡ್ತಾರೆ ಎಂದರೆ ನನಗೆ ಅಭ್ಯಂತರ ಇಲ್ಲ ಎಂದು ಹೇಳಿದ್ದಾರೆ.


# ಸ್ವಚ್ಛತಾ ಕಾರ್ಯ ಕೈಗೊಳ್ಳದ ಸರ್ಕಾರಿ ಇಲಾಖೆಗಳಿಗೆ ನೋಟಿಸ್ ಜಾರಿ ಮಾಡಿ

**ಬೆಂಗಳೂರು, ಆ.7:** ನಗರದಾದ್ಯಂತ ತ್ಯಾಜ್ಯದಿಂದ ಸ್ವಾತಂತ್ರ್ಯ ಅಭಿಯಾನ ವೇಗ ಪಡೆಯುತ್ತಿದ್ದು, ಸ್ವಚ್ಛತಾ ಕಾರ್ಯ ಕೈಗೊಳ್ಳದ ಸರ್ಕಾರಿ ಇಲಾಖೆಗಳಿಗೆ ನೋಟಿಸ್ ಜಾರಿ ಮಾಡುವಂತೆ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರು ನಗರ ಪಾಲಿಕೆ ಆಯುಕ್ತರಿಗೆ ಸೂಚನೆ ನೀಡಿದ್ದಾರೆ.

ಜಿಬಿಎ ವ್ಯಾಪ್ತಿಯಲ್ಲಿ "ತ್ಯಾಜ್ಯದಿಂದ ಸ್ವಾತಂತ್ರ್ಯ" ಅಭಿಯಾನಕ್ಕೆ ಸಂಬಂಧಿಸಿದಂತೆ ಇಂದು ನಡೆದ ವರ್ಚುವಲ್ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಬೆಂಗಳೂರು ನಗರದ ವ್ಯಾಪ್ತಿಯಲ್ಲಿರುವ ಎಲ್ಲಾ ಸರ್ಕಾರಿ ಕಚೇರಿಗಳು ತಮ್ಮ ಆವರಣ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಇರುವ ತ್ಯಾಜ್ಯವನ್ನು ಕಡ್ಡಾಯವಾಗಿ ತೆರವುಗೊಳಿಸಬೇಕು. ಸ್ವಚ್ಛತಾ ಕಾರ್ಯ ಕೈಗೊಳ್ಳದ ಸರ್ಕಾರಿ ಇಲಾಖೆಗಳಿಗೆ ನೋಟಿಸ್ ಜಾರಿ ಮಾಡುವಂತೆ ಆಯುಕ್ತರಿಗೆ ನಿರ್ದೇಶನ ನೀಡಿದರು.

ಸಿ ಮತ್ತು ಡಿ ತ್ಯಾಜ್ಯ ವಿಲೇವಾರಿ ಮಾಡುವ ನಿಗದಿತ ಸ್ಥಳಗಳಲ್ಲಿ ಮೇಲ್ವಿಚಾರಣೆಗಾಗಿ ಮಾರ್ಷಲ್‌ಗಳನ್ನು ನಿಯೋಜಿಸಲಾಗಿದ್ದು, ಅವರಿಗೆ ಶೆಲ್ಟರ್, ಕುಡಿಯುವ ನೀರು ಹಾಗೂ ಊಟದ ವ್ಯವಸ್ಥೆ ಕಲ್ಪಿಸಬೇಕು. ಜೊತೆಗೆ, ಟಿಪ್ಪರ್ ವಾಹನಗಳ ಆಗಮನ ಮತ್ತು ನಿರ್ಗಮನದ ವಿವರಗಳನ್ನು ರಿಜಿಸ್ಟರ್‌ನಲ್ಲಿ ಸಮರ್ಪಕವಾಗಿ ದಾಖಲಿಸಬೇಕು ಎಂದು ಸೂಚಿಸಿದರು.

**ನಗರಪಾಲಿಕೆ ಆಯುಕ್ತರಿಗೆ ಸಚಿವ ಕೃಷ್ಣ ಬೈರೇಗೌಡ ಸೂಚನೆ**



ಪ್ರಸ್ತುತ 54 ಟಿಪ್ಪರ್ 18 ಜೆಸಿಬಿ ವಾಹನದ ಮೂಲಕ 5 ನಗರ ಪಾಲಿಕೆಗಳಲ್ಲಿ ತ್ಯಾಜ್ಯ ತೆರವುಗೊಳಿಸಲಾಗುತ್ತಿದ್ದು, ಟಿಪ್ಪರ್ ಗಳ ಸಂಖ್ಯೆಯನ್ನು ಮತ್ತಷ್ಟು ಹೆಚ್ಚಿಸಬೇಕು. ಅದರ ಜೊತೆಗೆ ಅವಶ್ಯಕತೆಯಿರುವ ಜೆಸಿಬಿ, ಟ್ರ್ಯಾಕ್ಟರ್, ಹಿಟಾಚಿಗಳನ್ನು ಕೂಡಾ ಸಮರ್ಪಕವಾಗಿ ಬಳಸಿಕೊಳ್ಳಲು ನಿರ್ದೇಶನ ನೀಡಿದರು.ಅಧಿಕಾರಿಗಳು ಹಾಗೂ ಮಾರ್ಷಲ್‌ಗಳು ಇದುವರೆಗೆ ನಗರದಲ್ಲಿ 3,022 ಸಿ&ಡಿ ತ್ಯಾಜ್ಯ ಸುರಿದಿರುವ ಸ್ಥಳಗಳನ್ನು ಗುರುತಿಸಿದ್ದು, ಅಲ್ಲಿ ಅಂದಾಜು 59,823 ಮೆಟ್ರಿಕ್ ಟನ್ ತ್ಯಾಜ್ಯ ಇರುವುದಾಗಿ ಪತ್ತೆಯಾಗಿದೆ. ಈ ಸ್ಥಳಗಳ ಪರಿಶೀಲನೆ ನಡೆಸಿ, ಈಗಾಗಲೇ ಗುರುತಿಸಲಾದ ಸ್ಥಳಗಳ ಪುನರಾವರ್ತನೆಯಾಗದಂತೆ ಕ್ರಮವಹಿಸಬೇಕು ಎಂದು ನಿರ್ದೇಶನ ನೀಡಿದರು.ಸಂಚಾರಿ ಪೊಲೀಸ್ ವಿಭಾಗದ ಅಧಿಕಾರಿಗಳು ಬೆಳಿಗ್ಗೆ 7.00ರಿಂದ 10.00 ಗಂಟೆಯವರೆಗೆ ಹಾಗೂ ಸಂಜೆ 5.00ರಿಂದ 9.00 ಗಂಟೆಯವರೆಗೆ ತ್ಯಾಜ್ಯ ತೆರವುಗೊಳಿಸುತ್ತಿರುವ ಟಿಪ್ಪರ್ ವಾಹನಗಳ ಸಂಚಾರಕ್ಕೆ ಅನುಮತಿ ನೀಡುತ್ತಿಲ್ಲ. ಇದರಿಂದ ತ್ಯಾಜ್ಯ ತೆರವು ಕಾರ್ಯಕ್ಕೆ ಅಡಚಣೆಯಾಗುತ್ತಿದೆ. ಈ ಸಂಬಂಧ ಮುಖ್ಯ ಆಯುಕ್ತರು ಸಂಚಾರಿ ಪೊಲೀಸ್ ವಿಭಾಗದ ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿ, ಅಭಿಯಾನದಲ್ಲಿ ಕಾರ್ಯನಿರ್ವಹಿಸುವ ವಾಹನಗಳಿಗೆ ಎಲ್ಲಾ ಸಮಯದಲ್ಲಿಯೂ ಸಂಚಾರಕ್ಕೆ ಅವಕಾಶ ಕಲ್ಪಿಸುವ ಕುರಿತು ಕ್ರಮ ಕೈಗೊಳ್ಳುವಂತೆ ಸಚಿವರು ಸೂಚಿಸಿದರು.

ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ನಿರ್ದೇಶನದಂತೆ ರೈಲ್ವೆ ಇಲಾಖೆಯ ಜಮೀನುಗಳಲ್ಲಿ ಸ್ವಚ್ಛತಾ ಕಾರ್ಯ ನಿರೀಕ್ಷಿತ ಪ್ರಮಾಣದಲ್ಲಿ ಆರಂಭವಾಗಿಲ್ಲ. ಈ ಸಂಬಂಧ ಮುಖ್ಯ ಆಯುಕ್ತರು ರೈಲ್ವೆ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಕಾರ್ಯವನ್ನು ತ್ವರಿತಗೊಳಿಸುವಂತೆ ಸೂಚಿಸಲಾಯಿತು. ಒಟ್ಟು: 10,056 ಮೆಟ್ರಿಕ್‌ಟನ್ ತ್ಯಾಜ್ಯ ತೆರವುಗೊಳಿಸಲಾಗಿದೆ. ಸಭೆಯಲ್ಲಿ ಮುಖ್ಯ ಆಯುಕ್ತರಾದ ಮಹೇಶ್ವರ್ ರಾವ್, ಬೆಂಗಳೂರು ಘನತ್ಯಾಜ್ಯ ನಿರ್ವಹಣೆ ನಿಯಮಿತದ ಸಿಇಒ ಕರೀಗೌಡ, ಪೊಮ್ಮಲ್ ಸುನೀಲ್ ಕುಮಾರ್, ರಮೇಶ್ ಡಿ.ಎಸ್., ರಮೇಶ್ ಕೆ.ಎನ್., ಜಗದೀಶ್, ಅಪರ ಆಯುಕ್ತರು, ಅಧಿಕಾರಿಗಳು ಉಪಸ್ಥಿತರಿದ್ದರು.

**ವೇಗ ಪಡೆದ 'ತ್ಯಾಜ್ಯದಿಂದ ಸ್ವಾತಂತ್ರ್ಯ ಅಭಿಯಾನ'**

ಬೆಂಗಳೂರು ನಗರದಲ್ಲಿ 'ತ್ಯಾಜ್ಯದಿಂದ ಸ್ವಾತಂತ್ರ್ಯ ಅಭಿಯಾನ' ಯಶಸ್ವಿಯಾಗಿ ನಡೆಯುತ್ತಿದ್ದು, ದಿನದಿಂದ ದಿನಕ್ಕೆ ಮತ್ತಷ್ಟು ವೇಗ ಪಡೆದುಕೊಳ್ಳುತ್ತಿದೆ. ಆಗಸ್ಟ್ 1ರಿಂದ ಆಗಸ್ಟ್ 6ರವರೆಗೆ 453 ಸಾರ್ವಜನಿಕ ಸ್ಥಳಗಳಿಂದ 10,056 ಮೆಟ್ರಿಕ್ ಟನ್ ಸಿ & ಡಿ ತ್ಯಾಜ್ಯವನ್ನು ತೆರವುಗೊಳಿಸಲಾಗಿದೆ. ಇದೇ ರೀತಿಯಲ್ಲಿ ಇತರೆ ಇಲಾಖೆಗಳು ಕೈಗೊಂಡಿರುವ ಸ್ವಚ್ಛತಾ ಕಾರ್ಯಗಳ ಮಾಹಿತಿಯನ್ನೂ ಸಂಗ್ರಹಿಸಬೇಕು. ತ್ಯಾಜ್ಯ ತೆರವು ಕಾರ್ಯ ಯಶಸ್ವಿಯಾಗಿ ನಡೆಯುತ್ತಿದೆ ಎಂಬುದು ನಾಗರಿಕರಿಗೆ ಅರಿವಾಗುವ ರೀತಿಯಲ್ಲಿ ಕೆಲಸ ಮಾಡಬೇಕೆಂದು ಸೂಚಿಸಿದರು. ಅಭಿಯಾನದ ಆರಂಭಿಕ ಹಂತದಲ್ಲಿ ಕೆಲವು ಸಮಸ್ಯೆಗಳು ಎದುರಾಗುವುದು ಸಹಜ. ಯಾವುದೇ ಸಣ್ಣ-ಪುಟ್ಟ ಸಮಸ್ಯೆಗಳಿದ್ದರೂ ಅವುಗಳಿಗೆ ತ್ವರಿತ ಪರಿಹಾರ ಕಂಡುಹಿಡಿದು, ವಿವಿಧ ಇಲಾಖೆಗಳ ನಡುವೆ ಸಮನ್ವಯ ಸಾಧಿಸಿ ಸ್ವಚ್ಛತಾ ಕಾರ್ಯಕ್ಕೆ ಮತ್ತಷ್ಟು ವೇಗ ನೀಡಬೇಕು ಎಂದು ತಿಳಿಸಿದರು.ಮಳೆಯ ಸಮಯದಲ್ಲಿ ಕ್ವಾರಿಗಳಲ್ಲಿ ತ್ಯಾಜ್ಯ ವಿಲೇವಾರಿಗೆ ಯಾವುದೇ ತೊಂದರೆಯಾಗದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು. ಕಟ್ಟಡ ನಿರ್ಮಾಣದ ಭಗ್ನಾವಶೇಷಗಳನ್ನು ಸರ್ಕಾರ ಗುರುತಿಸಿರುವ ನಿಗದಿತ ಸ್ಥಳಗಳಲ್ಲಿಯೇ ವಿಲೇವಾರಿ ಮಾಡಬೇಕು. ಸ್ವಚ್ಛಗೊಳಿಸಿದ ಸ್ಥಳಗಳಲ್ಲಿ ಮತ್ತೆ ತ್ಯಾಜ್ಯ ಸುರಿಯದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಕೃಷ್ಣಬೈರೇಗೌಡ ಸೂಚಿಸಿದರು.

# ಸರ್ವಪಕ್ಷ ಸಭೆಗೆ ರಾಹುಲ್ ಒತ್ತಾಯ, ಕಾಂಗ್ರೆಸ್ ಬೆಂಬಲಿಸಿದರೆ ಮಾತ್ರ ಸಭೆ ಎಂದ ಕೇಂದ್ರ

**ನವದೆಹಲಿ, ಆ. 7:** ಕ್ಷೇತ್ರ ಮರುವಿಂಗಡಣೆ ಮಸೂದೆ ಕುರಿತ ರಾಜಕೀಯ ಚರ್ಚೆ ತೀವ್ರಗೊಂಡಿರುವ ನಡುವೆ, ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರಿಗೆ, ಕಾಂಗ್ರೆಸ್‌ನ ನಿಲುವಿನಲ್ಲಿ ಬದಲಾವಣೆ ಇಲ್ಲ ಎಂದು ಸ್ಪಷ್ಟಪಡಿಸಿದ್ದು, ಮಸೂದೆ ಕುರಿತು ಚರ್ಚಿಸಲು ಸರ್ಕಾರ ಸರ್ವಪಕ್ಷ ಸಭೆ ಕರೆಯಬೇಕು ಎಂದು ಒತ್ತಾಯಿಸಿದ್ದಾರೆ.



ಸರ್ಕಾರದ ಮೂಲಗಳ ಪ್ರಕಾರ, ಕಾಂಗ್ರೆಸ್ ಮಸೂದೆಗೆ ಬೆಂಬಲ ನೀಡಲು ಸಮ್ಮತಿಸಿದರೆ ಮಾತ್ರ ಸರ್ವಪಕ್ಷ ಸಭೆ ನಡೆಸುವ ಕುರಿತು ಪರಿಗಣಿಸಲಾಗುವುದು. ಸದ್ಯಕ್ಕೆ ಕಾಂಗ್ರೆಸ್ನ ಬೇಡಿಕೆಯನ್ನು ಸರ್ಕಾರ ಒಪ್ಪಿಕೊಂಡಿಲ್ಲ ಎಂದು ಮೂಲಗಳು ತಿಳಿಸಿವೆ.

ಕ್ಷೇತ್ರ ಮರುವಿಂಗಡಣೆ ಮಸೂದೆ ಕುರಿತು ಕಾಂಗ್ರೆಸ್‌ನ ನಿಲುವು ತಿಳಿದುಕೊಳ್ಳಲು ಕಿರಣ್ ರಿಜಿಜು ಅವರು ರಾಹುಲ್ ಗಾಂಧಿಗೆ ಕರೆ ಮಾಡಿದ್ದರು. ಈ ವೇಳೆ ರಾಹುಲ್, ಸರ್ಕಾರ ಪ್ರತಿಪಕ್ಷಗಳೊಂದಿಗೆ ಪ್ರತ್ಯೇಕವಾಗಿ ಮಾತುಕತೆ ನಡೆಸುವುದಕ್ಕಿಂತ ಎಲ್ಲ ಪಕ್ಷಗಳನ್ನೂ ಒಟ್ಟಿಗೆ ಆಹ್ವಾನಿಸಿ ಚರ್ಚಿಸಬೇಕು ಎಂದು ಅಭಿಪ್ರಾಯಪಟ್ಟರು. ಅಲ್ಲದೆ, ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಈ ವಿಷಯವಾಗಿ ಈಗಾಗಲೇ ಹಲವು ಬಾರಿ ಪ್ರಧಾನಿ ನರೇಂದ್ರ ಮೋದಿಗೆ ಪತ್ರ ಬರೆದು ಸರ್ವಪಕ್ಷ ಸಭೆ ಕೋರಿರುವುದನ್ನೂ ರಾಹುಲ್ ನೆನಪಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಜುಲೈ 20ರಂದು ನಡೆದ ಪೊಲೀಸ್ ಹಿಂಸಾಚಾರದ ಕುರಿತು ಕೇಂದ್ರ ಗೃಹ ಸಚಿವ ಅಮಿತ್ ಶಾ ಸಂಸತ್ತಿನಲ್ಲಿ ಹೇಳಿಕೆ ನೀಡಬೇಕು ಹಾಗೂ ರಾಮಮಂದಿರ ದೇಣಿಗೆ ದುರ್ಬಳಕೆ ಆರೋಪದ ಕುರಿತು ಚರ್ಚೆ ನಡೆಸಬೇಕು ಎಂಬ ಕಾಂಗ್ರೆಸ್ನ ಬೇಡಿಕೆಯನ್ನು ರಾಹುಲ್ ಪುನರುಚ್ಚರಿಸಿದ್ದಾರೆ. ಈ ವಿಷಯಗಳಿಗೆ ಪರ್ಯಾಯವೇ ಇಲ್ಲ ಎಂದು ಅವರು ತಿಳಿಸಿದ್ದಾರೆ ಎನ್ನಲಾಗಿದೆ.

ಇಂಡಿಯಾ ಮೈತ್ರಿಕೂಟದ ಪಕ್ಷಗಳ ಸಭೆಯಲ್ಲಿ ಮಾತನಾಡಿದ ರಾಹುಲ್ ಗಾಂಧಿ, 2023ರ ಮಹಿಳಾ ಮೀಸಲಾತಿ ಕಾಯ್ದೆಯ ಪ್ರಕಾರ, ಪ್ರಸ್ತುತ ಇರುವ 543 ಲೋಕಸಭಾ ಕ್ಷೇತ್ರಗಳಲ್ಲಿಯೇ 33% ಮಹಿಳಾ ಮೀಸಲಾತಿಯನ್ನು ಜಾರಿಗೊಳಿಸಬೇಕು ಎಂಬುದು ಕಾಂಗ್ರೆಸ್ನ ನಿಲುವು ಎಂದು ಸಂಸದರಿಗೆ ತಿಳಿಸಿದ್ದಾರೆ.

ಮಾತುಕತೆ ಬಳಿಕ ಪ್ರತಿಕ್ರಿಯಿಸಿದ ಕಿರಣ್ ರಿಜಿಜು, ರಾಹುಲ್ ಗಾಂಧಿ ಅವರೊಂದಿಗೆ ಫಲಪ್ರದ ಚರ್ಚೆ ನಡೆದಿದೆ. ನಾವು ರಾಜಕೀಯ ಎದುರಾಳಿಗಳೇ ಹೊರತು ಶತ್ರುಗಳಲ್ಲ. ರಾಷ್ಟ್ರೀಯ ಹಿತಾಸಕ್ತಿಯ ವಿಷಯಗಳಲ್ಲಿ ಕಾಂಗ್ರೆಸ್ ಸೇರಿದಂತೆ ಪ್ರತಿಪಕ್ಷಗಳೊಂದಿಗೆ ನಿರಂತರ ಸಂವಾದ ಇರಬೇಕೆಂದು ಬಯಸುತ್ತೇವೆ ಎಂದೂ ರಿಜಿಜು ಹೇಳಿರುವುದಾಗಿ ವರದಿಯಾಗಿದೆ.

ಕೇಂದ್ರ ಸರ್ಕಾರಕ್ಕೆ ಸಂವಿಧಾನ ತಿದ್ದುಪಡಿ ಮಸೂದೆ ಅಂಗೀಕರಿಸಲು ಬೇಕಾದ ಸಂಖ್ಯಾಬಲವಿದೆ. ಆದರೂ, ಸಾಧ್ಯವಾದಷ್ಟು ರಾಜಕೀಯ ಒಮ್ಮತದೊಂದಿಗೆ ಮಸೂದೆ ಅಂಗೀಕರಿಸುವ ಉದ್ದೇಶದಿಂದ ಪ್ರತಿಪಕ್ಷಗಳೊಂದಿಗೆ ಮಾತುಕತೆ ನಡೆಸಲಾಗುತ್ತಿದೆ ಎಂದು ಹಿರಿಯ ಸಚಿವರೊಬ್ಬರು ತಿಳಿಸಿದ್ದಾರೆ. ಇದೇ ವೇಳೆ, ಬಿಜೆಪಿಯೇತರ ಕೆಲವು ಪಕ್ಷಗಳು, ಲೋಕಸಭಾ ಕ್ಷೇತ್ರಗಳ ಸಂಖ್ಯೆಯನ್ನು ಶೇ.50ರಷ್ಟು ಹೆಚ್ಚಿಸಲಾಗುವುದು ಎಂಬುದನ್ನು ಮಸೂದೆಯಲ್ಲಿ ಸ್ಪಷ್ಟವಾಗಿ ಉಲ್ಲೇಖಿಸಬೇಕು ಹಾಗೂ ಪ್ರತಿ ರಾಜ್ಯಕ್ಕೆ ಎಷ್ಟು ಕ್ಷೇತ್ರಗಳು ಸಿಗಲಿವೆ ಎಂಬ ವಿವರವನ್ನು ಪ್ರತ್ಯೇಕ ಅನುಸೂಚಿಯಲ್ಲಿ ಸೇರಿಸಬೇಕು ಎಂದು ಸಲಹೆ ನೀಡಿವೆ. ತಮಿಳುನಾಡಿನ ಡಿಎಂಕೆ ಮಾತ್ರ ಈಗಿರುವ ಲೋಕಸಭಾ ಕ್ಷೇತ್ರಗಳ ಸಂಖ್ಯೆಯನ್ನು ಸ್ಥಿರವಾಗಿಯೇ ಮುಂದುವರಿಸಬೇಕು ಎಂಬ ನಿಲುವು ಹೊಂದಿದೆ ಎಂದು ಮೂಲಗಳು ತಿಳಿಸಿವೆ.

# ಕ್ಷೇತ್ರ ವಿಂಗಡಣೆ ಮಸೂದೆಗೆ ಡಿಎಂಕೆ ಷರತ್ತುಗಳೇನು?

**ಚೆನ್ನೈ, ಆ. 7:** ಕೇಂದ್ರದ ಬಿಜೆಪಿ ಸರ್ಕಾರವು ಸಂಸತ್ತಿನಲ್ಲಿ ಕ್ಷೇತ್ರ ವಿಂಗಡಣೆ ಮಸೂದೆಯನ್ನು ಮತ್ತೆ ತರಲು ನಿರ್ಧರಿಸಿದರೆ, ತಮಿಳುನಾಡಿನ ಮಾಜಿ ಮುಖ್ಯಮಂತ್ರಿ ಎಂ ಕೆ ಸ್ಟಾಲಿನ್ ನೇತೃತ್ವದ ಡಿಎಂಕೆ ಪಕ್ಷವು ಅದನ್ನು ಬೆಂಬಲಿಸುವ ಸಾಧ್ಯತೆ ಇದ್ದು, ಆದರೆ ಇದಕ್ಕೆ ಮೂರು ಮುಖ್ಯ ಷರತ್ತುಗಳನ್ನು ವಿಧಿಸಿದೆ ಎಂದು ಪಕ್ಷದ ಮೂಲಗಳು ತಿಳಿಸಿವೆ.



1971ರ ಜನಗಣತಿಯ ಆಧಾರದ ಮೇಲೆಯೇ ಲೋಕಸಭಾ ಕ್ಷೇತ್ರಗಳ ಸಂಖ್ಯೆಯನ್ನು ಯಥಾಸ್ಥಿತಿಯಲ್ಲಿಡುವ ನಿಯಮವು 2027ಕ್ಕೆ ಮುಗಿಯಲಿದ್ದು, ಇದನ್ನು ಸಂವಿಧಾನ ತಿದ್ದುಪಡಿ ಮಾಡಿ ಇನ್ನು 25 ವರ್ಷಗಳ ಕಾಲ ವಿಸ್ತರಿಸಬೇಕು ಎಂಬುದು ಮೊದಲ ಷರತ್ತಾಗಿದೆ. ಏಪ್ರಿಲ್‌ನಲ್ಲಿ ಮಸೂದೆ ಮಂಡಿಸಿದಾಗ ಕೇಂದ್ರ ಗೃಹ ಸಚಿವ ಅಮಿತ್ ಷಾ ಹೇಳಿದಂತೆ, ಎಲ್ಲಾ ರಾಜ್ಯಗಳ ಲೋಕಸಭಾ ಸೀಟುಗಳ ಸಂಖ್ಯೆಯನ್ನು ಶೇ.50 ರಷ್ಟು ಹೆಚ್ಚಿಸಬೇಕು ಎಂಬುದು ಎರಡನೇ ಷರತ್ತು. ಹಾಗೂ ಈ ಹೊಸ ಕಾನೂನಿನ ಜೊತೆಗೆ, ಎಲ್ಲಾ ರಾಜ್ಯಗಳ ಹೊಸ ಲೋಕಸಭಾ ಕ್ಷೇತ್ರಗಳ ಸಂಪೂರ್ಣ ಪಟ್ಟಿಯನ್ನು ಕೇಂದ್ರ ಸರ್ಕಾರ ಬಿಡುಗಡೆ ಮಾಡಬೇಕು ಎಂಬುದು ಮೂರನೇ ಷರತ್ತಾಗಿದೆ.

ಕೇಂದ್ರ ಸರ್ಕಾರ ಈ ಮೂರು ಷರತ್ತುಗಳನ್ನು ಒಪ್ಪಿಕೊಂಡರೆ, ಮಸೂದೆಗೆ ಬೆಂಬಲ ನೀಡಲು ಸಿದ್ಧ ಎಂದು ಡಿಎಂಕೆ ಮೂಲಗಳು ತಿಳಿಸಿವೆ. ಆದರೆ, ಮಸೂದೆಯ ಅಂತಿಮ ಪ್ರತಿಯನ್ನು ಪರಿಶೀಲಿಸಿದ ನಂತರವೇ ಪಕ್ಷದ ನಾಯಕರು ಅಂತಿಮ ನಿರ್ಧಾರ ತೆಗೆದುಕೊಳ್ಳಲಿದ್ದಾರೆ. ಇಲ್ಲಿಯವರೆಗೆ ಡಿಎಂಕೆ ಈ ಮಸೂದೆಯನ್ನು ತೀವ್ರವಾಗಿ ವಿರೋಧಿಸುತ್ತಿತ್ತು ಮತ್ತು ಇದರಿಂದ ದಕ್ಷಿಣ ಭಾರತದ ರಾಜ್ಯಗಳಿಗೆ ನಷ್ಟವಾಗುತ್ತದೆ ಎಂದು ಹೇಳುತ್ತಿತ್ತು. ಆದರೆ, ಕಳೆದ ವಿಧಾನಸಭಾ ಚುನಾವಣೆಯ ನಂತರ ತಮಿಳುನಾಡು ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ನೇತೃತ್ವದ ಟಿವಿಕೆ ಜೊತೆ ಕಾಂಗ್ರೆಸ್ ಕೈಜೋಡಿಸಿದ್ದರಿಂದ, ಇಂಡಿಯಾ ಕೂಟದ ಹಳೇ ಮೈತ್ರಿ ಮುರಿದುಬಿದ್ದಿದೆ. ಅಂದಿನಿಂದ ಸ್ಟಾಲಿನ್ ಪಕ್ಷವು ಮೋದಿ ಸರ್ಕಾರಕ್ಕೆ ಬೆಂಬಲ ನೀಡಬಹುದು ಎಂಬ ಮಾತುಗಳು ಕೇಳಿಬರುತ್ತಿವೆ. ಮಹಿಳಾ ಮೀಸಲಾತಿ ಕಾನೂನನ್ನು ಜಾರಿಗೆ ತರಲು ಲೋಕಸಭಾ ಸ್ಥಾನಗಳ ಸಂಖ್ಯೆಯನ್ನು 543 ರಿಂದ 816 ಕ್ಕೆ ಹೆಚ್ಚಿಸಲು ಸರ್ಕಾರ ನಿರ್ಧರಿಸಿದೆ. ಈ ಮಸೂದೆಗೆ ಸಂಸತ್ತಿನಲ್ಲಿ ಒಪ್ಪಿಗೆ ಸಿಗಲು ಬಿಜೆಪಿಯ ಎನ್‌ಡಿಎ ಕೂಟಕ್ಕೆ ಮೂರನೇ ಎರಡರಷ್ಟು (2/3) ಬಹುಮತದ ಅಗತ್ಯವಿದೆ. ಕಳೆದ ಏಪ್ರಿಲ್‌ನಲ್ಲಿ ಈ ಮಸೂದೆ ಮಂಡನೆಯಾದಾಗ 298 ಮತಗಳು ಸಿಕ್ಕಿದ್ದವು. ಆಗ ಜಗನ್ಮೋಹನ್‌ರೆಡ್ಡಿ ಅವರ ವೈಎಸ್‌ಆರ್‌ಸಿಪಿ, ಝಡ್‌ಪಿಎಂ ಮತ್ತು ಒಬ್ಬ ಸ್ವತಂತ್ರ ಸಂಸದ ಬೆಂಬಲಿಸಿದ್ದರು. ಆದರೆ, ಸಂಸತ್ತಿನಲ್ಲಿ ಎಲ್ಲ 540 ಸದಸ್ಯರು ಹಾಜರಿದ್ದರೆ ಮಸೂದೆ ಗೆಲ್ಲಲು 360 ಮತಗಳು ಬೇಕಾಗುತ್ತವೆ.

ಪ್ರಸ್ತುತ ಶಿವಸೇನೆಯ (ಯುಬಿಟಿ) ಏಳು ಸಂಸದರ ಸೇರ್ಪಡೆ ಹಾಗೂ ಎನ್‌ಸಿಪಿಐ ಬಂಡಾಯ ನಾಯಕರ ಬೆಂಬಲದೊಂದಿಗೆ ಎನ್‌ಡಿಎ ಕೂಟವು 319 ಸಂಸದರ ಬಲ ಹೊಂದಿದೆ. ಈಗ 22 ಸಂಸದರನ್ನು ಹೊಂದಿರುವ ಡಿಎಂಕೆ ಬೆಂಬಲಿಸಿದರೆ, ಎನ್‌ಡಿಎ ಬಲ 341ಕ್ಕೆ ಏರಲಿದೆ. ಎಂಟು ಸಂಸದರಿರುವ ಶರದ್ ಪವಾರ್ ಅವರ ಎನ್‌ಸಿಪಿ ಕೂಡ ಬೆಂಬಲಿಸಬಹುದು ಎನ್ನಲಾಗುತ್ತಿದ್ದು, ವೈಎಸ್‌ಆರ್‌ಸಿಪಿ ಮತ್ತು ಝಡ್‌ಪಿಎಂ ಮತ್ತೆ ಬೆಂಬಲ ನೀಡಿದರೆ ಎನ್ಡಿಎ ಬಲ 354ಕ್ಕೆ ತಲುಪಲಿದೆ. ಇದೇ ವಿಷಯಕ್ಕಾಗಿ ಆಗಸ್ಟ್ 16 ರಿಂದ 18 ರವರೆಗೆ ಕೇಂದ್ರ ಸರ್ಕಾರ ಸಂಸತ್ತಿನ ವಿಶೇಷ ಅಧಿವೇಶನ ಕರೆಯಲಿದೆ ಎಂಬ ವದಂತಿಯನ್ನು ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ತಳ್ಳಿಹಾಕಿದ್ದು, ಅಂತಹ ಯಾವುದೇ ಪ್ರಸ್ತಾಪವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಸಂಸತ್ತಿನ ಮುಂಗಾರು ಅಧಿವೇಶನವು ಆ.13 ರಂದು ಮುಕ್ತಾಯಗೊಳ್ಳಲಿದೆ.

# ಎಫ್‌ಸಿಆರ್‌ಎ ತಿದ್ದುಪಡಿ ಹಿಂದಿನ ಉದ್ದೇಶ ಏನು?

**ನವದೆಹಲಿ,ಆ.7:** ಭಾರತದಲ್ಲಿ ವಿದೇಶಿ ದೇಣಿಗೆ ಸ್ವೀಕರಿಸುವ ಸಂಸ್ಥೆಗಳು, ಎನ್ಜಿಒಗಳು ಹಾಗೂ ಧಾರ್ಮಿಕ ಸಂಘಟನೆಗಳನ್ನು ನಿಯಂತ್ರಿಸುವ ವಿದೇಶಿ ದೇಣಿಗೆ ನಿಯಂತ್ರಣ ಕಾಯಿದೆ (FCRA) ಮತ್ತೊಮ್ಮೆ ತೀವ್ರ ಕಾನೂನು ಮತ್ತು ರಾಜಕೀಯ ಚರ್ಚೆಯ ಕೇಂದ್ರಬಿಂದುವಾಗಿದೆ. ಮೋದಿ ಸರ್ಕಾರವು ಲೋಕಸಭೆಯಲ್ಲಿ ಮಂಡಿಸಲು ಮುಂದಾಗಿರುವ FCRA (ತಿದ್ದುಪಡಿ) ಮಸೂದೆ–2026 ಕೇವಲ ಹಣಕಾಸಿನ ಲೆಕ್ಕಪತ್ರಕ್ಕೆ ಸಂಬಂಧಿಸಿದ ತಾಂತ್ರಿಕ ಬದಲಾವಣೆಯಲ್ಲ; ಬದಲಿಗೆ ಇದು ಸರ್ಕಾರ, ಸ್ವಯಂಸೇವಾ ವಲಯ, ಧಾರ್ಮಿಕ ಸಂಸ್ಥೆಗಳು ಹಾಗೂ ಸಂವಿಧಾನಾತ್ಮಕ ಆಸ್ತಿಯ ಹಕ್ಕುಗಳ ನಡುವಿನ ಸಂಬಂಧವನ್ನೇ ಸಂಪೂರ್ಣವಾಗಿ ಮರುಪರಿಭಾಷಿಸಲು ಹೊರಟಿದೆ ಎಂದು ವಿರೋಧ ಪಕ್ಷಗಳು ಮತ್ತು ನಾಗರಿಕ ಸಂಘಟನೆಗಳು ಕಳವಳ ವ್ಯಕ್ತಪಡಿಸುತ್ತಿವೆ.

ಕೇಂದ್ರ ಸರ್ಕಾರವು ಈ ತಿದ್ದುಪಡಿಯನ್ನು ರಾಷ್ಟ್ರೀಯ ಭದ್ರತೆ, ವಿದೇಶಿ ಹಣದ ಪಾರದರ್ಶಕತೆ ಹಾಗೂ ಅಕ್ರಮಗಳ ತಡೆಗೆ ಕಡ್ಡಾಯವೆಂದು ಸಮರ್ಥಿಸಿಕೊಳ್ಳುತ್ತಿದ್ದರೆ; ಕಾಂಗ್ರೆಸ್, ಟಿಎಂಸಿ, ಚರ್ಚ್‌ಗಳ ಕೌನ್ಸಿಲ್‌ಗಳು, ಮಾನವ ಹಕ್ಕುಗಳ ಸಂಸ್ಥೆಗಳು ಹಾಗೂ ಅಮೆರಿಕದ ಕೆಲವು ಸಂಸದರು ಇದನ್ನು ಕಾರ್ಯನಿರ್ವಾಹಕ ಅಧಿಕಾರದ ಅಪಾಯಕಾರಿ ಅತಿಕ್ರಮಣ ಎಂದು ಕರೆಯುತ್ತಿದ್ದಾರೆ.

ಭಾರತದಲ್ಲಿರುವ ಯಾವುದೇ ವ್ಯಕ್ತಿ, ಸ್ವಯಂಸೇವಾ ಸಂಸ್ಥೆ, ಟ್ರಸ್ಟ್, ಧಾರ್ಮಿಕ ಸಂಘಟನೆ ಅಥವಾ ಶಿಕ್ಷಣ ಸಂಸ್ಥೆಗಳು ವಿದೇಶಗಳಿಂದ ಹಣ, ದೇಣಿಗೆ ಅಥವಾ ಆತಿಥ್ಯವನ್ನು ಪಡೆಯುವುದನ್ನು ನಿಯಂತ್ರಿಸಲು ಮತ್ತು ಮೇಲ್ವಿಚಾರಣೆ ಮಾಡಲು ಕೇಂದ್ರ ಗೃಹ ಸಚಿವಾಲಯವು ಜಾರಿಗೆ ತಂದಿರುವ ಕಾನೂನು ಎಫ್‌ಸಿಆರ್‌ಎ.

ವಿದೇಶಿ ಹಣವು ಭಾರತದ ಆಂತರಿಕ ಭದ್ರತೆ, ರಾಜಕೀಯ ಅಥವಾ ಸಾಮಾಜಿಕ ಸೌಹಾರ್ದತೆಗೆ ಧಕ್ಕೆ ತರದಂತೆ ತಡೆಯುವುದು. ವಿದೇಶದಿಂದ ಬರುವ ಹಣದ ಮೂಲ ಯಾವುದು ಮತ್ತು ಅದನ್ನು ಯಾವ ಉದ್ದೇಶಕ್ಕೆ (ಶಿಕ್ಷಣ, ಆರೋಗ್ಯ, ಸಮಾಜಸೇವೆ ಇತ್ಯಾದಿ) ಬಳಸಲಾಗುತ್ತಿದೆ ಎಂಬುದರ ಸ್ಪಷ್ಟ ಲೆಕ್ಕಪತ್ರವನ್ನು ಮೇಲ್ವಿಚಾರಣೆ ಮಾಡುವುದು ಹಾಗೂ ವಿದೇಶಿ ಹಣವನ್ನು ಕಳ್ಳಸಾಗಣೆ, ಬಲವಂತದ ಮತಾಂತರ, ದೇಶವಿರೋಧಿ ಚಟುವಟಿಕೆಗಳು ಅಥವಾ ರಾಜಕೀಯ ಪ್ರಭಾವಕ್ಕೆ ದುರ್ಬಳಕೆ ಮಾಡಿಕೊಳ್ಳುವುದನ್ನು ತಡೆಯುವುದು ಈ ಕಾಯ್ದೆಯ ಮುಖ್ಯ ಉದ್ದೇಶ.

ಅಂದಹಾಗೆ, ಯಾವುದೇ ದೇಶವು ತನ್ನ ಆಂತರಿಕ ರಾಜಕೀಯ ಅಥವಾ ಸಾಮಾಜಿಕ ವ್ಯವಸ್ಥೆಯ ಮೇಲೆ ವಿದೇಶಿ ಹಣದ ಅನಗತ್ಯ ಪ್ರಭಾವವನ್ನು ಬಯಸುವುದಿಲ್ಲ. ಆದ್ದರಿಂದಲೇ, ಶೀತಲ ಸಮರದ ಕಾಲದಲ್ಲಿ ವಿದೇಶಿ ಶಕ್ತಿಗಳು ಹಣದ ಮೂಲಕ ಭಾರತದ ರಾಜಕೀಯ ಮತ್ತು ಸಾಮಾಜಿಕ ಚಟುವಟಿಕೆಗಳನ್ನು ಪ್ರಭಾವಿಸುತ್ತಿವೆ ಎಂಬ ಆತಂಕ ಹೆಚ್ಚಾಗಿದ್ದಾಗ, ಅಂದಿನ ಇಂದಿರಾ ಗಾಂಧಿ ಸರ್ಕಾರ 1976ರ ತುರ್ತು ಪರಿಸ್ಥಿತಿಯ ಅವಧಿಯಲ್ಲಿ ಮೊದಲ ಬಾರಿಗೆ ಈಅಖಂ ಕಾಯಿದೆಯನ್ನು ಜಾರಿಗೆ ತಂದಿತು. ಕಾಲಕ್ರಮೇಣ ಜಾಗತಿಕ ವಹಿವಾಟು ಮತ್ತು ಎನ್ಜಿಒ ವಲಯ ಬೆಳೆದಂತೆ, ಯುಪಿಎ ಸರ್ಕಾರ 2010ರಲ್ಲಿ ಹೊಸ ಸ್ವರೂಪದ ಕಾಯಿದೆಯನ್ನು ಜಾರಿಗೆ ತಂದಿತು. 2010ರಲ್ಲಿ ಜಾರಿಗೆ ಬಂದ ಹೊಸ ಕಾಯಿದೆಯು, ಕೇವಲ ರಾಜಕೀಯ ನಿಯಂತ್ರಣಕ್ಕಷ್ಟೇ ಸೀಮಿತವಾಗದೆ ಎನ್ಜಿಒ ಮತ್ತು ಧಾರ್ಮಿಕ ಸಂಘಟನೆಗಳ ಮೇಲಿನ ಉಸ್ತುವಾರಿಯನ್ನು ಹೆಚ್ಚಿಸಿತು. ವಿದೇಶಿ ಹಣ ಪಡೆಯುವ ಸಂಸ್ಥೆಗಳು ಕಡ್ಡಾಯವಾಗಿ ನೋಂದಣಿ ಮಾಡಿಸಿಕೊಳ್ಳುವುದು, ಪ್ರತಿ 5 ವರ್ಷಕ್ಕೊಮ್ಮೆ ಪರವಾನಗಿ ನವೀಕರಿಸುವುದು, ನಿಯಮಿತವಾಗಿ ಲೆಕ್ಕಪತ್ರ ಸಲ್ಲಿಕೆ ಮಾಡುವುದು ಹಾಗೂ ಹಣ ದುರ್ಬಳಕೆಯಾಗದಂತೆ ತಡೆಯುವ ಕಟ್ಟುನಿಟ್ಟಿನ ಆಡಳಿತಾತ್ಮಕ ಚೌಕಟ್ಟನ್ನು ಇದು ಜಾರಿಗೆ ತಂದಿತು. ಭಾರತದಲ್ಲಿ ಪ್ರಸ್ತುತ ಸುಮಾರು 16,000ಕ್ಕೂ ಹೆಚ್ಚು ಸಂಸ್ಥೆಗಳು ಸಕ್ರಿಯ ಈಅಖಂ ನೋಂದಣಿ ಹೊಂದಿದ್ದು, ವರ್ಷಕ್ಕೆ ಅಂದಾಜು 22,000 ಕೋಟಿ ರೂ.ಗಳಿಗೂ ಹೆಚ್ಚು ವಿದೇಶಿ ದೇಣಿಗೆಯನ್ನು ಪಡೆಯುತ್ತಿವೆ. ಈ ಹಣವು ಮೂಲಭೂತವಾಗಿ ಶಿಕ್ಷಣ, ಆರೋಗ್ಯ, ಗ್ರಾಮೀಣ ಅಭಿವೃದ್ಧಿ, ವಿಪತ್ತು ಪರಿಹಾರ ಹಾಗೂ ಧಾರ್ಮಿಕ ಸೇವೆಗಳಿಗೆ ಬಳಸಲ್ಪಡುತ್ತದೆ. ಆದಾಗ್ಯೂ, ಇಲ್ಲಿ ಗಮನಿಸಬೇಕಾದ ಮುಖ್ಯಅಂಶವೆಂದರೆ, ಅತಿ ಹೆಚ್ಚು ವಿದೇಶಿ ದೇಣಿಗೆ ಪಡೆಯುತ್ತಿರುವ ಸಂಘ ಆರ್‌ಎಸ್‌ಎಸ್ ಎಂದು ಗುರುತಿಸಲಾಗಿದೆ. ಆದರೆ, ಆರ್‌ಎಸ್‌ಎಸ್ ಈವರೆಗೆ ನೋಂದಣಿಯಾಗಿಲ್ಲ. ಇಲ್ಲಿಯವರೆಗೆ ಎಫ್ಸಿಆರ್‌ಎ ಕಾನೂನು ಮುಖ್ಯವಾಗಿ ಹಣದ ಹರಿವು ಮತ್ತು ಅದರ ಬಳಕೆಗೆ ಮಾತ್ರ ಸೀಮಿತವಾಗಿತ್ತು. ಆದರೆ, 2026ರ ಹೊಸ ತಿದ್ದುಪಡಿ ಮಸೂದೆಯು ಹಣದಿಂದ ನಿರ್ಮಾಣವಾದ ಆಸ್ತಿ ಮತ್ತು ಸ್ವತ್ತುಗಳ? ಮೇಲೆಯೂ ನಿಯಂತ್ರಣ ಸಾಧಿಸಲು ಹೊರಟಿದೆ. ಸರ್ಕಾರ ಹೇಳುವಂತೆ; ಪ್ರಸ್ತುತ ಇರುವ ಕಾಯಿದೆಯಲ್ಲಿ ಒಂದು ದೊಡ್ಡ ಕಾನೂನು ಕೊರತೆಯಿದೆ. ಯಾವುದಾದರೂ ಸಂಸ್ಥೆಯ ಈಅಖಂ ಪರವಾನಗಿ ರದ್ದಾದರೆ ಅಥವಾ ಸಮಯಕ್ಕೆ ಸರಿಯಾಗಿ ನವೀಕರಣಗೊಳ್ಳದಿದ್ದರೆ, ಆ ಸಂಸ್ಥೆಯ ಬಳಿ ಉಳಿದುಕೊಳ್ಳುವ ವಿದೇಶಿ ಹಣ ಮತ್ತು ಆ ಹಣದಿಂದ ಗತಕಾಲದಲ್ಲಿ ನಿರ್ಮಾಣವಾದ ಸ್ಥಿರಾಸ್ತಿಗಳ (ಭೂಮಿ, ಕಟ್ಟಡಗಳು) ನಿರ್ವಹಣೆ ಹೇಗೆ ಎಂಬುದಕ್ಕೆ ಕಾಯಿದೆಯಲ್ಲಿ ಸ್ಪಷ್ಟ ನಿಯಮವಿರಲಿಲ್ಲ. ಇದರಿಂದ ಆಸ್ತಿಗಳ ದುರ್ಬಳಕೆಯಾಗುವ ಸಾಧ್ಯತೆಯಿದೆ. ಆದ್ದರಿಂದ, ಆ ಆಸ್ತಿಗಳ ಮೇಲೂ ನಿಯಂತ್ರಣ ತರುವ ಅಗತ್ಯವಿದೆ ಎಂದು ಮೋದಿ ಸರ್ಕಾರ ವಾದಿಸುತ್ತಿದೆ.

ಇದಕ್ಕಾಗಿ ಮಸೂದೆಯಲ್ಲಿ; ಸಂಸ್ಥೆಯೊಂದರ ನೋಂದಣಿ ರದ್ದಾದಾಗ, ನವೀಕರಣಗೊಳ್ಳದಿದ್ದಾಗ ಅಥವಾ ಆ ಸಂಸ್ಥೆಯು ಅಸ್ತಿತ್ವದಲ್ಲೇ ಇಲ್ಲದಂತಾದಾಗ, ವಿದೇಶಿ ದೇಣಿಗೆಗಳು ಮತ್ತು ಅಂತಹ ಹಣದಿಂದ ಸೃಷ್ಟಿಯಾದ ಆಸ್ತಿಗಳ ಉಸ್ತುವಾರಿ ವಹಿಸಿಕೊಳ್ಳಲು ನಿರ್ದಿಷ್ಟ ಪ್ರಾಧಿಕಾರ ಎಂಬ ಹೊಸ ವ್ಯವಸ್ಥೆಯನ್ನು ಪರಿಚಯಿಸಲಾಗುತ್ತಿದೆ.




ಜಾರ್ಖಂಡ್ ಸಿಬ್ಬಂದಿ ಆಯ್ಕೆ ಆಯೋಗದ CGL ಪರೀಕ್ಷೆಯ ಪ್ರಶ್ನೆಪತ್ರಿಕೆ ಸೋರಿಕೆ ಹಾಗೂ ಜಾರ್ಖಂಡ್ ಸಾರ್ವಜನಿಕ ಸೇವಾ ಆಯೋಗದ ಪರೀಕ್ಷೆಗಳಲ್ಲಿನ ಅಕ್ರಮಗಳ ಆರೋಪದ ಹಿನ್ನೆಲೆಯಲ್ಲಿ, ಜಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೊರೆನ್ ಅವರ ರಾಜೀನಾಮೆ ಮತ್ತು ಈ ಸಂಪೂರ್ಣ ಪ್ರಕ್ರಿಯೆಯ ಕುರಿತು ಸಿಬಿಐ ತನಿಖೆಗೆ ಆಗ್ರಹಿಸಿ, ಆಲ್ ಇಂಡಿಯಾ ಸ್ಟೂಡೆಂಟ್ಸ್ ಅಸೋಸಿಯೇಷನ್ ಅಧ್ಯಕ್ಷೆ ನೇಹಾ ಬೋರಾ ಹಾಗೂ ಎಡಪಕ್ಷಗಳ ಕಾರ್ಯಕರ್ತರು ಶುಕ್ರವಾರ ರಾಂಚಿಯಲ್ಲಿ ಪ್ರತಿಭಟನೆ ನಡೆಸಿದರು.

# ಕಾವೇರಿ ವಿವಾದವನ್ನು ರಾಜಕೀಯಗೊಳಿಸುವ ಉದ್ದೇಶವಿಲ್ಲ: ತಮಿಳುನಾಡು ಸಿಎಂ ವಿಜಯ್

**ಚೆನ್ನೈ, ಆ.7:** ಭಾವನಾತ್ಮಕ ಕಾವೇರಿ ನದಿ ನೀರಿನ ಸಮಸ್ಯೆಯನ್ನು ರಾಜಕೀಯಗೊಳಿಸುವ ಉದ್ದೇಶವನ್ನು ಆಡಳಿತಾರೂಢ ಟಿವಿಕೆ ಹೊಂದಿಲ್ಲ ಎಂದು ಪ್ರತಿಪಾದಿಸಿದ ತಮಿಳುನಾಡು ಮುಖ್ಯಮಂತ್ರಿ ವಿಜಯ್, ಬೆಂಗಳೂರಿನಲ್ಲಿ ಪ್ರಸ್ತಾಪಿಸಿರುವ ಮುಖ್ಯಮಂತ್ರಿ ಮಟ್ಟದ ಮಾತುಕತೆಯು ಕರ್ನಾಟಕದಿಂದ ಈ ವಿಷಯದ ಬಗ್ಗೆ ಸಕಾರಾತ್ಮಕ ಚಿಹ್ನೆಗಳನ್ನು ಪಡೆಯುವ ಗುರಿಯನ್ನು ಹೊಂದಿದೆ ಎಂದು ಶುಕ್ರವಾರ ರಾಜ್ಯ ವಿಧಾನಸಭೆಗೆ ತಿಳಿಸಿದರು.



ಪ್ರಧಾನ ವಿರೋಧ ಪಕ್ಷ ಡಿಎಂಕೆ, ಎಐಎಡಿಎಂಕೆ ಮತ್ತು ಇತರರು ಸೇರಿದಂತೆ ವಿವಿಧ ಪಕ್ಷಗಳ ಸದನದ ನಾಯಕರು ನೀಡಿದ ವಿಶೇಷ ಗಮನ ಸೆಳೆಯುವ ನಿರ್ಣಯದ ಸಂದರ್ಭದಲ್ಲಿ ಮಧ್ಯಪ್ರವೇಶಿಸಿ, ಕರ್ನಾಟಕವು ಇದೇ ರೀತಿಯ ಸಭೆಗಳನ್ನು ನಡೆಸಿ ಕಳೆದ ಒಂದು ತಿಂಗಳಿನಿಂದ ಮೇಕೆದಾಟು ಕುರಿತು ತನ್ನ ಪ್ರಯತ್ನಗಳನ್ನು ತೀವ್ರಗೊಳಿಸಿರುವುದರಿಂದ ಸರ್ಕಾರವು ಏಕೆ ಹಿಂಜರಿಯುತ್ತಿದೆ ಮತ್ತು ಸರ್ವಪಕ್ಷ ಸಭೆಯನ್ನು ಕರೆಯಲು ನಿರಾಕರಿಸುತ್ತಿದೆ ಎಂಬ ವಿರೋಧ ಪಕ್ಷದ ನಾಯಕ ಉದಯನಿಧಿ ಸ್ಟಾಲಿನ್ ಅವರ ಪ್ರಸ್ತಾಪಕ್ಕೆ ವಿಜಯ್ ಪ್ರತಿಕ್ರಿಯಿಸಿದರು. 1969 ರಲ್ಲಿ ಕರ್ನಾಟಕವು ಈ ಸಮಸ್ಯೆಯನ್ನು ಪರಿಹರಿಸಲು ಕೇಂದ್ರದೊಂದಿಗೆ ಕೆಲವು ಅಣೆಕಟ್ಟುಗಳನ್ನು ನಿರ್ಮಿಸಲು ಕ್ರಮಗಳನ್ನು ತೆಗೆದುಕೊಂಡಾಗ ಸದನದಲ್ಲಿ ಮಾಡಿದ ಹೇಳಿಕೆಗಳನ್ನು ಉಲ್ಲೇಖಿಸಿದರು. ಮಾತುಕತೆಯಲ್ಲಿ ರಾಜ್ಯವನ್ನು ಅವಮಾನಿಸಿದರೆ ಏನಾಗಬಹುದು ಎಂಬ ಕೆಲವು ಜನರ ಹೇಳಿಕೆಗಳನ್ನು ಉಲ್ಲೇಖಿಸಿದ ಮುಖ್ಯಮಂತ್ರಿ, "ತಮಿಳುನಾಡಿನ ಜನರಿಗಾಗಿ ನಾನು ಅದನ್ನು ಸಹಿಸಲು ಸಿದ್ಧನಿದ್ದೇನೆ" ಎಂದು ಹೇಳಿದರು. ಕಾವೇರಿ ತಮಿಳುನಾಡು ಮತ್ತು ಅದರ ರೈತರ ಜೀವನಾಡಿ ಮತ್ತು ಭಾವನಾತ್ಮಕ ವಿಷಯವಾಗಿದೆ ಮತ್ತು ಟಿವಿಕೆ ಸರ್ಕಾರವು ಈ ವಿಷಯದ ಬಗ್ಗೆ ತನ್ನ ಹಕ್ಕುಗಳ ಮೇಲೆ ಎಂದಿಗೂ ರಾಜಿ ಮಾಡಿಕೊಳ್ಳುವುದಿಲ್ಲ ಎಂದು ಗಮನಿಸಿದ ಅವರು, ಸದನದಲ್ಲಿ ಅಂಗೀಕರಿಸಲಾದ ಸರ್ವಾನುಮತದ ನಿರ್ಣಯವನ್ನು ಪ್ರಧಾನಿ ನರೇಂದ್ರ ಮೋದಿಗೆ ಕಳುಹಿಸಲಾಗಿದೆ ಮತ್ತು ಸುಪ್ರೀಂ ಕೋರ್ಟ್ ಆದೇಶಗಳನ್ನು ಉಲ್ಲೇಖಿಸಿ ಅವರಿಗೆ ಪತ್ರ ಬರೆದಿದ್ದಾರೆ ಎಂದು ಹೇಳಿದರು. ಕರ್ನಾಟಕವು ಕಾವೇರಿ ನದಿಗೆ ಅಡ್ಡಲಾಗಿ ರಚನೆಗಳನ್ನು ನಿರ್ಮಿಸಲು ಕೆಳಗಿನ ನದಿಪಾತ್ರದ ರಾಜ್ಯಗಳ ಒಪ್ಪಿಗೆಯನ್ನು ಪಡೆಯುವ ಅಗತ್ಯವಿಲ್ಲ ಎಂದು ರಾಜ್ಯಸಭೆಯಲ್ಲಿ ಕೇಂದ್ರ ಜಲಶಕ್ತಿ ರಾಜ್ಯ ಸಚಿವರು ನೀಡಿದ ಹೇಳಿಕೆಯನ್ನು ಹಿಂತೆಗೆದುಕೊಳ್ಳಬೇಕೆಂದು ಒತ್ತಾಯಿಸಿದರು. ಈ ವಿಷಯದ ಬಗ್ಗೆ ತಮಿಳುನಾಡಿನ ಹಕ್ಕುಗಳನ್ನು ರಕ್ಷಿಸಲು ರಾಜ್ಯವು ಎಲ್ಲಾ ಕಾನೂನು ವಿಧಾನಗಳನ್ನು ಮುಂದುವರಿಸುತ್ತದೆ ಎಂದು ಅವರು ಹೇಳಿದರು.

# 370 ನೇ ವಿಧಿ ರದ್ದತಿ ವಿರುದ್ಧ ಪ್ರತಿಭಟನೆ: ಮೆಹಬೂಬಾ–ಇಲ್ತಿಜಾ ವಿರುದ್ಧ ಎಫ್‌ಐಆರ್– ಸರ್ಕಾರದ ಧೋರಣೆ ವಿರುದ್ಧ ಪಿಡಿಪಿ ಕೆಂಗಣ್ಣು

**ಶ್ರೀನಗರ, ಆಗಸ್ಟ್ 7:** ಪೀಪಲ್ಸ್ ಡೆಮಾಕ್ರಟಿಕ್ ಪಕ್ಷದ ಅಧ್ಯಕ್ಷೆ ಮೆಹಬೂಬಾ ಮುಫ್ತಿ ಮತ್ತು ಅವರ ಪುತ್ರಿ ಇಲ್ತಿಜಾ ವಿರುದ್ಧ ಪೊಲೀಸರು ಎಫ್‌ಐಆರ್ ದಾಖಲಿಸಿದ ಒಂದು ದಿನದ ನಂತರ, ಜಮ್ಮು ಮತ್ತು ಕಾಶ್ಮೀರದ ಜನರ ಹಕ್ಕುಗಳಿಗಾಗಿ ಧ್ವನಿ ಎತ್ತಿದ್ದಕ್ಕಾಗಿ ಮತ್ತು 370 ಮತ್ತು 35 ಎ ವಿಧಿಗಳನ್ನು ರದ್ದುಪಡಿಸಿದ್ದನ್ನು ಪ್ರಶ್ನಿಸಿದ್ದಕ್ಕಾಗಿ ತಮ್ಮನ್ನು ಗುರಿಯಾಗಿಸಲಾಗಿದೆ ಎಂದು ಇಬ್ಬರೂ ಹೇಳಿದರು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಸಮನ್ಸ್ ನೀಡಿದ ನಂತರ ಇಲ್ತಿಜಾ ಶುಕ್ರವಾರ ಕೋಥಿ ಬಾಗ್ ಪೊಲೀಸ್ ಠಾಣೆಯಲ್ಲಿ ಹಾಜರಾದರು. ಪಿಡಿಪಿ ಕಚೇರಿಯಲ್ಲಿ ಪಕ್ಷದ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದ ಮೆಹಬೂಬಾ, ಪ್ರಕರಣವು ತನ್ನ ಅಥವಾ ತನ್ನ ಮಗಳ ಬಗ್ಗೆ ಅಲ್ಲ, ಆದರೆ 370 ಮತ್ತು 35 ಎ ವಿಧಿಗಳನ್ನು ರದ್ದುಪಡಿಸಿದ್ದನ್ನು ಪ್ರಶ್ನಿಸುವ ಧ್ವನಿಗಳನ್ನು ಮೌನಗೊಳಿಸಲು ಪ್ರಯತ್ನಿಸುವುದರ ಬಗ್ಗೆ ಎಂದು ಹೇಳಿದರು. "ಇದು ಮೆಹಬೂಬಾ ಮುಫ್ತಿ ಅಥವಾ ಇಲ್ತಿಜಾ ಮುಫ್ತಿ ವ್ಯಕ್ತಿಗಳಾಗಿ ಅಲ್ಲ. ಜಮ್ಮು ಮತ್ತು ಕಾಶ್ಮೀರದ ಜನರ ಹಕ್ಕುಗಳಿಗಾಗಿ ಮಾತನಾಡುವ ಮತ್ತು 370 ಮತ್ತು 35ಂ ವಿಧಿಗಳ ಅಸಂವಿಧಾನಿಕ ರದ್ದತಿಯನ್ನು ಪ್ರಶ್ನಿಸುವ ಪ್ರತಿಯೊಂದು ಧ್ವನಿಯನ್ನು ನಿಶ್ಯಬ್ದಗೊಳಿಸುವ ಬಗ್ಗೆ" ಎಂದು ಅವರು ಹೇಳಿದರು. "ಮೆಹಬೂಬಾ ಮುಫ್ತಿ ಬರುತ್ತಾರೆ ಮತ್ತು ಹೋಗುತ್ತಾರೆ. ಇಲ್ತಿಜಾ ಮುಫ್ತಿ ಬರುತ್ತಾರೆ ಮತ್ತು ಹೋಗುತ್ತಾರೆ. ಆದರೆ ಜನರ ಆಕಾಂಕ್ಷೆಗಳು ಮತ್ತು ಭಾವನೆಗಳು ಉಳಿಯುತ್ತವೆ. ಆ ಆಕಾಂಕ್ಷೆಗಳನ್ನು ಪ್ರತಿನಿಧಿಸಲು ಮತ್ತು ಜಮ್ಮು ಮತ್ತು ಕಾಶ್ಮೀರದ ಜನರ ಪರವಾಗಿ ನಿಲ್ಲಲು ಪಿಡಿಪಿ ತನ್ನ ಶಾಂತಿಯುತ ಮತ್ತು ಪ್ರಜಾಸತ್ತಾತ್ಮಕ ಹೋರಾಟವನ್ನು ಮುಂದುವರಿಸುತ್ತದೆ." ನ್ಯಾಷನಲ್ ಕಾನ್ಫರೆನ್ಸ್ ಮತ್ತು ಇತರ ಪಕ್ಷಗಳನ್ನು ಇದೇ ರೀತಿಯ ಕ್ರಮಕ್ಕೆ ಏಕೆ ಒಳಪಡಿಸಲಾಗಿಲ್ಲ ಎಂದು ಪ್ರಶ್ನಿಸುತ್ತಾ, 370ನೇ ವಿಧಿಯ ವಿಷಯ ಪ್ರಶ್ನಿಸಿದ್ದಕ್ಕಾಗಿ ತಮ್ಮ ಪಕ್ಷವನ್ನು ಆಯ್ದು ಗುರಿಯಾಗಿಸಲಾಗುತ್ತಿದೆ ಎಂದು ಅವರು ಆರೋಪಿಸಿದರು. "ಕಾಶ್ಮೀರ ಸಮಸ್ಯೆಗೆ ಪರಿಹಾರವನ್ನು ಕೋರುವುದರ ಜೊತೆಗೆ, 370 ನೇ ವಿಧಿಗಾಗಿ ಹಗಲಿರುಳು ಪ್ರತಿಭಟನೆ ನಡೆಸಿದ ಏಕೈಕ ಪಕ್ಷ ನಾವು. ನಾವು ಎದುರಿಸಿದ ಗುರಿ ಹೊಸದಲ್ಲ" ಎಂದು ಮೆಹಬೂಬಾ ಹೇಳಿದರು. 2019 ರಿಂದ ಪಿಡಿಪಿ ಪಕ್ಷವನ್ನು ದುರ್ಬಲಗೊಳಿಸುವ ಮತ್ತು ವಿಭಜಿಸುವ ಪ್ರಯತ್ನಗಳನ್ನು ಎದುರಿಸುತ್ತಿದೆ ಎಂದು ಅವರು ಆರೋಪಿಸಿದರು. "ನ್ಯಾಷನಲ್ ಕಾನ್ಫರೆನ್ಸ್ ಪ್ರತಿಭಟಿಸಿತ್ತು, ಕಾಂಗ್ರೆಸ್ ಪ್ರತಿಭಟಿಸಿದೆ ಮತ್ತು ಇತರ ಪಕ್ಷಗಳು ಪ್ರತಿಭಟಿಸಿವೆ. ಆದರೆ ಇಲ್ಲಿ, 370 ನೇ ವಿಧಿಯ ಬಗ್ಗೆ ಮಾತನಾಡುವುದು ಅಪರಾಧವಾಗಿದೆ. 370 ನೇ ವಿಧಿಯ ಬಗ್ಗೆ ಮಾತನಾಡುವವರನ್ನು ಅಪರಾಧಿ ಎಂದು ಕರೆಯಲಾಗುತ್ತಿದೆ. ಅದಕ್ಕಾಗಿಯೇ ಎಫ್‌ಐಆರ್ ದಾಖಲಿಸಲಾಗಿದೆ" ಎಂದು ಅವರು ಹೇಳಿದರು. 370 ನೇ ವಿಧಿಯನ್ನು ರದ್ದುಗೊಳಿಸಿದ ಏಳನೇ ವಾರ್ಷಿಕೋತ್ಸವದಂದು ಒಮರ್ ಅಬ್ದುಲ್ಲಾ ಕಾಶ್ಮೀರದಿಂದ ಪಲಾಯನ ಮಾಡಿದ್ದಾರೆ ಎಂದು ಅವರು ಆರೋಪಿಸಿದರು. ಆಗಸ್ಟ್ 5 ರಂದು, ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಇತ್ತೀಚಿನ ಹಠಾತ್ ಪ್ರವಾಹ ಮತ್ತು ಮೋಡ ಸ್ಫೋಟದಿಂದ ಉಂಟಾದ ವಿನಾಶವನ್ನು ನಿರ್ಣಯಿಸಲು ಪೂಂಚ್ ಜಿಲ್ಲೆಯ ಪ್ರವಾಹ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿದರು, "ಒಮರ್ ಸಾಹಿಬ್, ನೀವು ಕೋಪಗೊಳ್ಳುತ್ತೀರಿ ಏಕೆಂದರೆ ಒಂದು ಪಕ್ಷವು 370 ನೇ ವಿಧಿಯ ಬಗ್ಗೆ ಮಾತನಾಡುವಾಗ ನೀವು ಅದರ ವಿರುದ್ಧ ಆರೋಪಗಳನ್ನು ಮಾಡುತ್ತೀರಿ. ನೀವು ಆಗಸ್ಟ್ 5 ರಂದು ಪೂಂಚ್‌ನ ರಾಜೌರಿಗೆ ಓಡಿಹೋದಿರಿ. ಅಲ್ಲಿಗೆ ಪ್ರವಾಹಗಳು ಬಹಳ ಮುಂಚೆಯೇ ಬಂದವು. ನೀವು ಏನೂ ಹೇಳದಂತೆ ಓಡಿಹೋದಿರಿ..." ಎಂದು ಅವರು ಹೇಳಿದರು. ಮೆಹಬೂಬಾ ಬಿಜೆಪಿಯನ್ನು ಟೀಕಿಸಿದರು, 370 ನೇ ವಿಧಿಯನ್ನು ರದ್ದುಗೊಳಿಸಿದ ನಂತರ ಜಮ್ಮು ಮತ್ತು ಕಾಶ್ಮೀರದಲ್ಲಿ ಅಭಿವೃದ್ಧಿಯ ಭರವಸೆ ನೀಡಿತ್ತು ಆದರೆ ಅದು ಭಯದ ವಾತಾವರಣವನ್ನು ಸೃಷ್ಟಿಸುತ್ತಿದೆ ಎಂದು ಆರೋಪಿಸಿದರು. "370 ನೇ ವಿಧಿಯು ಜಮ್ಮು ಮತ್ತು ಕಾಶ್ಮೀರದ ಜನರ ಹೃದಯದಲ್ಲಿದೆ" ಎಂದು ಅವರು ಹೇಳಿದರು, ಈ ಪ್ರದೇಶದಲ್ಲಿ ಜನರನ್ನು ಬಂಧಿಸಲಾಗುತ್ತಿದೆ, ಸರ್ಕಾರಿ ನೌಕರರನ್ನು ವಜಾಗೊಳಿಸಲಾಗುತ್ತಿದೆ ಮತ್ತು ಮನೆಗಳನ್ನು ಕೆಡವಲಾಗುತ್ತಿದೆ ಎಂದು ಆರೋಪಿಸಿದರು.



ಆ.4 ರಂದು ಪಕ್ಷದ ಪ್ರದರ್ಶನದ ಸಂದರ್ಭದಲ್ಲಿ ಮಹಿಳಾ ಪ್ರತಿಭಟನಾಕಾರರ ಮೇಲೆ ಹಲ್ಲೆ ನಡೆಸಲಾಗಿದೆ ಎಂದು ಪಿಡಿಪಿ ಮುಖ್ಯಸ್ಥೆ ಆರೋಪಿಸಿದ್ದಾರೆ. ಪ್ರತಿಭಟನಕಾರರು ಕಲ್ಲು ಅಥವಾ ಯಾವುದೇ ಆಯುಧವನ್ನು ಹಿಡಿದಿಲ್ಲ ಎಂದು ಹೇಳಿದರು. "ನಾನು ಒಳಗೆ ಇರಲಿ ಅಥವಾ ಹೊರಗೆ ಇರಲಿ, ಜಮ್ಮು ಮತ್ತು ಕಾಶ್ಮೀರದಲ್ಲಿ ಶಾಂತಿಯನ್ನು ತರುವ ಮುಫ್ತಿ ಮೊಹಮ್ಮದ್ ಸಯೀದ್ ಅವರ ದೃಷ್ಟಿಕೋನವು ನಮಗೆ ಒಂದು ನಕ್ಷೆಯನ್ನು ನೀಡಿದೆ. ನಾವು ಅದನ್ನು ಬಿಡಬಾರದು. ನಾವು ಅದನ್ನು ಹಿಡಿದಿಟ್ಟುಕೊಳ್ಳಬೇಕು" ಎಂದು ಅವರು ಹೇಳಿದರು. ಏತನ್ಮಧ್ಯೆ, ಇಲ್ತಿಜಾ ಮುಫ್ತಿ ಶುಕ್ರವಾರ ತಮ್ಮ ಪಕ್ಷವು 370 ನೇ ವಿಧಿಯ ಪುನಃಸ್ಥಾಪನೆ ಮತ್ತು ಜಮ್ಮು ಮತ್ತು ಕಾಶ್ಮೀರದ ವಿಶೇಷ ಸ್ಥಾನಮಾನಕ್ಕಾಗಿ ತನ್ನ "ಶಾಂತಿಯುತ ಹೋರಾಟ"ವನ್ನು ಮುಂದುವರಿಸುತ್ತದೆ ಎಂದು ಹೇಳಿದರು, ರಾಜ್ಯತ್ವದ ಪುನಃಸ್ಥಾಪನೆಗೆ ಅದು ಸಮ್ಮತಿಸುವುದಿಲ್ಲ ಎಂದು ಪ್ರತಿಪಾದಿಸಿದರು. ಆ.4 ರಂದು ಪಿಡಿಪಿ ನಡೆಸಿದ ಪ್ರತಿಭಟನೆಯ ಸಂದರ್ಭದಲ್ಲಿ ಪೊಲೀಸ್ ಸಿಬ್ಬಂದಿಯ ಮೇಲೆ ದಾಖಲಾಗಿರುವ ಹಲ್ಲೆಯ ಆರೋಪದ ಮೇಲೆ ದಾಖಲಾಗಿರುವ ಎಫ್‌ಐಆರ್‌ಗೆ ಸಂಬಂಧಿಸಿದಂತೆ ಕೋಥಿ ಬಾಗ್ ಪೊಲೀಸ್ ಠಾಣೆಯಲ್ಲಿ ಹಾಜರಾದ ನಂತರ ಮಾಧ್ಯಮಗಳನ್ನುದ್ದೇಶಿಸಿ ಮಾತನಾಡಿದ ಇಲ್ತಿಜಾ, ಪಕ್ಷದ ವಿರುದ್ಧದ ಕ್ರಮವು 370 ನೇ ವಿಧಿಯನ್ನು ಪುನಃಸ್ಥಾಪಿಸುವ ನಿರಂತರ ಬೇಡಿಕೆಗೆ ಸಂಬಂಧಿಸಿದೆ ಎಂದು ಹೇಳಿದರು. ಆಗಸ್ಟ್ 5, 2019 ರಂದು ಮಾಡಿದ ಬದಲಾವಣೆಗಳ ವಿರುದ್ಧ ಶಾಂತಿಯುತವಾಗಿ ಪ್ರತಿಭಟಿಸುವ ಹಕ್ಕು ಪಿಡಿಪಿಗೆ ಇದೆ ಎಂದು ಇಲ್ತಿಜಾ ಹೇಳಿದರು ಮತ್ತು ಈ ವಿಷಯವನ್ನು ಎತ್ತಿದ್ದಕ್ಕಾಗಿ ಪಕ್ಷವನ್ನು ಗುರಿಯಾಗಿಸಿ ದುರ್ಬಲಗೊಳಿಸಲಾಗಿದೆ ಎಂದು ಆರೋಪಿಸಿದರು. ರಾಜ್ಯದ ಸ್ಥಾನಮಾನದ ಬಗ್ಗೆ ಇತರ ರಾಜಕೀಯ ಪಕ್ಷಗಳ ಗಮನವನ್ನು ಅವರು ಪ್ರಶ್ನಿಸಿದರು, ಪಿಡಿಪಿ 370 ನೇ ವಿಧಿ, ಹಿಂದಿನ ರಾಜ್ಯ ಧ್ವಜ, ಸಂವಿಧಾನ ಮತ್ತು ಉಳಿಕೆ ಅಧಿಕಾರಗಳನ್ನು ಪುನಃಸ್ಥಾಪಿಸಲು ಒತ್ತಾಯಿಸುವುದನ್ನು ಮುಂದುವರಿಸುತ್ತದೆ ಎಂದು ಹೇಳಿದರು. "ನಾನು ಪೊಲೀಸರೊಂದಿಗೆ ಸಹಕರಿಸಲು ಸಿದ್ಧನಿದ್ದೇನೆ, ಆದರೆ ನನ್ನ ದೊಡ್ಡ ವಿಷಯವೆಂದರೆ ಜಮ್ಮು ಮತ್ತು ಕಾಶ್ಮೀರದ ವಿಶೇಷ ಸ್ಥಾನಮಾನ ಮತ್ತು 370ನೇ ವಿಧಿ" ಎಂದು ಅವರು ಹೇಳಿದರು. ಭಾರತೀಯ ಪ್ರಜೆಯಾಗಿ 370ನೇ ವಿಧಿಯನ್ನು ಪುನಃಸ್ಥಾಪಿಸುವುದನ್ನು ಸಮರ್ಥಿಸುವುದು ತನ್ನ ಕಾನೂನುಬದ್ಧ ಹಕ್ಕು ಎಂದು ಇಲ್ತಿಜಾ ಸಮರ್ಥಿಸಿಕೊಂಡರು ಮತ್ತು ಅಗತ್ಯವಿದ್ದರೆ ಜೈಲು ಶಿಕ್ಷೆಯನ್ನು ಎದುರಿಸಲು ಸಿದ್ಧನಿದ್ದೇನೆ ಎಂದು ಹೇಳಿದರು. "ನಾವು ರಾಜ್ಯ ಸ್ಥಾನಮಾನಕ್ಕಾಗಿ ಭಿಕ್ಷೆ ಬೇಡುವುದಿಲ್ಲ. ನಾವು ನಿಮ್ಮಿಂದ 370 ನೇ ವಿಧಿಯನ್ನು ಹಿಂದಕ್ಕೆ ಪಡೆಯುತ್ತೇವೆ – ನಮ್ಮ ಧ್ವಜ, ನಮ್ಮ ಸಂವಿಧಾನ" ಎಂದು ಅವರು ಹೇಳಿದರು, ವಿಶೇಷ ಸ್ಥಾನಮಾನವನ್ನು ಪುನಃಸ್ಥಾಪಿಸುವವರೆಗೆ ಪಿಡಿಪಿ ತನ್ನ ಹೋರಾಟವನ್ನು ಮುಂದುವರಿಸುತ್ತದೆ ಎಂದು ಹೇಳಿದರು.

# ಕೆಂಪು ಸಮುದ್ರದ ಮೂಲಕ ಸುರಕ್ಷಿತ ಸಾಗಣೆಗೆ ಕರೆ

**ನವದೆಹಲಿ, ಆ.7:** ಈ ವಾರದ ಆರಂಭದಲ್ಲಿ ಯೆಮೆನ್ ಕರಾವಳಿಯಲ್ಲಿ ಭಾರತೀಯ ಧ್ವಜಹೊತ್ತ ವಾಣಿಜ್ಯ ಹಡಗು ಮುಳುಗಿದ ನಂತರ ಭಾರತ ಶುಕ್ರವಾರ ತನ್ನ ನಾವಿಕರು ಮತ್ತು ವಾಣಿಜ್ಯ ಹಡಗುಗಳ ಸುರಕ್ಷತೆ ಮತ್ತು ಭದ್ರತೆಯನ್ನು "ಅತ್ಯಂತ ಆದ್ಯತೆಯ" ವಿಷಯವೆಂದು ವಿವರಿಸಿದೆ, ಅಂತರರಾಷ್ಟ್ರೀಯ ಜಲಮಾರ್ಗಗಳ ಮೂಲಕ "ಸುರಕ್ಷಿತ ಮತ್ತು ಅಡೆತಡೆಯಿಲ್ಲದ ಸಂಚರಣೆ"ಗಾಗಿ ತನ್ನ ಕರೆಯನ್ನು ಪುನರುಚ್ಚರಿಸಿದೆ ಮತ್ತು ನಾಗರಿಕ ಹಡಗುಗಳನ್ನು ಗುರಿಯಾಗಿಸದಂತೆ ಎಲ್ಲಾ ಪಕ್ಷಗಳನ್ನು ಒತ್ತಾಯಿಸಿದೆ. ಹಾರ್ಮುಜ್ ಜಲಸಂಧಿಯಲ್ಲಿ ಹಲವಾರು ಸಮುದ್ರ ಹಡಗುಗಳ ಮೇಲಿನ ಇತ್ತೀಚಿನ ದಾಳಿಯನ್ನು ಬಲವಾಗಿ ಖಂಡಿಸಿದ ಭಾರತ, ಈ ಪ್ರದೇಶದಲ್ಲಿ ಅಂತರರಾಷ್ಟ್ರೀಯ ಜಲಮಾರ್ಗಗಳ ಮೂಲಕ ಅಡೆತಡೆಯಿಲ್ಲದ ಸಂಚರಣೆ ಮತ್ತು ವ್ಯಾಪಾರವನ್ನು ಪುನಃಸ್ಥಾಪಿಸಲು ಕರೆ ನೀಡಿದೆ.

ವಾರದ ಮಾಧ್ಯಮಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಗಲ್ಫ್ ಪ್ರದೇಶದಾದ್ಯಂತದ ಭಾರತೀಯ ಕಾರ್ಯಾಚರಣೆಗಳು ಭಾರತೀಯ ನಾವಿಕರು ಮತ್ತು ಹಡಗುಗಳಿಗೆ ಸಹಾಯ ಮಾಡಲು ಕಡಲ ಅಧಿಕಾರಿಗಳೊಂದಿಗೆ ದಿನದ 24 ಗಂಟೆಗಳ ಕಾಲ ಕೆಲಸ ಮಾಡುತ್ತಿವೆ ಎಂದು ಹೇಳಿದರು.

"ಇದು ಹೆಚ್ಚಿನ ಪ್ರಾಮುಖ್ಯತೆಯ ವಿಷಯವಾಗಿದೆ, ಮತ್ತು ನಾವು ಈ ವಿಷಯಕ್ಕೆ ಹೆಚ್ಚಿನ ಆದ್ಯತೆ ನೀಡುತ್ತೇವೆ. ಗಲ್ಫ್ ಪ್ರದೇಶದಾದ್ಯಂತದ ನಮ್ಮ ಕಾರ್ಯಾಚರಣೆಗಳು ಹಡಗು ಸಚಿವಾಲಯದೊಂದಿಗೆ, ಹಾಗೆಯೇ ಆ ದೇಶಗಳಲ್ಲಿನ ಕಡಲ ಅಧಿಕಾರಿಗಳು ಮತ್ತು ಇತರ ಸಂಬಂಧಿತ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕದಲ್ಲಿವೆ, ಇದರಿಂದಾಗಿ ನಮ್ಮ ನಾವಿಕರು ಅಥವಾ ಭಾರತೀಯ ಧ್ವಜ ಹೊಂದಿರುವ ಹಡಗುಗಳಿಗೆ ಯಾವುದೇ ಬೆಂಬಲ ಅಗತ್ಯವಿದ್ದಾಗ, ಅವರು ಅದನ್ನು ಒದಗಿಸಬಹುದು" ಎಂದು ಜೈಸ್ವಾಲ್ ಹೇಳಿದರು.

ಭಾರತೀಯ ಧ್ವಜ ಹೊಂದಿರುವ ವಾಣಿಜ್ಯ ಹಡಗು ಎಂಎಸ್‌ವಿ ಫೈಜ್ ನೂರ್ ಒಲಿಯಾ ಮೇಲೆ ದಾಳಿ ನಡೆಸಿ ನಂತರ ಯೆಮೆನ್ ಕರಾವಳಿಯಲ್ಲಿ ಮುಳುಗಿದ ನಂತರ ಈ ಹೇಳಿಕೆ ಬಂದಿದೆ. ವಿದೇಶಾಂಗ ಸಚಿವಾಲಯವು ಈ ದಾಳಿಯನ್ನು ಈ ಹಿಂದೆ ಖಂಡಿಸಿತ್ತು ಮತ್ತು 13 ಭಾರತೀಯ ಪ್ರಜೆಗಳು ಸೇರಿದಂತೆ ಎಲ್ಲಾ 14 ಸಿಬ್ಬಂದಿಯನ್ನು ಸುರಕ್ಷಿತವಾಗಿ ರಕ್ಷಿಸಲಾಗಿದೆ ಎಂದು ದೃಢಪಡಿಸಿತ್ತು.

# ಹೊಸ ಜವಳಿ-ಉಡುಪು ನೀತಿಯಲ್ಲಿ ಕೈಮಗ್ಗ ಅಭಿವೃದ್ಧಿಗೆ ವಿಶೇಷ ಪ್ಯಾಕೇಜ್

## ಎಂಎಸ್‌ಎಂಇ, ಗಣಿ, ಜವಳಿ ಇಲಾಖೆ ಕಾರ್ಯದರ್ಶಿ ರೋಹಿಣಿ ಸಿಂಧೂರಿ



**ಬೆಂಗಳೂರು, ಆ.7:** ರಾಜ್ಯದ ಶ್ರೀಮಂತ ಕೈಮಗ್ಗ ಪರಂಪರೆಯನ್ನು ಸಂರಕ್ಷಿಸಿ, ನೇಕಾರರ ಜೀವನೋಪಾಯವನ್ನು ಬಲಪಡಿಸುವ ಜೊತೆಗೆ ಕರ್ನಾಟಕದ ಕೈಮಗ್ಗ ಉತ್ಪನ್ನಗಳಿಗೆ ರಾಷ್ಟ್ರೀಯ ಹಾಗೂ ಜಾಗತಿಕ ಮಾರುಕಟ್ಟೆಯಲ್ಲಿ ಹೊಸ ಗುರುತನ್ನು ಸೃಷ್ಟಿಸುವ ಉದ್ದೇಶದಿಂದ, ರಾಜ್ಯ ಸರ್ಕಾರದ ಮುಂಬರುವ ಕರ್ನಾಟಕ ಜವಳಿ ಮತ್ತು ಉಡುಪು ನೀತಿಯಲ್ಲಿ ಕೈಮಗ್ಗ ಕ್ಷೇತ್ರದ ಪ್ರಚಾರಕ್ಕೆ ವಿಶೇಷ ಅನುದಾನ ಮೀಸಲಿಡಲಾಗಿದೆ ಎಂದು ಎಂಎಸ್‌ಎಂಇ, ಗಣಿ ಮತ್ತು ಜವಳಿ ಇಲಾಖೆಯ ಕಾರ್ಯದರ್ಶಿ ರೋಹಿಣಿ ಸಿಂಧೂರಿ ಹೇಳಿದರು.

12ನೇ ರಾಷ್ಟ್ರೀಯ ಕೈಮಗ್ಗ ದಿನಾಚರಣೆ ಅಂಗವಾಗಿ ಬೆಂಗಳೂರಿನಲ್ಲಿ ಶುಕ್ರವಾರ ಆಯೋಜಿಸಲಾದ ರಾಜ್ಯಮಟ್ಟದ ಕಾರ್ಯಕ್ರಮದಲ್ಲಿ ಪ್ರಶಸ್ತಿ ವಿತರಿಸಿ ಮಾತನಾಡಿ, ರಾಜ್ಯದ ಕೈಮಗ್ಗ ಪರಂಪರೆ ಕೇವಲ ಸಾಂಸ್ಕೃತಿಕ ಪರಂಪರೆಯಲ್ಲ; ಸಾವಿರಾರು ನೇಕಾರರ ಜೀವನಾಧಾರವೂ ಹೌದು. ಈ ಪರಂಪರೆಯನ್ನು ಸಂರಕ್ಷಿಸುವುದರ ಜೊತೆಗೆ ಆಧುನಿಕ ಮಾರುಕಟ್ಟೆಯ ಅಗತ್ಯಗಳಿಗೆ ತಕ್ಕಂತೆ ರೂಪಾಂತರ 'ಗೊಳಿಸಿ, ಹೊಸ ತಲೆಮಾರಿಗೆ ತಲುಪಿಸುವ ಜವಾಬ್ದಾರಿ ಸರ್ಕಾರದ ಮೇಲಿದೆ.ವಿಶೇಷ ಅನುದಾನದ ಮೂಲಕ ಕೈಮಗ್ಗ ಕ್ಷೇತ್ರದಲ್ಲಿ ವಿನ್ಯಾಸ ಅಭಿವೃದ್ಧಿ, ಉತ್ಪನ್ನ ಮೌಲ್ಯವರ್ಧನೆ, ಬ್ರ್ಯಾಂಡಿಂಗ್, ಡಿಜಿಟಲ್ ಮಾರುಕಟ್ಟೆ, ಇ-ಕಾಮರ್ಸ್, ಮಾರುಕಟ್ಟೆ ವಿಸ್ತರಣೆ ಹಾಗೂ ನೇಕಾರರ ಸ್ಪರ್ಧಾತ್ಮಕ ಸಾಮರ್ಥ್ಯ ಹೆಚ್ಚಿಸಲು ವಿಶೇಷ ಕಾರ್ಯಕ್ರಮಗಳನ್ನು ಜಾರಿಗೊಳಿಸಲಾಗುವುದು ಎಂದು ತಿಳಿಸಿದರು.

ರಾಷ್ಟ್ರೀಯ ಕೈಮಗ್ಗ ದಿನಾಚರಣೆ ಅಂಗವಾಗಿ ಆಯೋಜಿಸಲಾದ ಕೈಮಗ್ಗ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟ ಮಳಿಗೆಗಳನ್ನು ರೋಹಿಣಿ ಸಿಂಧೂರಿ ಉದ್ಘಾಟಿಸಿದರು.

ಜವಳಿ ಅಭಿವೃದ್ಧಿ ಆಯುಕ್ತ ಎ.ಬಿ. ಬಸವರಾಜು ಮಾತನಾಡಿ, ಕರ್ನಾಟಕದ ಕೈಮಗ್ಗ ಉತ್ಪನ್ನಗಳನ್ನು ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಮತ್ತಷ್ಟು ಸ್ಪರ್ಧಾತ್ಮಕವಾಗಿ ಪರಿಚಯಿಸುವ ಗುರಿಯೊಂದಿಗೆ ಹೊಸ ಜವಳಿ ನೀತಿ ರೂಪಿಸಲಾಗುತ್ತಿದೆ. ನಮ್ಮ ನೇಕಾರರ ಕೌಶಲ್ಯಕ್ಕೆ ಜಾಗತಿಕ ಮನ್ನಣೆ ದೊರಕುವಂತೆ ವಿನ್ಯಾಸ, ತಂತ್ರಜ್ಞಾನ, ಬ್ರ್ಯಾಂಡಿಂಗ್ ಹಾಗೂ ಮಾರುಕಟ್ಟೆ ಸಂಪರ್ಕಕ್ಕೆ ಇಲಾಖೆ ವಿಶೇಷ ಆದ್ಯತೆ ನೀಡುತ್ತಿದೆ ಎಂದರು.

ಮಾಜಿ ಸಚಿವೆ ಹಾಗೂ ವಿಧಾನ ಪರಿಷತ್ ಸದಸ್ಯೆ ಉಮಾಶ್ರೀ ಮಾತನಾಡಿ, ಕೈಮಗ್ಗವು ಕೇವಲ ಒಂದು ವೃತ್ತಿಯಲ್ಲ; ಅದು ನಮ್ಮ ಸಂಸ್ಕೃತಿ, ಸಂಪ್ರದಾಯ ಮತ್ತು ಬದುಕಿನ ಅವಿಭಾಜ್ಯ ಅಂಗವಾಗಿದೆ. ನೇಕಾರರ ಕೈಚಳಕವನ್ನು ಗೌರವಿಸುವುದು ನಮ್ಮ ಪರಂಪರೆಯನ್ನು ಉಳಿಸುವುದಕ್ಕೆ ಸಮಾನ ಎಂದು ಹೇಳಿದರು.



ಬೆಂಗಳೂರಿನ ಶ್ರೀ ಬನಶಂಕರಿ ದೇವಸ್ಥಾನದಲ್ಲಿ ಕೊನೆಯ ಆಷಾಢ ಶುಕ್ರವಾರ (ಕಡೆ ಆಷಾಢ ಶುಕ್ರವಾರ) ಸಾವಿರಾರು ಭಕ್ತರಿಂದ ಆಚರಿಸಲಾಯಿತು

---

### ಕೃಷಿ ಅಧಿಕಾರಿ ಹುದ್ದೆ ಲಿಖಿತ ಪರೀಕ್ಷೆ ದಿಢೀರ್ ರದ್ದು

## ಗ್ರಾಮ ಆಡಳಿತಾಧಿಕಾರಿ ಅರ್ಜಿ ಸಲ್ಲಿಕೆ ಆ.20ರವರೆಗೆ ವಿಸ್ತರಣೆ: ಕೆಇಎ ಪ್ರಕಟಣೆ



**ಬೆಂಗಳೂರು, ಆ.7:** ಸರ್ಕಾರಿ ಹುದ್ದೆಯ ಆಕಾಂಕ್ಷಿಗಳಿಗೆ ಇದೀಗ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಎರಡು ಪ್ರಮುಖ ಪ್ರಕಟಣೆ ಹೊರಡಿಸಿದೆ. ಕೃಷಿ ಇಲಾಖೆಯಲ್ಲಿನ ಕೃಷಿ ಅಧಿಕಾರಿ ಮತ್ತು ಸಹಾಯಕ ಕೃಷಿ ಅಧಿಕಾರಿ ಹುದ್ದೆಗಳ ಭರ್ತಿಗೆ ಇದೇ ಆಗಸ್ಟ್ 8 ಮತ್ತು 9ರಂದು ನಡೆಯಬೇಕಿದ್ದ ಲಿಖಿತ ಪರೀಕ್ಷೆಯನ್ನು ದಿಢೀರ್ ರದ್ದು ಮಾಡಲಾಗಿದೆ.

ಇದರ ಜೊತೆಗೆ, ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅಂತಿಮ ಗಡುವನ್ನು ಸಾರ್ವಜನಿಕರ ಮನವಿಯ ಮೇರೆಗೆ ಆಗಸ್ಟ್ 20ರವರೆಗೆ ವಿಸ್ತರಣೆ ಮಾಡಲಾಗಿದೆ. ಈ ಕುರಿತು ಕೆಇಎ ಕಾರ್ಯನಿರ್ವಾಹಕ ನಿರ್ದೇಶಕರಾದ ಐಎಎಸ್ ಎಚ್. ಪ್ರಸನ್ನ ಅವರು ಅಧಿಕೃತ ಆದೇಶ ಹೊರಡಿಸಿದ್ದಾರೆ.ಈ ನೇಮಕಾತಿಯಲ್ಲಿ 128 ಕೃಷಿ ಅಧಿಕಾರಿ ಹುದ್ದೆಗಳು ಹಾಗೂ 817 ಸಹಾಯಕ ಕೃಷಿ ಅಧಿಕಾರಿ ಹುದ್ದೆಗಳು ಒಳಗೊಂಡಿತ್ತು. ಈ ಹುದ್ದೆಗಳ ಆಯ್ಕೆಗಾಗಿ ಆ.8 ಮತ್ತು 9ರಂದು ರಾಜ್ಯದ ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ ಸ್ಪರ್ಧಾತ್ಮಕ ಲಿಖಿತ ಪರೀಕ್ಷೆಯನ್ನ ನಡೆಸಲು ಸಕಲ ಸಿದ್ಧತೆ ಮಾಡಿ ಕೊಳ್ಳಲಾಗಿತ್ತು. ಆದರೆ, ಕೃಷಿ ಪದವೀಧರರ ಪ್ರತಿಭಟನೆ ಹಾಗೂ ಸರ್ಕಾರದ ನೇರ ನಿರ್ದೇಶನದ ಹಿನ್ನೆಲೆಯಲ್ಲಿ, ಪ್ರಸ್ತುತ ಹೊರಡಿಸಲಾಗಿದ್ದ ನೇಮಕಾತಿ ಅಧಿಸೂಚನೆಗಳನ್ನು ಕೂಡಲೇ ಹಿಂಪಡೆಯುವಂತೆ ಸರ್ಕಾರ ಸೂಚಿಸಿದೆ.

ಸರ್ಕಾರದ ಈ ಆದೇಶದ ಹಿನ್ನೆಲೆಯಲ್ಲಿ, ಕೆಇಎ ಕಾರ್ಯನಿರ್ವಾಹಕ ನಿರ್ದೇಶಕ ಎಚ್. ಪ್ರಸನ್ನ ಅಧಿಸೂಚನೆಗಳನ್ನು ಹಿಂಪಡೆದಿದ್ದು, ಆ.8 ಮತ್ತು 9ರಂದು ನಿಗದಿಯಾಗಿದ್ದ ಲಿಖಿತ ಪರೀಕ್ಷೆಯನ್ನು ಅಧಿಕೃತವಾಗಿ ರದ್ದುಗೊಳಿಸಲಾಗಿದೆ.

---

### ಅನರ್ಹ ಪಡಿತರಚೀಟಿ ರದ್ದುಗೊಳಿಸಲು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಕ್ರಮ

# ಉಚಿತ -ಸಬ್ಸಿಡಿ ಪಡಿತರ ಪಡೆಯಲು ಇ-ಕೆವೈಸಿ ಕಡ್ಡಾಯ




**ಬೆಂಗಳೂರು, ಆ.7:** ಅನರ್ಹ ಪಡಿತರ ಚೀಟಿಗಳನ್ನು ರದ್ದುಗೊಳಿಸಿ, ನೈಜ ಬಡ ಕುಟುಂಬಗಳಿಗೆ ಸರ್ಕಾರದ ಉಚಿತ ಹಾಗೂ ಸಬ್ಸಿಡಿ ರೇಷನ್ ತಲುಪಿಸುವ ಉದ್ದೇಶದಿಂದ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯು ಇ-ಕೆವೈಸಿ ಪ್ರಕ್ರಿಯೆ ಯನ್ನು ಕಡ್ಡಾಯಗೊಳಿಸಿದೆ.

ನಿಗದಿತ ಅವಧಿಯೊಳಗೆ ಇ-ಕೆವೈಸಿ ಪೂರ್ಣಗೊಳಿಸದಿದ್ದರೆ ಪಡಿತರ ವಿತರಣೆ ಸ್ಥಗಿತಗೊಳ್ಳುವ ಸಾಧ್ಯತೆಯಿದೆ. ಇದುವರೆಗೆ ಇ-ಕೆವೈಸಿ ಮಾಡಿಸಲು ನ್ಯಾಯಬೆಲೆ ಅಂಗಡಿಗಳ ಮುಂದೆ ಗಂಟೆಗಟ್ಟಲೆ ಸರದಿಯಲ್ಲಿ ನಿಲ್ಲಬೇಕಿತ್ತು. ಕೆಲವೊಮ್ಮೆ ಸರ್ವರ್ ಸಮಸ್ಯೆಯಿಂದ ಜನರು ರೋಸಿಹೋಗುತ್ತಿದ್ದರು. ಆದರೆ, ಸಾರ್ವಜನಿಕರ ಅನುಕೂಲಕ್ಕಾಗಿ ಸರ್ಕಾರ ಈಗ ಹೊಸ ತಂತ್ರಜ್ಞಾನ ಆಧಾರಿತ ಪರಿಹಾರ ಕಂಡುಕೊಂಡಿದ್ದು, ಜನರು ತಮ್ಮ ಸ್ಮಾರ್ಟ್‌ಫೋನ್ ಮೂಲಕವೇ ಕೇವಲ 2 ನಿಮಿಷಗಳಲ್ಲಿ ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಬಹುದು.

**ಇ-ಕೆವೈಸಿ ಕ್ರಮಗಳೇನು?** ಐದು ವರ್ಷಕ್ಕಿಂತ ಮೇಲ್ಪಟ್ಟ ಕುಟುಂಬದ ಪ್ರತಿಯೊಬ್ಬ ಸದಸ್ಯರೂ ಇ-ಕೆವೈಸಿ ಮಾಡುವುದು ಕಡ್ಡಾಯ ವಾಗಿದೆ. ಮೊಬೈಲ್ ಮೂಲಕ ಪ್ರಕ್ರಿಯೆ ನಡೆಸುವ ಮುನ್ನ ಸಿದ್ಧತೆ ಮಾಡಿಕೊಳ್ಳ ಬೇಕು. ಕುಟುಂಬದ ಎಲ್ಲಾ ಸದಸ್ಯರ ಆಧಾರ್ ಕಾರ್ಡ್‌ಗಳು. ಮೂಲ ಪಡಿತರ ಚೀಟಿ ಆಧಾರ್‌ಗೆ ಲಿಂಕ್ ಆಗಿರುವ ಮೊಬೈಲ್ ನಂಬರ್, ಇ-ಕೆವೈಸಿ ವೇಳೆ ಬರುವ ಒಟಿಪಿ ಪಡೆಯಲು ಈ ಸಂಖ್ಯೆ ಸಕ್ರಿಯ ವಾಗಿರಬೇಕು. ರೇಷನ್ ಕಾರ್ಡ್‌ಗೆ ಆಧಾರ್ ಸಂಖ್ಯೆ ಈಗಾಗಲೇ ಲಿಂಕ್ ಆಗಿದ್ದರೆ ಮಾತ್ರ ಆನ್‌ಲೈನ್‌ನಲ್ಲಿ ಇ-ಕೆವೈಸಿ ಮಾಡಲು ಸಾಧ್ಯ. ಲಿಂಕ್ ಆಗಿರದಿದ್ದರೆ ಒಮ್ಮೆ ನ್ಯಾಯಬೆಲೆ ಅಂಗಡಿ ಅಥವಾ ಕಚೇರಿಗೆ ಭೇಟಿ ನೀಡಿ ಲಿಂಕ್ ಮಾಡಿಸ ಬೇಕಾಗುತ್ತದೆ. ನ್ಯಾಷನಲ್ ಇನ್ಫಾರ್ಮ್ಯಾಟಿಕ್ಸ್ ಸೆಂಟರ್ ಅಭಿವೃದ್ಧಿಪಡಿಸಿರುವ ಮುಖಾ ಧಾರಿತ ಪರಿಶೀಲನೆ ತಂತ್ರಜ್ಞಾನದ ಮೂಲಕ ಅತ್ಯಂತ ಸುಲಭವಾಗಿ ಇ-ಕೆವೈಸಿ ಪೂರ್ಣಗೊಳಿಸ ಬಹುದು.

---

# ಬೆಂಗಳೂರಿನ ಇಎಸ್‌ಐಸಿಯಲ್ಲಿ ಎಲುಬು, ಕೀಲುದಿನ ಆಚರಣೆ

**ಬೆಂಗಳೂರು,ಆ.7:** ಇಂಡಿಯನ್ ಆರ್ಥೋಪೆಡಿಕ್ ಅಸೋಸಿಯೇಷನ್ ನಿಂದ ಎಲುಬು ಮತ್ತು ಕೀಲು ದಿನವನ್ನು ರಾಜಾಜಿನಗರದ ಇಎಸ್‌ಐಸಿ ಆಸ್ಪತ್ರೆಯ ಎಂಸಿಆರ್ ನಲ್ಲಿ ಆಚರಿಸಲಾಯಿತು.

ಆಸ್ಪತ್ರೆಯ ಆವರಣದಲ್ಲಿ ನಡೆದ ಎಲುಬು ಮತ್ತು ಕೀಲು ಸಪ್ತಾಹದ ಹಿನ್ನೆಲೆಯಲ್ಲಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಮೊದಲ ಎರಡು ದಿನಗಳಲ್ಲಿ ಅಸ್ಥಿಚಿಕಿತ್ಸಾ (ಆರ್ಥೋಪೆಡಿಕ್ಸ್) ವಿಭಾಗದಿಂದ ಬಿಎಮ್‌ಡಿ ಶಿಬಿರ ಏರ್ಪಡಿಸಲಾಗಿತ್ತು. ವಿಭಾಗದ ಒಪಿಡಿಯಲ್ಲಿ ಪೋಸ್ಟರ್ ಪ್ರಸ್ತುತಿಗಳ ಮೂಲಕ ಸಾರ್ವಜನಿಕ ಜಾಗೃತಿ ಕಾರ್ಯಕ್ರಮ ನಡೆಸಲಾಯಿತು.

ನಂತರ "ಆಸ್ಟಿಯೋಸಿಸ್" ವಿಷಯದ ಕುರಿತು ಚರ್ಚಾಗೋಷ್ಠಿ ನಡೆಯಿತು.

ಡೀನ್ ಡಾ. ಜಿತೇಂದ್ರ ಕುಮಾರ್ ಕಾರ್ಯಕ್ರಮ ಉದ್ಘಾಟಿಸಿದರು. ಬಿಒಎಸ್ ಅಧ್ಯಕ್ಷ ಡಾ. ಭರತ್ ಕಡಾಡಿ ಮತ್ತು ಕೆಒಎ ನಿಯೋಜಿತ ಅಧ್ಯಕ್ಷ ಡಾ. ಭರತ್ ರಾಜು, ಸಂಘಟನಾ ಸಮಿತಿಯ ಅಧ್ಯಕ್ಷ ಡಾ. ನವೀನ್ ಕುಮಾರ್, ಸಂಘಟನಾ ಕಾರ್ಯದರ್ಶಿ ಡಾ. ಮೋನೇಶ್. ವಿಭಾಗದ ಪ್ರೊಫೆಸರ್ ಮತ್ತು ಮುಖ್ಯಸ್ಥರಾದ ಡಾ. ಪುರುಷೋತ್ತಮ್, ವಿವಿಧ ವಿಭಾಗಗಳ ಇತರ ಅಧ್ಯಾಪಕರು ಮತ್ತು ವೈದ್ಯಕೀಯ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.



---

### ಬೆಂಗಳೂರಿನಲ್ಲಿ ಮುಂದುವರಿದ ಅನಧಿಕೃತ ಬೈಕ್ ಟ್ಯಾಕ್ಸಿಗಳ ವಿರುದ್ಧದ ಕಾರ್ಯಾಚರಣೆ

# ಬೈಕ್ ಟ್ಯಾಕ್ಸಿಗಳ ವಿರುದ್ಧ ಸಮರ; ಆಟೋಗಳಿಗೆ ಭಾರಿ ಬೇಡಿಕೆ



**ಬೆಂಗಳೂರು, ಆ.7:** ಸಿಲಿಕಾನ್ ಸಿಟಿಯಲ್ಲಿ ಅನಧಿಕೃತ ಬೈಕ್ ಟ್ಯಾಕ್ಸಿಗಳ ವಿರುದ್ಧ ಸಾರಿಗೆ ಇಲಾಖೆ ಮತ್ತು ಆರ್‌ಟಿಒ ಅಧಿಕಾರಿಗಳ ಕಾರ್ಯಾಚರಣೆ ಎರಡನೇ ದಿನವೂ ತೀವ್ರಗೊಂಡಿದೆ. ಅಧಿಕಾರಿಗಳ ದಂಡ ಮತ್ತು ಬೈಕ್ ಜಪ್ತಿಗೆ ಹೆದರಿ ಹೆಚ್ಚಿನ ಬೈಕ್ ಟ್ಯಾಕ್ಸಿ ಸವಾರರು ಆಫ್‌ಲೈನ್‌ನಲ್ಲಿ ಉಳಿದಿರುವುದರಿಂದ ನಗರದಲ್ಲಿ ಬೈಕ್ ಟ್ಯಾಕ್ಸಿಗಳ ಓಡಾಟ ಗಣನೀಯವಾಗಿ ಕುಸಿದಿದೆ.

ಇದರ ನೇರ ಪರಿಣಾಮ ಆಟೋರಿಕ್ಷಾಗಳ ಮೇಲಾಗಿದ್ದು, ಆಟೋಗಳ ಬೇಡಿಕೆ ಹೆಚ್ಚಾಗುವುದರ ಜೊತೆಗೆ ದರವೂ ಗಗನಕ್ಕೇರಿದೆ. ಕಡಿಮೆ ವೆಚ್ಚದಲ್ಲಿ ಪ್ರಯಾಣಿಸುತ್ತಿದ್ದ ಸಾರ್ವಜನಿಕರು ಹಾಗೂ ವಿಶೇಷವಾಗಿ ನಮ್ಮ ಮೆಟ್ರೋ ಪ್ರಯಾಣಿಕರು ಲಾಸ್ಟ್ ಮಿನಿಟ್ ಕನೆಕ್ಟಿವಿಟಿಗಾಗಿ ದುಬಾರಿ ಹಣ ತೆರಬೇಕಾದ ಅನಿವಾರ್ಯತೆ ಸೃಷ್ಟಿಯಾಗಿದೆ.

ಬೈಕ್ ಟ್ಯಾಕ್ಸಿಗಳು ರಸ್ತೆಗೆ ಇಳಿಯದ ಕಾರಣ ಮೆಟ್ರೋ ನಿಲ್ದಾಣಗಳಿಂದ ಮನೆ ಹಾಗೂ ಕಚೇರಿಗಳಿಗೆ ತೆರಳುವ ಪ್ರಯಾಣಿಕರು ತೀವ್ರ ಸಂಕಷ್ಟ ಎದುರಿಸುತ್ತಿದ್ದಾರೆ. ಈ ಹಿಂದೆ ಬೈಯಪ್ಪನಹಳ್ಳಿ ಮೆಟ್ರೋ ನಿಲ್ದಾಣದಿಂದ ರಾಮಮೂರ್ತಿ ನಗರಕ್ಕೆ ಬೈಕ್ ಟ್ಯಾಕ್ಸಿಯಲ್ಲಿ 50 ರಿಂದ 60 ರೂಪಾಯಿ ಪಾವತಿಸುತ್ತಿದ್ದ ಪ್ರಯಾಣಿಕರು, ಇದೀಗ ಆಟೋಗಳಿಗೆ 150 ರೂ. ವರೆಗೆ ನೀಡಬೇಕಾದ ಪರಿಸ್ಥಿತಿ ಎದುರಾಗಿದೆ. ಆಟೋಚಾಲಕರಲ್ಲಿ ಎಷ್ಟೇ ಚೌಕಾಶಿ ಮಾಡಿದ್ರೂ ಕೂಡ ಸರ್ಕಾರ ನಿಗದಿಪಡಿಸಿದ ಮೀಟರ್ ದರಕ್ಕೆ ಬರಲು ಚಾಲಕರು ಒಪ್ಪುತ್ತಿಲ್ಲ. ಮತ್ತೊಂದೆಡೆ ಆ್ಯಪ್ ಆಧಾರಿತ ಆಟೋ ಬುಕ್ಕಿಂಗ್‌ಗಳಲ್ಲೂ ಪಿಕಪ್, ಕಂಜೆಶನ್ ಹಾಗೂ ವೇಟಿಂಗ್ ಶುಲ್ಕಗಳ ಹೆಸರಿನಲ್ಲಿ ಹೆಚ್ಚುವರಿ ದರ ವಿಧಿಸಲಾಗುತ್ತಿದೆ. ಟಿಪ್ಸ್ ನೀಡದಿದ್ದರೆ ಆಯಪ್ಗಳ ಮೂಲಕವೂ ಆಟೋ ಸಿಗುತ್ತಿಲ್ಲ ಎಂದು ಪ್ರಯಾಣಿಕರು ಅಳಲು ತೋಡಿಕೊಂಡಿದ್ದಾರೆ. ಖಾಸಗಿ ಬಳಕೆಯ ಅಂದರೆ ವೈಟ್ ಬೋರ್ಡ್‌ಗಳಿರುವ ದ್ವಿಚಕ್ರ ವಾಹನಗಳನ್ನ ವಾಣಿಜ್ಯ ಉದ್ದೇಶಕ್ಕೆ ಬಳಸುತ್ತಿರುವುದನ್ನ ಪತ್ತೆಹಚ್ಚಲು ಆರ್‌ಟಿಒ ಅಧಿಕಾರಿಗಳು ನಗರದಾದ್ಯಂತ ತಪಾಸಣೆ ತೀವ್ರಗೊಳಿಸಿದ್ದಾರೆ. ಗುರುವಾರ ಒಂದೇ ದಿನ ಸುಮಾರು 220 ವಾಹನಗಳನ್ನ ತಪಾಸಣೆ ನಡೆಸಲಾಗಿದ್ದು, ನಿಯಮ ಉಲ್ಲಂಘಿಸಿದ 70 ದ್ವಿಚಕ್ರ ವಾಹನಗಳನ್ನು ಜಪ್ತಿ ಮಾಡಲಾಗಿದೆ.ಇದರಲ್ಲಿ ಬೆಂಗಳೂರು ಪೂರ್ವ ಆರ್‌ಟಿಒ ವ್ಯಾಪ್ತಿಯಲ್ಲೇ ಅತಿಹೆಚ್ಚು ಅಂದರೆ 19 ವಾಹನಗಳನ್ನ ವಶಕ್ಕೆ ಪಡೆಯಲಾಗಿದೆ. ಕಾರ್ಯಾಚರಣೆಯ ಮೊದಲ ದಿನ ಜಪ್ತಿಯಾಗಿದ್ದ 260ಕ್ಕೂ ಹೆಚ್ಚು ವಾಹನಗಳನ್ನ ಸೇರಿಸಿ ಇದುವರೆಗೆ ಒಟ್ಟು 330ಕ್ಕೂ ಅಧಿಕ ಬೈಕ್ ಹಾಗೂ ಸ್ಕೂಟರ್‌ಗಳನ್ನು ಸಾರಿಗೆ ಇಲಾಖೆ ವಶಪಡಿಸಿಕೊಂಡಿದೆ. ತಪಾಸಣೆ ವೇಳೆ ಹೊರರಾಜ್ಯದ ನೋಂದಣಿ ಹೊಂದಿರುವ ಹಲವು ವಾಹನಗಳು ಸಹ ಬೈಕ್ ಟ್ಯಾಕ್ಸಿಯಾಗಿ ಕಾರ್ಯ ನಿರ್ವಹಿಸುತ್ತಿರುವುದು ಪತ್ತೆಯಾಗಿದೆ.

### ನಿಯಮ ಉಲ್ಲಂಘಿಸಿದರೆ ದಂಡ ಹಾಗೂ ಲೈಸೆನ್ಸ್ ರದ್ದು

ಖಾಸಗಿ ನೋಂದಣಿ ವಾಹನಗಳನ್ನು ಬಾಡಿಗೆ ಅಥವಾ ವಾಣಿಜ್ಯ ಉದ್ದೇಶಕ್ಕೆ ಬಳಸುವುದು ಮೋಟಾರು ವಾಹನ ಕಾಯ್ದೆಯ ಸ್ಪಷ್ಟ ಉಲ್ಲಂಘನೆ. ನಿಯಮ ಉಲ್ಲಂಘಿಸುವ ವಾಹನ ಮಾಲೀಕರಿಗೆ ಅಪರಾಧದ ಸ್ವರೂಪಕ್ಕೆ ಅನುಗುಣವಾಗಿ 5,000 ದಿಂದ 10,000 ರೂ.ವರೆಗೆ ದಂಡ ವಿಧಿಸಲಾಗುತ್ತಿದೆ. ಪದೇಪದೇ ಇಂತಹ ಉಲ್ಲಂಘನೆಯಾದರೆ ಚಾಲನಾ ಪರವಾನಗಿ ಅಂದರೆ ಡ್ರೈವಿಂಗ್ ಲೈಸೆನ್ಸ್ ಅಮಾನತು ಹಾಗೂ ವಾಹನದ ನೋಂದಣಿ ಪ್ರಮಾಣಪತ್ರವನ್ನೂ ರದ್ದುಪಡಿಸಲಾಗುವುದು ಎಂದು ಸಾರಿಗೆ ಇಲಾಖೆ ಖಡಕ್ ಎಚ್ಚರಿಕೆ ನೀಡಿದೆ.

ಬೈಕ್ ಟ್ಯಾಕ್ಸಿ ಸೇವೆ ನಿರ್ವಹಿಸಲು ಇರುವ ಕಾನೂನುಬದ್ಧ ಆಧಾರದ ಬಗ್ಗೆ ಸ್ಪಷ್ಟನೆ ನೀಡುವಂತೆ ಕೋರಿ ಟ್ಯಾಕ್ಸಿ ಅಗ್ರಿಗೇಟರ್ ಕಂಪನಿಗಳಿಗೆ ಕಾರಣ ಕೇಳಿ ನೋಟಿಸ್ ಜಾರಿ ಮಾಡಲಾಗಿದೆ. ಕಂಪನಿಗಳು ನೀಡುವ ಉತ್ತರವನ್ನ ಪರಿಶೀಲಿಸಿ ಮುಂದಿನ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಸಾರಿಗೆ ಆಯುಕ್ತರಾದ ಆರ್. ಸೆಲ್ವಮಣಿ ತಿಳಿಸಿದ್ದಾರೆ.

ಬೈಕ್ ಟ್ಯಾಕ್ಸಿಗಳನ್ನ ಸಂಪೂರ್ಣವಾಗಿ ನಿಷೇಧ ಮಾಡಿದರೆ ಈ ಪರಿಣಾಮ ನಿಜಕ್ಕೂ ಸಾಮಾನ್ಯ ಜನರಿಗೆ ಮತ್ತು ಮಧ್ಯಮ ವರ್ಗದ ಪ್ರಯಾಣಿಕರಿಗೆ ತಟ್ಟುತ್ತದೆ. ಹಾಗಾಗಿ, ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನ ಸುಧಾರಿಸಬೇಕು. ಬದಲಿಗೆ, ಕೈಗೆಟುಕುವ ದರದ ಪ್ರಯಾಣದ ಆಯ್ಕೆಯನ್ನ ಕಸಿದುಕೊಳ್ಳುವುದು ಸರಿಯಲ್ಲ ಎಂಬ ಅಭಿಪ್ರಾಯ ಸಾರ್ವಜನಿಕ ವಲಯದಲ್ಲಿ ವ್ಯಕ್ತವಾಗಿದೆ. ಸರ್ಕಾರವು ಬೈಕ್ ಟ್ಯಾಕ್ಸಿಗಳನ್ನ ಸಂಪೂರ್ಣವಾಗಿ ನಿಷೇಧಿಸುವ ಬದಲು, ಸ್ಪಷ್ಟವಾದ ಕಾನೂನು ಚೌಕಟ್ಟು ಮತ್ತು ನಿಯಮಗಳನ್ನ ರೂಪಿಸಿ ಅವುಗಳನ್ನ ನಿಯಂತ್ರಣಕ್ಕೆ ತರಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

---

### ಉತ್ತರ ಬೆಂಗಳೂರಿನ ಸಂಚಾರ ದಟ್ಟಣೆ ಸಮಸ್ಯೆಗೆ ಪರಿಹಾರಕ್ಕಾಗಿ ಬಿಡಿಎಯಿಂದ ಹೊಸ ಯೋಜನೆ ಪ್ರಸ್ತಾವನೆ

# ರಾಜಾಜಿನಗರದ ಡಾ.ರಾಜ್ ಸ್ಮಾರಕದಿಂದ ಬಿಇಎಲ್ ಸರ್ಕಲ್‌ವರೆಗೆ 4.5 ಕಿ.ಮೀ. ಸುರಂಗಮಾರ್ಗ



**ಬೆಂಗಳೂರು, ಆ.7:** ಉತ್ತರ ಬೆಂಗಳೂರಿನಲ್ಲಿ ಹೆಚ್ಚುತ್ತಿರುವ ಸಂಚಾರ ದಟ್ಟಣೆಗೆ ಪರಿಹಾರ ಕಂಡುಕೊಳ್ಳಲು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಮಹತ್ವದ ಯೋಜನೆಯೊಂದನ್ನು ಪ್ರಸ್ತಾಪಿಸಿದೆ.

ರಾಜಾಜಿನಗರದ ಡಾ. ರಾಜ್‌ಕುಮಾರ್ ಸ್ಮಾರಕದಿಂದ ಬಿಇಎಲ್ ಸರ್ಕಲ್‌ವರೆಗೆ ಸುಮಾರು 4.5 ಕಿ.ಮೀ ಉದ್ದದ ಭೂಗತ ಸುರಂಗ ಮಾರ್ಗ ನಿರ್ಮಿಸುವ ಪ್ರಸ್ತಾವನೆ ಇದಾಗಿದೆ. ಹೊಸ ಬಡಾವಣೆಗಳು, ವಸತಿ ಯೋಜನೆಗಳು, ಕಚೇರಿಗಳು ಹಾಗೂ ವಿವಿಧ ಮೂಲಸೌಕರ್ಯ ಅಭಿವೃದ್ಧಿಯಿಂದ ಉತ್ತರ ಬೆಂಗಳೂರಿನ ಪ್ರಮುಖ ರಸ್ತೆಗಳಲ್ಲಿ ವಾಹನ ದಟ್ಟಣೆ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಈ ಹಿನ್ನೆಲೆಯಲ್ಲಿ ಕೆಲವು ವಾಹನಗಳನ್ನು ಭೂಗತ ಮಾರ್ಗಕ್ಕೆ ವರ್ಗಾಯಿಸುವ ಮೂಲಕ ಪ್ರಮುಖ ಜಂಕ್ಷನ್‌ಗಳಲ್ಲಿನ ಸಂಚಾರ ಒತ್ತಡ ಕಡಿಮೆ ಮಾಡುವುದು ಬಿಡಿಎ ಉದ್ದೇಶವಾಗಿದೆ.

ಪ್ರಸ್ತಾವಿತ ಸುರಂಗ ಮಾರ್ಗವು ರಾಜಾಜಿನಗರದ ಡಾ. ರಾಜ್‌ಕುಮಾರ್ ಸ್ಮಾರಕದಿಂದ ಆರಂಭವಾಗಿ ಬಿಇಎಲ್ ಸರ್ಕಲ್ವರೆಗೆ ಸಾಗಲಿದೆ. ಈ ಮಾರ್ಗವು ರಾಜಾಜಿನಗರ, ಯಶವಂತಪುರ, ಮತ್ತಿಕೆರೆ, ನ್ಯೂ ಬಿಇಎಲ್ ರಸ್ತೆ ಹಾಗೂ ಬಿಇಎಲ್ ರಸ್ತೆ ಭಾಗಗಳ ಸಂಚಾರಕ್ಕೆ ಪರೋಕ್ಷವಾಗಿ ಅನುಕೂಲವಾಗುವ ನಿರೀಕ್ಷೆಯಿದೆ. ಸಂಪರ್ಕಿಸುವ ರಸ್ತೆ ಜಾಲದ ಮೂಲಕ ಹೆಬ್ಬಾಳ ಸೇರಿದಂತೆ ಉತ್ತರ ಬೆಂಗಳೂರಿನ ಮತ್ತಷ್ಟು ಪ್ರದೇಶಗಳಿಗೂ ಇದರ ಪ್ರಯೋಜನ ಸಿಗುವ ಸಾಧ್ಯತೆ ಇದೆ. ಈ ಯೋಜನೆಯಿಂದ ರಾಜಾಜಿನಗರ, ಯಶವಂತಪುರ, ಮತ್ತಿಕೆರೆ, ಬಿಇಎಲ್ ರಸ್ತೆ, ನ್ಯೂ ಬಿಇಎಲ್ ರಸ್ತೆ, ಬಿಇಎಲ್ ಸರ್ಕಲ್ ಹಾಗೂ ಹೆಬ್ಬಾಳ ಸೇರಿದಂತೆ ಹಲವು ಪ್ರದೇಶಗಳಿಗೆ ಪ್ರಯೋಜನವಾಗುವ ನಿರೀಕ್ಷೆಯಿದೆ. ರಾಜಾಜಿನಗರದಿಂದ ಉತ್ತರ ಬೆಂಗಳೂರಿನತ್ತ ಪ್ರಯಾಣಿಸುವವರಿಗೆ ಸುಮಾರು 8–10 ನಿಮಿಷ, ಯಶವಂತಪುರದಲ್ಲಿ 6–8 ನಿಮಿಷ, ಮತ್ತಿಕೆರೆಯಲ್ಲಿ 5–7 ನಿಮಿಷ, ಬಿಇಎಲ್ ರಸ್ತೆ ಮತ್ತು ನ್ಯೂ ಬಿಇಎಲ್ ರಸ್ತೆಯಲ್ಲಿ 5–8 ನಿಮಿಷ, ಬಿಇಎಲ್ ಸರ್ಕಲ್ ಭಾಗದಲ್ಲಿ 8–10 ನಿಮಿಷ ಹಾಗೂ ಹೆಬ್ಬಾಳದಿಂದ ವಿಮಾನ ನಿಲ್ದಾಣದತ್ತ ಸಂಪರ್ಕಿಸುವ ಮಾರ್ಗಗಳಲ್ಲಿ ಸುಮಾರು 5–10 ನಿಮಿಷದವರೆಗೆ ಪ್ರಯಾಣದ ಸಮಯ ಉಳಿತಾಯವಾಗುವ ಸಾಧ್ಯತೆ ಇದೆ.

ಸುರಂಗ ಮಾರ್ಗದಿಂದ ಪ್ರಮುಖ ಜಂಕ್ಷನ್‌ಗಳಲ್ಲಿ ಸಂಚಾರ ದಟ್ಟಣೆ ಮತ್ತು ಸಿಗ್ನಲ್‌ಗಳಲ್ಲಿ ಕಾಯುವ ಸಮಯವೂ ಕಡಿಮೆಯಾಗುವ ನಿರೀಕ್ಷೆಯಿದೆ. ರಸ್ತೆಗಳ ಮೇಲಿನ ವಾಹನಗಳ ಒತ್ತಡ ಕಡಿಮೆಯಾಗಬಹುದು. ಸುರಂಗ ಯೋಜನೆ ಜಾರಿಯಾದರೆ ರಾಜಾಜಿನಗರ, ಯಶವಂತಪುರ, ಮತ್ತಿಕೆರೆ, ಬಿಇಎಲ್ ರಸ್ತೆ ಮತ್ತು ಹೆಬ್ಬಾಳ ಸೇರಿದಂತೆ ಸಂಪರ್ಕಿತ ಪ್ರದೇಶಗಳಲ್ಲಿ ಭವಿಷ್ಯದಲ್ಲಿ ರಿಯಲ್ ಎಸ್ಟೇಟ್ ಚಟುವಟಿಕೆ ಹೆಚ್ಚಾಗುವ ಸಾಧ್ಯತೆಯಿದೆ. ಆದರೆ ಆಸ್ತಿ ಬೆಲೆಗಳ ಮೇಲೆ ಯೋಜನೆಯ ನಿಖರ ಪರಿಣಾಮವನ್ನು ಈಗಲೇ ಖಚಿತವಾಗಿ ಹೇಳಲು ಸಾಧ್ಯವಿಲ್ಲ. ಯೋಜನೆಯ ಅನುಷ್ಠಾನ, ಸಂಪರ್ಕ ರಸ್ತೆಗಳು ಮತ್ತು ಒಟ್ಟಾರೆ ಮೂಲಸೌಕರ್ಯ ಅಭಿವೃದ್ಧಿಯ ಮೇಲೆ ಅದು ಅವಲಂಬಿತವಾಗಿರಲಿದೆ.

ಮುಖ್ಯವಾಗಿ, ಈ ಸುರಂಗ ಮಾರ್ಗದ ಯೋಜನೆ ಇನ್ನೂ ಪ್ರಸ್ತಾವನೆ ಹಂತದಲ್ಲಿದೆ. ಸರ್ಕಾರದ ಅನುಮೋದನೆ, ತಾಂತ್ರಿಕ ಅಧ್ಯಯನ, ಭೂಗರ್ಭ ಪರಿಶೀಲನೆ, ಮಾರ್ಗದ ಅಂತಿಮ ಆಯ್ಕೆ ಹಾಗೂ ಯೋಜನೆಯ ವೆಚ್ಚ ಸೇರಿದಂತೆ ಹಲವು ಅಂಶಗಳನ್ನು ಪರಿಶೀಲಿಸಬೇಕಿದೆ. ಅನುಮೋದನೆ ಮತ್ತು ಅಗತ್ಯ ಹಣಕಾಸು ದೊರೆತ ಬಳಿಕವಷ್ಟೇ ಯೋಜನೆಯ ನಿರ್ಮಾಣಕ್ಕೆ ಸಂಬಂಧಿಸಿದ ವೇಳಾಪಟ್ಟಿ ಸಿದ್ಧಪಡಿಸುವ ಸಾಧ್ಯತೆ ಇದೆ.ನಿರ್ಮಾಣ ಕಾಮಗಾರಿ ಆರಂಭವಾದರೆ ಕೆಲವು ರಸ್ತೆಗಳಲ್ಲಿ ಸಂಚಾರ ಮಾರ್ಗ ಬದಲಾವಣೆ ಮಾಡಬೇಕಾಗಬಹುದು. ಸ್ಥಳೀಯ ನಿವಾಸಿಗಳು ಹಾಗೂ ವಾಹನ ಸವಾರರಿಗೆ ತೊಂದರೆ ಕಡಿಮೆ ಮಾಡುವ ರೀತಿಯಲ್ಲಿ ಸಂಚಾರ ನಿರ್ವಹಣಾ ಕ್ರಮಗಳನ್ನು ಕೈಗೊಳ್ಳುವುದು ಕೂಡ ಪ್ರಮುಖವಾಗಲಿದೆ.

---

### ಸಿಸಿಬಿಯಲ್ಲಿ ಪ್ರಕರಣ ದಾಖಲು: ಪೊಲೀಸ್ ಆಯುಕ್ತ ಸೀಮಂತ್‌ಕುಮಾರ್ ಸಿಂಗ್

# ಬಾಂಗ್ಲಾದೇಶಿಗಳು ನಿಮ್ಮ ಮನೆಗಳಿಗೆ ನುಗ್ಗಿ ಬುದ್ಧಿ ಕಲಿಸುತ್ತಾರೆ, ಸಾಮಾಜಿಕ ಜಾಲತಾಣದಲ್ಲಿ ಪೊಲೀಸರಿಗೆ ಸವಾಲು ಹಾಕಿರುವ ಕಿಡಿಗೇಡಿ



**ಬೆಂಗಳೂರು, ಆ.7:** ಅಕ್ರಮ ನೆಲೆಸಿರುವ ಬಾಂಗ್ಲಾದೇಶಿಗರು ನಿಮ್ಮ ಮನೆಗಳಿಗೆ ನುಗ್ಗಿ ಬುದ್ಧಿ ಕಲಿಸುತ್ತಾರೆ ಎಂದು ಸಾಮಾಜಿಕ ಜಾಲತಾಣದಲ್ಲಿ ಬೆಂಗಳೂರು ಪೊಲೀಸರಿಗೆ ಸವಾಲು ಹಾಕಿರುವ ಕಿಡಿಗೇಡಿಯೊಬ್ಬ ಆತಂಕ ಮೂಡಿಸಿದ್ದಾನೆ.

ಪೊಲೀಸರು ಹಾಗೂ ರಾಜಕಾರಣಿಗಳನ್ನೇ ಟಾರ್ಗೆಟ್ ಮಾಡಿ ಮಾತನಾಡಿರುವ ಆತ, ಈಗಾಗಲೇ 25 ಮಂದಿ ಬಾಂಗ್ಲಾದೇಶಿಗರನ್ನು ಕಳುಹಿಸಿದ್ದೇನೆ. ಅವರ ಬಳಿ ಯಾವುದೇ ಐಡಿ ಕಾರ್ಡ್ ಅಥವಾ ಯಾವುದೇ ದಾಖಲೆಗಳಿಲ್ಲ. ನಿಮಗೆ ಧಮ್ ಇದ್ದರೆ ಅವ´ರನ್ನು ಹಿಡಿಯಿರಿ ಎಂದು ಕರ್ನಾಟಕ ಪೊಲೀಸರಿಗೆ ಧಮ್ಕಿ ಹಾಕಿದ್ದಾನೆ.

ಮನೆಗಳಿಗೆ ನುಗ್ಗಿ ಮಾಡಬೇಕಾದ್ದನ್ನು ಮಾಡುತ್ತಾರೆ. ನೀವು ಗಂಡಸರೇ ಆಗಿದ್ದರೆ ಅವರನ್ನು ಹುಡುಕಿ ನಂತರ ನಾನೇ ನಿಮಗೆ ನನ್ನ ವಿಳಾಸ ಕೊಡುತ್ತೇನೆ. ಆಗ ನೀವು ಬೇಕಾದ್ದು ಮಾಡಿಕೊಳ್ಳಿ ಎಂದು ಹೇಳಿರುವ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ಕಿಡಿಗೇಡಿ ಮಾತನಾಡಿರುವ ಶೈಲಿ ಮತ್ತು ಪೊಲೀಸರಿಗೇ ಸವಾಲು ಹಾಕಿ ರಾಜಕಾರಣಿಗಳನ್ನೂ ಟಾರ್ಗೆಟ್ ಮಾಡಿರುವುದು ಸಾಮಾಜಿಕ ಜಾಲತಾಣದಲ್ಲಿ ವ್ಯಾಪಕ ಆತಂಕ ಮೂಡಿಸಿದೆ. ಈ ಬಗ್ಗೆ ಸಿಸಿಬಿಯಲ್ಲಿ ಪ್ರಕರಣ ದಾಖಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ಸೀಮಂತ್‌ಕುಮಾರ್ ಸಿಂಗ್ ತಿಳಿಸಿದ್ದಾರೆ.

ಮಾಧ್ಯಮಗಳ ಜತೆ ಮಾತನಾಡಿದ ಅವರು, ಆತ ಮಂಡ್ಯ ಜಿಲ್ಲೆಯ ಕಿಕ್ಕೇರಿ ನಿವಾಸಿ ಎಂಬುದನ್ನು ಪತ್ತೆಹಚ್ಚಿದ್ದೇವೆ. ವಿದೇಶದಲ್ಲಿರುವ ಆರೋಪಿಯನ್ನು ಬಂಧಿಸಲು ಪ್ರಯತ್ನ ನಡೆಯುತ್ತಿದೆ. ಆತ ಮತ್ತೊಂದು ವಿಡಿಯೋ ಕಳುಹಿಸಿ ಕ್ಷಮೆಯಾಚಿಸಿದ್ದಾನೆ.

ಆದರೂ ಇದನ್ನು ಗಂಭೀರವಾಗಿ ಪರಿಗಣಿಸಿದ್ದೇವೆ ಎಂದು ಆಯುಕ್ತರು ತಿಳಿಸಿದ್ದಾರೆ. ಸಮಾಜದಲ್ಲಿ ಶಾಂತಿ ಮತ್ತು ಸುವ್ಯವಸ್ಥೆ ಕದಡುವ ಹಾಗೂ ಆತಂಕ ಸೃಷ್ಟಿಸುವ ಇಂಥ ಕಿಡಿಗೇಡಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಆಯುಕ್ತರು ಎಚ್ಚರಿಕೆ ನೀಡಿದರು.

---

# ಕೃತಕ ಬುದ್ಧಿಮತ್ತೆ ಒಳ್ಳೆಯ ಗುಲಾಮ, ಕೆಟ್ಟ ಯಜಮಾನ–ಪ್ರೊ.ಲಿಂಗರಾಜ ಗಾಂಧಿ

**ಬೆಂಗಳೂರು,ಆ.7:** ಕೃತಕ ಬುದ್ಧಿಮತ್ತೆಯ ಸಾಧನವನ್ನು ಮಾನವ ಸಮಾಜದ ಸರ್ವತೋಮುಖ ಅಭಿವೃದ್ಧಿಗೆ ಪೂರಕವಾಗಿ ಬಳಸಿಕೊಳ್ಳುವ ಮಾರ್ಗೋಪಾಯಗಳ ಬಗ್ಗೆ ವಿಶ್ವವಿದ್ಯಾಲಯಗಳಲ್ಲಿ ವಿಸ್ತೃತ ಅಧ್ಯಯನ ಮತ್ತು ಸಂವಾದ ನಡೆಸುವ ಅನಿವಾರ್ಯತೆ ಬಂದೊದಗಿದೆ ಎಂದು ಬೆಂಗಳೂರು ನಗರ ವಿಶ್ವ ವಿದ್ಯಾನಿಲಯದ ಮಾಜಿ ಕುಲಪತಿ ಪ್ರೊ.ಲಿಂಗರಾಜ ಗಾಂಧಿಯವರು ಪ್ರತಿಪಾದಿಸಿದರು. ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದಲ್ಲಿರುವ ವೋಲ್ವರ್ ಹ್ಯಾಂಪ್ಟನ್–ಬೆಂಗಳೂರು ಸಂಶೋಧನೆ ಮತ್ತು ಅನ್ವೇಷಣೆ ಕೇಂದ್ರ ಇಂಗ್ಲೆಂಡಿನ ವೋಲ್ವರ್ ಹ್ಯಾಂಪ್ಟನ್ ವಿಶ್ವವಿದ್ಯಾನಿಲಯದ ಸಹಯೋಗದಲ್ಲಿ ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಮುನ್ನಡೆಸಲು ಕೃತಕ ಬುದ್ಧಿಮತ್ತೆಯ ಬಳಕೆ" ಎಂಬ ವಿಷಯದ ಕುರಿತು ಸೆಂಟ್ರಲ್ ಕಾಲೇಜಿನಲ್ಲಿ ಏರ್ಪಡಿಸಲಾಗಿದ್ದ ಅಂತಾರಾಷ್ಟ್ರೀಯ ಸಮ್ಮೇಳನದ ಸಮಾರೋಪ ಸಮಾರಂಭದಲ್ಲಿ ಅವರು ಈ ಅಭಿಪ್ರಾಯ ವ್ಯಕ್ತಪಡಿಸಿದರು.

ಮಾನವ ಬದುಕನ್ನು ಸರ್ವವ್ಯಾಪಿಯಾಗಿ ಆವರಿಸಿಕೊಳ್ಳುತ್ತಿರುವ ಕೃತಕ ಬುದ್ಧಿಮತ್ತೆ 'ಒಬ್ಬ ಒಳ್ಳೆಯ ಸೇವಕ ಮತ್ತು ಕೆಟ್ಟ ಯಜಮಾನ ' ಎಂದು ಬಣ್ಣಿಸಿದ ಅವರು ನೀತಿ ನಿಯಂತ್ರಣ ಹಾಗೂ ನಿರ್ಣಯದ ಅಧಿಕಾರವನ್ನು ಎಂದಿಗೂ ಅದರ ವಶಕ್ಕೊಪ್ಪಿಸಬಾರದೆಂದು ಎಚ್ಚರಿಸಿದರು.

ತಂತ್ರಜ್ಞಾನ ಕೌಶಲ್ಯದ ಕಲಿಕೆಯ ಜೊತೆಗೆ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಾಸಕ್ಕೆ ನೆರವಾಗಬಲ್ಲ ಸಮಾಜ ವಿಜ್ಞಾನ ಮತ್ತು ಮಾನವಿಕ ಶಾಸ್ತ್ರ ವಿಷಯಗಳ ಅಧ್ಯಯನಕ್ಕೂ ಹೆಚ್ಚಿನ ಉತ್ತೇಜನ ನೀಡುವಂತೆ ಅವರು ಇದೇ ಸಂದರ್ಭದಲ್ಲಿ ಸಲಹೆಯಿತ್ತರು. ಗೌರವ ಅತಿಥಿಗಳಾಗಿ ಆಗಮಿಸಿದ್ದ ಕರ್ನಾಟಕ ಸರ್ಕಾರದ ನಿವೃತ್ತ ಮುಖ್ಯ ಕಾರ್ಯದರ್ಶಿಗಳಾದ ಕೆ. ರತ್ನಪ್ರಭಾರವರು ಮಾತನಾಡಿ, ಸಂಪರ್ಕ ಕ್ರಾಂತಿಯ ಪರಿಣಾಮವಾಗಿ ಅಗಾಧ ಪರಿವರ್ತನೆಯ ಹಾದಿಯಲ್ಲಿ ಸಾಗಿ ಬಂದಿರುವ ಮಾನವ ಸಮಾಜ ಕೃತಕ ಬುದ್ಧಿಮತ್ತೆಯ ಸವಾಲನ್ನೂ ಸಮರ್ಥವಾಗಿ ಎದುರಿಸಬಲ್ಲದೆಂದು ತಿಳಿಸಿದರು.

ಕೃತಕ ಬುದ್ಧಿಮತ್ತೆ ಒಂದು ಪರಿಣಾಮಕಾರಿ ಸಾಧನವಾಗಿದ್ದರೂ ಮಾನವ ಮೆದುಳಿನ ಸೃಜನಶೀಲ ಶಕ್ತಿಗೆ ಸಮನಾಗಲಾರದೆಂದು ಅಭಿಪ್ರಾಯಪಟ್ಟ ಅವರು ವಿವೇಕಯುತ ಬಳಕೆಯ ಮೂಲಕ ಸುಸ್ಥಿರ ಅಭಿವೃದ್ಧಿಗೆ ಯುವ ಸಮೂಹ ಮುಂದಾಗಬೇಕೆಂದು ಸೂಚಿಸಿದರು. ಕುಲಪತಿಗಳಾದ ಪ್ರೊ. ರಮೇಶ್.ಬಿ ಮಾತನಾಡಿ, ತಂತ್ರಜ್ಞಾನದ ಬೆಳವಣಿಗೆಯ ಇತಿಹಾಸದಲ್ಲಿ ವಿಜ್ಞಾನದ ಲಾಭವನ್ನು ಕೆಲವೇ ಜನರಿಗೆ ಸೀಮಿತಗೊಳಿಸುವ ವಿಫಲ ಪ್ರಯತ್ನ ನಡೆದಿದ್ದು ಕೃತಕ ಬುದ್ಧಿಮತ್ತೆಯನ್ನೂ ಸರ್ವಜನ ಕಲ್ಯಾಣಕ್ಕೆ ಬಳಸುವತ್ತ ಅಗತ್ಯ ಎಚ್ಚರಿಕೆ ವಹಿಸಬೇಕೆಂದು ವಿವರಿಸಿದರು.

---

# ಲಾಲ್‌ಬಾಗ್‌ನಲ್ಲಿ ಕಲಾ ವನಕ್ಕೆ ಅದ್ಧೂರಿ ಚಾಲನೆ - ಪ್ರಕೃತಿಯ ಮಡಿಲಲ್ಲಿ ಅರಳಿದ ಕಲಾ ಸಂಭ್ರಮ

ಬೆಂಗಳೂರು, ಆ.7: ರೋಟರಿ ಅಂತರರಾಷ್ಟ್ರೀಯ ಜಿಲ್ಲೆ 3191 ಹಾಗೂ 3192ರ ಆಶ್ರಯದಲ್ಲಿ ಲಾಲ್‌ಬಾಗ್ ಸಸ್ಯೋದ್ಯಾನದಲ್ಲಿ ಆಯೋಜಿಸಲಾದ ಕಲಾ ವನ ರೋಟರಿಯ ಹೆಜ್ಜೆ ಕಲಾವಿದರ ಕಡೆಗೆ: ಮುಕ್ತ ಕಲಾ ಪ್ರದರ್ಶನಕ್ಕೆ ಇಂದು ಅದ್ಧೂರಿಯಾಗಿ ಚಾಲನೆ ದೊರೆಯಿತು. ಲಾಲ್‌ಬಾಗ್‌ನ ಪುಷ್ಪ ಪ್ರದರ್ಶನದ ವರ್ಣರಂಜಿತ ಸೊಬಗು, ಪ್ರಕೃತಿಯ ಹಸಿರು ಸಿರಿ ಹಾಗೂ ಕಲಾವಿದರ ಸೃಜನಾತ್ಮಕ ಕಲಾಕೃತಿಗಳು ಒಂದೇ ವೇದಿಕೆಯಲ್ಲಿ ಪ್ರದರ್ಶಿಸುವ ಮೂಲಕ ಕಾರ್ಯಕ್ರಮ ವಿಶಿಷ್ಟ ಕಲಾ ಸಂಭ್ರಮಕ್ಕೆ ಸಾಕ್ಷಿಯಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ರೋಟರಿ ಅಂತರ ರಾಷ್ಟ್ರೀಯ ಜಿಲ್ಲೆ 3191ರ ಜಿಲ್ಲಾ ರಾಜ್ಯಪಾಲ ರೊ. ಡಾ.ಅನಿಲ್ ಗುಪ್ತಾ, ಕಲೆ ಸಮಾಜದ ಆತ್ಮವಾಗಿದ್ದು, ಕಲಾವಿದರಿಗೆ ಪ್ರೋತ್ಸಾಹ ನೀಡುವುದು ಪ್ರತಿಯೊಬ್ಬರ ಸಾಮಾಜಿಕ ಹೊಣೆಗಾರಿಕೆಯಾಗಿದೆ. ಕಲಾವಿದರ ಪ್ರತಿಭೆಯನ್ನು ಜನಸಾಮಾನ್ಯರ ಬಳಿಗೆ ತಲುಪಿಸುವ ಉದ್ದೇಶದಿಂದ ಪ್ರಕೃತಿಯ ಮಡಿಲಲ್ಲೇ ಈ ವಿಶಿಷ್ಟ ಕಲಾ ಪ್ರದರ್ಶನವನ್ನು ಆಯೋಜಿಸ ಾಗಿದೆ. 'ರೋಟರಿಯ ಹೆಜ್ಜೆ ಕಲಾವಿ ದರ ಕಡೆಗೆ' ಎಂಬ ಪರಿಕಲ್ಪನೆ ಕಲಾವಿದರನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸಿ, ಅವರ ಪ್ರತಿಭೆಗೆ ಹೊಸ ಅವಕಾಶಗಳನ್ನು ಕಲ್ಪಿಸುವ ಮಹತ್ವದ ಹೆಜ್ಜೆಯಾಗಿದೆ ಎಂದು ಅಭಿಪ್ರಾಯಪಟ್ಟರು.




ಕೆಪಿಎಸ್‌ಸಿ ಹಗರಣದ ತನಿಖೆಯನ್ನು ಸಿಬಿಐಗೆ ವಹಿಸಬೇಕೆಂದು ಒತ್ತಾಯಿಸಿ ಎಬಿವಿಪಿ ಕಾರ್ಯಕರ್ತರು ಶುಕ್ರವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಅನಿರ್ದಿಷ್ಟಾವಧಿ ಮುಷ್ಕರ ನಡೆಸಿದರು.

ಸಂಸದೆಪ್ರಭಾ ಮಲ್ಲಿಕಾರ್ಜುನ್ ಪ್ರಶ್ನೆಗೆ ಕೇಂದ್ರ ರಾಸಾಯನಿಕ, ರಸಗೊಬ್ಬರ ಸಚಿವಾಲಯ ಮಾಹಿತಿ

# ದಾವಣಗೆರೆ ಜಿಲ್ಲೆಯ ಅಂತರ್ಜಲದ 7 ಮಾದರಿಗಳಲ್ಲಿ ಮಿತಿಗಿಂತ ಹೆಚ್ಚಿನ ನೈಟ್ರೇಟ್ ಪ್ರಮಾಣ ಪತ್ತೆ

**ದಾವಣಗೆರೆ.ಆ.7:** ಜಿಲ್ಲೆಯಲ್ಲಿ ಪರೀಕ್ಷಿಸಲಾದ 19 ಅಂತರ್ಜಲ ಮಾದರಿಗಳ ಪೈಕಿ 7 ಮಾದರಿಗಳಲ್ಲಿ (ಶೇ.36.8) ನೈಟ್ರೇಟ್ ಪ್ರಮಾಣವು ಅನುಮತಿಸಲಾದ ಮಿತಿಗಿಂತ ಹೆಚ್ಚಿರುವುದು ಪತ್ತೆಯಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ರಸಗೊಬ್ಬರಗಳ ಅತಿಯಾದ ಬಳಕೆಯಿಂದ ಅಂತರ್ಜಲ, ಮಣ್ಣಿನ ಆರೋಗ್ಯ ಹಾಗೂ ಪರಿಸರದ ಮೇಲೆ ಉಂಟಾಗುತ್ತಿರುವ ಪರಿಣಾಮಗಳ ಕುರಿತು ದಾವಣಗೆರೆ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಲೋಕಸಭೆಯಲ್ಲಿ ಕೇಳಿದ ಪ್ರಶ್ನೆಗೆ ರಾಸಾಯನಿಕ ಮತ್ತು ರಸಗೊಬ್ಬರಗಳ ಸಚಿವಾಲಯ ಉತ್ತರ ನೀಡಿದೆ.

ದೇಶದ 502 ಜಿಲ್ಲೆಗಳಲ್ಲಿ ನೈಟ್ರೇಟ್ ಮಾಲಿನ್ಯ–ಕೇಂದ್ರ ಅಂತರ್ಜಲ ಮಂಡಳಿ ದೇಶದಾದ್ಯಂತ ಅಂತರ್ಜಲದ ಗುಣಮಟ್ಟವನ್ನು ಮೇಲ್ವಿಚಾರಣೆ ಮಾಡುತ್ತಿದೆ. 2025ರ ವಾರ್ಷಿಕ ಅಂತರ್ಜಲ ಗುಣಮಟ್ಟ ವರದಿಯ ಪ್ರಕಾರ, ಪರೀಕ್ಷಿಸಲಾದ ಮಾದರಿಗಳಲ್ಲಿ ಶೇ.20.71ರಷ್ಟು ಮಾದರಿಗಳಲ್ಲಿ ನೈಟ್ರೇಟ್ ಪ್ರಮಾಣವು ಅನುಮತಿಸಲಾದ 45 ಎಂಜಿ/ಎಲ್ ಮಿತಿಗಿಂತ ಹೆಚ್ಚಿದೆ. ದೇಶದ 26 ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶಗಳ 502 ಜಿಲ್ಲೆಗಳ ಕೆಲವು ಭಾಗಗಳಲ್ಲಿ ನೈಟ್ರೇಟ್ ಮಾಲಿನ್ಯ ಕಂಡುಬಂದಿದೆ.ಕರ್ನಾಟಕದಲ್ಲಿ ಪರೀಕ್ಷಿಸಲಾದ 398 ಅಂತರ್ಜಲ ಮಾದರಿಗಳ ಪೈಕಿ ಶೇ 45.48ರಷ್ಟು ಮಾದರಿಗಳಲ್ಲಿ ನೈಟ್ರೇಟ್ ಪ್ರಮಾಣ ನಿಗದಿತ ಮಿತಿಗಿಂತ ಹೆಚ್ಚಿದೆ. ರಾಜ್ಯದ 27 ಜಿಲ್ಲೆಗಳ ಕೆಲವು ಭಾಗಗಳು ನೈಟ್ರೇಟ್ ಮಾಲಿನ್ಯದಿಂದ ಬಾಧಿತವಾಗಿದ್ದು, ದಾವಣಗೆರೆಯೂ ಈ ಪಟ್ಟಿಯಲ್ಲಿದೆ. ಅತಿಯಾದ ಸಾರಜನಕ ಬಳಕೆಯಿಂದ ಮಣ್ಣಿನ ಆರೋಗ್ಯಕ್ಕೆ ಧಕ್ಕೆ–ಭಾರತೀಯ ಕೃಷಿ ಸಂಶೋಧನಾ ಪರಿಷತ್ (ಐಸಿಎಆರ್) ನಡೆಸಿರುವ ದೀರ್ಘಕಾಲೀನ ಅಧ್ಯಯನಗಳಲ್ಲಿ ಪೋಷಕಾಂಶಗಳ ಅಸಮತೋಲಿತ ಬಳಕೆ, ವಿಶೇಷವಾಗಿ ಸಾರಜನಕಯುಕ್ತ ರಸಗೊಬ್ಬರಗಳ ಅತಿಯಾದ ಬಳಕೆಯಿಂದ ಬೆಳೆ ಇಳುವರಿ ಹಾಗೂ ಮಣ್ಣಿನ ಆರೋಗ್ಯ ಕುಸಿಯುವ ಸಾಧ್ಯತೆ ಇರುವುದು ಕಂಡುಬಂದಿದೆ. ಹೆಚ್ಚುವರಿ ಸಾರಜನಕವು ನೈಟ್ರೇಟ್ ರೂಪದಲ್ಲಿ ಅಂತರ್ಜಲಕ್ಕೆ ಸೋರಿಕೆಯಾಗುತ್ತದೆ. ವಿಶೇಷವಾಗಿ ಯೂರಿಯಾದಂತಹ ಸಾರಜನಕಯುಕ್ತ ರಸಗೊಬ್ಬರಗಳ ಅಸಮತೋಲಿತ ಬಳಕೆಯಿಂದ ಮಣ್ಣಿನ ಆಮ್ಲೀಯತೆ ಅಥವಾ



ಮಣ್ಣಿನ ಆರೋಗ್ಯ ಕಾರ್ಡ್–ಕಳೆದ ಐದು ವರ್ಷಗಳಲ್ಲಿ ದಾವಣಗೆರೆ ಜಿಲ್ಲೆಯ ರೈತರಿಗೆ 51,380 ಮಣ್ಣಿನ ಆರೋಗ್ಯ ಕಾರ್ಡ್‌ಗಳನ್ನು ವಿತರಿಸಲಾಗಿದೆ. ಮಣ್ಣಿನ 12 ಮಾನದಂಡಗಳನ್ನು ಪರೀಕ್ಷಿಸಿ, ಅದರ ಆಧಾರದಲ್ಲಿ ಬೆಳೆಗಳಿಗೆ ಅಗತ್ಯವಿರುವ ಪೋಷಕಾಂಶಗಳ ಕುರಿತು ರೈತರಿಗೆ ಶಿಫಾರಸು ನೀಡಲಾಗುತ್ತಿದೆ. ದೇಶದಾದ್ಯಂತ 2014–15ರಿಂದ ಈವರೆಗೆ 25.90 ಕೋಟಿ ಮಣ್ಣಿನ ಆರೋಗ್ಯ ಕಾರ್ಡ್‌ಗಳನ್ನು ಸಿದ್ಧಪಡಿಸಿ ಅಥವಾ ವಿತರಿಸಲಾಗಿದ್ದು, 8,313 ಮಣ್ಣು ಪರೀಕ್ಷಾ ಪ್ರಯೋಗಾಲಯಗಳನ್ನು ಸ್ಥಾಪಿಸಲಾಗಿದೆ.2,400 ಹೆಕ್ಟೇರ್‌ನಲ್ಲಿ ನೈಸರ್ಗಿಕ ಕೃಷಿ–ರಾಷ್ಟ್ರೀಯ ನೈಸರ್ಗಿಕ ಕೃಷಿ ಮಿಷನ್ ಅಡಿಯಲ್ಲಿ ದಾವಣಗೆರೆ ಜಿಲ್ಲೆಯಲ್ಲಿ 48 ಕ್ಲಸ್ಟರ್‌ಗಳಲ್ಲಿ 2,400 ಹೆಕ್ಟೇರ್ ಪ್ರದೇಶದಲ್ಲಿ ನೈಸರ್ಗಿಕ ಕೃಷಿಯನ್ನು ಉತ್ತೇಜಿಸಲಾಗುತ್ತಿದೆ. ಕರ್ನಾಟಕದಾದ್ಯಂತ 1,272 ಕ್ಲಸ್ಟರ್‌ಗಳಲ್ಲಿ ನೈಸರ್ಗಿಕ ಹಾಗೂ ಸಾವಯವ ಕೃಷಿಗೆ ಪ್ರೋತ್ಸಾಹ ನೀಡಲಾಗುತ್ತಿದೆ. ಮಣ್ಣು ಪರೀಕ್ಷೆ ಆಧಾರಿತ ಸಮತೋಲಿತ ರಸಗೊಬ್ಬರ ಬಳಕೆಯೊಂದಿಗೆ ನ್ಯಾನೋ ಯೂರಿಯಾ, ನ್ಯಾನೋ ಡಿಎಪಿ, ಎಫ್‌ಒಎಂ, ಎಲ್‌ಎಫ್‌ಒಎಂ, ಹಸಿರು ಗೊಬ್ಬರ ಹಾಗೂ ಜೈವಿಕ ರಸಗೊಬ್ಬರಗಳ ಬಳಕೆಯನ್ನೂ ರಾಜ್ಯದಲ್ಲಿ ಉತ್ತೇಜಿಸಲಾಗುತ್ತಿದೆ. ಕರ್ನಾಟಕದಲ್ಲಿ ಇದುವರೆಗೆ 10,85,560 ಬಾಟಲಿ ನ್ಯಾನೋ ಯೂರಿಯಾ ಮತ್ತು 4,77,610 ಬಾಟಲಿ ನ್ಯಾನೋ ಡಿಎಪಿ ಮಾರಾಟವಾಗಿದೆ ಎಂದು ಉತ್ತರದಲ್ಲಿ ತಿಳಿಸಲಾಗಿದೆ.

**ವಸುಂಧರಾಮೃತ ಯೋಜನೆಗೆ 14.78 ಲಕ್ಷ ರೂ.:** ದಾವಣಗೆರೆ ಜಿಲ್ಲೆಯಲ್ಲಿ ಮಣ್ಣಿನ ಸಾವಯವ ಇಂಗಾಲದ ಪ್ರಮಾಣ ಹಾಗೂ ಫಲವತ್ತತೆಯನ್ನು ಹೆಚ್ಚಿಸುವ ಉದ್ದೇಶ ದಿಂದ ವಸುಂಧರಾಮೃತ ಯೋಜನೆಯಡಿ ರೈತರಿಗೆ ಶೇ.75ರ ಸಹಾಯಧನದಲ್ಲಿ ಹಸಿರು ಗೊಬ್ಬರದ ಬೀಜಗಳನ್ನು ವಿತರಿಸಲು 14.78 ಲಕ್ಷ ರೂ. ಮೀಸಲಿಡಲಾಗಿದೆ. 2026–27ನೇ ಸಾಲಿನಲ್ಲಿ ಜಿಲ್ಲೆಯಲ್ಲಿ 1,659.62 ಹೆಕ್ಟೇರ್ ಪ್ರದೇಶಕ್ಕೆ ಹಸಿರು ಗೊಬ್ಬರದ ಬೀಜ ವಿತರಿಸಲು 47.54 ಲಕ್ಷ ರೂ., 1,627 ಹೆಕ್ಟೇರ್ ಪ್ರದೇಶದಲ್ಲಿ ಸೂಕ್ಷ್ಮ ಪೋಷಕಾಂಶ ಮತ್ತು ಮಣ್ಣಿನ ಗುಣವರ್ಧಕಗಳ ಬಳಕೆಗೆ 38.68 ಲಕ್ಷ ರೂ. ಹಾಗೂ 308.40 ಹೆಕ್ಟೇರ್ ಪ್ರದೇಶದಲ್ಲಿ ಸಾವಯವ ಕೃಷಿ ಒಳಪದರಾರ್ಥಗಳಿಗೆ 7.71 ಲಕ್ಷ ರೂ. ಗುರಿ ನಿಗದಿಪಡಿಸಲಾಗಿದೆ.

ಸುಸ್ಥಿರ ರಸಗೊಬ್ಬರ ಬಳಕೆಗೆ ಕ್ರಮ–ರಾಸಾಯನಿಕ ರಸಗೊಬ್ಬರಗಳ ವಿವೇಚನಾಯುಕ್ತ ಬಳಕೆ ಹಾಗೂ ಪರಿಸರ ಸ್ನೇಹಿ ಕೃಷಿ ಪದ್ಧತಿಗಳನ್ನು ಉತ್ತೇಜಿಸಲು ಸಮಗ್ರ ಪೋಷಕಾಂಶ ನಿರ್ವಹಣೆ (ಮಣ್ಣಿನ ಆರೋಗ್ಯ ಕಾರ್ಡ್, ರಾಷ್ಟ್ರೀಯ ನೈಸರ್ಗಿಕ ಕೃಷಿ ಮಿಷನ್, ಪರಂಪರಾಗತ ಕೃಷಿ ವಿಕಾಸ ಯೋಜನೆ ಬಳಕೆಗೆ ಉತ್ತೇಜನ ಹಾಗೂ ಸಾವಯವ ಗೊಬ್ಬರಗಳಿಗೆ ಮಾರುಕಟ್ಟೆ ಅಭಿವೃದ್ಧಿ ಸಹಾಯ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಜಾರಿಗೊಳಿಸಲಾಗುತ್ತಿದೆ ಎಂದು ಕೇಂದ್ರ ಸರ್ಕಾರ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರ ಪ್ರಶ್ನೆಗೆ ನೀಡಿದ ಉತ್ತರದಲ್ಲಿ ತಿಳಿಸಿದೆ.

# ಎತ್ತರಕ್ಕೆ ಬೆಳೆದವರ ವಿರುದ್ಧ ರಾಜಕೀಯ ಪಿತೂರಿ ಸಹಜ: ಸಚಿವ ಜಮೀರ್ ಖಾನ್ ಮಾರ್ಮಿಕ ನುಡಿ

**ಚಿತ್ರದುರ್ಗ, ಆ.7:** ಬಳ್ಳಾರಿ ಜಿಲ್ಲೆಯ ಸಚಿವ ಬಿ. ನಾಗೇಂದ್ರ ವಿರುದ್ಧ ಕೇಳಿಬಂದಿದ್ದ ಆರೋಪಗಳ ಕುರಿತು ವಿಶೇಷ ತನಿಖಾ ದಳ (ಎಸ್‌ಐಟಿ) ತನಿಖೆ ನಡೆಸಿ ಕ್ಲೀನ್‌ಚಿಟ್ ನೀಡಿದೆ. ಹೀಗಿದ್ದರೂ ಪ್ರಕರಣ ಎಲ್ಲಿ ಬಾಕಿ ಇದೆ ಎಂದು ಸಚಿವ ಜಮೀರ್ ಅಹ್ಮದ್ ಖಾನ್ ಪ್ರಶ್ನಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎತ್ತರಕ್ಕೆ ಬೆಳೆದವರ ವಿರುದ್ಧ ರಾಜಕೀಯವಾಗಿ ಪಿತೂರಿ ನಡೆಸುವುದು ಸಹಜ. ಸಾಮಾನ್ಯ ಜನರ ಮೇಲೆ ಈ ರೀತಿಯ ಪಿತೂರಿಗಳು ನಡೆಯುವುದಿಲ್ಲ. ಬಿ. ನಾಗೇಂದ್ರ ಅವರು ರಾಜಕೀಯವಾಗಿ ಎತ್ತರಕ್ಕೆ ಬೆಳೆದಿರುವ ಕಾರಣ ಅವರ ವಿರುದ್ಧ ಪಿತೂರಿ ನಡೆಯುತ್ತಿದೆ ಎಂದು ಆರೋಪಿಸಿದರು. ನನ್ನ ವಿರುದ್ಧವೂ ಎತ್ತರಕ್ಕೆ ಬೆಳೆದಿದ್ದೇನೆ ಎಂಬ ಕಾರಣಕ್ಕೆ ಕೆಲವರು ಹಲವು ರೀತಿಯ ಷಡ್ಯಂತ್ರಗಳನ್ನು ನಡೆಸಿದ್ದರು. ರಾಜಕೀಯದಲ್ಲಿ ಇಂತಹ ಬೆಳವಣಿಗೆಗಳು ಸಹಜ ಎಂದು ಜಮೀರ್ ಅಹದ್ ಖಾನ್ ಹೇಳಿದರು.

ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಏನು ಬೇಕಾದರೂ ಹೇಳಲಿ. ಅವರ ಹೇಳಿಕೆಗಳನ್ನು ಸವಾಲಾಗಿ ಸ್ವೀಕರಿಸಿ, 2028ರ ವಿಧಾನಸಭಾ ಚುನಾವಣೆಯಲ್ಲಿ ಮತ್ತೆ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರುವ ನಿಟ್ಟಿನಲ್ಲಿ ಕೆಲಸ ಮಾಡುತ್ತೇವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ದೇಶದಲ್ಲಿ ರಾಜಕೀಯ ಕಾರಣಕ್ಕಾಗಿ ಜಾತಿ ಮತ್ತು ಧರ್ಮದ ಹೆಸರಿನಲ್ಲಿ ತಾರತಮ್ಯ ಸೃಷ್ಟಿಸಲಾಗುತ್ತಿದೆ. ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ




ಎಲ್ಲ ಧರ್ಮದವರೂ ಒಗ್ಗಟ್ಟಾಗಿ ಹೋರಾಡಿದ್ದರು. ಆದರೆ ಸ್ವಾತಂತ್ರ್ಯ ನಂತರ ಕೆಲವರು ವಿವಿಧ ಜಾತಿ ಮತ್ತು ಧರ್ಮದ ಹೆಸರಿನಲ್ಲಿ ತಾರತಮ್ಯ ಮಾಡುತ್ತಿದ್ದಾರೆ. ಒಗ್ಗಟ್ಟಿನಿಂದ ಬದುಕುವ ಜನರ ನಡುವೆ ಜಾತಿ–ಧರ್ಮ ಬಿತ್ತುತ್ತಿದ್ದಾರೆ ಎಂದು ಜಮೀರ್ ಅಹದ್ ಖಾನ್ ಹೇಳಿದರು.

# ಸಾರ್ವಜನಿಕ ಸ್ಥಳದಲ್ಲಿ ಕಸ ಹಾಕುವವರಿಗೆ ದಂಡ ಹಾಕಿ: ಸಚಿವ ಯತೀಂದ್ರ ಸೂಚನೆ

**ಬೀದರ್, ಆ. 7:** ನಗರದಲ್ಲಿ ನಿತ್ಯ 110 ಟನ್ ತ್ಯಾಜ್ಯ ಸಂಗ್ರಹವಾಗುತ್ತಿದೆ. ಆದರೆ, ತ್ಯಾಜ್ಯ ಸಂಸ್ಕರಣೆಯ ಘಟಕವೇ ಇಲ್ಲ. ನಿತ್ಯ ಕಸದ ಗುಡ್ಡೆ ಹಾಕಿದರೆ ಹೇಗೆ? ಅದು ಬೆಳೆಯುತ್ತಲೇ ಹೋಗುತ್ತದೆ. ಇದಕ್ಕಾಗಿ ಸೂಕ್ತ ಯೋಜನೆ ರೂಪಿಸಿ, ಆದಷ್ಟು ಶೀಘ್ರ ಅನುಷ್ಠಾನಗೊಳಿಸಬೇಕು. ಜನರಿಂದ ನಿತ್ಯ ಕಸ ಸಂಗ್ರಹವಾಗಬೇಕು. ಸಾರ್ವಜನಿಕ ಸ್ಥಳದಲ್ಲಿ ಕಸ ಹಾಕಿದವರಿಗೆ ದಂಡ ಹಾಕಿ ಎಂದು ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ನಡೆದ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಹಸಿಕಸ ಹಾಗೂ ಒಣಕಸವನ್ನು ವಿಂಗಡಿಸಿ ಕೊಡುವುದರ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು. ಜನರಿಗೆ ಡಸ್ಟ್ ಬೀನ್‌ಗಳನ್ನು ಕೊಡುತ್ತಿರೋ



ಅಥವಾ ಬೇರೇನೋ ಮಾಡುತ್ತಿರೋ ಗೊತ್ತಿಲ್ಲ. ಆದರೆ, ಮೂಲದಲ್ಲೇ ತ್ಯಾಜ್ಯ ಪ್ರತ್ಯೇಕಿಸುವ ಕೆಲಸವಾಗಬೇಕು. ಸಾರ್ವಜನಿಕ ಸ್ಥಳದಲ್ಲಿ ಕಸ ಹಾಕುವವರ ಮೇಲೆ ದಂಡ ವಿಧಿಸಬೇಕು. ಇತರೆ ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಾದ ಉತ್ತಮ ಕೆಲಸವನ್ನು ನೋಡಿಕೊಂಡು ಜಾರಿಗೆ ತರಬೇಕು. ತ್ಯಾಜ್ಯ ಸಂಸ್ಕರಣಾ ಘಟಕ ನಿರ್ಮಾಣಕ್ಕೆ ಕೂಡಲೇ ಪ್ರಸ್ತಾವ ಕಳಿಸಿಕೊಡಬೇಕು ಎಂದು ನಿರ್ದೇಶನ ನೀಡಿದರು. ಬೀದರ್ ನಗರದಲ್ಲಿ ಸಾರ್ವಜನಿಕ ಶೌಚಾಲಯಗಳ ಸ್ಥಿತಿಗತಿ ಹೇಗಿದೆ ಎಂದು ಕೇಳಿದಕ್ಕೆ ಪ್ರತಿಕ್ರಿಯಿಸಿದ ಪಾಲಿಕೆ ಆಯುಕ್ತ ಮುಕುಲ್ ಜೈನ್, ಸರಿಯಾದ ನಿರ್ವಹಣೆ ಇರಲಿಲ್ಲ. ಆದಕಾರಣ ಗುತ್ತಿಗೆ ರದ್ದುಪಡಿಸಲಾಗಿದೆ ಎಂದು ತಿಳಿಸಿದರು.

ನಗರದ ರಸ್ತೆ ಗುಂಡಿಗಳ ದುರಸ್ತಿ ಕಾಮಗಾರಿಗಳಿಗೆ ವೇಗ ನೀಡಬೇಕು. ಎಲ್ಲಾ ರಸ್ತೆಗಳಲ್ಲಿರುವ ಗುಂಡಿಗಳನ್ನು ಆದಷ್ಟು ಬೇಗ ಮುಚ್ಚಿಸಬೇಕು. ಅತಿಕ್ರಮಣವಾಗಿರುವ ಪಾದಚಾರಿ ಮಾರ್ಗ ತೆರವುಗೊಳಿಸಲು ಕ್ರಮ ವಹಿಸಬೇಕೆಂದು ತಾಕೀತು ಮಾಡಿದರು.

ನಗರದಲ್ಲಿ ಮೆಗಾ ಮಾರುಕಟ್ಟೆ ನಿರ್ಮಿಸಿ ಸಣ್ಣಪುಟ್ಟ ವ್ಯಾಪಾರಿಗಳಿಗೆ ವ್ಯಾಪಾರ ಮಾಡಲು ಅನುಕೂಲ ಮಾಡಿಕೊಡಬೇಕು. ದೊಡ್ಡ ವ್ಯಾಪಾರಿಗಳು ಹೇಗೋ ವ್ಯವಸ್ಥೆ ಮಾಡಿಕೊಳ್ಳುತ್ತಾರೆ. ಸಣ್ಣ ವ್ಯಾಪಾರಿಗಳ ಹಿತ ಕಾಪಾಡಬೇಕು. ತೆರಿಗೆ ಸಂಗ್ರಹ ಕೂಡ ಹೆಚ್ಚಿಸಬೇಕು. ಪ್ರತಿಯೊಂದು ಅಂಗಡಿಗಳು ಟ್ರೇಡ್ ಲೈಸನ್ಸ್ ಕಡ್ಡಾಯವಾಗಿ ಹೊಂದಿರಬೇಕು. ಟ್ರೇಡ್ ಲೈಸನ್ಸ್ ಹೊಂದಿರದ ಅಂಗಡಿಗಳಿಗೆ ಅನುಮತಿ ನೀಡಬಾರದು ಎಂದರು.

## ಕಡೇಚೂರ್ ಕೈಗಾರಿಕಾ ಘಟಕ ದುರಂತ ಸ್ಥಳ ಪರಿಶೀಲಿಸಿದ ಬಿಜೆಪಿ ತಂಡ

# ತುರ್ತು ತನಿಖೆಗೆ ಸರ್ಕಾರಕ್ಕೆ ಡಾ.ಉಮೇಶ್ ಜಾಧವ್ ಒತ್ತಾಯ



**ಯಾದಗಿರಿ, ಆ.07:**ಕಡೇಚೂರ್ ಕೈಗಾರಿಕಾ ಪ್ರದೇಶದ ಕಂಪನಿಯಲ್ಲಿ ಸಂಭವಿಸಿದ ದುರಂತದಲ್ಲಿ ಮೂವರು ಸಾವನ್ನಪ್ಪಿದ ಘಟನೆ ಹಾಗೂ ಬಾಡಿಯಾಳ ಕೈಗಾರಿಕಾ ಪ್ರದೇಶ ವ್ಯಾಪ್ತಿಯಲ್ಲಿನ ಪರಿಸರ ಮಾಲಿನ್ಯದ ಬಗ್ಗೆ ಪರಿಶೀಲನೆಗಾಗಿ ಮಾಜಿ ಸಂಸದರಾದ ಡಾ. ಉಮೇಶ್ ಜಾಧವ್ ನೇತೃತ್ವದ ಬಿಜೆಪಿ ತಂಡವು ಭೇಟಿ ಮಾಡಿ ಘಟನೆಯನ್ನು ತುರ್ತು ಸಮಸ್ಯೆ ಎಂದು ಘೋಷಿಸಿ ಕೂಡಲೇ ಸಮಗ್ರ ತನಿಖೆ ಕೈಗೊಳ್ಳುವಂತೆ ಒತ್ತಾಯಿಸಿದರು.

ಡಾ. ಉಮೇಶ್ ಜಾಧವ್ ನೇತೃತ್ವದ ಬಿಜೆಪಿ ನಾಯಕರ ತಂಡವು ಶುಕ್ರವಾರ (ಆಗಸ್ಟ 7 ರಂದು) ಕಡೇ ಚೂರ್ ಕೈಗಾರಿಕಾ ಪ್ರದೇಶಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ನಂತರ ಮಾತನಾಡಿ ಇದು ಸರಕಾರದ ತೀವ್ರ ನಿರ್ಲಕ್ಷಕ್ಕೆ ಸಾಕ್ಷಿಯಾದ ಘಟನೆಯಾಗಿದೆ. ದುರಂತ ನಡೆದ ಕೈಗಾರಿಕಾ ಕಂಪನಿಯಲ್ಲಿ ಒಟ್ಟು 35 ಜನ ಕಾರ್ಮಿಕರದ್ದು ಒಬ್ಬ ಎಚ್‌ಆರ್ ಮತ್ತು ಒಬ್ಬ ಮ್ಯಾನೇಜರ್ ಕೆಲಸ ನಿರ್ವಹಿಸುತ್ತಿದ್ದು ದುರಂತ ಘಟನೆ ಯಲ್ಲಿ ಮಧ್ಯಪ್ರದೇಶದ ಇಬ್ಬರು ಹಾಗೂ ತೆಲಂಗಾಣದ ಒಬ್ಬರು ಜೀವ ಕಳೆದುಕೊಂಡಿದ್ದಾರೆ. ಒಬ್ಬರು ಗಂಭೀರ ಸ್ಥಿತಿಯಲ್ಲಿದ್ದು ಮೂವರು ಗಾಯಗೊಂಡಿದ್ದಾರೆ.

ಕಾರ್ಮಿಕ ಕಾನೂನು ಹಾಗೂ ಪರಿಸರ ಮಾಲಿನ್ಯ ಕಾನೂನುಗಳನ್ನು ಸಂಪೂರ್ಣವಾಗಿ ನಿರ್ಲಕ್ಷಿಸಿದ ಕೈಗಾರಿಕಾ ಪ್ರದೇಶದ ಕಂಪನಿಯಿಂದ ಇಂತಹ ದುರಂತ ಸಂಭವಿಸಿದೆ. ಯಾದಗಿರಿ, ಗುರುಮಠಕಲ್, ಸೈದಾಪುರ, ಬಾಡಿಯಾಳ, ಕಡೇಚೂರ್ ವ್ಯಾಪ್ತಿಯ ಜನರು ವಿಷ ಬೆರೆತ ಮಲಿನ ನೀರು ಹರಿಯುವ ಪ್ರದೇಶದಲ್ಲಿ ಜೀವನ ಮಾಡುತ್ತಿದ್ದು ಮನುಷ್ಯ ಬದುಕು ಪ್ರಾಣಿಗಳಿಗಿಂತ ಕಡೆಯಾಗಿದೆ. ನೀರಿನ ಕೆಟ್ಟ ವಾಸನೆಯಿಂದ ಬದುಕು ದುಸ್ತರವಾಗಿದೆ.

ಬಿಜೆಪಿ ತಂಡವು ಯಾವುದೇ ರಾಜಕೀಯ ಮಾಡಲು ಎಲ್ಲಿಗೆ ಭೇಟಿ ನೀಡಿಲ್ಲ.ಜನರ ಸಮಸ್ಯೆಗೆ ಸ್ಪಂದಿಸಲು ಭೇಟಿ ಮಾಡಿದೆ. ಘಟನೆಯನ್ನು ತುರ್ತು ಸಮಸ್ಯೆ ಎಂದು ಸರಕಾರವು ಪರಿಗಣಿಸಿ ಕೂಡಲೇ ಸುರಕ್ಷತಾ ಕ್ರಮ ಸೇರಿದಂತೆ ಎಲ್ಲಾ ಮುಂಜಾಗ್ರತೆ ಕ್ರಮಗಳನ್ನು ಕೈಗೊಳ್ಳಬೇಕು. ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳು ಹಾಗೂ ಇತರ ಅಧಿಕಾರಿಗಳ ಜೊತೆ ಚರ್ಚಿಸಲಾಗಿದೆ. ಪರಿಸರ ಇಲಾಖೆಯ ಸದಸ್ಯ ಕಾರ್ಯದರ್ಶಿಗಳಾದ ಗೋಕುಲ್ ಅವರೊಂದಿಗೆ ಕೂಡ ಮಾತುಕತೆ ನಡೆಸಲಾಗುವುದು ಎಂದು ಡಾ. ಜಾಧವ್ ಹೇಳಿದರು.

ಬಾಡಿಯಾಳದಲ್ಲಿ ಹರಿಯುವ ನೀರು ವಿಷ ಮಿಶ್ರಿತಗೊಂಡಿದ್ದು ಪೂರ್ಣವಾಗಿ ಕಲುಷಿತವಾಗಿದೆ. ಹಿಂದುಳಿದ ಈ ಪ್ರದೇಶದಲ್ಲಿ ಕೈಗಾರಿಕೆಗಳ ಮಾಲಿನ್ಯದಿಂದಾಗಿ ಜನಜೀವನ ಕಷ್ಟವಾಗುತ್ತಿರುವ ಬಗ್ಗೆ ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಜಾಧವ್ ಒತ್ತಾಯಿಸಿದರು.

# ಕಲ್ಯಾಣ ಕರ್ನಾಟಕಕ್ಕೆ ಬೆಳೆವಿಮೆ, ಬೆಳೆಪರಿಹಾರ ತಾರತಮ್ಯ ವಿರೋಧಿಸಿ ಆಂದೋಲನ: ರೈತಸಂಘ




**ಕಲಬುರಗಿ, ಆ. 7:** ಕಲ್ಯಾಣ ಕರ್ನಾಟಕ ಭಾಗಕ್ಕೆ ಕೇಂದ್ರ ಹಾಗೂ ರಾಜ್ಯ ಸರ್ಕಾರ ರೈತರ ಬೆಳೆ ವಿಮೆ ಹಾಗೂ ರೈತರ ಬರಗಾಲದ ಬೆಳೆ ಪರಿಹಾರ ವಿತರಿಸುವಲ್ಲಿ ವಿಳಂಬ ನೀತಿ ಹಾಗೂ ತಾರತಮ್ಯ ವಿರೋಧಿಸಿ ಆಂದೋಲನ ಹಮ್ಮಿಕೊಳ್ಳಲಾಗುತ್ತಿದೆ ಎಂದು ನವ ಕರ್ನಾಟಕ ರೈತಸಂಘದ ಅಧ್ಯಕ್ಷ ದಯಾನಂದ್ ಪಾಟೀಲ್ ಅವರು ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಲ್ಯಾಣ ಕರ್ನಾಟಕ ಭಾಗದ ಕಲಬುರ್ಗಿ ಜಿಲ್ಲೆಗೆ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ ಹಾಗೆ 2025–26ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯ 3,00,952 ರೈತರು ಬೆಳೆ ವಿಮೆಗೆ ನೊಂದಣಿ ಮಾಡಿಸಿಕೊಂಡಿದ್ದು ಸರ್ಕಾರದಿಂದ ಒಟ್ಟು 585.72 ಕೋಟಿ ರೂ.ಗಳು ಬೆಳೆ ವಿಮೆ ಪರಿಹಾರ ಮಂಜೂರಾಗಿರುತ್ತದೆ ಎಂದು ತಿಳಿಸಿದ್ದು, ಅದರಂತೆ 2,87,696 ರೈತರಿಗೆ ಒಟ್ಟು 243.52 ಕೋಟಿ ರೂ.ಗಳ ಬೆಳೆವಿಮೆ ಪರಿಹಾರದ ಮೊದಲ ಕಂತು ಈಗಾಗಲೆ ಜಮೆಯಾಗಿದೆ ಎಂದು ತಿಳಿಸಿದ್ದಾರೆ. ಇದರಲ್ಲಿ ಬೆಳೆ ಮಧ್ಯಂತರ ಪರಿಹಾರ 234.73 ಕೋಟಿ ರೂ.ಗಳು ಹಾಗೂ ನೈಸರ್ಗಿಕ ವಿಕೋಪ ಕೋಟಿ ರೂ.ಗಳನ್ನು ಪಾವತಿಸಲಾಗಿದೆ ಎಂದರು.

ಆದಾಗ್ಯೂ, ಸರ್ಕಾರವು ಒಂದು ಕಣ್ಣಿಗೆ ಸುಣ್ಣ ಒಂದು ಕಣ್ಣಿಗೆ ಬೆಣ್ಣೆ ಹಚ್ಚುವ ಕೆಲಸ ಮಾಡಿ ಕೋಳಿ ಮುಂದೆ ದಾಣಿ ಹಾಕಿ ರೈತ ರೈತರಲ್ಲಿಯೇ ಜಗಳ ಹಚ್ಚುವ ಕೆಲಸವನ್ನು ಮಾಡಿದೆ. ಇದರಿಂದ ರೈತರಲ್ಲಿ ಅಕ್ರೋಶ ಬುಗಿಲೆದ್ದಿದೆ. ಹಾಗೂ ಈ ರೀತಿಯ ತಾರತಮ್ಯ ಮಾಡುವುದು ಅಕ್ಷಮ್ಯ ಅಪರಾಧವಾಗಿದೆ. ಅಲ್ಲದೆ ಈಗಾಗಲೇ ಬರಗಾಲ ಪರಿಸ್ಥಿತಿ ಎದುರಿಸುತ್ತಿರುವ ಕಲ್ಯಾಣ ಕರ್ನಾಟಕ ಭಾಗದ ಕಲಬುರ್ಗಿ ಜಿಲ್ಲೆಯ ರೈತರು ತುಂಬಾ ಸಂಕಷ್ಟ ಪರಿಸ್ಥಿತಿಯಲ್ಲಿ ಇದ್ದಾರೆ. ಅವರ ಕುಟುಂಬದ, ದನಕರುಗಳು, ಸಾಕುಪ್ರಾಣಿಗಳಿಗೆ ಕುಡಿಯಲು ನೀರು ಸಿಗುತ್ತಿಲ್ಲ, ಅದು ಜಿಲ್ಲೆಯ ಪ್ರತಿಯೊಂದು ಭಾಗದಲ್ಲಿ ಈ ಪರಿಸ್ಥಿತಿ ಉಂಟಾಗಿದೆ ಎಂದು ಅವರು ಆತಂಕ ವ್ಯಕ್ತಪಡಿಸಿದರು.

ವಿಶೇಷವಾಗಿ ಜೇವರ್ಗಿ ತಾಲ್ಲೂಕಿನ ಕಿನ ಕೋಳಕೂರ ಗ್ರಾಮ ಪಂಚಾಯಿತಿ, ಕಲಬುರಗಿ ತಾಲ್ಲೂಕಿನ ಹೊನ್ನಕಿರಣಗಿ, ಕೌವಲಗಾ (ಬಿ), ಆಳಂದ ತಾಲ್ಲೂಕಿನ ಹೇಬಳಿ, ಧುತ್ತರಗಾಂವ, ಖಜೂರಿ, ಹಡಲಗಿ, ಅಫಜಲಪುರ ತಾಲ್ಲೂಕಿನ ಅತನೂರ್, ಕಮಲಾಪುರ ತಾಲ್ಲೂಕಿನ ಕುರಿಕೋಟಾ ಗ್ರಾಮ ಪಂಚಾಯಿತಿ, ಸಲಗರ ಗ್ರಾಮ ಪಂಚಾಯಿತಿ, ಮಹಾಗಾಂವ ಪಂಚಾಯಿತಿ ಸೇರಿ ಜಿಲ್ಲೆಯಲ್ಲಿ ಇನ್ನೂ ಕೆಲವು ಗ್ರಾಮ ಪಂಚಾಯಿತಿಗಳಲ್ಲಿ ಬೆಳೆ ಪರಿಹಾರ ಬಂದಿಲ್ಲ. ಕೆಲವೊಂದು ಕೇವಲ ಶೇಕಡಾ 10ರಷ್ಟು, 13ರಷ್ಟು, 15ರಷ್ಟು ಹಾಗೂ ಒಂದೊಂದು ಕಡೆ 60ರಷ್ಟು, 70ರಷ್ಟು ವಿಮೆ ಹಣ ಬಿಡುಗಡೆ ಮಾಡಿ ರೈತರಿಗೆ ಅನ್ಯಾಯ ಮಾಡಲಾಗಿದೆ. ಸರ್ಕಾರದ ದ್ರೋಣ ತನಿಖೆ ಸರಿಯಾಗಿ ಮಾಡದೆ ಕೇವಲ ಆಡಳಿತದ ನಾಟಕಿಯ ಯಂತ್ರವಾಗಿ ಬಳಸಿ ರೈತರಿಗೆ ಪರದಾಡುವಂತೆ ಮಾಡಿದ್ದು ಅಕ್ಷಮ್ಯ ಅಪರಾಧ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಒಂದು ವಾರದಲ್ಲಿ ಸದ್ಯ ಆಗಿರುವ ಬೆಳೆ ವಿಮೆ ತಾರತಮ್ಯ ಸರಿಪಡಿಸಿ, ಅನ್ಯಾಯವಾದ ಪ್ರತಿಯೊಬ್ಬ ರೈತನ ಖಾತೆಗೆ ನೇರವಾಗಿ ವಿಮೆ ಹಣ ಸಂದಾಯ ಮಾಡಬೇಕು. ಇಲ್ಲವಾದಲ್ಲಿ ಜಿಲ್ಲೆಯ ಎಲ್ಲ ತಾಲ್ಲೂಕುಗಳ ಕೇಂದ್ರ ಸ್ಥಾನದಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ವಿರುದ್ಧ ಆಂದೋಲನ ಮಾಡಲಾಗುವುದು. ರೈತರಿಗೆ ಹಳ್ಳಿ ಹಳ್ಳಿಗಳಿಗೆ ಹೋಗಿ ಜಾಗೃತಿ ಮಾಡಲು ಯೋಜನೆ ಹಾಕಿಕೊಂಡಿದೆ ಎಂದು ಅವರು ಎಚ್ಚರಿಸಿದರು.

# ಹೀರದ ಸೂಗಮ್ಮ ಶಾಲೆಯ ಶತಮಾನೋತ್ಸವದ ಅಂಗವಾಗಿ ಆಕರ್ಷಕ ಮೆರವಣಿಗೆ



**ಬಳ್ಳಾರಿ ಆ 07.** ಬಳ್ಳಾರಿಯ ವೀರಶೈವ ವಿದ್ಯಾವರ್ಧಕ ಸಂಘದ ಪ್ರಥಮ ಶಾಲೆ ಹೀರದ ಸೂಗಮ್ಮ ಶಾಲೆಯ ಶತಮಾನೋತ್ಸವದ ಅಂಗವಾಗಿ ಬಳ್ಳಾರಿಯ ಮಠಸ್ವಾಮಿ ಮಠದಿಂದ ಹೀದರ ಸೂಗಮ್ಮ ಸ್ಥಬ್ದ ಚಿತ್ರದ ಮೆರವಣಿಗೆ ಡೊಳ್ಳು, ವೀರಗಾಸೆ, ತಮಟೆ, ಡೋಲು, ಅಲಂಕಾರ ದೀಪಗಳೊಂದಿಗೆ ಆಕರ್ಷಕ ಮೆರವಣಿಗೆ ಆರಂಭಗೊಂಡಿತು.

ಕಲ್ಯಾಣ ಮಠದ ಶ್ರೀಗಳು ಈ ಮೆರವಣಿಗೆಗೆ ಚಾಲನೆ ನೀಡಿದರು. ವೀರಶೈವ ವಿದ್ಯಾವರ್ಧಕ ಸಂಘದ ಪಾಧಾಧಿಕಾರಿಗಳು ಅಜೀವ ಸದಸ್ಯರು, ವೀರಶೈವ ಸಮಾಜದ ಮುಖಂಡರು, ಶಾಲೆಯ ಹಳೇ ವಿದ್ಯಾರ್ಥಿಗಳು, ಸಂಘದ ವಿವಿಧ ಶಾಲೆಗಳ ವಿದ್ಯಾರ್ಥಿಗಳು, ಸಿಬ್ಬಂದಿ ಪಾಲ್ಗೊಂಡಿದ್ದರು.

ಮೆರವಣಿಗೆ ದೊಡ್ಡ ಮಾರುಕಟ್ಟೆ, ಬ್ರೂಸ್‌ಪೇಟೆ, ತೇರುಬೀದಿ, ಜೈನಮಾರುಕಟ್ಟೆ ಗವಿಯಪ್ಪ ಸರ್ಕಲ್ ಮೂಲಕ ಶಾಲೆಯ ಅವರಣದತ್ತ ಸಾಗಿತು.

# ಮಾಜಿ ಮೇಯರ್ ರಾಜೇಶ್ವರಿ ಮನವಿಗೆ ಸ್ಪಂದಿಸಿದ ಜಿಲ್ಲಾಧಿಕಾರಿ ಭತ್ರಿ ಕಾಲುವೆ ಸ್ವಚ್ಛತೆಗೆ ಕ್ರಮ



**ಬಳ್ಳಾರಿ, ಆ.07:** ಬಳ್ಳಾರಿ ಮಹಾನಗರ ಪಾಲಿಕೆಯ ವಾರ್ಡ್ ಸಂಖ್ಯೆ 34ರ ವ್ಯಾಪ್ತಿಯ ಭತ್ರಿ ಪ್ರದೇಶದ ಬಳಿ ಇರುವ ಕಾಲುವೆಯನ್ನು ಜಿಲ್ಲಾಡಳಿತದ ವತಿಯಿಂದ ಶುಕ್ರವಾರ ಸ್ವಚ್ಛಗೊಳಿಸಲಾಯಿತು.

ತಮ್ಮ ಮನವಿಗೆ ಸ್ಪಂದಿಸಿದ ಜಿಲ್ಲಾಧಿಕಾರಿ ನಾಗೇಂದ್ರ ಅವರಿಗೆ ಮಾಜಿ ಮೇಯರ್, ಪಾಲಿಕೆಯ ಸದಸ್ಯೆ ಎಂ.ರಾಜೇಶ್ವರಿ ಧನ್ಯವಾದ ಸಲ್ಲಿಸಿದ್ದಾರೆ.

ಶಾಂತಿ ನಗರದಿಂದ ಭತ್ರಿ ಗ್ರಾಮದವರೆಗೆ ಹಾದು ಹೋಗಿರುವ ತುಂಗಭದ್ರಾ ಜಲಾಶಯದ ಕಾಲುವೆ ಕಳೆದ ಹಲವು ದಿನಗಳಿಂದ ಕಸ, ಕಡ್ಡಿ, ಇತರೆ ತ್ಯಾಜ್ಯದಿಂದ ಹೂಳು ತುಂಬಿತ್ತು. ಇದರಿಂದಾಗಿ ಸಾರ್ವಜನಿಕರು ತೊಂದರೆ ಅನುಭವಿಸುವಂತಾಗಿತ್ತು. ಸದರಿ ವಿಷಯವನ್ನು ಪಾಲಿಕೆಯ 34ನೇ ವಾರ್ಡಿನ ಸದಸ್ಯೆ, ಮಾಜಿ ಮೇಯರ್ ಎಂ.ರಾಜೇಶ್ವರಿ ಅವರು ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದಿದ್ದರು. ಬಳ್ಳಾರಿ ನಗರ ಕ್ಷೇತ್ರದ ಶಾಸಕ ನಾರಾ ಭರತ್ ರೆಡ್ಡಿಯವರ ಸೂಚನೆಯ ಮೇರೆಗೆ ರಾಜೇಶ್ವರಿ ಯವರು ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದು ಮನವಿ ಮಾಡಿದ್ದರು.

ಶುಕ್ರವಾರ ಬೆಳಗ್ಗೆ ಜೆಸಿಬಿ ಯಂತ್ರದ ಮೂಲಕ ಸ್ವಚ್ಛತಾ ಕಾರ್ಯ ನಡೆಯಿತು. ಸ್ಥಳೀಯರು ಹರ್ಷ ವ್ಯಕ್ತಪಡಿಸಿದ್ದಾರೆ.

# ರೈತ ಶಿವಕುಮಾರ ಸ್ವಾಮಿ ಬದುಕು ಅರಳಿಸಿದ ಚೆಂಡು ಹೂವಿನ ಕೃಷಿ

**ಬೀದರ, ಆ. 7:** ಚೆಂಡು ಹೂವಿನ ತೋಟಗಾರಿಕೆಯಿಂದ ಬೀದರ್ ತಾಲ್ಲೂಕಿನ ಘೋಡಂಪಳ್ಳಿ ಗ್ರಾಮದ ರೈತ ಶಿವಕುಮಾರ ಸ್ವಾಮಿ ಅವರ ಬದುಕು ಅರಳಿಸಿದೆ.

ತಮ್ಮ ಒಂದೂವರೆ ಎಕರೆ ಜಮೀನಿನಲ್ಲಿ ಬೆಳೆದ ಚೆಂಡು ಹೂವಿನಿಂದ ಅವರು ನಿತ್ಯ ಕೈತುಂಬಾ ಸಂಪಾದನೆ ಮಾಡುತ್ತಿದ್ದಾರೆ.ಆರು ತಿಂಗಳ ಬೆಳೆಯಿಂದ ಎಲ್ಲ ಖರ್ಚು ಹೊರತುಪಡಿಸಿ 5.40 ಲಕ್ಷ ಆದಾಯದ ನಿರೀಕ್ಷೆಯಲ್ಲಿದ್ದಾರೆ. ಕಟಾವು ಮಾಡಿದ ಹೂವನ್ನು ಬೀದರ್‌ನ ಮಾರುಕಟ್ಟೆಗೆ ಒಯ್ದು ಮಾರಾಟ ಮಾಡುತ್ತಿದ್ದೇನೆ. ಪ್ರತಿ ಕೆ.ಜಿ.ಗೆ 50 ರೂ ಬೆಲೆ ದೊರೆಯುತ್ತಿದೆ. ಶ್ರಾವಣ ಆರಂಭವಾದ ನಂತರ 100 ರೂಗಳ ವರೆಗೆ ಬೆಲೆ ಸಿಗುವ ಅಂದಾಜು ಇದೆ ಎಂದು ಹೇಳುತ್ತಾರೆ.

ಚೆಂಡು ಹೂ ನಾಟಿ ಮಾಡಿದ ಎರಡು ತಿಂಗಳ ನಂತರ ಹೂ ಕೊಡಲು ಆರಂಭಿಸಿದೆ. ಒಟ್ಟು ನಾಲ್ಕು



ತಿಂಗಳ ವರೆಗೆ ಹೂ ಕಟಾವು ಆಗಲಿದೆ. ಹೊಲ ಉಳುಮೆ, ರಸಗೊಬ್ಬರ, ಸಸಿ ನಾಟಿ, ಔಷಧಿ ಸಿಂಪರಣೆ ಸೇರಿ ಬೆಳೆಗೆ 70 ಸಾವಿರ ಖರ್ಚಾಗಿದೆ ಎಂದು ತಿಳಿಸುತ್ತಾರೆ. ತೋಟಗಾರಿಕೆ ಇಲಾಖೆಯವರು ಜೈವಿಕ ಗೊಬ್ಬರ ಹಾಗೂ ಹನಿ ನೀರಾವರಿಗೆ ಸಹಾಯಧನ ಒದಗಿಸಿದ್ದಾರೆ. ಸಹಾಯಕ ತೋಟಗಾರಿಕೆ ಅಧಿಕಾರಿ ಚಿರಂಜೀವಿ ರೆಡ್ಡಿ ಕಾಲ ಕಾಲಕ್ಕೆ ಮಾರ್ಗದರ್ಶನ ಮಾಡಿದ್ದಾರೆ. ಎಲ್ಲ ಖರ್ಚು ಹೊರತುಪಡಿಸಿ ಹೂವಿನಿಂದ 5.40 ಲಕ್ಷ ಆದಾಯ ಬರುವ ನಿರೀಕ್ಷೆ ಇದೆ ಎನ್ನುತ್ತಾರೆ.

# ಕೈತಪ್ಪಿದ ಸಚಿವ ಸ್ಥಾನ, ವಾಲ್ಮೀಕಿ ನಿಗಮದ ಅಧ್ಯಕ್ಷ ಸ್ಥಾನಕ್ಕೆ ಶಾಸಕ ದದ್ದಲ್ ರಾಜೀನಾಮೆ

**ರಾಯಚೂರು, ಆ. 7:** ರಾಜ್ಯ ಸಚಿವ ಸಂಪುಟ ವಿಸ್ತರಣೆಯಲ್ಲಿ ರಾಯಚೂರು ಜಿಲ್ಲೆಗೆ ಯಾವುದೇ ಸಚಿವ ಸ್ಥಾನ ದೊರೆಯದ ಹಿನ್ನೆಲೆಯಲ್ಲಿ ರಾಜಕೀಯ ಬೆಳವಣಿಗೆಗಳು ತೀವ್ರ ಗೊಂಡಿದ್ದು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರೂ ಆದ ರಾಯಚೂರು ಗ್ರಾಮೀಣ ಶಾಸಕ ಬಸನಗೌಡ ದದ್ದಲ್ ಅವರಿಗೆ ಸಚಿವ ಸ್ಥಾನ ನೀಡುವ ಭರವಸೆ ಇತ್ತು. ಆದರೆ ಸಚಿವ ಸ್ಥಾನ ನಿಡದಿರುವ ಬಗ್ಗೆ ಬೇಸರಗೊಂಡು ನಿಗಮದ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ. ಪರಿಶಿಷ್ಟ ಪಂಗಡ (ಎಸ್‌ಟಿ) ಮೀಸಲು ಕ್ಷೇತ್ರವಾದ ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರವನ್ನು ಪ್ರತಿನಿಧಿಸುತ್ತಿರುವ ಬಸನಗೌಡ ದದ್ದಲ್ ಅವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್‌ಗೆ ರಾಜೀನಾಮೆ ಪತ್ರ ಸಲ್ಲಿಸಿದ್ದಾರೆ.

ರಾಜೀನಾಮೆ ಪತ್ರದಲ್ಲಿ, ನನ್ನ ಸ್ವಇಚ್ಛೆಯಿಂದ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸುತ್ತಿದ್ದೇನೆ. ದಯವಿಟ್ಟು ಕೂಡಲೇ ಅಂಗೀಕರಿಸಬೇಕು



ಎಂದು ಮನವಿ ಮಾಡಿದ್ದಾರೆ.

ರಾಜ್ಯ ಸಚಿವ ಸಂಪುಟ ವಿಸ್ತರಣೆಯಲ್ಲಿ ರಾಯಚೂರು ಜಿಲ್ಲೆಗೆ ಒಂದೇ ಒಂದು ಸಚಿವ ಸ್ಥಾನವೂ ದೊರೆಯದಿರುವುದಕ್ಕೆ ಜಿಲ್ಲೆಯ ಕಾಂಗ್ರೆಸ್ ನಾಯಕರಲ್ಲಿ ಅಸಮಾಧಾನ ವ್ಯಕ್ತವಾಗಿದ್ದು, ಅದರ ನಡುವೆಯೇ ಬಸನಗೌಡ ದದ್ದಲ್ ಅವರ ಈ ನಿರ್ಧಾರ ರಾಜಕೀಯವಾಗಿ ಮಹತ್ವ ಪಡೆದುಕೊಂಡಿದೆ.

ಭಿನ್ನಮತದ ಬಿಸಿ ರಾಯಚೂರಿಗೆ ಹೆಚ್ಚಿನ ಪ್ರಮಾಣದಲ್ಲೇ ತಟ್ಟಿದೆ. ಸತತ ಎರಡನೇ ಬಾರಿ ಗೆಲುವು ಸಾಧಿಸಿದ ಬಸನಗೌಡ ದದ್ದಲ್ ಪರಿಶಿಷ್ಟ ಪಂಗಡದ ಕೋಟಾದಡಿ ಸಚಿವ ಸ್ಥಾನದ ನಿರೀಕ್ಷೆಯಲ್ಲಿದ್ದರು. ರಾಯಚೂರು ಜಿಲ್ಲೆಗೆ ಒಂದು ಸಚಿವ ಸ್ಥಾನ ಸಿಗಲಿದೆ ಎನ್ನುವ ವಿಶ್ವಾಸ ಶಾಸಕರು ಸೇರಿದಂತೆ ಕಾರ್ಯಕರ್ತರಲ್ಲಿ ಹೆಚ್ಚಾಗಿತ್ತು. ಜಿಲ್ಲೆಯ ಏಳು ಶಾಸಕ ಸ್ಥಾನಗಳಲ್ಲಿ ನಾಲ್ಕರಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಿತ್ತು ಜತೆಗೆ ನಾಲ್ವರು ವಿಧಾನ ಪರಿಷತ್ ಸದಸ್ಯರು ಕೂಡ ಜಿಲ್ಲೆಯಲ್ಲಿದ್ದರು.

ದದ್ದಲ್ ಅವರ ರಾಜೀನಾಮೆಯನ್ನು ಸರ್ಕಾರ ಅಂಗೀಕರಿಸುತ್ತದೆಯೇ ಹಾಗೂ ಮುಂದಿನ ದಿನಗಳಲ್ಲಿ ಈ ಬೆಳವಣಿಗೆ ಯಾವ ರೀತಿಯ ರಾಜಕೀಯ ತಿರುವು ಪಡೆಯಲಿದೆ ಎಂಬುದು ಕುತೂಹಲಕ್ಕೆ ಕಾರಣವಾಗಿದೆ.

## ಎಚ್.ಸಿ. ಮಹದೇವಪ್ಪ, ಕೆ.ವೆಂಕಟೇಶ್, ತನ್ವೀರ್‌ಸೇಠ್ ಎಲ್ಲರೂ ಮೂಲೆಗುಂಪು: ಮಾಜಿ ಸಂಸದ ಪ್ರತಾಪಸಿಂಹ ದೂರು

# ಮಗನನ್ನು ಲೀಡರ್ ಮಾಡಲು ಇತರ ನಾಯಕರ ರಾಜಕೀಯ ಬದುಕು ಮುಗಿಸಿದ ಸಿದ್ದರಾಮಯ್ಯ

**ಮೈಸೂರು, ಆ.7:** ಮೈಸೂರು ಭಾಗದಲ್ಲಿ ಮಗನನ್ನು (ಯತೀಂದ್ರ) ಲೀಡರ್ ಮಾಡಲು ಸಿದ್ದರಾಮಯ್ಯ ಇಲ್ಲಿನ ಕಾಂಗ್ರೆಸ್ ನಾಯಕರ ರಾಜಕೀಯ ಜೀವನವನ್ನು ಮುಗಿಸಿದ್ದಾರೆ ಎಂದು ಮಾಜಿ ಸಂಸದ ಪ್ರತಾಪಸಿಂಹ ದೂರಿದ್ದಾರೆ.

ನಗರದಲ್ಲಿ ಪತ್ರಕರ್ತರೊಂದಿಗೆ ಶುಕ್ರವಾರ ಮಾತನಾಡಿದ ಅವರು, ಮಗನನ್ನು ಮಂತ್ರಿ ಮಾಡಲು ಮಲ್ಲಿಕಾರ್ಜುನ ಖರ್ಗೆ ಆ ಭಾಗದ ಎಲ್ಲಾ ಕಾಂಗ್ರೆಸ್ ನಾಯಕರ ರಾಜಕೀಯ ಜೀವನವನ್ನು ಮುಗಿಸಿದರು. ಅದೇ ಮಾದರಿಯನ್ನು ಸಿದ್ದರಾಮಯ್ಯ ಈ ಭಾಗದಲ್ಲಿ ಅನುಸರಿಸಿದ್ದಾರೆ. ಡಾ. ಎಚ್.ಸಿ. ಮಹದೇವಪ್ಪ, ಕೆ. ವೆಂಕಟೇಶ್ ಸೇರಿದಂತೆ ಎಲ್ಲರನ್ನೂ ಮೂಲೆಗುಂಪು ಮಾಡಿದ್ದಾರೆ ಎಂದು ಆರೋಪಿಸಿದರು.

ಸಭ್ಯ ರಾಜಕಾರಣಿ ತನ್ವೀರ್ ಸೇಠ್ ಅವರಿಗೆ ಸಚಿವ ಸ್ಥಾನದ ಅವಕಾಶ ತಪ್ಪಿಸಿದ್ದೇ ಸಿದ್ದರಾಮಯ್ಯ. ದಲಿತರ ಧ್ವನಿ ಆಗಿರುವ ಮಹದೇವಪ್ಪ ಅವರ ಸ್ನೇಹವನ್ನೇ ಮರೆತರು. ಮಗನ ಮೇಲೆ ಮಾತ್ರ ಕಿರೀಟ ಇರಬೇಕೆಂದು ಇತರ ನಾಯಕರ ರಾಜಕೀಯ ಬದುಕನ್ನು ಮುಗಿಸಿದ್ದಾರೆ. ಸದಾ ಜೊತೆಗಿರುತ್ತಿದ್ದ ಸ್ನೇಹಿತರಾದ ಮಹದೇವಪ್ಪ, ವೆಂಕಟೇಶ್ ಅವರ ಸ್ನೇಹಕ್ಕೂ ಬೆಲೆ ಕೊಡಲಿಲ್ಲ' ಎಂದು ಟೀಕಿಸಿದರು.

ಭ್ರಷ್ಟಾಚಾರದ ಬಗ್ಗೆ ಮಾತಾಡುವ ನೈತಿಕತೆಯನ್ನು ಸಿದ್ದರಾಮಯ್ಯ ಕಳೆದು ಕೊಂಡಿದ್ದಾರೆ. ಈಗ ಮಗನಿಗಾಗಿ ಎಲ್ಲರ ರಾಜಕೀಯ ಜೀವನವನ್ನೂ ಮುಗಿಸಿ ಕುಟುಂಬ ರಾಜಕೀಯದ ಬಗ್ಗೆ ಟೀಕಿಸುವ ನೈತಿಕತೆ ಕಳೆದುಕೊಂಡಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

**ಸಿದ್ದರಾಮಯ್ಯ ಹೇಳಿಕೆಗೆ ವ್ಯಂಗ್ಯ**

ರಾಜ್ಯ ಸಚಿವ ಸಂಪುಟದಲ್ಲಿ ಮಹಿಳೆಗೆ



ಸ್ಥಾನ ಸಿಕ್ಕಿಲ್ಲ. ಇದು, ಕಾಂಗ್ರೆಸ್ ಮಹಿಳಾ ವಿರೋಧಿ ಎಂಬುದನ್ನು ಸಾಬೀತು ಮಾಡಿದೆ. ಲಕ್ಷ್ಮೀ ಹೆಬ್ಬಾಳಕರ, ಗಾಯತ್ರಿ ಶಾಂತೇಗೌಡ ಅವರಿಗೆ ಅವಕಾಶ ತಪ್ಪಿಸಿದವರು ಸಿದ್ದರಾಮಯ್ಯ. ಕರ್ನಾಟಕದ ರಾಜಕೀಯ ಹೊಲಸು ಮಾಡಿದ್ದೇ ಅವರು. ಈಗ ರಾಜಕೀಯ ಕಲುಷಿತವಾಗಿದೆ ಎನ್ನುತ್ತಿದ್ದಾರೆ ಎಂದು ಪ್ರತಾಪಸಿಂಹ ವ್ಯಂಗ್ಯವಾಡಿದರು.

ಯತೀಂದ್ರ ಮೆರಿಟ್ನಿಂದ ಮಂತ್ರಿಯಾಗಿಲ್ಲ. ಅಪ್ಪನ ಕೋಟಾದಲ್ಲಿ ಆಗಿದ್ದಾರಷ್ಟೆ. ಮೆರಿಟ್ ಇಲ್ಲದ ಯತೀಂದ್ರ ಈ ಭಾಗದಲ್ಲಿ ನಾಯಕ ಆಗುವುದಿಲ್ಲ ಎಂಬ ಕಾರಣದಿಂದ, ದಲಿತರ ಧ್ವನಿಯಾದ ಮಹದೇವಪ್ಪ ಅವರನ್ನು ಪಕ್ಕಕ್ಕೆ ಸರಿಸಿದ್ದಾರೆ ಎಂದರು.

ಭಾರತ ಹಿಂದೂ ರಾಷ್ಟ್ರವಾಗಬಾರದು ಎಂಬ ಯತೀಂದ್ರ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, 'ಭಾರತವನ್ನು ಹಿಂದೂ ರಾಷ್ಟ್ರ ಮಾಡಲು ಯಾರೂ ಹೊರಟಿಲ್ಲ. ಇದು ಸ್ವಾಭಾವಿಕವಾಗಿಯೇ ಹಿಂದೂ ರಾಷ್ಟ್ರ. ಯತೀಂದ್ರ ಅವರೇ, ನಿಮಗೆ ಮಂತ್ರಿ ಸ್ಥಾನ ಸಿಕ್ಕಿದ್ದು ಇದೇ ಹಿಂದೂ ಧರ್ಮದ ಜಾತಿ ವ್ಯವಸ್ಥೆಯಿಂದ ಎಂಬುದನ್ನು ಮರೆಯಬೇಡಿ' ಎಂದು ಟೀಕಿಸಿದರು.




ಕೆಪಿಎಸ್‌ಸಿ ಹಗರಣದ ತನಿಖೆಯನ್ನು ಸಿಬಿಐಗೆ ವಹಿಸಬೇಕೆಂದು ಒತ್ತಾಯಿಸಿ ಎಬಿವಿಪಿ ಕಾರ್ಯಕರ್ತರು ಶುಕ್ರವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಧರಣಿ ನಡೆಸಿದರು.

# ಹೆದ್ದಾರಿ ಕಾಮಗಾರಿ ಬೇಡ, ಸೇತುವೆ ನಿರ್ಮಿಸಿ: ರೈತರ ಒತ್ತಾಯ



**ರಾಯಚೂರು, ಆ. 7:** ಜಿಲ್ಲೆಯ ಹಿರೇಹಣಿಗಿ ಗ್ರಾಮದ ಬಳಿ ಬೆಳಗಾವಿ–ರಾಯಚೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಬಾಕ್ಸ್ ಕಲ್ವರ್ಟ್ ಬದಲಿಗೆ ಸೇತುವೆ ನಿರ್ಮಾಣಕ್ಕೆ ಆಗ್ರಹಿಸಿದ ರೈತರು ಕಾಮಗಾರಿ ತಡೆದರು. ಹೀಗಾಗಿ ಅಧಿಕಾರಿಗಳು, ಹೆಚ್ಚಿನ ಪೊಲೀಸ್ ಬಂದೋಬಸ್ತ್‌ನಲ್ಲಿ ಬಂದು ರೈತರ ವಿರೋಧದ ನಡುವೆಯೇ ಕಾಮಗಾರಿ ಆರಂಭಿಸಿದರು.

ಬಾಕ್ಸ್ ಕಲ್ವರ್ಟ್ ನಿರ್ಮಾಣದಿಂದ ಜಮೀನು ಸಂಪರ್ಕಿಸುವ ರಸ್ತೆ ಇಲ್ಲದಂತಾಗಿ 3 ಸಾವಿರ ಎಕರೆ ಪ್ರದೇಶದಲ್ಲಿ ಕೃಷಿ ಚಟುವಟಿಕೆಗೆ ಹಿನ್ನಡೆ ಉಂಟಾಗಲಿದೆ. 10 ಅಡಿ ಎತ್ತರದ ಸೇತುವೆ ನಿರ್ಮಾಣ ಮಾಡುವಂತೆ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು, ಜಿಲ್ಲಾಧಿಕಾರಿ ಮತ್ತು ಸಂಸದರಿಗೆ ಮನವಿ ಸಲ್ಲಿಸಲಾಗಿತ್ತು. ಸೇತುವೆ ನಿರ್ಮಾಣ ಸಾಧ್ಯತೆ ಕುರಿತು ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳುವ ಭರವಸೆ ನೀಡಿದ್ದರು. ಇದೀಗ ಪೊಲೀಸ್ ಬಲ ಪ್ರಯೋಗಿಸಲು ಮುಂದಾಗಿದ್ದಾರೆ ಎಂದು ರೈತರು ಆಕ್ರೋಶ ವ್ಯಕ್ತಪಡಿಸಿದರು.

ಹೆದ್ದಾರಿ ನಿರ್ಮಾಣಕ್ಕೆ ತೆರವುಗೊಳಿಸಿದ ಮನೆಗಳಿಗೆ ಪರಿಹಾರ ನೀಡುವಲ್ಲಿ ತಾರತಮ್ಯ ಮಾಡಲಾಗಿದೆ. ತಮಗೆ ಕೇವಲ 4 ಲಕ್ಷ ಪರಿಹಾರ ಸಿಕ್ಕಿದ್ದು, ಪಕ್ಕದ ಮನೆಯವರಿಗೆ 30 ಲಕ್ಷ ಪರಿಹಾರ ನೀಡಲಾಗಿದೆ. ಮನೆ ಕಳೆದುಕೊಂಡು ಕುಟುಂಬ ಬೀದಿಗೆ ಬಂದಿದೆ ಎಂದು ನವೀನಕುಮಾರ ಮತ್ತು ಭೀಮಣ್ಣ ಅವರು ಅಳಲು ತೋಡಿಕೊಂಡರು.ನ್ಯಾಯಾಲಯದ ಮೂಲಕ ಹೆಚ್ಚಿನ ಪರಿಹಾರ ಪಡೆಯಲು ಅವಕಾಶಗಳಿವೆ. ಈ ಕುರಿತು ಅಧಿಕಾರಿಗಳ ಜೊತೆ ಚರ್ಚಿಸಿ ಅಗತ್ಯ ಮಾಹಿತಿ ಪಡೆಯಬೇಕು ಎಂದು ಅಧಿಕಾರಿಗಳು ಸೂಚಿಸಿದರು.

ತಹಶೀಲ್ದಾರ್ ಅಶೋಕ ಪವಾರ, ಹೆದ್ದಾರಿ ಪ್ರಾಧಿಕಾರದ ಭೂ ಸ್ವಾಧೀನ ಅಧಿಕಾರಿ ಗುರುಸಿದ್ದಯ್ಯ ಹಿರೇಮಠ, ಗುತ್ತಿಗೆದಾರ ಕಂಪನಿಯ ಸಹಾಯಕ ವ್ಯವಸ್ಥಾಪಕ ಭೀಮರಾವ್, ಡಿವೈಎಸ್ಪಿ ಚಂದ್ರಶೇಖರ, ಸಿಪಿಐ ಶಶಿಕಾಂತ ಎಂ. ಪಿಎಸ್‌ಐ ಗಳಾದ ಅಜ್ಮೀರ್, ಯರಿಯಪ್ಪ, ಲಿಂಗಪ್ಪ, ಚಂದ್ರಶೇಖರ ಹಿರೇಮಠ ಮತ್ತಿತರರು ಉಪಸ್ಥಿತರಿದ್ದರು.

ವಿಷ ಕುಡಿದರೂ ಬಿಡದ ತೆರವು: ಹಿರೇಹಣಿಗಿ ಬಳಿ ಹೆದ್ದಾರಿ ನಿರ್ಮಾಣಕ್ಕೆ ಪರಿಹಾರ ನೀಡದೆ, ಮನೆ ತೆರವುಗೊಳಿಸಲಾಗುತ್ತಿದೆ ಎಂದು ಆರೋಪಿಸಿ, ಮನೆಮಾಲೀಕ ನವೀನ ಕುಮಾರ ವಿಷ ಸೇವಿಸಿದ ಘಟನೆ ನಡೆಯಿತು.

ತಕ್ಷಣವೇ, ಅವರನ್ನು ಪೊಲೀಸ್ ವ್ಯಾನ್‌ನಲ್ಲಿ ಕವಿತಾಳದ ಸಮುದಾಯ ಆರೋಗ್ಯ ಕೇಂದ್ರಕ್ಕೆ ಕರೆ ತರಲಾಯಿತು. ಆರೋಗ್ಯ ತಪಾಸಣೆ ಮಾಡಿದ ಇಲ್ಲಿನ ವೈದ್ಯರು ಅವರನ್ನು ಹೆಚ್ಚಿನ ಚಿಕಿತ್ಸೆಗಾಗಿ ರಿಮ್ಸ್ ಆಸ್ಪತ್ರೆಗೆ ಕಳುಹಿಸಿದ್ದಾರೆ. ಬಳಿಕವೂ ಅಧಿಕಾರಿಗಳು ಮಾನವೀಯತೆ ಮರೆತು, ಮನೆಯನ್ನು ತೆರವುಗೊಳಿಸಿದರು. ಅಧಿಕಾರಿಗಳ ನಡೆಗೆ ಗ್ರಾಮಸ್ಥರು ಬೇಸರ ವ್ಯಕ್ತಪಡಿಸಿದರು.

# ಸತ್ಯಸಾಯಿ ಗ್ರಾಮ ಸ್ಥಾಪನೆ ಸುವರ್ಣ ಮಹೋತ್ಸವ: ಸತ್ಯಸಾಯಿ ಉಚಿತ ಆಸ್ಪತ್ರೆ ಶೀಘ್ರ ಆರಂಭ

**ಕಲಬುರಗಿ, ಆ. 7::** ವಸುಧೈವ ಕುಟುಂಬಕಂ ಪರಿಕಲ್ಪನೆಯೊಂದಿಗೆ ಸದ್ಗುರು ಶ್ರೀ ಮಧುಸೂದನ ಸಾಯಿ ನೇತೃತ್ವದ ಸಂಸ್ಥೆ ಒನ್ ವರ್ಲ್ಡ್ ಒನ್ ಫ್ಯಾಮಿಲಿ ಮಿಷನ್ ಗುರಿಯೊಂದಿಗೆ ಶಿಕ್ಷಣ, ಆರೋಗ್ಯ ಮತ್ತು ಶಾಲಾ ವಿದ್ಯಾರ್ಥಿಗಳ ಪೌಷ್ಟಿಕಾಂಶ ಕ್ಷೇತ್ರಗಳಲ್ಲಿ ಉಚಿತ ಸೇವೆ ಮಾಡುತ್ತಿದೆ. ದೇಶವಷ್ಟೇ ಅಲ್ಲದೆ ಹಲವು ರಾಷ್ಟ್ರಗಳಲ್ಲಿ ಲಾಂತರ ಜನರ ಬದುಕಿನಲ್ಲಿ ಆಶಾಕಿರಣವಾಗಿದೆ. ಇದರ ಒಂದು ಶಾಖೆ ಕಲಬುರಗಿ ಜಿಲ್ಲೆಯ ಕಮಲಾಪುರ ತಾಲ್ಲೂಕಿನ ನವನೀಹಾಳ್ ಗ್ರಾಮದಲ್ಲಿ ಕಳೆದ ಹಲವು ವರ್ಷಗಳಿಂದ ನಡೆಯುತ್ತಿದೆ.

ಕಮಲಾಪುರ ಹತ್ತಿರದ ನವನಿಹಾಳದಲ್ಲಿರುವ ಶ್ರೀ ಸತ್ಯಸಾಯಿ ಮಾನವ ಅಭ್ಯುದಯ ವಿಶ್ವವಿದ್ಯಾಲಯದಲ್ಲಿ 6ನೇ ತರಗತಿಯಿಂದ ಪಿಜಿ ವರೆಗೆ ಓದಲು ಶೈಕ್ಷಣಿಕ ಅವಕಾಶ ಕಲ್ಪಿಸಲಾಗಿದೆ. ಬಹುಪಾಲು ವಿದ್ಯಾರ್ಥಿಗಳು ಗ್ರಾಮೀಣ ಮತ್ತು ಬಡವರಿದ್ದಾರೆ. ಸಂಸ್ಥೆಯಡಿ ನಾಡಿನ ವಿವಿಧೆಡೆ 27 ಕ್ಯಾಂಪಸ್‌ಗಳಲ್ಲಿ 4000ಕ್ಕೂ ಅಧಿಕ ಮಕ್ಕಳು ಅಧ್ಯಯನ ಮಾಡುತ್ತಿದ್ದಾರೆ ಎಂದು ತಿಳಿಸಿದರು.



ಮಧುಸೂದನ ಸಾಯಿ ವೈದ್ಯಕೀಯ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ ಸಾರ್ವಜನಿಕರಿಗೆ ಎಲ್ಲ ತೆರನಾದ ವೈದ್ಯಕೀಯ ಸೇವೆ ಮತ್ತು ಕಲಿಕೆಯನ್ನು ಉಚಿತವಾಗಿ ನೀಡುತ್ತಿದೆ. ಆಸ್ಪತ್ರೆಯಲ್ಲಿ ಬಿಲ್ ಕೌಂಟರ್ ಇಲ್ಲ. ಎಲ್ಲವನ್ನು ಸಂಸ್ಥೆ ಭರಿಸುವ ಮೂಲಕ ಮಾನವೀಯ ಸೇವೆ ಸಲ್ಲಿಸುತ್ತ ಜಾಗತಿಕವಾಗಿ ಗಮನಸೆಳೆದಿದೆ. ನೈಜೀರಿಯಾ ಸೇರಿ ಹಲವೆಡೆ ಆಸ್ಪತ್ರೆ ಆರಂಭಿಸಲಾಗಿದೆ. ಸತ್ಯಸಾಯಿ ಬಾಬಾ ಅವರ ಆಶಯ ಮತ್ತು ಮಾರ್ಗದರ್ಶನದಲ್ಲಿ ರಾಜ್ಯದ 18 ಜಿಲ್ಲೆಗಳಲ್ಲಿ ಸಂಸ್ಥೆಯ ಆಸ್ಪತ್ರೆಗಳನ್ನು ಆರಂಭಿಸಿದ್ದು, ಉಳಿದೆಡೆಯೂ ಸ್ಥಾಪಿಸಲಾಗುವುದು ಎಂದರು.

ಕಲಬುರಗಿಯಲ್ಲೂ ದೊಡ್ಡ ಪ್ರಮಾಣದಲ್ಲಿ ಆಸ್ಪತ್ರೆ ಆರಂಭಿಸುವ ಯೋಜನೆ ಇದ್ದು, ಭಕ್ತರಿಂದ ನೆರವು ನಿರೀಕ್ಷಿಸಲಾಗುತ್ತಿದೆ. ರಾಜ್ಯ ಸೇರಿ ದೇಶದ ಒಂದು ಕೋಟಿ ವಿದ್ಯಾರ್ಥಿಗಳಿಗೆ ಪೌಷ್ಟಿಕ ಆಹಾರ ಸಾಯಿಶ್ಯೂರ್ ಉಚಿತವಾಗಿ ವಿತರಿಸಲಾಗುತ್ತಿದೆ. ಸದ್ಗುರು ಮಧುಸೂದನ ಸಾಯಿ ದೂರದ ಛತ್ತೀಸ್‌ಗಢದಲ್ಲಿ ಜನಿಸಿದರೂ ರಾಜ್ಯದ ಜನರ ಸೇವೆ ಮಾದರಿಯಾಗಿ ಮಾಡುತ್ತ ಬರುತ್ತಿದ್ದಾರೆ. ಅವರ ನೇತೃತ್ವದಲ್ಲಿ ಸಂಸ್ಥೆ ಮಾನವೀಯ ಸೇವೆ ಮುಂದುವರಿಸಿದ್ದು, ಇನ್ನಷ್ಟು ವಿಸ್ತರಿತ ಕಾರ್ಯಯೋಜನೆಗಳನ್ನು ಹಾಕಿಕೊಳ್ಳಲಾಗಿದೆ ಎಂದು ನರಸಿಂಹಮೂರ್ತಿ ಹೇಳಿದರು.

# ಬಳ್ಳಾರಿಯಲ್ಲಿ ಬೃಹತ್ ರಕ್ತದಾನ ಶಿಬಿರ: ಡಿಸಿ ಚಾಲನೆ




**ಬಳ್ಳಾರಿ,ಆ.07.**ರಕ್ತದಾನವು ಅತ್ಯುನ್ನತ ಮಾನವೀಯ ಸೇವೆಯಾಗಿದ್ದು, ಒಂದು ಯೂನಿಟ್ ರಕ್ತದಿಂದ ಜೀವ ಉಳಿಸಲು ಸಾಧ್ಯವಿದೆ ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಹೇಳಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜೆಎಸ್‌ಡಬ್ಲ್ಯೂ ತೋರಣಗಲ್ಲು ಇವರ ಸಂಯುಕ್ತ ಆಶ್ರಯದಲ್ಲಿ ಒಪಿಜೆ ಸೆಂಟರ್‌ನಲ್ಲಿ ಶುಕ್ರವಾರ ಆಯೋಜಿಸಿದ್ದ 'ರಕ್ತ ಮಿತ್ರ 2.0' ಬೃಹತ್ ರಕ್ತದಾನ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ಕೈಗಾರಿಕಾ ಕ್ಷೇತ್ರದ ಜೊತೆಗೆ ಶಿಕ್ಷಣ, ಆರೋಗ್ಯ ಹಾಗೂ ಸಮಾಜಮುಖಿ ಕಾರ್ಯಗಳಲ್ಲಿ ಇತರೆ ಸಂಸ್ಥೆಗಳು ಕೊಡುಗೆ ನೀಡಬೇಕು ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ರಕ್ತದ ಕೊರತೆಯಿಂದ ಅಮೂಲ್ಯ ಜೀವಗಳು ಅಪಾಯಕ್ಕೀಡಾಗಬಾರದು. ವಿಶೇಷವಾಗಿ ಅಪರೂಪದ ರಕ್ತ ಗುಂಪಿನ ದಾನಿಗಳು ಅಗತ್ಯ ಬಿದ್ದಾಗ ಜಿಲ್ಲಾ ಆಸ್ಪತ್ರೆ ಹಾಗೂ ಬಿಎಂಸಿಆರ್‌ಸಿಗೆ ರಕ್ತದಾನ ಮಾಡಲು ಮುಂದೆ ಬರಬೇಕು ಎಂದು ಮನವಿ ಮಾಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಸುಮನ್ ಡಿ. ಪೆನ್ನೇಕರ್ ಅವರು ಮಾತನಾಡಿ, ವೈದ್ಯರಷ್ಟೇ ಅಲ್ಲದೆ, ರಕ್ತ ನೀಡುವ ದಾನಿಗಳೂ ಸಹ ಜೀವ ಉಳಿಸುವ ನಿಜವಾದ ಜೀವದಾತರು. ಪ್ರತಿಯೊಬ್ಬ ನಾಗರಿಕನೂ ಸ್ವಯಂಪ್ರೇರಿತನಾಗಿ ರಕ್ತದಾನ ಮಾಡುವ ಮೂಲಕ ರೋಗಿಗಳಿಗೆ ಸಮಯಕ್ಕೆ ಸರಿಯಾಗಿ ರಕ್ತ ದೊರೆಯುವಂತೆ ನೋಡಿಕೊಳ್ಳುವುದು ಸಾಮಾಜಿಕ ಜವಾಬ್ದಾರಿ ಎಂದರು.

## ಸಂಡೂರು ತಾಲೂಕು ವ್ಯಾಪ್ತಿಯಲ್ಲಿ ಮೇವಿನ ಅಭಾವ ನಿಯಂತ್ರಣಕ್ಕೆ ಸೂಚನೆ

# ಬರಪರಿಸ್ಥಿತಿ – ಬೆಳೆಹಾನಿ ಪರಿಶೀಲನೆ ನಡೆಸಿದ ಸಚಿವ ನಾಗೇಂದ್ರ



**ಬಳ್ಳಾರಿ,ಆ.07.**ಜಿಲ್ಲೆಯಲ್ಲಿ ತಲೆದೋರಿರುವ ಬರ ಪರಿಸ್ಥಿತಿ ಹಾಗೂ ಬೆಳೆ ಹಾನಿ ಪರಿವೀಕ್ಷಣೆ ನಡೆಸುವ ಸಂಬಂಧ ನಿಯೋಜಿಸಿರುವ ಬಳ್ಳಾರಿ ಜಿಲ್ಲಾ ಅತಿವೃಷ್ಠಿ ಮತ್ತು ಬರ ಪರಿಸ್ಥಿತಿ ನಿರ್ವಹಣೆಯ ಮೇಲುಸ್ತುವಾರಿ ಸಚಿವ ಬಿ. ನಾಗೇಂದ್ರ ಅವರು ಶುಕ್ರವಾರ ಸಂಡೂರು ತಾಲೂಕಿನ ವಿಠಲಾಪುರ ಗ್ರಾಮದಲ್ಲಿ ಸ್ಥಳೀಯ ಶಾಸಕರು ಮತ್ತು ಜಿಲ್ಲಾಧಿಕಾರಿಗಳ ತಂಡದೊಂದಿಗೆ ಸ್ಥಳಕ್ಕೆ ಭೇಟಿ ನೀಡಿ ಬರ ಅಧ್ಯಯನ ನಡೆಸಿದರು.

ಮುಖ್ಯಮಂತ್ರಿಗಳ ಸೂಚನೆಯಂತೆ ಸರ್ಕಾರವು ರೈತರ ಬೆಂಬಲಕ್ಕೆ ನಿಲ್ಲಲಿದ್ದು, ಬರ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಸಂಪುಟ ಸಭೆಯ ತೀರ್ಮಾನ ಮತ್ತು ಮುಖ್ಯಮಂತ್ರಿಯವರ ಆದೇಶದಂತೆ ಅಧಿಕಾರಿಗಳೊಂದಿಗೆ ಸ್ಥಳಕ್ಕೆ ಭೇಟಿ ನೀಡಿ ವರದಿ ಸಿದ್ಧಪಡಿಸಲಾಗುತ್ತಿದೆ ಎಂದು ಹೇಳಿದರು.

ಬಳ್ಳಾರಿಗೆ ಹೋಲಿಸಿದರೆ ಸಂಡೂರಿನಲ್ಲಿ ಮಳೆಯಾಶ್ರಿತ ಸಣ್ಣ ಹಾಗೂ ಅತಿ ಸಣ್ಣ ರೈತರೇ ಹೆಚ್ಚಾಗಿದ್ದು, ಬರಪರಿಸ್ಥಿತಿ ತೀವ್ರವಾಗಿದೆ. ಒಂದು ಅಥವಾ ಐದು ಎಕರೆ ಒಳಗಿನ ಹಿಡುವಳಿದಾರರಿಗೆ ಕೃಷಿ ನಷ್ಟದಿಂದ ಬದುಕು ಸಾಗಿಸುವುದು ಕಷ್ಟವಾಗಿದೆ. ಈ ಕುರಿತು ಶೀಘ್ರವೇ ಮುಖ್ಯಮಂತ್ರಿಗಳಿಗೆ ವರದಿ ಸಲ್ಲಿಸಲಾಗುವುದು ಹಾಗೂ ಮುಂಬರುವ ಸಭೆಯಲ್ಲಿ ಪರಿಹಾರ ಘೋಷಿಸುವ ಕುರಿತು ನಿರ್ಧಾರ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

**ಬೆಳೆವಿಮೆ ಮತ್ತು ಉದ್ಯೋಗ ಭರವಸೆ:**ಈ ಬಾರಿ ಜಿಲ್ಲಾಡಳಿತದ ಜಾಗೃತಿಯಿಂದಾಗಿ ಸುಮಾರು 40,000 ಖುಷ್ಕಿ ಜಮೀನಿನ ಪೈಕಿ 37,000 ರೈತರು ಬೆಳೆ ವಿಮೆ ಮಾಡಿಸಿದ್ದಾರೆ. ವಿಮೆ ವ್ಯಾಪ್ತಿಗೆ ಬಾರದ ರೈತರಿಗೆ ತಾಂತ್ರಿಕ ತೊಡಕುಗಳಿದ್ದರೆ ಅದನ್ನು ಪರಿಶೀಲಿಸಿ ಪರಿಹಾರ ಒದಗಿಸಲು ಕ್ರಮ ವಹಿಸಲಾಗುವುದು. 'ವಿಬಿ ಜಿ ರಾಮ್ ಜಿ' ಯೋಜನೆಯಡಿ ಕೆಲಸದ ದಿನಗಳನ್ನು 100 ರಿಂದ 125 ದಿನಗಳಿಗೆ ಹೆಚ್ಚಿಸಲಾಗಿದೆ ಹಾಗೂ ದಿನಗೂಲಿಯನ್ನು 12 ರೂಪಾಯಿ ಹೆಚ್ಚಿಸಲಾಗಿದೆ. ಕೂಲಿ ಒದಗಿಸುವಲ್ಲಿ ಬಳ್ಳಾರಿ ಜಿಲ್ಲೆ ರಾಜ್ಯದಲ್ಲೇ ಎರಡನೇ ಸ್ಥಾನದಲ್ಲಿದೆ. ತಾಂಡಾದವರು ಕೆಲಸ'ಕ್ಕಾಗಿ ಬೇರೆ ಜಿಲ್ಲೆಗೆ ವಲಸೆ ಹೋಗುವುದನ್ನು ತಡೆಯಲು ವಿಶೇಷ ಯೋಜನೆ ಹಮ್ಮಿಕೊಳ್ಳಲಾಗುತ್ತಿದೆ ಎಂದರು.

**ಕೈಗಾರಿಕಾ ಮಾಲಿನ್ಯ ಹಾಗೂ ಸಾರ್ವಜನಿಕ ಆರೋಗ್ಯ:** ಸಂಡೂರು ವ್ಯಾಪ್ತಿಯ ಕೈಗಾರಿಕೆಗಳಿಂದ ಧೂಳು ಹೆಚ್ಚಾಗುತ್ತಿದ್ದು, ಕೆರೆಗಳಿಗೆ ಕಲುಷಿತ ನೀರು ಬಿಡಲಾಗುತ್ತಿದೆ. ಇದರಿಂದ ಮೀನುಗಳು ಸಾಯುತ್ತಿದ್ದು, ನೀರು ಕುಡಿದ ಜನರಿಗೆ ಮೂಳೆ ಸಂಬಂಧಿತ ಅನಾರೋಗ್ಯ ಸಮಸ್ಯೆಗಳು ಉಂಟಾಗುತ್ತಿವೆ ಎಂಬ ದೂರುಗಳು ವ್ಯಾಪಕವಾಗಿವೆ.

ಹೀಗಾಗಿ ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳನ್ನು ಕರೆಸಿ ಶೀಘ್ರವೇ ಸಭೆ ನಡೆಸಲಾಗುವುದು. ಕೈಗಾರಿಕೆಗಳು ವೈಜ್ಞಾನಿಕವಾಗಿ ಫಿಲ್ಟರ್‌ಗಳನ್ನು ಅಳವಡಿಸಿ ಮಾಲಿನ್ಯ ನಿಯಂತ್ರಿಸುವುದನ್ನು ಕಡ್ಡಾಯಗೊಳಿಸಲಾಗುವುದು ಎಂದು ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದರು.

# ಬೀದರ್ ಜಿಲ್ಲೆಯನ್ನು ಬರಪೀಡಿತ ಘೋಷಿಸಿ ಪರಿಹಾರ ಒದಗಿಸಲು ಕನ್ನಡಪರ ಸಂಘಟನೆಗಳ ಆಗ್ರಹ



**ಬೀದರ, ಆ. 7:** ಮಹಾರಾಷ್ಟ್ರ ಮತ್ತು ತೆಲಂಗಾಣ ಗಡಿಗಳನ್ನು ಹಂಚಿಕೊಂಡಿರುವ ಗಡಿ ಜಿಲ್ಲೆ ಬೀದರ್‌ನಲ್ಲಿ ಪ್ರಸ್ತುತ ವರ್ಷದ ಮುಂಗಾರು ಹಂಗಾಮಿನಲ್ಲಿ ಮಳೆಯ ಕೊರತೆ ಎದುರಾಗಿದ್ದು, ಜಿಲ್ಲೆಯ ರೈತರು ಆತಂಕಕ್ಕೆ ಈಡಾಗಿದ್ದಾರೆ. ಕೂಡಲೇ ರಾಜ್ಯ ಸರ್ಕಾರ ಜಿಲ್ಲೆಯನ್ನು ಬರಪೀಡಿತ ಜಿಲ್ಲೆಯನ್ನಾಗಿ ಘೋಷಣೆ ಮಾಡಬೇಕು' ಎಂದು ಕನ್ನಡಪರ ಸಂಘಟನೆಯ ಪದಾಧಿಕಾರಿಗಳು ಒತ್ತಾಯಿಸಿದ್ದಾರೆ.

ಈ ಕುರಿತು ನಗರದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಕನ್ನಡಪರ ಸಂಘಟನೆ ಹೋರಾಟಗಾರ ಸಂಗಮೇಶ ಗುಮ್ಮೆ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗೆ ಮನವಿ ಪತ್ರ ಸಲ್ಲಿಸಿದರು.

ಮುಂಗಾರು ಹಂಗಾಮಿನಲ್ಲಿ ಬಹುತೇಕ ರೈತರ ಜಮೀನಿನಲ್ಲಿ ಬಿತ್ತನೆಯಾದ ಸೋಯಾ, ಅವರೆ, ಹೆಸರು, ಕಡಲೆ, ತೊಗರಿ ಸೇರಿ ವಿವಿಧ ಬೆಳೆಗಳು ಮಳೆಯ ಕೊರತೆಯಿಂದ ಒಣಗುತ್ತಿವೆ. ಇದರಿಂದ ಸಾಲ ಮಾಡಿ ಬಿತ್ತನೆ ಮಾಡಿದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಆರ್ಥಿಕವಾಗಿ ತೊಂದರೆ ಅನುಭವಿಸುತ್ತಿದ್ದಾರೆ ಎಂದು ಸಮಸ್ಯೆ ಮನವರಿಕೆ ಮಾಡಿದ್ದಾರೆ.

ರಾಜ್ಯ ಸರ್ಕಾರ ಜಿಲ್ಲೆಯ ರೈತರ ಸಂಕಷ್ಟವನ್ನು ಗಂಭೀರವಾಗಿ ಪರಿಗಣಿಸಿ ಬೀದರ್ ಜಿಲ್ಲೆಯನ್ನು ಬರಪೀಡಿತ ಪ್ರದೇಶವನ್ನಾಗಿ ಘೋಷಿಸಿ ಸೂಕ್ತ ಪರಿಹಾರ ವಿತರಿಸಿ ರೈತರ ನೆರವಿಗೆ ಧಾವಿಸಬೇಕು ಎಂದು ಮುಖ್ಯಮಂತ್ರಿಗೆ ಬರೆದ ಮನವಿ ಪತ್ರದಲ್ಲಿ ಒತ್ತಾಯಿಸಲಾಗಿದೆ.

# ಸಿರುಗುಪ್ಪ ತಾಲ್ಲೂಕಿನಲ್ಲಿ ಬರ ಅಧ್ಯಯನ ಸಮೀಕ್ಷೆ ನಡೆಸಿದ ಸಚಿವ ನಾಗೇಂದ್ರ



**ಬಳ್ಳಾರಿ,ಆ.07.**ಸಿರುಗುಪ್ಪ ತಾಲ್ಲೂಕಿನಲ್ಲಿ ಮುಂಗಾರು ಮಳೆ ಅಭಾವದಿಂದಾಗಿ ತೀವ್ರ ಬರಪರಿಸ್ಥಿತಿ ನಿರ್ಮಾಣವಾಗಿದ್ದು, ಶುಕ್ರವಾರ ಬಳ್ಳಾರಿ ಜಿಲ್ಲಾ ಅತಿವೃಷ್ಠಿ ಮತ್ತು ಬರ ಪರಿಸ್ಥಿತಿ ನಿರ್ವಹಣೆಯ ಮೇಲುಸ್ತುವಾರಿ ಸಚಿವ ಬಿ. ನಾಗೇಂದ್ರ, ಸಮೀಪದ ಸಿದ್ದರಾಂಪುರ ಗ್ರಾಮದ ರೈತರ ಜಮೀನುಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲೆಯಾದ್ಯಂತ ರೈತರ ಜಮೀನುಗಳಲ್ಲಿ ಬೆಳೆದ ಬೆಳೆಯ ಸ್ಥಿತಿಗತಿಯನ್ನು ಅಧಿಕಾರಿಗಳೊಂದಿಗೆ ಪರಿಶೀಲನೆ ನಡೆಸುತ್ತಿದ್ದು, ರೈತರಿಂದ ಬೆಳೆನಷ್ಟದ ಬಗ್ಗೆ ಮಾಹಿತಿ ಪಡೆದುಕೊಂಡು ಸರ್ಕಾರಕ್ಕೆ ವರದಿ ಸಲ್ಲಿಸಲಾಗುವುದು ಎಂದರು.

ಸಿದ್ದರಾಂಪುರ ಗ್ರಾಮದ ರೈತ ಮಹಿಳೆ ರಾಜೇಶ್ವರಮ್ಮ ಇವರ 3 ಎಕರೆಯಲ್ಲಿ ಬೆಳೆದ ಸಜ್ಜೆ ಬೆಳೆಯನ್ನು ಪರಿಶೀಲಿಸಿ ನಡೆಸಿ, ಸಜ್ಜೆ ಬಿತ್ತನೆ ಮಾಡಿದ್ದ ಬೆಳೆ ಸಂಪೂರ್ಣ ಒಣಗಿರುವುದನ್ನು ಕಂಡು ಸ್ಥಳದಲ್ಲಿದ್ದ ಕೃಷಿ ಅಧಿಕಾರಿಗಳಿಗೆ ರೈತರಿಗೆ ಬೆಳೆವಿಮೆ ಪಡೆಯಲು ಕ್ರಮ ವಹಿಸಲು ಸೂಚಿಸಿದರು.

ಸಿರುಗುಪ್ಪ ತಾಲ್ಲೂಕಿನಲ್ಲಿ ಮಳೆ ಕೊರತೆಯಿಂದಾಗಿ ಮುಂಗಾರು ಹಂಗಾಮು ಸಂಪೂರ್ಣ ವಿಫಲಗೊಳ್ಳುವ ಭೀತಿ ಎದುರಾಗಿದೆ. ಪ್ರಧಾನ ಮಂತ್ರಿ ಫಸಲ್ ಬೀಮಾ ಯೋಜನೆಯಡಿ ಶೇ.25 ಕ್ಕಿಂತ ಕಡಿಮೆ ಬಿತ್ತನೆಯಾಗಿರುವ ಪ್ರದೇಶಗಳಲ್ಲಿ ಮುಂಜಾಗ್ರತಾ ಬಿತ್ತನೆ ನಿಯಮದಡಿ ರೈತರಿಗೆ ರಕ್ಷಣೆ ಸಿಗಲಿದೆ. ತುಂಗಭದ್ರಾ ನೀರಾವರಿ ಸಲಹಾ ಸಮಿತಿ ಸಭೆ ಕರೆಯುವ ಬಗ್ಗೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಲಾಗಿದೆ. ಜಲಾಶಯದಲ್ಲಿ 80 ಟಿಎಂಸಿ ನೀರು ಸಂಗ್ರಹವಾಗುವ ನಿರೀಕ್ಷೆ ಇದ್ದು, ಆದಷ್ಟು ಶೀಘ್ರವಾಗಿ ಕಾಲುವೆಗಳಿಗೆ ಬೆಳೆಗಾಗಿ ನೀರು ಹರಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

# ರಾವ್ ಬಹದ್ದೂರ್ ಮಹಾಬಲೇಶ್ವರಪ್ಪ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಇಇಇಇ ಅಂತರಾಷ್ಟ್ರೀಯ ಸಮ್ಮೇಳನಕ್ಕೆ ವಿಧ್ಯುಕ್ತ ಚಾಲನೆ

**ಬಳ್ಳಾರಿ ಆ 07.** ನಗರದ ಪ್ರತಿಷ್ಠಿತ ತಾಂತ್ರಿಕ ಶಿಕ್ಷಣ ಸಂಸ್ಥೆಯಾದ ವೀ.ವಿ.ಸಂಘದ ರಾವ್ ಬಹದ್ದೂರ್ ವೈ ಮಹಾಬಲೇಶ್ವರಪ್ಪ ತಾಂತ್ರಿಕ ಮಹಾವಿದ್ಯಾಲಯದಲ್ಲಿ "E.E.E.E. ಎರಡನೇಯ ಅಂತರಾಷ್ಟ್ರೀಯ ಮಟ್ಟದ ತಾಂತ್ರಿಕ ಸಮ್ಮೇಳನ– "AIKIIE-2026" – IEEE Second International Conference Ambient Intelligence Knowledge Informatics & Industrial Electronics L.E.E.E. ಎರಡನೇಯ ಅಂತರಾಷ್ಟ್ರೀಯ ಸಮ್ಮೇಳನ "ಆಂಬಿಯೆಂಟ್ ಇಂಟೆಲಿಜೆನ್ಸ್ ನಾಲೆಡ್ಜ್ ಇನ್ಫಾರೆ ಟಿಕ್ಸ್ ಅಂಡ್ ಇನ್‌ಡಸ್ಟ್ರೀಯಲ್ ಎಲೆಕ್ಟ್ರಾನಿಕ್ಸ್" ಕಾರ್ಯಕ್ರಮದ ಉದ್ಘಾಟನಾ ಸಮಾರಂಭವು ದಿನಾಂಕ: 07–8–2026 ರಂದು ಬೆಳಗ್ಗೆ 10:00 ಗಂಟೆಗೆ ಜರುಗಿತು.

ಈ ಎರಡು ದಿನದ ತಾಂತ್ರಿಕ ಸಮ್ಮೇಳನದಲ್ಲಿ ಮುಖ್ಯ ಅತಿಥಿಗಳಾಗಿ– ಡಾ. ಕೆ. ಸತ್ಯ ಬಾಬು ಭಾರತೀಯ ಮಾಹಿತಿ ತಂತ್ರಜ್ಞಾನ, ವಿನ್ಯಾಸ ಮತ್ತು (2) (Indian Institute of Information Technology, Design and Manufacturing (IIITDM)), ಡಾ. ಎನ್. ಶಿವಬಾಲನ್, ಎನ್.ಟಿ.ಟಿ. ಡೇಟಾ ಬೆಂಗಳೂರು, ವೀ.ವಿ.ಸಂಘದ ಪದಾಧಿಕಾರಿಗಳಾದ ಡಾ. ಕಣೇಕಲ್ ಮಹಾಂತೇಶ್ ಅಧ್ಯಕ್ಷರು, ಜಾನೆಕುಂಟೆ ಬಸವರಾಜ, ಎ.ವಿ.ಸಂಘದ ಉಪಾಧ್ಯಕ್ಷರು, ಹಾಗೂ ಆರ್.ವೈ.ಎಂ.ಇ.ಸಿ ಅಧ್ಯಕ್ಷರು, ಡಾ.ಅರವಿಂದ್ ಪಟೇಲ್ ಕಾರ್ಯದರ್ಶಿ, ಬೈಲುವದ್ದಿಗೇರಿ ಎರಿಸ್ವಾಮಿ ಕೋಶಾಧಿಕಾರಿ, ಡಾ. ಹೆಚ್. ಮಹಾಬಲೇಶ್ವರ ಆರ್.ವೈ.ಎಂ.ಇ.ಸಿ ಪ್ರಾಂಶುಪಾಲರು, ಡಾ. ಸವಿತ ಸೊನೊಳಿ ಚಿತ್ರಿಕಿ ಉಪ–ಪ್ರಾಂಶುಪಾಲರು, 20–2026 ಉದ್ಘಾಟನಾ ಸಮಾರಂಭವು ಜರುಗಿತು. ಮುಖ್ಯ



ಅತಿಥಿ ಡಾ. ಕೆ. ಸತ್ಯಬಾಬು ಮಾತನಾಡಿ, "ಶೈಕ್ಷಣಿಕ ಸಂಸ್ಥೆಗಳು ಮತ್ತು ಉದ್ಯಮ ಕ್ಷೇತ್ರ ಕ್ಷೇತ್ರಗಳು ಪರಸ್ಪರ ಕೈಜೋಡಿಸಿದಾಗ ಮಾತ್ರ ದೇಶದ ಅಭಿವೃದ್ಧಿ ಹಾಗೂ ಸಮಾಜದ ಸಮಗ್ರ ಉನ್ನತಿ ಸಾಧ್ಯವಾಗುತ್ತದೆ. ಭಾರತದ ಮುಂದಿನ ಪೀಳಿಗೆಗಳು ಆಧುನಿಕ ತಂತ್ರಜ್ಞಾನ ಮತ್ತು ನವೋದ್ಯಮಗಳಿಗೆ ಪೂರಕವಾಗಿ ಕಾರ್ಯನಿರ್ವಹಿಸುವ ಅಗತ್ಯವಿದೆ. ಇಂದಿನ ಶೈಕ್ಷಣಿಕ ವ್ಯವಸ್ಥೆಯಲ್ಲಿ ಸಂಶೋಧನೆ ಮತ್ತು ತಂತ್ರಜ್ಞಾನದ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಈ 2 'Ambient Intelligence, Knowledge Informatics and Industrial Electronics ಕ್ಷೇತ್ರಗಳನ್ನು ಒಳಗೊಂಡಿದೆ. 'ಅಂಬಿಯೆಂಟ್ ಇಂಟೆಲಿಜೆನ್ಸ್' ಸುತ್ತಮುತ್ತಲಿನ ಪರಿಸರ ಮತ್ತು ಡೇಟಾವನ್ನು ಬುದ್ಧಿವಂತಿಕೆಯಿಂದ ಸಂಗ್ರಹಿಸಿ ವಿಶ್ಲೇಷಿಸುವ ತಂತ್ರಜ್ಞಾನವನ್ನು ಒಳಗೊಂಡಿದೆ. 'ನಾಲೆಡ್ಜ್ ಇನ್ಫಾರ್ಮ್ಯಾಟಿಕ್ಸ್' ಕೃತಕ ಬುದ್ಧಿಮತ್ತೆ, ಜ್ಞಾನ ನಿರ್ವಹಣೆ ಹಾಗೂ ಬುದ್ಧಿವಂತ ಕಲಿಕಾ ವಿಧಾನಗಳ ಅಭಿವೃದ್ಧಿಗೆ ಸಂಬಂಧಿಸಿದೆ. 'ಇಂಡಸ್ಟ್ರಿಯಲ್ ಎಲೆಕ್ಟ್ರಾನಿಕ್ಸ್' ಕೈಗಾರಿಕೆಗಳಲ್ಲಿ ಬಳಸುವ ಸಂವೇದಕಗಳು, ಎಲೆಕ್ಟ್ರಾನಿಕ್ ಸಾಧನಗಳು ಹಾಗೂ ಸ್ವಯಂಚಾಲಿತ ವ್ಯವಸ್ಥೆಗಳ ಅಭಿವೃದ್ಧಿಗೆ ಪೂರಕವಾಗಿದೆ. ಇಂತಹ ವಿಷಯಗಳನ್ನು ಒಳಗೊಂಡಿರುವ ಈ ಸಮ್ಮೇಳನವು ಇಂದಿನ ತಂತ್ರಜ್ಞಾನ ಯುಗದಲ್ಲಿ ಅತ್ಯಂತ ಪ್ರಸ್ತುತ ಮತ್ತು ಮಹತ್ವದ್ದಾಗಿದೆ. ಸಂಶೋಧಕರು ನಡೆಸುವ ಅಧ್ಯಯನಗಳು ಮಾನವ ಕಲ್ಯಾಣ, ಪರಿಸರ ಸಂರಕ್ಷಣೆ ಹಾಗೂ ಸಮಸ್ತ ಜೀವಿಗಳ ಹಿತದೃಷ್ಟಿಯಿಂದ ಫಲಪ್ರದವಾಗಬೇಕು. ಸಮಾಜದಲ್ಲಿರುವ ಅನಕ್ಷರಸ್ಥರು ಹಾಗೂ ಶಿಕ್ಷಣದಿಂದ ವಂಚಿತರಾದವರಿಗೂ ಜ್ಞಾನ ಮತ್ತು ತಂತ್ರಜ್ಞಾನದ ಪ್ರಯೋಜನ ತಲುಪುವಂತೆ ಕಾರ್ಯನಿರ್ವಹಿಸುವ ಜವಾಬ್ದಾರಿ ವಿದ್ಯಾರ್ಥಿಗಳು ಮತ್ತು ಸಂಶೋಧಕರ ಮೇಲಿದೆ. ಸಮಾಜಮುಖಿ ಸಂಶೋಧನೆಯ ಮೂಲಕ ದೇಶದ ಅಭಿವೃದ್ಧಿಗೆ ಪ್ರತಿಯೊಬ್ಬರೂ ತಮ್ಮ ಕೊಡುಗೆಯನ್ನು ನೀಡಬೇಕು." ಎಂದು ತಾಂತ್ರಿಕ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಿದರು. ಇನ್ನೋರ್ವ ಮುಖ್ಯ ಅತಿಥಿ ಡಾ. ಎನ್. ಶಿವಬಾಲನ್, ಎನ್.ಟಿ.ಟಿ. ಡೇಟಾ ಬೆಂಗಳೂರು, ಮಾತನಾಡಿ, "ನವೀನ ಚಿಂತನೆಗಳು ಶಿಕ್ಷಣದ ಅವಧಿಯಲ್ಲಿಯೇ ರೂಪುಗೊಳ್ಳುತ್ತವೆ. ಅವುಗಳಿಗೆ ವೈಜ್ಞಾನಿಕ ರೂಪ ನೀಡಿದಾಗ ಸಮಾಜದ ಅಭಿವೃದ್ಧಿಗೆ ಮಹತ್ತರ ಕೊಡುಗೆ ನೀಡುತ್ತವೆ ಎಂದರು. ಇಂಧನ ಕ್ಷೇತ್ರದಲ್ಲಿ ಸೌರಶಕ್ತಿ, ಗಾಳಿಶಕ್ತಿ, ಜೈವಿಕ ಇಂಧನ ಸೇರಿದಂತೆ ನವೀಕರಿಸಬಹುದಾದ ಇಂಧನ ಮೂಲಗಳ ಕುರಿತು ನಡೆಯುತ್ತಿರುವ ಸಂಶೋಧನೆಗಳು ದೇಶದ ಸುಸ್ಥಿರ ಅಭಿವೃದ್ಧಿಗೆ ಅತ್ಯಂತ ಮಹತ್ವದ್ದಾಗಿವೆ" ಎಂದು ಅಭಿಪ್ರಾಯಪಟ್ಟರು.

ಆಡಳಿತ ಮಂಡಳಿಯ ಅಧ್ಯಕ್ಷರಾದ ಶ್ರೀ ಚಾನೆಕುಂಟೆ ಬಸವರಾಜ ಮಾತನಾಡಿ, "ತಂತ್ರಜ್ಞಾನ ಬೆಳೆಯುತ್ತಿರುವ ವೇಗಕ್ಕೆ ಅನುಗುಣವಾಗಿ ವಿದ್ಯಾರ್ಥಿಗಳು ತಮ್ಮ ಜ್ಞಾನ ಮತ್ತು ಕೌಶಲ್ಯವನ್ನು ನಿರಂತರವಾಗಿ ವೃದ್ಧಿಸಿಕೊಳ್ಳಬೇಕು. ಪಠ್ಯಪುಸ್ತಕಗಳಿಗೆ ಮಾತ್ರ ಸೀಮಿತವಾಗದೆ ಕೈಗಾರಿಕೆಗಳಲ್ಲಿ ಬಳಕೆಯಾಗುತ್ತಿರುವ ಆಧುನಿಕ ತಂತ್ರಜ್ಞಾನ ಹಾಗೂ ಯಂತ್ರೋಪಕರಣಗಳ ಬಗ್ಗೆ ಅರಿವು ಹೊಂದಿದಾಗ ಮಾತ್ರ ಉತ್ತಮ ತಂತ್ರಜ್ಞರಾಗಲು ಸಾಧ್ಯ" ಎಂದು ಹೇಳಿದರು.

ವೀ.ವಿ. ಸಂಘದ ಕೋಶಾಧಿಕಾರಿಗಳಾದ ಬೈಲುವದ್ದಿಗೇರಿ ಎರ್ರಿಸ್ವಾಮಿ ಮಾತನಾಡಿ, "ವಿದ್ಯಾರ್ಥಿಗಳಿಗೆ ಗುಣಮಟ್ಟದ ತಾಂತ್ರಿಕ ಶಿಕ್ಷಣದೊಂದಿಗೆ ಕೈಗಾರಿಕಾ ಕೌಶಲ್ಯಗಳನ್ನು ಬೆಳೆಸುವುದು ಸಂಸ್ಥೆಯ ಪ್ರಮುಖ ಗುರಿಯಾಗಿದೆ. ವಿವಿಧ ಕೈಗಾರಿಕೆಗಳೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆಗಳ ಮೂಲಕ ವಿದ್ಯಾರ್ಥಿಗಳಿಗೆ ಅಧ್ಯಯನದ ಹಂತದಲ್ಲಿಯೇ ಉದ್ಯೋಗಾವಕಾಶಗಳನ್ನು ಕಲ್ಪಿಸಲು ಸಂಸ್ಥೆ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದೆ " ಎಂದು ತಿಳಿಸಿದರು. ವೀ.ವಿ. ಸಂಘದ ಕಾರ್ಯದರ್ಶಿಗಳಾದ ಡಾ. ಅರವಿಂದ್ ಪಟೇಲ್ ಮಾತನಾಡಿ, "ಕೃತಕ ಬುದ್ಧಿಮತ್ತೆ ಆರೋಗ್ಯ ಕ್ಷೇತ್ರದಲ್ಲಿ ಮಹತ್ತರ ಬದಲಾವಣೆಯನ್ನು ತರುತ್ತಿದೆ. ರೋಗಗಳು ಆರಂಭಿಕ ಹಂತದಲ್ಲಿ ನಿಖರವಾಗಿ ಪತ್ತೆಹಚ್ಚುವುದು, ವೈದ್ಯರಿಗೆ ತ್ವರಿತ ಮತ್ತು ಉತ್ತಮ ಚಿಕಿತ್ಸಾ ನಿರ್ಧಾರಗಳನ್ನು ಕೈಗೊಳ್ಳಲು ನೆರವಾಗುವುದು" ಎಂದು ತಿಳಿಸಿದರು.

## ನೂತನ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಾರ್ಯದರ್ಶಿಯವರಿಗೆ ಅಭಿನಂದನೆಗಳು



ಕರ್ನಾಟಕ ಸರ್ಕಾರದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಾರ್ಯದರ್ಶಿಗಳಾಗಿ

**ಜೆ.ಮಂಜುನಾಥ್**

ಅವರನ್ನು ನೇಮಿಸಿದ್ದಕ್ಕೆ ಅಭಿನಂದನೆಗಳು.

ಶುಭಕೋರುವವರು:
ಸಚಿವಾಲಯದ ನೌಕರರ ಸಂಘ, ವಿಧಾನಸೌಧ, ಬೆಂಗಳೂರು



## ಹುಟ್ಟುಹಬ್ಬದ ಶುಭಾಶಯಗಳು



8-8-2026

ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷರು ಹಾಗೂ ಶರಣ ಸಾಹಿತ್ಯ ಪರಿಷತ್‌ನ ಅಧ್ಯಕ್ಷರಾದ

**ಡಾ|| ಸಿ. ಸೋಮಶೇಖರ್**

ಅವರಿಗೆ ಜನ್ಮದಿನದ ಶುಭಾಶಯಗಳು

ಶುಭಕೋರವವರು:
ಶರಣ ಸಾಹಿತ್ಯ ಪರಿಷತ್, ಸಿಬ್ಬಂದಿ ವರ್ಗ ಬೆಂಗಳೂರು


## ಹಾರ್ಮುಜ್ ಜಲಸಂಧಿ–ಬಾಬ್ ಎಲ್–ಮಂಡೇಬ್ ಮೂಲಕ ವಾಣಿಜ್ಯ ಹಡಗುಗಳ ಸಂಚಾರ ಸಾಮಾನ್ಯಕ್ಕಿಂತ ಗಣನೀಯ ಕುಸಿತ

**ಲಂಡನ್, ಆಗಸ್ಟ್ 7:** ಇತ್ತೀಚಿನ ಹಡಗು–ಟ್ರ್ಯಾಕಿಂಗ್ ದತ್ತಾಂಶದ ಪ್ರಕಾರ, ನಿರ್ಣಾಯಕ ಹಾರ್ಮುಜ್ ಜಲಸಂಧಿ ಮತ್ತು ಬಾಬ್ ಎಲ್–ಮಂಡೇಬ್ ಜಲಸಂಧಿ ಎರಡರ ಮೂಲಕ ವಾಣಿಜ್ಯ ಸಾಗಣೆ ಸಂಚಾರ ಗುರುವಾರ ಯುದ್ಧಪೂರ್ವ ಮಟ್ಟಕ್ಕಿಂತ ಗಮನಾರ್ಹವಾಗಿ ಕಡಿಮೆಯಾಗಿದೆ, ಎರಡೂ ಜಲಮಾರ್ಗಗಳಲ್ಲಿ ಯಾವುದೇ ಹೊಸ ದಾಳಿಗಳು ನಡೆದಿಲ್ಲ. ಕಡಲ ವಿಶ್ಲೇಷಣಾ ಸಂಸ್ಥೆ ಕೆಪ್ಲರ್‌ನ ದತ್ತಾಂಶವು ಗುರುವಾರ ಕೇವಲ ಎಂಟು ವಾಣಿಜ್ಯ ಹಡಗುಗಳು ಹಾರ್ಮುಜ್ ಜಲಸಂಧಿಯನ್ನು ಸಾಗಿಸಿವೆ ಎಂದು ತೋರಿಸಿದೆ, ಮಂಗಳವಾರ 15 ಮತ್ತು ಬುಧವಾರ 12 ಹಡಗುಗಳು ಮಾತ್ರ ಸಾಗಣೆಯಾಗಿದ್ದವು. ಇರಾನ್ ಯುದ್ಧ ಪ್ರಾರಂಭವಾಗುವ ಮೊದಲು, ಪ್ರತಿದಿನ ಸುಮಾರು 130 ಹಡಗುಗಳು ಕಾರ್ಯತಂತ್ರದ ಜಲಮಾರ್ಗದ ಮೂಲಕ ಹಾದುಹೋದವು, ಇದು ಜಾಗತಿಕ ತೈಲ ಮತ್ತು ಅನಿಲ ಸಾಗಣೆಯ ಸರಿಸುಮಾರು 20% ಅನ್ನು ಸಾಗಿಸುತ್ತಿತ್ತು. ಆದಾಗ್ಯೂ, ಇರಾನ್ ಮತ್ತು ಯುಎಸ್ ಈ ಮಾರ್ಗದಲ್ಲಿ ವಾಣಿಜ್ಯ ಸಾಗಣೆಗೆ ಪರ್ಯಾಯ ಸುರಕ್ಷಿತ ಮಾರ್ಗಗಳನ್ನು ನೀಡುತ್ತಿದ್ದರೂ, ಇತ್ತೀಚಿನ ದಿನಗಳಲ್ಲಿ ಯಾವುದೇ ಹೊಸ ಘಟನೆಗಳು ವರದಿಯಾಗಿಲ್ಲದಿದ್ದರೂ, ಸಾಮಾನ್ಯವಾಗಿ ಕಡಲ ಕಂಪನಿಗಳು ನಿರಂತರ ಭದ್ರತಾ ಕಾಳಜಿಗಳ ನಡುವೆ ಪ್ರಮುಖ ಮಾರ್ಗವನ್ನು ತಪ್ಪಿಸುತ್ತಲೇ ಇವೆ. ಕೆಂಪು ಸಮುದ್ರವನ್ನು ಅಡೆನ್ ಕೊಲ್ಲಿಗೆ ಸಂಪರ್ಕಿಸುವ ಬಾಬ್ ಎಲ್–ಮಂಡೇಬ್ ಜಲಸಂಧಿಯ ಮೂಲಕ ಸಂಚಾರ ಸ್ಥಿರವಾಗಿದೆ ಆದರೆ ಸಾಮಾನ್ಯ ಮಟ್ಟಕ್ಕಿಂತ ಕಡಿಮೆಯಾಗಿದೆ, ಒಟ್ಟು ಇಂಧನ ಹರಿವಿನ ಇನ್ನೂ 10% ಕಡಿತಗೊಳಿಸುವ ಸಾಧ್ಯತೆಯಿದೆ. ಕೆಪ್ಲರ್ ಪ್ರಕಾರ, ಗುರುವಾರ 26 ವಾಣಿಜ್ಯ ಹಡಗುಗಳು ಜಲಸಂಧಿಯನ್ನು ದಾಟಿದವು, ಮಂಗಳವಾರ 32 ಮತ್ತು ಬುಧವಾರ 22 ಕ್ಕೆ ಹೋಲಿಸಿದರೆ. ಇರಾನ್ ಬೆಂಬಲಿತ ಹೌತಿ ಉಗ್ರಗಾಮಿಗಳು ಸೌದಿಧ್ವಜ ಹೊಂದಿರುವ ಹಡಗುಗಳನ್ನು



ಗುರಿಯಾಗಿಸುವುದಾಗಿ ಘೋಷಿಸುವ ಮೊದಲು, ಸಾಮಾನ್ಯವಾಗಿ ಪ್ರತಿದಿನ 50 ರಿಂದ 70 ಹಡಗುಗಳು ಬಾಬ್ ಎಲ್–ಮಂಡೇಬ್ ಮೂಲಕ ಸಾಗುತ್ತಿದ್ದವು. ಇತ್ತೀಚಿನ ವಾರಗಳಲ್ಲಿ ಹೌತಿಗಳು ಸುಮಾರು ಅರ್ಧ ಡಜನ್ ಸೌದಿ ಹಡಗುಗಳ ಮೇಲೆ ಕ್ಷಿಪಣಿಗಳು ಅಥವಾ ಡ್ರೋನ್‌ಗಳನ್ನು ಉಡಾಯಿಸಿದ್ದಾರೆ, ಇದು ಇತ್ತೀಚಿನ ದಾಳಿಗಳ ವಿರಾಮದ ಹೊರತಾಗಿಯೂ ಅನೇಕ ಹಡಗು ಕಂಪನಿಗಳು ಪ್ರಯಾಣವನ್ನು ಮರುನಿರ್ದೇಶಿಸಲು ಅಥವಾ ವಿಳಂಬಗೊಳಿಸಲು ಪ್ರೇರೇಪಿಸಿದೆ.

## ಸೌದಿ, ಟರ್ಕಿ, ಪಾಕಿಸ್ತಾನ ತ್ರಿಪಕ್ಷೀಯ ರಕ್ಷಣಾ ಒಪ್ಪಂದ ಕಾಗದ ಒಪ್ಪಂದ: ಈ ಬೆಳವಣಿಗೆಯಿಂದ ಭದ್ರತೆ ಅಸಾಧ್ಯ–ಇರಾನ್

**ಟೆಹ್ರಾನ್, ಆಗಸ್ಟ್ 7:** ಸೌದಿ ಅರೇಬಿಯಾ, ಪಾಕಿಸ್ತಾನ ಮತ್ತು ಟರ್ಕಿಯ ನಡುವೆ ಹೊಸದಾಗಿ ಘೋಷಿಸಲಾದ ತ್ರಿಪಕ್ಷೀಯ ರಕ್ಷಣಾ ಒಪ್ಪಂದವನ್ನು ಇರಾನ್ ರಾಜಕಾರಣಿಗಳು ಸಾರ್ವಜನಿಕವಾಗಿ ಟೀಕಿಸಿದ್ದಾರೆ, ಒಪ್ಪಂದವನ್ನು ನಿಷ್ಪರಿಣಾಮಕಾರಿ ಎಂದು ಕರೆದಿದ್ದಾರೆ ಮತ್ತು ರಿಯಾದ್ ತನ್ನ ಪ್ರಾದೇಶಿಕ ಭದ್ರತಾ ಕಾರ್ಯತಂತ್ರವನ್ನು ಪುನರ್ವಿಮರ್ಶಿಸುವಂತೆ ಒತ್ತಾಯಿಸಿದ್ದಾರೆ, ಎರಡೂ ದೇಶಗಳು ತನಗೆ ಹೆಚ್ಚು ಅಗತ್ಯವಿರುವಾಗ ಭದ್ರತೆಯನ್ನು ಒದಗಿಸಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ. ಇರಾನ್ ಸಂಸತ್ತಿನ ರಾಷ್ಟ್ರೀಯ ಭದ್ರತೆ ಮತ್ತು ವಿದೇಶಾಂಗ ನೀತಿ ಆಯೋಗದ ಸದಸ್ಯ ಇಬ್ರಾಹಿಂ ರೆಝಾಯಿ, ಈ ಒಪ್ಪಂದವು "ಕಾಗದ ಒಪ್ಪಂದ" ಕ್ಕಿಂತ ಹೆಚ್ಚೇನೂ ಅಲ್ಲ, ಸಮಯ ಬಂದಾಗ ಅದು ಕೆಲಸ ಮಾಡುವುದಿಲ್ಲ ಎಂದು ಹೇಳಿದರು. "ತುರ್ಕಿಯೆ ಮತ್ತು ಪಾಕಿಸ್ತಾನದೊಂದಿಗಿನ ಕಾಗದದ ಒಪ್ಪಂದವು ಅವರಿಗೆ ಭದ್ರತೆಯನ್ನು ಒದಗಿಸುವುದಿಲ್ಲ ಎಂಬುದನ್ನು ಸೌದಿ ಅರೇಬಿಯಾ ಅರ್ಥಮಾಡಿಕೊಳ್ಳಬೇಕು, ಅಮೆರಿಕನ್ನರ ಮೇಲೆ ವರ್ಷಗಳ ಏಕಪಕ್ಷೀಯ ಅವಲಂಬನೆಯು ಅವರಿಗೆ ಭದ್ರತೆಯನ್ನು ತರುವುದಿಲ್ಲ" ಎಂದು ರೆಝಾಯಿ ಹೇಳಿದರು.


## ಭಾವಪೂರ್ಣ ಶ್ರದ್ಧಾಂಜಲಿ



ಜನನ :18.07.1977 ನಿಧನ : 29.07.2026

**ಶ್ರೀ ಎ.ಕೆ ಮಹೇಶ್ ಶೇಕ**
ಮಹೇಶ್ ಮೋಟಾರ್ಸ್, ಮಂಗಳೂರು

ವಾಸಾಂಸಿ ಜೀರ್ಣಾನಿ ಯಥಾ ವಿಹಾಯ ನವಾನಿ ಗೃಹ್ಣಾತಿ ನರೋ ಪರಾಣಿ |
ತಥಾ ಶರೀರಾಣಿ ವಿಹಾಯ ಜೀರ್ಣಾನ್ಯನ್ಯಾನಿ ಸಂಯಾತಿ ನವಾನಿ ದೇಹೀ ||

ನಿನ್ನ ಅಲ್ಪಾಯುಷ್ಯದ ಬದುಕಿನಲ್ಲಿಯೇ ದಯೆ, ವಿನಯ, ಕರುಣೆ ಹಾಗೂ ನಿಸ್ವಾರ್ಥ ಸೇವೆ ಸದಾ ನಮ್ಮ ಹೃದಯಗಳಲ್ಲಿ ಚಿರಸ್ಥಾಯಿಯಾಗಿದೆ. ನಿನ್ನ ಆತ್ಮೀಯ ನಗು, ಸೌಮ್ಯ ಸ್ವಭಾವ ಮತ್ತು ಸಹೃದಯತೆ ಎಲ್ಲರ ಪ್ರೀತಿ ಹಾಗೂ ಗೌರವಕ್ಕೆ ಪಾತ್ರವಾಗಿದ್ದು, ನಿನ್ನ ಅಕಾಲಿಕ ನಿಧನವು ನಮಗೆ ಅಪಾರ ದುಃಖವನ್ನುಂಟುಮಾಡಿದೆ. ಭಗವಂತನು ನಿನ್ನ ಆತ್ಮಕ್ಕೆ ಚಿರಶಾಂತಿ ನೀಡಲಿ ಎಂದು ಪ್ರಾರ್ಥಿಸುತ್ತೇವೆ.

### ಉತ್ತರಕ್ರಿಯೆಯ ಆಮಂತ್ರಣ

ಮೃತರ ಆತ್ಮಸದ್ಗತಿಗಾಗಿ **ಉತ್ತರಕ್ರಿಯೆಯನ್ನು ತಾರೀಕು ನಾಳೆ 09.08.2026ನೇ ಆದಿತ್ಯವಾರ** ಮಧ್ಯಾಹ್ನ 12.00ಗಂಟೆಗೆ **ವಿ.ಕೆ ಶೆಟ್ಟಿ ಆಡಿಟೋರಿಯಂ, ಅಡ್ಯಾರ್ ಗಾರ್ಡನ್, ಮಂಗಳೂರು** ಇಲ್ಲಿ ಜರುಗಿಸಲಾಗುವುದು. ಮೃತರ ಬಂಧು-ಮಿತ್ರರೆಲ್ಲರೂ ಇದನ್ನೇ ವೈಯಕ್ತಿಕ ಆಮಂತ್ರಣ ಎಂದು ಪರಿಗಣಿಸಿ ಸಕಾಲದಲ್ಲಿ ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿಯನ್ನು ನೀಡಲೆಂದು ಪರಮಾತ್ಮನಲ್ಲಿ ಪ್ರಾರ್ಥಿಸಬೇಕಾಗಿ ಆಪೇಕ್ಷಿಸುತ್ತೇವೆ.

**ಎ. ಕೆ. ಜಯರಾಮ ಶೇಕ** (ತಂದೆ) **ಪದ್ಮಾವತಿ ಜೆ. ಶೇಕ** (ತಾಯಿ)

**ಸ್ನೇಹ ಎಂ. ಶೇಕ** (ಪತ್ನಿ)
**ಶಾರಿಕ ಎಂ. ಶೇಕ** (ಸುಪುತ್ರಿ)

**ಎ. ಕೆ. ಸಂಜ್ಯೋತಿ ಶೇಕ**
**ವನಿತ ಎಸ್ ಶೇಕ**
**ಜಾಹ್ನವಿ ಶೇಕ**
**ಸಾನ್ವಿ ಶೇಕ**

**ಶಿವಪ್ರಶಾಂತ್ ಶೆಟ್ಟಿ**
**ಶೋಭಿತ ಎಸ್. ಶೆಟ್ಟಿ**
**ಕ್ಷಿತಿಜ್ ಶೆಟ್ಟಿ**
**ವೈಷ್ಣವ್ ಶೆಟ್ಟಿ**

**ಕಿಶನ್ ಜೆ. ಶೆಟ್ಟಿ**
**ವಂದನಾ ಕೆ. ಶೆಟ್ಟಿ**
**ಶಶಾಂಕ್ ಶೆಟ್ಟಿ**
**ವೈಶಾಕ್ ಶೆಟ್ಟಿ**

**ಕಿಯಾರ ಪಿ. ಶೇಕ**

ಆಡಳಿತ ಮತ್ತು ಸಿಬ್ಬಂದಿ ವರ್ಗ

MAHESH MOTORS Mangaluru | MAHESH AUTO STORES Mangaluru | SHEKA OPTICALS Mangaluru | AdyarGarden "Life is full of Events, We make it Memorable"



